24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 74 | ನವದೆಹಲಿ | ಬೆಲೆ ₹10 | ಸೆಪ್ಟಂಬರ್ 9 2026 ಬುಧವಾರ

# ಶತದಿನಗಳ ನಾಯಕತ್ವ: ಭರವಸೆ, ತಾಳ್ಮೆ ಮತ್ತು ಅಭಿವೃದ್ಧಿಯತ್ತ ದಿಟ್ಟ ಹೆಜ್ಜೆ..

## ದೊಡ್ಡ ಆಲಹಳ್ಳಿಯ ರೈತನ ಮಗನಿಂದ ರಾಜ್ಯದ ಮುಖ್ಯಮಂತ್ರಿ ಸ್ಥಾನಕ್ಕೆ: ಡಿ.ಕೆ.ಶಿವಕುಮಾರ್ ಅವರ ಶತದಿನಗಳ ಆಡಳಿತದ ಅವಲೋಕನ...

ನೂರು ದಿನಗಳು ಆಡಳಿತದ ಮೈಲಿಗಲ್ಲು



ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕರಿಸಿದ ಬಳಿಕ ಶತದಿನಗಳನ್ನು ಪೂರೈಸುತ್ತಿರುವ ಸಂದರ್ಭದಲ್ಲಿ ಅವರ ರಾಜಕೀಯ ಪಯಣ, ಆಡಳಿತದ ಕಾರ್ಯಶೈಲಿ ಮತ್ತು ಜನರಲ್ಲಿ ಮೂಡಿಸಿರುವ ನಿರೀಕ್ಷೆಗಳ ಕುರಿತು ಚರ್ಚೆ ನಡೆಯುವುದು ಸಹಜ. ಮೊದಲ ನೂರು ದಿನಗಳು ಯಾವುದೇ ಸರ್ಕಾರದ ಭವಿಷ್ಯದ ದಿಕ್ಕನ್ನು ಸೂಚಿಸುವ ಅವಧಿಯಾಗಿರುತ್ತವೆ. ಈ ಅವಧಿಯಲ್ಲಿ ತೆಗೆದುಕೊಳ್ಳುವ ನಿರ್ಧಾರಗಳು, ಜನರೊಂದಿಗೆ ಬೆಳೆಸುವ ಸಂಬಂಧ ಮತ್ತು ಆಡಳಿತ ಯಂತ್ರದ ಮೇಲಿನ ಹಿಡಿತ ಮುಂದಿನ ವರ್ಷಗಳ ಆಡಳಿತದ ಗುಣಮಟ್ಟವನ್ನು ನಿರ್ಧರಿಸುತ್ತವೆ. ಡಿ.ಕೆ. ಶಿವಕುಮಾರ್ ಅವರು ಮುಖ್ಯಮಂತ್ರಿಯಾಗಿ ಅಧಿಕಾರ ವಹಿಸಿಕೊಂಡ ನಂತರ ರಾಜ್ಯದ ಜನರಲ್ಲಿ ಅಭಿವೃದ್ಧಿ, ಆಡಳಿತದ ವೇಗ ಮತ್ತು ಜನಪರ ನಿರ್ಧಾರಗಳ ಬಗ್ಗೆ ಹೊಸ ನಿರೀಕ್ಷೆಗಳನ್ನು ಮೂಡಿಸಿದ್ದಾರೆ. ಇದೇ ಅವರ ಶತದಿನಗಳ ಆಡಳಿತದ ಪ್ರಮುಖ ಸಾಧನೆ ಎಂದು ಹೇಳಬಹುದು.

### ಹೋರಾಟದ ಹಾದಿಯಲ್ಲಿ ಬೆಳೆದ ನಾಯಕ:

ದೊಡ್ಡಆಲಹಳ್ಳಿಯ ರೈತ ಕುಟುಂಬದಿಂದ ಬಂದ ಡಿ.ಕೆ. ಶಿವಕುಮಾರ್ ಅವರು ರಾಜಕೀಯದಲ್ಲಿ ಸುಲಭವಾಗಿ ಬೆಳೆಯಲಿಲ್ಲ. ಹಂತ ಹಂತವಾಗಿ ಪಕ್ಷ ಸಂಘಟನೆ, ಚುನಾವಣಾ ರಾಜಕಾರಣ ಮತ್ತು ಆಡಳಿತದ ಅನುಭವಗಳ ಮೂಲಕ ತಮ್ಮದೇ ಆದ ಗುರುತನ್ನು ನಿರ್ಮಿಸಿಕೊಂಡರು.

ರಾಜಕೀಯದಲ್ಲಿ ಏರಿಳಿತಗಳು ಸಹಜ. ಗೆಲುವು ಮತ್ತು ಸೋಲು, ಪ್ರಶಂಸೆ ಮತ್ತು ಟೀಕೆ, ಅವಕಾಶ ಮತ್ತು ಅಡೆತಡೆ – ಇವೆಲ್ಲವೂ ಒಬ್ಬ ರಾಜಕಾರಣಿಯ ಜೀವನದ ಭಾಗ. ಆದರೆ ಇಂತಹ ಸವಾಲುಗಳ ನಡುವೆ ತಮ್ಮ ಗುರಿಯನ್ನು ಕಳೆದುಕೊಳ್ಳದೆ ಮುನ್ನಡೆಯುವವರು ಮಾತ್ರ ಉನ್ನತ ಸ್ಥಾನಗಳನ್ನು ತಲುಪುತ್ತಾರೆ.

ಡಿ.ಕೆ. ಶಿವಕುಮಾರ್ ಅವರ ರಾಜಕೀಯ ಪಯಣವೂ ಇದೇ ರೀತಿಯದು. ಅನೇಕ ಸಂದರ್ಭಗಳಲ್ಲಿ ರಾಜಕೀಯ ಸವಾಲುಗಳು ಎದುರಾದರೂ ಅವರು ಪಕ್ಷನಿಷ್ಠೆಯನ್ನು ಬದಲಿಸಲಿಲ್ಲ. ಅಧಿಕಾರಕ್ಕಿಂತ ಪಕ್ಷ ಮತ್ತು ಕಾರ್ಯಕರ್ತರ ವಿಶ್ವಾಸವನ್ನು ಉಳಿಸಿಕೊಳ್ಳುವತ್ತ ಹೆಚ್ಚು ಗಮನಹರಿಸಿದರು. ಇದೇ ಅವರ ರಾಜಕೀಯ ಬಲವಾಗಿ ಪರಿಣಮಿಸಿತು.

### ತಾಳ್ಮೆಯ ಮತ್ತೊಂದು ಹೆಸರು:

ರಾಜಕೀಯದಲ್ಲಿ ತಾಳ್ಮೆ ಎನ್ನುವುದು ಅತ್ಯಂತ ದೊಡ್ಡ ಗುಣ. ಕ್ಷಣಿಕ ಕೋಪ, ಆತುರದ ನಿರ್ಧಾರ ಅಥವಾ ಭಾವನಾತ್ಮಕ ಪ್ರತಿಕ್ರಿಯೆಗಳು ಕೆಲವೊಮ್ಮೆ ವರ್ಷಗಳ ಪರಿಶ್ರಮವನ್ನು ಹಾಳುಮಾಡಬಹುದು. ಡಿ.ಕೆ. ಶಿವಕುಮಾರ್ ಅವರ ರಾಜಕೀಯ ಜೀವನವನ್ನು ಗಮನಿಸಿದರೆ, ಅವರು ಕಳೆದ ಕೆಲವು ವರ್ಷಗಳಲ್ಲಿ ತಾಳ್ಮೆಯ ಮಹತ್ವವನ್ನು ಅತ್ಯಂತ ಆಳವಾಗಿ ಅರ್ಥಮಾಡಿಕೊಂಡಿರುವುದು ಗೋಚರಿಸುತ್ತದೆ.

ಮುಖ್ಯಮಂತ್ರಿ ಸ್ಥಾನ ಕುರಿತ ಚರ್ಚೆಗಳು ನಡೆಯುತ್ತಿದ್ದ ಸಂದರ್ಭದಲ್ಲಿ ಅನೇಕ ರೀತಿಯ ಊಹಾಪೋಹಗಳು ಕೇಳಿಬಂದವು. ಕೆಲವರು ಅವರಿಗೆ ಅವಕಾಶ ಸಿಗುವುದಿಲ್ಲ ಎಂದರು. ಇನ್ನೂ ಕೆಲವರು ರಾಜಕೀಯ ಸಮೀಕರಣಗಳು ಬೇರೆ ದಿಕ್ಕಿಗೆ ಹೋಗುತ್ತವೆ ಎಂದು ವಿಶ್ಲೇಷಿಸಿದರು. ಆದರೆ ಈ ಎಲ್ಲ ಚರ್ಚೆಗಳ ನಡುವೆ ಅವರು ಯಾವುದೇ ಆತುರದ ಪ್ರತಿಕ್ರಿಯೆ ನೀಡದೆ, ಮೌನ ಮತ್ತು ಸಂಯಮದ ಮೂಲಕ ತಮ್ಮ ಗುರಿಯತ್ತ ಸಾಗಿದರು.



ಮಹಾನ್ ದೈವಭಕ್ತರಾದ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಶಿವಲಿಂಗ ಪೂಜೆ ಮಾಡುತ್ತಿರುವುದು

ತಾಳಿದವನು ಬಾಳಿಯಾನು ಎಂಬ ನಾಣ್ಣುಡಿಯಂತೆ ಅವರ ರಾಜಕೀಯ ಜೀವನದಲ್ಲಿಯೂ ತಾಳ್ಮೆಯೇ ಪ್ರಮುಖ ಪಾತ್ರ ವಹಿಸಿದೆ ಎನ್ನುವುದು ಅತಿಶಯೋಕ್ತಿಯಲ್ಲ.

### ಆಡಳಿತದಲ್ಲಿ ಹೊಸ ಚೈತನ್ಯ

ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕರಿಸಿದ ನಂತರ ಡಿ.ಕೆ. ಶಿವಕುಮಾರ್ ಅವರು ಆಡಳಿತದಲ್ಲಿ ವೇಗ ಮತ್ತು ದಕ್ಷತೆಗೆ ಒತ್ತು ನೀಡಿದ್ದಾರೆ ಎಂಬ ಅಭಿಪ್ರಾಯವನ್ನು ಅನೇಕರು ವ್ಯಕ್ತಪಡಿಸುತ್ತಿದ್ದಾರೆ. ಸರ್ಕಾರದ ಯೋಜನೆಗಳು ಕೇವಲ ಕಡತಗಳಲ್ಲೇ ಉಳಿಯದೆ ಜನರಿಗೆ ತಲುಪಬೇಕು ಎಂಬುದು ಅವರ ಆದ್ಯತೆಯಾಗಿ ಕಾಣಿಸುತ್ತದೆ. ಅಭಿವೃದ್ಧಿ ಕಾಮಗಾರಿಗಳಿಗೆ ವೇಗ ನೀಡುವುದು, ಅಧಿಕಾರಿಗಳೊಂದಿಗೆ ನಿರಂತರ ಸಭೆ ನಡೆಸುವುದು, ಜಿಲ್ಲಾವಾರು ಸಮಸ್ಯೆಗಳನ್ನು ಪರಿಶೀಲಿಸುವುದು ಮತ್ತು ತ್ವರಿತ ನಿರ್ಧಾರಗಳನ್ನು ಕೈಗೊಳ್ಳುವುದು ಅವರ ಕಾರ್ಯಶೈಲಿಯ ಭಾಗವಾಗಿದೆ.

ಇಂದಿನ ದಿನಗಳಲ್ಲಿ ಜನರು ಸರ್ಕಾರದಿಂದ ತ್ವರಿತ ಸೇವೆಗಳನ್ನು ನಿರೀಕ್ಷಿಸುತ್ತಾರೆ. ಆಡಳಿತದ ಮೇಲಿನ ವಿಶ್ವಾಸವನ್ನು ಹೆಚ್ಚಿಸಲು ಪಾರದರ್ಶಕತೆ ಮತ್ತು ಸ್ಪಂದನಶೀಲತೆ ಅತ್ಯಗತ್ಯ. ಈ ಎರಡೂ ಅಂಶಗಳಿಗೆ ಅವರು ಹೆಚ್ಚಿನ ಆದ್ಯತೆ ನೀಡುತ್ತಿರುವುದು ಗಮನಾರ್ಹವಾಗಿದೆ.

### ಎಲ್ಲರನ್ನೂ ವಿಶ್ವಾಸಕ್ಕೆ ತೆಗೆದುಕೊಳ್ಳುವ ನಾಯಕತ್ವ:

ಒಬ್ಬ ಉತ್ತಮ ಆಡಳಿತಗಾರನ ಪ್ರಮುಖ ಗುಣವೆಂದರೆ ಎಲ್ಲರನ್ನು ಜೊತೆಯಲ್ಲಿ ಕರೆದುಕೊಂಡು ಹೋಗುವ ಸಾಮರ್ಥ್ಯ. ಡಿ.ಕೆ. ಶಿವಕುಮಾರ್ ಅವರ ರಾಜಕೀಯ ಶೈಲಿಯಲ್ಲಿ ಈ ಗುಣ ಸ್ಪಷ್ಟವಾಗಿ ಕಾಣಿಸುತ್ತದೆ. ಪಕ್ಷದ ನಾಯಕರು, ಶಾಸಕರು, ಕಾರ್ಯಕರ್ತರು, ಅಧಿಕಾರಿಗಳು ಹಾಗೂ ಸಮಾಜದ ವಿವಿಧ ವರ್ಗಗಳ ಜನರೊಂದಿಗೆ ಅವರು ನಿರಂತರ ಸಂಪರ್ಕದಲ್ಲಿರುವ ಪ್ರಯತ್ನ ಮಾಡುತ್ತಿದ್ದಾರೆ. ರಾಜಕೀಯ ಭಿನ್ನಾಭಿಪ್ರಾಯಗಳು ಪ್ರಜಾಪ್ರಭುತ್ವದ ಭಾಗ.



ಎಪಿಎಂಸಿ ಮಾರುಕಟ್ಟೆ ಸಿಎಂ ಡಿ.ಕೆ.ಶಿವಕುಮಾರ್ ಪರಿಶೀಲನೆ

ಆದರೆ ಭಿನ್ನಾಭಿಪ್ರಾಯಗಳು ವೈಯಕ್ತಿಕ ದ್ವೇಷವಾಗಿ ಪರಿವರ್ತನೆಯಾಗಬಾರದು ಎಂಬ ಸಂದೇಶವನ್ನು ಅವರ ನಡೆ ಹಲವಾರು ಬಾರಿ ನೀಡಿದೆ.

ವಿರೋಧ ಪಕ್ಷಗಳ ಟೀಕೆಗಳಿಗೆ ಪ್ರತಿಕ್ರಿಯಿಸುವಾಗಲೂ ಸಂಯಮವನ್ನು ಕಾಪಾಡಿಕೊಂಡು ಮಾತನಾಡುವುದು ಅವರ ಪರಿಪಕ್ವತೆಯ ಸಂಕೇತವಾಗಿದೆ.

> **ರಾಜಕೀಯದಲ್ಲಿ ಪ್ರತಿಯೊಬ್ಬರಿಗೂ ಅಧಿಕಾರ ದೊರೆಯುವುದಿಲ್ಲ. ಅಧಿಕಾರ ದೊರೆತರೂ ಅದನ್ನು ಸಮರ್ಥವಾಗಿ ನಿಭಾಯಿಸುವ ಅವಕಾಶ ಎಲ್ಲರ ಪಾಲಾಗುವುದಿಲ್ಲ. ಆದರೆ ಕೆಲವರು ತಮ್ಮ ಪರಿಶ್ರಮ, ಹೋರಾಟ, ತಾಳ್ಮೆ, ಪಕ್ಷನಿಷ್ಠೆ ಮತ್ತು ಜನರೊಂದಿಗಿನ ನಿರಂತರ ಸಂಪರ್ಕದ ಮೂಲಕ ರಾಜಕೀಯದ ಅತ್ಯುನ್ನತ ಹಂತವನ್ನು ತಲುಪುತ್ತಾರೆ. ಅಂತಹ ನಾಯಕರ ಸಾಲಿನಲ್ಲಿ ಕರ್ನಾಟಕದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಹೆಸರು ಪ್ರಮುಖವಾಗಿ ಕೇಳಿಬರುತ್ತದೆ.**

### ರೈತರ ಮಗನಿಗೆ ರೈತರ ನೋವು ಗೊತ್ತು:

ರೈತ ಕುಟುಂಬದಿಂದ ಬಂದಿರುವುದರಿಂದ ಕೃಷಿಯ ಮಹತ್ವ ಮತ್ತು ರೈತರ ಸಂಕಷ್ಟಗಳ ಬಗ್ಗೆ ಅವರಿಗೆ ವಿಶೇಷ ಅರಿವು ಇದೆ ಎನ್ನುವುದು ಅವರ ಆಪ್ತರ ಅಭಿಪ್ರಾಯ. ಕರ್ನಾಟಕದ ಬಹುಪಾಲು ಜನರ ಜೀವನೋಪಾಯ ಕೃಷಿಯನ್ನು ಅವಲಂಬಿಸಿದೆ. ಹೀಗಾಗಿ ರೈತರ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವುದು ಯಾವುದೇ ಸರ್ಕಾರದ ಪ್ರಮುಖ ಜವಾಬ್ದಾರಿ.

ನೀರಾವರಿ, ಕೃಷಿ ಉತ್ಪಾದನೆ, ಮಾರುಕಟ್ಟೆ ವ್ಯವಸ್ಥೆ ಮತ್ತು ಗ್ರಾಮೀಣ ಮೂಲಸೌಕರ್ಯಗಳ ಅಭಿವೃದ್ಧಿಗೆ ಒತ್ತು ನೀಡುವ ಮೂಲಕ ರೈತರ ಜೀವನಮಟ್ಟ ಸುಧಾರಿಸಲು ಸರ್ಕಾರ ಕ್ರಮಗಳನ್ನು ಕೈಗೊಳ್ಳಬೇಕು ಎಂಬ ನಿರೀಕ್ಷೆ ಜನರಲ್ಲಿ ಇದೆ. ಈ ನಿಟ್ಟಿನಲ್ಲಿ ಶತದಿನಗಳ ಆಡಳಿತದ ನಂತರವೂ ಇನ್ನಷ್ಟು ಪರಿಣಾಮಕಾರಿ ಕಾರ್ಯಕ್ರಮಗಳು ಜಾರಿಯಾಗಬೇಕೆಂಬ ಆಶಯ ಗ್ರಾಮೀಣ ಕರ್ನಾಟಕದಲ್ಲಿದೆ.

### ಬೆಂಗಳೂರು ಮತ್ತು ಕರ್ನಾಟಕದ ಅಭಿವೃದ್ಧಿಯ ಕನಸು

ಇಂದು ಬೆಂಗಳೂರು ಕೇವಲ ಕರ್ನಾಟಕದ ರಾಜಧಾನಿ ಮಾತ್ರವಲ್ಲ; ದೇಶದ ಆರ್ಥಿಕ ಬೆಳವಣಿಗೆಯ ಪ್ರಮುಖ ಕೇಂದ್ರವಾಗಿದೆ. ನಗರದ ಸಂಚಾರ ದಟ್ಟಣೆ, ಮೂಲಸೌಕರ್ಯ, ಕುಡಿಯುವ ನೀರು, ತ್ಯಾಜ್ಯ ನಿರ್ವಹಣೆ ಮತ್ತು ನಗರ ಯೋಜನೆ ಮುಂತಾದ ಸಮಸ್ಯೆಗಳಿಗೆ ದೀರ್ಘಕಾಲಿಕ ಪರಿಹಾರ ಒದಗಿಸುವುದು ಸರ್ಕಾರದ ಮುಂದಿರುವ ದೊಡ್ಡ ಸವಾಲಾಗಿದೆ. ಅದೇ ವೇಳೆ, ಅಭಿವೃದ್ಧಿ ಬೆಂಗಳೂರಿಗೆ ಮಾತ್ರ ಸೀಮಿತವಾಗದೆ ಉತ್ತರ ಕರ್ನಾಟಕ, ಕರಾವಳಿ, ಮಲೆನಾಡು ಮತ್ತು ಕಲ್ಯಾಣ ಕರ್ನಾಟಕ ಭಾಗಗಳಿಗೂ ತಲುಪಬೇಕು ಎಂಬುದು ಜನರ ನಿರೀಕ್ಷೆ.

ಸಮತೋಲನ ಅಭಿವೃದ್ಧಿಯ ಮೂಲಕ ರಾಜ್ಯದ ಎಲ್ಲ ಭಾಗಗಳನ್ನು ಅಭಿವೃದ್ಧಿಯ ಪಥದಲ್ಲಿ ಮುನ್ನಡೆಸುವುದು ಮುಖ್ಯಮಂತ್ರಿಯವರ ಮುಂದಿರುವ ದೊಡ್ಡ ಜವಾಬ್ದಾರಿಯಾಗಿದೆ.


### ಪಕ್ಷನಿಷ್ಠೆಗೆ ಸಿಕ್ಕ ಗೌರವ:

ರಾಜಕೀಯದಲ್ಲಿ ಪಕ್ಷನಿಷ್ಠೆ ದಿನದಿಂದ ದಿನಕ್ಕೆ ಅಪರೂಪವಾಗುತ್ತಿರುವ ಸಂದರ್ಭದಲ್ಲಿ ಡಿ.ಕೆ. ಶಿವಕುಮಾರ್ ಅವರ ದೀರ್ಘಕಾಲದ ಪಕ್ಷನಿಷ್ಠೆ ಅನೇಕ ಕಾಂಗ್ರೆಸ್ ಕಾರ್ಯಕರ್ತರಿಗೆ ಪ್ರೇರಣೆಯಾಗಿದೆ. ಕಷ್ಟದ ಸಂದರ್ಭಗಳಲ್ಲಿಯೂ ಪಕ್ಷವನ್ನು ಬಿಟ್ಟು ಹೋಗದೆ ನಿಂತಿರುವ ನಾಯಕರಲ್ಲಿ ಅವರು ಪ್ರಮುಖರು ಎಂಬ ಅಭಿಪ್ರಾಯ ಪಕ್ಷದ ಕಾರ್ಯಕರ್ತರಲ್ಲಿ ಇದೆ. ಒಬ್ಬ ಕಾರ್ಯಕರ್ತನಾಗಿ ಆರಂಭಿಸಿ ಮುಖ್ಯಮಂತ್ರಿ ಹುದ್ದೆಯವರೆಗೆ ಏರಿರುವುದು ಸಂಘಟನೆಯೊಳಗಿನ ಪರಿಶ್ರಮಕ್ಕೂ ಅವಕಾಶವಿದೆ ಎಂಬ ಸಂದೇಶವನ್ನು ನೀಡುತ್ತದೆ.

### ಶತದಿನಗಳು ಸಾಧನೆಯ ಅಂತಿಮ ಅಳತೆ ಅಲ್ಲ:

ಯಾವುದೇ ಸರ್ಕಾರದ ಸಾಧನೆಯನ್ನು ಕೇವಲ ನೂರು ದಿನಗಳ ಆಧಾರದ ಮೇಲೆ ಅಳೆಯುವುದು ಸರಿಯಲ್ಲ. ಆದರೆ ಮೊದಲ ನೂರು ದಿನಗಳು ಸರ್ಕಾರದ ಆದ್ಯತೆಗಳನ್ನು ತಿಳಿಸುವ ಕಿಟಕಿಯಂತಿರುತ್ತವೆ. ಈ ಅವಧಿಯಲ್ಲಿ ಜನರೊಂದಿಗೆ ಸಂಪರ್ಕ ಸಾಧಿಸುವುದು, ಆಡಳಿತಕ್ಕೆ ದಿಕ್ಕು ನೀಡುವುದು ಮತ್ತು ಅಭಿವೃದ್ಧಿಯ ರೂಪುರೇಷೆಗಳನ್ನು ಸಿದ್ಧಪಡಿಸುವುದು ಮುಖ್ಯವಾಗಿರುತ್ತದೆ.

ಡಿ.ಕೆ. ಶಿವಕುಮಾರ್ ಅವರ ಸರ್ಕಾರವೂ ಇದೇ ಹಂತದಲ್ಲಿದೆ. ಮುಂದಿನ ದಿನಗಳಲ್ಲಿ ಅವರ ಆಡಳಿತದ ಯಶಸ್ಸು ಜನರ ಬದುಕಿನಲ್ಲಿ ಗೋಚರಿಸುವ ಬದಲಾವಣೆಗಳ ಮೂಲಕ ಅಳೆಯಲ್ಪಡಲಿದೆ.



ತಾಯಿ ಬಳಿ ಆಶೀರ್ವಾದ ಪಡೆದ ಸಿಎಂ ಡಿ.ಕೆ.ಶಿವಕುಮಾರ್


### 2028ರತ್ತ ನಿರ್ಮಾಣವಾಗುತ್ತಿರುವ ವಿಶ್ವಾಸ

ಯಾವುದೇ ಪಕ್ಷದ ಭವಿಷ್ಯ ಅದರ ಆಡಳಿತದ ಮೇಲೆ ಅವಲಂಬಿತವಾಗಿರುತ್ತದೆ. ಉತ್ತಮ ಆಡಳಿತ ಜನರ ವಿಶ್ವಾಸವನ್ನು ಹೆಚ್ಚಿಸುತ್ತದೆ. ಜನರ ವಿಶ್ವಾಸವೇ ಚುನಾವಣಾ ಯಶಸ್ಸಿನ ಬುನಾದಿಯಾಗುತ್ತದೆ. ಮುಖ್ಯಮಂತ್ರಿಯಾಗಿ ಡಿ.ಕೆ. ಶಿವಕುಮಾರ್ ಅವರು ಜನರಲ್ಲಿ ಅಭಿವೃದ್ಧಿ ಮತ್ತು ಸ್ಥಿರ ಆಡಳಿತದ ಬಗ್ಗೆ ನಿರೀಕ್ಷೆ ಮೂಡಿಸಿರುವುದು ರಾಜಕೀಯವಾಗಿ ಗಮನಾರ್ಹ ಬೆಳವಣಿಗೆಯಾಗಿದೆ.

ಆದರೆ ಈ ವಿಶ್ವಾಸವನ್ನು ಉಳಿಸಿಕೊಳ್ಳುವುದು ಮತ್ತು ಮತ್ತಷ್ಟು ಬಲಪಡಿಸುವುದು ಮುಂದಿನ ದಿನಗಳ ಆಡಳಿತದ ಗುಣಮಟ್ಟದ ಮೇಲೆ ಅವಲಂಬಿತವಾಗಿರುತ್ತದೆ. ಅಭಿನಂದನೆಗಳೊಂದಿಗೆ ಮುಂದಿನ ಪಯಣಕ್ಕೆ ಶುಭಹಾರೈಕೆ ಮುಖ್ಯಮಂತ್ರಿಯಾಗಿ ಶತದಿನಗಳನ್ನು ಪೂರೈಸುತ್ತಿರುವ ಡಿ.ಕೆ. ಶಿವಕುಮಾರ್ ಅವರಿಗೆ ಅಭಿನಂದನೆಗಳು.

ಈ ನೂರು ದಿನಗಳು ಅವರ ಆಡಳಿತದ ಒಂದು ಮೈಲಿಗಲ್ಲು ಮಾತ್ರ. ಮುಂದೆ ಇನ್ನೂ ದೊಡ್ಡ ಸವಾಲುಗಳು, ಇನ್ನೂ ದೊಡ್ಡ ಅವಕಾಶಗಳು ಮತ್ತು ಇನ್ನೂ ಹೆಚ್ಚಿನ ಜವಾಬ್ದಾರಿಗಳು ಎದುರಿವೆ. ತಮ್ಮ ಪರಿಶ್ರಮ, ತಾಳ್ಮೆ, ಪಕ್ಷನಿಷ್ಠೆ, ಆಡಳಿತಾತ್ಮಕ ಅನುಭವ ಮತ್ತು ಜನರ ಮೇಲಿನ ಕಾಳಜಿಯ ಮೂಲಕ ಅವರು ರಾಜ್ಯದ ಅಭಿವೃದ್ಧಿಗೆ ಹೊಸ ದಿಕ್ಕು ನೀಡಲಿ ಎಂಬುದು ಜನರ ಆಶಯ. ಕರ್ನಾ ಟಕದ ಸಮಗ್ರ ಅಭಿವೃದ್ಧಿ, ರೈತರ ಕಲ್ಯಾಣ, ಯುವಕರಿಗೆ ಉದ್ಯೋಗ, ಉತ್ತಮ ಮೂಲಸೌಕರ್ಯ, ಹೂಡಿಕೆ ಆಕರ್ಷಣೆ ಮತ್ತು ಜನಪರ ಆಡಳಿತದ ಮೂಲಕ ರಾಜ್ಯವನ್ನು ಮತ್ತಷ್ಟು ಪ್ರಗತಿಯತ್ತ ಕೊಂಡೊಯ್ಯುವ ಅವರ ಪ್ರಯತ್ನಗಳು ಯಶಸ್ವಿಯಾಗಲಿ. ಶತದಿನಗಳ ಈ ಸಂದರ್ಭದಲ್ಲಿ ಅವರಿಗೆ ಹಾರ್ದಿಕ ಅಭಿನಂದನೆಗಳು ಹಾಗೂ ಮುಂದಿನ ಆಡಳಿತ ಪಯಣಕ್ಕೆ ಶುಭಾಶಯಗಳು.

## ನಿತ್ಯ ಪಂಚಾಂಗ 9.09.2026 ಬುಧವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ದಕ್ಷಿಣಾಯಣ ಗ್ರೀಷ್ಮ ಋತು, ಚಾಂದ್ರಮಾನ ಶ್ರಾವಣ-ಬಾದ್ರಪದ ಮಾಸ

ಮಾಸ ಶಿವರಾತ್ರಿ, ವರವಿ, ಇಳಕಲ್ಲು/ಹುಬ್ಬಳ್ಳಿ/ ಹರ್ತಿ ಬಸವೇಶ್ವರ ರಥ, ಮೈಸೂರು ಲಕ್ಷ್ಮೀನಾರಾಯಣ ಉತ್ಸವ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | ಸ. 5.04– 6.33 | 12.00– 1.30 | 3.00– 4.00 |
| ಸೋಮ | ಬೆ. 7.20– 9.04 | 10.30–12.00 | 1.30– 3.00 |
| ಮಂಗಳ | ಮ. 3.25– 4.59 | 9.00–10.30 | 12.00– 1.30 |
| ಬುಧ | ಮ.12.16– 1.50 | 7.30– 9.00 | 10.30– 12.00 |
| ಗುರು | ಮ. 1.50– 3.29 | 6.00– 7.30 | 9.00– 10.30 |
| ಶುಕ್ರ | ಬೆ.10.42–12.16 | 3.00– 4.30 | 7.30– 9.00 |
| ಶನಿ | ಬೆ. 9.07–10.41 | 1.30– 3.00 | 6.00– 7.30 |

# ಡಿ.ಕೆ.ಸರ್ಕಾರಕ್ಕೆ 100 ದಿನ: ಸಿದ್ದರಾಮಯ್ಯಗೆ ಖುದ್ದು ಆಹ್ವಾನ ನೀಡಿದ ಮುಖ್ಯಮಂತ್ರಿ

**ಬೆಂಗಳೂರು, ಸೆ.8:** ಸಿಎಂ ಡಿ.ಕೆ. ಶಿವಕುಮಾರ್ ಅವರು ಮುಖ್ಯಮಂತ್ರಿಯಾಗಿ ಸೆ.10ರ ಗುರುವಾರಕ್ಕೆ ನೂರು ದಿನ ಪೂರೈಸುತ್ತಿದೆ. ಈ ವೇಳೆ ವಿಶೇಷ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು, ಈ ಕಾರ್ಯಕ್ರಮಕ್ಕೆ ಖುದ್ದು ಸಿಎಂ ಡಿ.ಕೆ. ಶಿವಕುಮಾರ್ ಅವರೇ ಮಾಜಿ ಸಿಎಂ ಸಿದ್ದರಾಮಯ್ಯ ಅವರಿಗೆ ಆಹ್ವಾನ ನೀಡಿದ್ದಾರೆ. ಮಂಗಳವಾರ ಸಿಎಂ ಸಿದ್ದರಾಮಯ್ಯ ನಿವಾಸಕ್ಕೆ ತೆರಳಿದ ಡಿ.ಕೆ. ಶಿವಕುಮಾರ್, ಕಾರ್ಯಕ್ರಮದ ಪತ್ರಿಕೆ ನೀಡಿ ಅವರನ್ನು ಪ್ರೀತಿಯಿಂದ ಆಹ್ವಾನಿಸಿದರು. ಇಬ್ಬರೂ ಸಹ ತುಸುಕಾಲ ಲೋಕಾಭಿರಾಮವಾಗಿ ಸಮಯ ಕಳೆದು ಮಾತುಕತೆ ನಡೆಸಿದರು. ಸಿಎಂ ಡಿ.ಕೆ. ಶಿವಕುಮಾರ್ ಗೆ ಸಚಿವ ಬಾಲಕೃಷ್ಣ ಸೇರಿದಂತೆ ಹಲವು ಕಾಂಗ್ರೆಸ್ ನಾಯಕರು ಸಾಥ್ ನೀಡಿದರು. ಸಚಿವ ಎಚ್.ಸಿ ಬಾಲಕೃಷ್ಣ, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ಎ ಎಸ್ ಪೊನ್ನಣ್ಣ ಶಾಸಕರಾದ ಶರತ್ ಬಚ್ಚೇಗೌಡ, ಬೇಳೂರು ಗೋಪಾಲಕೃಷ್ಣ, ಡಾ.ರಂಗನಾಥ್, ಶಿವರಾಂ ಹೆಬ್ಬಾರ್, ಎನ್ ಶ್ರೀನಿವಾಸ್, ಎಸ್ ಟಿ ಸೋಮಶೇಖರ್, ಬಿ ಶಿವಣ್ಣ, ಎಸ್ ಆರ್ ಶ್ರೀನಿವಾಸ್, ರಮೇಶ ಬಂಡಿಸಿದ್ದೇಗೌಡ, ವಿಧಾನ ಪರಿಷತ್ ಸದಸ್ಯರಾದ ವಿನಯ್ ಕಾರ್ತಿಕ್, ಎಸ್ ರವಿ ಹಾಗೂ ಮತ್ತಿತರರು ಹಾಜರಿದ್ದರು.



# ವಿಶೇಷ ಅಧಿವೇಶನಕ್ಕೂ ಮುನ್ನ ಸೆ.21ರಂದು ಸರ್ವಪಕ್ಷ ಸಭೆ: ಸಭಾಪತಿ ಸಲೀಂ ಅಹಮದ್



**ಸವಣೂರು, ಸೆ.8:** ರಾಜ್ಯದಲ್ಲಿ ತಲೆದೋರಿರುವ ತೀವ್ರ ಬರಗಾಲ, ರೈತರ ಸಂಕಷ್ಟ ಹಾಗೂ ಕಸ್ತೂರಿರಂಗನ್ ವರದಿ ಜಾರಿಯಂತಹ ಪ್ರಮುಖ ಮತ್ತು ಜ್ವಲಂತ ಸಮಸ್ಯೆಗಳ ಕುರಿತು ಚರ್ಚಿಸಲು ಸರ್ಕಾರವು ಸೆಪ್ಟೆಂಬರ್ 21 ರಿಂದ 23 ರವರೆಗೆ ಮೂರು ದಿನಗಳ ಕಾಲ ವಿಧಾನಮಂಡಲದ ವಿಶೇಷ ಅಧಿವೇಶನವನ್ನು ಕರೆದಿದೆ. ಈ ಹಿನ್ನೆಲೆಯಲ್ಲಿ ಅಧಿವೇಶನ ಸಮಯ ವ್ಯರ್ಥವಾಗುವುದನ್ನು ತಡೆಯಲು, ಸುಗಮ ಕಲಾಪಕ್ಕೆ ಪ್ರತಿಪಕ್ಷಗಳ ಸಹಕಾರ ಕೋರಲು ಸೆ.21ರಂದು ಸರ್ಕಾರ ಸರ್ವಪಕ್ಷ ಸಭೆ ಕರೆದಿದೆ ಎಂದು ವಿಧಾನ ಪರಿಷತ್ ಸಭಾಪತಿ ಸಲೀಂ ಅಹಮದ್ ತಿಳಿಸಿದ್ದಾರೆ.

ಸವಣೂರಿನಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಸಭಾಪತಿ, ಸದನದ ಕಲಾಪಗಳು ಸುಗಮವಾಗಿ ನಡೆಯುವುದು ಅಗತ್ಯವಾಗಿದೆ. ಆದರೆ ಇತ್ತೀಚೆಗೆ ಮುಕ್ತಾಯಗೊಂಡ ಎಂಟು ದಿನಗಳ ಸುದೀರ್ಘ ಅಧಿವೇಶನದಲ್ಲಿ ಯಾವುದೇ ಸಾರಯುತ ಚರ್ಚೆಗಳು ನಡೆಯದಿರುವುದು ತೀವ್ರ ವಿಷಾದನೀಯ ಎಂದು ಕಳವಳ ವ್ಯಕ್ತಪಡಿಸಿದ್ದಾರೆ.

# ಮೊದಲ ಬಾರಿಗೆ ರಾಜ್ಯಮಟ್ಟದ ಕರ್ನಾಟಕ ಪ್ರವಾಸೋದ್ಯಮ ಪ್ರಶಸ್ತಿ: 35 ಪ್ರಶಸ್ತಿ ಘೋಷಣೆ

**ಬೆಂಗಳೂರು, ಸೆ.8:** ರಾಜ್ಯದ ಪ್ರವಾಸೋದ್ಯಮ ಇಲಾಖೆಯ ಇತಿಹಾಸದಲ್ಲಿ ಮೊದಲ ಬಾರಿಗೆ, ಪ್ರವಾಸೋದ್ಯಮ ಕ್ಷೇತ್ರದ ವಿವಿಧ ವಿಭಾಗಗಳಲ್ಲಿ ಅತ್ಯುತ್ತಮ ಸಾಧನೆ ಮಾಡುತ್ತಿರುವ ಸಂಸ್ಥೆಗಳು, ಉದ್ಯಮಿಗಳು ಹಾಗೂ ವ್ಯಕ್ತಿಗಳನ್ನು ರಾಜ್ಯಮಟ್ಟದ ವೇದಿಕೆಯಡಿ ಗುರುತಿಸಲು ಕರ್ನಾಟಕ ಟೂರಿಸಂ ಅವಾರ್ಡ್ಸ್ ಆಯೋಜಿಸಲಾಗುತ್ತಿದೆ ಎಂದು ಇಂಧನ ಹಾಗೂ ಪ್ರವಾಸೋದ್ಯಮ ಸಚಿವ ಕೆ.ಜೆ. ಜಾರ್ಜ್ ತಿಳಿಸಿದ್ದಾರೆ.

ರಾಜ್ಯ ಪ್ರವಾಸೋದ್ಯಮ ಇಲಾಖೆ , ಕರ್ನಾಟಕ ಟೂರಿಸಂ ಸೊಸೈಟಿಯ ಸಹಯೋಗದೊಂದಿಗೆ ಆಯೋಜಿಸುತ್ತಿರುವ ಈ ಪ್ರಶಸ್ತಿಗಳು ಕರ್ನಾಟಕದ ಪ್ರವಾಸೋದ್ಯಮ ಕ್ಷೇತ್ರದಲ್ಲಿ ಸೇವಾ ಗುಣಮಟ್ಟ, ನಾವೀನ್ಯತೆ, ಸುಸ್ಥಿರತೆ ಹಾಗೂ ಸ್ಥಳೀಯ ಸಮುದಾಯದ ಕೊಡುಗೆಯನ್ನು ಗುರುತಿಸುವ ಪ್ರಮುಖ ವೇದಿಕೆಯಾಗಲಿದೆ.

ರಾಜ್ಯದ ಒನ್ ಸ್ಟೇಟ್, ಮೆನಿ ವರ್ಲ್ಡ್ – ಬ್ರ್ಯಾಂಡ್ ಪರಿಕಲ್ಪನೆಯಡಿ ರೂಪಿಸಿರುವ ಪ್ರಶಸ್ತಿಗಳು ಕರ್ನಾಟಕದ 31 ಜಿಲ್ಲೆಗಳಲ್ಲಿರುವ ಪ್ರವಾಸೋದ್ಯಮ ಕ್ಷೇತ್ರದ ವೈವಿಧ್ಯಮಯ ಸಾಧನೆಗಳನ್ನು ರಾಜ್ಯಮಟ್ಟದಲ್ಲಿ ಗುರುತಿಸುವ ಉದ್ದೇಶ ಹೊಂದಿವೆ.

ಕರ್ನಾಟಕ ಟೂರಿಸಂ ಸೊಸೈಟಿ ಅಧ್ಯಕ್ಷ ಕೆ. ಶ್ಯಾಮರಾಜು ಮಾತನಾಡಿ, ಪ್ರವಾಸ ಮತ್ತು ಆತಿಥ್ಯ ಕ್ಷೇತ್ರದಲ್ಲಿ ಉತ್ತಮ ಸಾಧನೆ ಮಾಡುತ್ತಿರುವವರಿಗೆ ಅರ್ಹತೆ ಆಧಾರಿತ, ವಿಶ್ವಾಸಾರ್ಹ ವೇದಿಕೆಯ ಮೂಲಕ ಮಾನ್ಯತೆ ನೀಡುವುದರ ಜೊತೆಗೆ ರಾಜ್ಯದಾದ್ಯಂತ ಸೇವಾ ಗುಣಮಟ್ಟವನ್ನು ಹೆಚ್ಚಿಸುವುದು ಈ ಉಪಕ್ರಮದ ಉದ್ದೇಶವಾಗಿದೆ ಎಂದು ತಿಳಿಸಿದ್ದಾರೆ.

### ಪ್ರಶಸ್ತಿ ವಿವರ

– ವಸತಿ ಮತ್ತು ಆತಿಥ್ಯ ವಿಭಾಗದಲ್ಲಿ ಹೋಟೆಲ್, ರೆಸಾರ್ಟ್, ಬೂಟಿಕ್ ಸ್ಟೇ, ಹೆರಿಟೇಜ್ ಪ್ರಾಪರ್ಟಿ, ರೆಸ್ಟೋರೆಂಟ್ ಹಾಗೂ ಆತಿಥ್ಯ ಸೇವೆಗಳಲ್ಲಿನ ಸಾಧನೆಗಳನ್ನು ಗುರುತಿಸಲಾಗುತ್ತದೆ.

– ಪ್ರವಾಸ ಕಾರ್ಯಾಚರಣೆ ಮತ್ತು ಟ್ರಾವೆಲ್ ಏಜೆಂಟ್ಸ್ ವಿಭಾಗದಲ್ಲಿ ದೇಶೀಯ ಹಾಗೂ ಇನ್‌ಬೌಂಡ್ ಟೂರ್ ಆಪರೇಟರ್‌ಗಳು, ಸಾಹಸ ಪ್ರವಾಸೋದ್ಯಮ ಸಂಸ್ಥೆಗಳು, ಸಾರಿಗೆ ಸೇವೆಗಳು, MICE ಹಾಗೂ ನವೀನ ಪ್ರವಾಸ ಸೇವೆಗಳಿಗೆ ಅವಕಾಶ ಕಲ್ಪಿಸಲಾಗಿದೆ.



– ಕಾರ್ಯಕ್ರಮಗಳುಯ, ಸ್ಥಳ ಮತ್ತು ಮೂಲ ಸೌಕರ್ಯ ವಿಭಾಗದಲ್ಲಿ ಹೆರಿಟೇಜ್ ಸ್ಮಾರಕಗಳು, ವಸ್ತುಸಂಗ್ರಹಾಲಯಗಳು, ಕಾರ್ಯಕ್ರಮ ಹಾಗೂ ಪ್ರವಾಸೋದ್ಯಮಸ್ನೇಹಿ ಸ್ಥಳಗಳು ಸೇರಿದಂತೆ ವಿವಿಧ ವಿಭಾಗಗಳನ್ನು ಒಳಗೊಂಡಿದೆ.

– ಶಿಕ್ಷಣ, ಪ್ರಕಾಶನ ಮತ್ತು ವೈಯಕ್ತಿಕ ವಿಭಾಗದಲ್ಲಿ ಪ್ರವಾಸಿ ಮಾರ್ಗದರ್ಶಕರು, ನೈಸರ್ಗಿಕ ತಜ್ಞರು, ಶಿಕ್ಷಣ ಸಂಸ್ಥೆಗಳು, ಸ್ಟಾರ್ಟ್‌ಅಪ್‌ಗಳು, ತಂತ್ರಜ್ಞಾನ ಕ್ಷೇತ್ರದ ಸಾಧಕರು, ಲೇಖಕರು ಹಾಗೂ ಜೀವಮಾನ ಸಾಧಕರನ್ನು ಗುರುತಿಸಲಾಗುತ್ತದೆ.

– ಸುಸ್ಥಿರತೆ ಮತ್ತು ಗ್ರಾಮೀಣ ಪ್ರವಾಸೋದ್ಯಮ ವಿಭಾಗದಲ್ಲಿ ಹೋಂಸ್ಟೇ, ಗ್ರಾಮೀಣ ಪ್ರವಾಸೋದ್ಯಮ ಯೋಜನೆಗಳು, ಸುಸ್ಥಿರ ಪ್ರವಾಸೋದ್ಯಮ ಹಾಗೂ ಪ್ರವಾಸಿ ತಾಣಗಳ ಉತ್ತಮ ನಿರ್ವಹಣೆಗೆ ಆದ್ಯತೆ ನೀಡಲಾಗಿದೆ.

### ಅರ್ಹತೆ ಮತ್ತು ಸಾಧನೆಯೇ ಮಾನದಂಡ

ಪ್ರಶಸ್ತಿಗಳ ಆಯ್ಕೆಗೆ ಉದ್ಯಮ ಕ್ಷೇತ್ರದ ಹಿರಿಯರು, ವಿಷಯ ತಜ್ಞರು ಹಾಗೂ ಸಂಬಂಧಿತ ಪ್ರತಿನಿಧಿಗಳನ್ನು ಒಳಗೊಂಡ ಸ್ವತಂತ್ರ ಸ್ಕ್ರೀನಿಂಗ್ ಸಮಿತಿ ಕಾರ್ಯನಿರ್ವಹಿಸಲಿದೆ. ಸೇವಾ ಗುಣಮಟ್ಟ, ಪ್ರವಾಸಿಗರ ಅಭಿಪ್ರಾಯ ಮತ್ತು ಅನುಭವ, ನಾವೀನ್ಯತೆ, ಪರಿಸರ ಸುಸ್ಥಿರತೆ ಹಾಗೂ ಸ್ಥಳೀಯ ಸಮುದಾಯದ ಅಭಿವೃದ್ಧಿಗೆ ನೀಡಿರುವ ಕೊಡುಗೆ ಸೇರಿದಂತೆ ಹಲವು ಮಾನದಂಡಗಳ ಆಧಾರದ ಮೇಲೆ ನಾಮನಿರ್ದೇಶನಗಳನ್ನು ಮೌಲ್ಯಮಾಪನ ಮಾಡಲಾಗುವುದು. ಈ ಮೂಲಕ ಪ್ರಶಸ್ತಿ ಆಯ್ಕೆಯಲ್ಲಿ ಪಾರದರ್ಶಕತೆ, ವಿಶ್ವಾಸಾರ್ಹತೆ ಮತ್ತು ಅರ್ಹತೆ ಆಧಾರದ ಮೇಲೆ ಖಚಿತಪಡಿಸುವ ಉದ್ದೇಶ ಹೊಂದಲಾಗಿದೆ.

> ಕರ್ನಾಟಕದ ಪ್ರವಾಸೋದ್ಯಮದ ನಿಜವಾದ ಶಕ್ತಿ ನಮ್ಮ ತಾಣಗಳ ಜೊತೆಗೆ, ಪ್ರವಾಸಿಗರಿಗೆ ಉತ್ತಮ ಅನುಭವ ನೀಡಲು ಕೆಲಸ ಮಾಡುತ್ತಿರುವ ಸಾವಿರಾರು ಉದ್ಯಮಿಗಳು, ಹೋಟೆಲ್‌ಗಳು, ಪ್ರವಾಸ ನಿರ್ವಾಹಕರು, ಮಾರ್ಗದರ್ಶಕರು ಮತ್ತು ಸ್ಥಳೀಯ ಸಮುದಾಯಗಳಲ್ಲಿದೆ. ಅತ್ಯುತ್ತಮ ಸೇವೆ, ನಾವೀನ್ಯತೆ ಮತ್ತು ಸುಸ್ಥಿರತೆಯನ್ನು ಗುರುತಿಸಿ ಗೌರವಿಸುವ ಮೂಲಕ ಪ್ರವಾಸೋದ್ಯಮ ಕ್ಷೇತ್ರದಲ್ಲಿ ಹೊಸ ಆಯಾಮ ರೂಪಿಸುವುದು ಕರ್ನಾಟಕ ಟೂರಿಸಂ ಅವಾರ್ಡ್ಸ್‌ನ ಉದ್ದೇಶವಾಗಿದೆ.
>
> - ಕೆ.ಜೆ.ಜಾರ್ಜ್ । ಸಚಿವ

> ಪ್ರವಾಸೋದ್ಯಮದಲ್ಲಿ ಉತ್ತಮ ಕೆಲಸ ಮಾಡುತ್ತಿರುವವರನ್ನು ಗುರುತಿಸುವುದರ ಜೊತೆಗೆ, ಕ್ಷೇತ್ರದ ಗುಣಮಟ್ಟಕ್ಕೆ ಸ್ಪಷ್ಟ ಮಾನದಂಡಗಳನ್ನು ರೂಪಿಸುವುದು ಈ ಪ್ರಶಸ್ತಿಗಳ ಪ್ರಮುಖ ಉದ್ದೇಶವಾಗಿದೆ. ದೊಡ್ಡ ಹೋಟೆಲ್ ಅಥವಾ ಸಂಸ್ಥೆಗಳಷ್ಟೇ ಅಲ್ಲದೆ ಹೋಂಸ್ಟೇಗಳು, ಗ್ರಾಮೀಣ ಪ್ರವಾಸೋದ್ಯಮ, ಗೈಡ್‌ಗಳು, ಸ್ಥಳೀಯ ಉದ್ಯಮಿಗಳು, ಸ್ಟಾರ್ಟ್‌ಅಪ್‌ಗಳು ಮತ್ತು ಸುಸ್ಥಿರ ಪ್ರವಾಸೋದ್ಯಮ ಉಪಕ್ರಮಗಳಿಗೂ ಸಮಾನ ಅವಕಾಶ ದೊರೆಯುವಂತೆ ವಿಭಾಗಗಳನ್ನು ರೂಪಿಸಲಾಗಿದೆ.
>
> -ಡಾ.ರಾಮ್ ಪ್ರಸಾತ್ ಮನೋಹರ್ । ಐಎಎಸ್ ಪ್ರವಾಸೋದ್ಯಮ ಇಲಾಖ

### ಸೆ.17ರವರೆಗೆ ನಾಮನಿರ್ದೇಶನ

ಅರ್ಹ ಹೋಟೆಲ್‌ಗಳು, ರೆಸಾರ್ಟ್‌ಗಳು, ಟೂರ್ ಆಪರೇಟರ್‌ಗಳು, ನೋಂದಾಯಿತ ಹೋಂಸ್ಟೇಗಳು, ಪ್ರವಾಸ ಸೇವಾ ಸಂಸ್ಥೆಗಳು, ಪ್ರವಾಸೋದ್ಯಮ ಸ್ಟಾರ್ಟ್‌ಅಪ್‌ಗಳು, ತಂತ್ರಜ್ಞಾನ ಸಂಸ್ಥೆಗಳು ಹಾಗೂ ವ್ಯಕ್ತಿಗಳು ಸೆಪ್ಟೆಂಬರ್ 17, 2026ರ ರಾತ್ರಿ 11.59ರವರೆಗೆ ನಾಮನಿರ್ದೇಶನ ಸಲ್ಲಿಸಬಹುದು. ಪ್ರಶಸ್ತಿ ಪ್ರದಾನ ಸಮಾರಂಭವನ್ನು ವಿಶ್ವ ಪ್ರವಾಸೋದ್ಯಮ ದಿನವಾದ ಸೆಪ್ಟೆಂಬರ್ 27ರಂದು ಬೆಂಗಳೂರಿನಲ್ಲಿ ಆಯೋಜಿಸಲಾಗುವುದು.


# 24 ಸಾವಿರ ಹೆಕ್ಟೇರ್ ಹನಿ ನೀರಾವರಿ ವಿಫಲ: ಗುತ್ತಿಗೆದಾರರ ವಿರುದ್ಧ ಕ್ರಮಕ್ಕೆ ಸಚಿವ ಚಲುವರಾಯಸ್ವಾಮಿ ಸೂಚನೆ

**ಬೆಂಗಳೂರು, ಸೆ.8:** ಉತ್ತರ ಕರ್ನಾಟಕದ ಜೀವನಾಡಿಯಾದ ಕೃಷ್ಣಾ ಭಾಗ್ಯ ಜಲ ನಿಗಮದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಜಲಸಂಪನ್ಮೂಲ ಸಚಿವ ಎನ್. ಚಲುವರಾಯಸ್ವಾಮಿ ಅವರು ಅಧಿಕಾರಿಗಳಿಗೆ ಖಡಕ್ ಎಚ್ಚರಿಕೆ ನೀಡಿ, ಕಳಪೆ ಕಾಮಗಾರಿ ಸಹಿಸುವುದಿಲ್ಲ, ಗುಣಮಟ್ಟದಲ್ಲಿ ರಾಜಿ ಇಲ್ಲ ಎಂದು ತಾಕೀತು ಮಾಡಿದರು.

ಕೆ.ಬಿ.ಜೆ.ಎನ್.ಎಲ್ ವ್ಯಾಪ್ತಿಯ ವಿಜಯಪುರ, ಬಾಗಲಕೋಟೆ, ರಾಯಚೂರು, ಯಾದಗಿರಿ, ಕಲಬುರಗಿ, ಕೊಪ್ಪಳ, ಗದಗ ಸೇರಿದಂತೆ 7 ಜಿಲ್ಲೆ, 5 ವಲಯ, 46 ತಾಲೂಕು, 33 ವಿಧಾನಸಭಾ ಕ್ಷೇತ್ರಗಳ ಬೃಹತ್ ವ್ಯಾಪ್ತಿಯ ಸಮಗ್ರ ಮಾಹಿತಿ, ಸಿಬ್ಬಂದಿ ವಿವರ, ಕೆರೆ ತುಂಬಿಸುವ ಯೋಜನೆಗಳ ಬಗ್ಗೆ ಇಂದು ನಡೆದ ಸಭೆಯಲ್ಲಿ ಸಚಿವರು ಮಾಹಿತಿ ಪಡೆದರು.

24 ಸಾವಿರ ಹೆಕ್ಟೇರ್ ಪ್ರದೇಶಕ್ಕೆ ಒದಗಿಸಲಾದ ಹನಿ ನೀರಾವರಿ ನಿರೀಕ್ಷಿತ ಯಶಸ್ಸು ಕಾಣದಿರುವ ಬಗ್ಗೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದ ಸಚಿವರು, ಗುತ್ತಿಗೆ ಪಡೆದವರು ಸರಿಯಾಗಿ ನೀರು ಪೂರೈಸುತ್ತಿಲ್ಲ, 5 ವರ್ಷಗಳ ನಿರ್ವಹಣಾ ನಿಯಮ ಉಲ್ಲಂಘಿಸುತ್ತಿದ್ದಾರೆ ಎಂದು ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳೊಂದಿಗೆ ಖುದ್ದು ಸ್ಥಳ ಪರಿಶೀಲನೆ ನಡೆಸುವ ತೀರ್ಮಾನ ಪ್ರಕಟಿಸಿದರು.

ಕೇವಲ ನ್ಯಾಯಾಲಯದ ನೆಪವೊಡ್ಡಿ ಕಾಮಗಾರಿ ವಿಳಂಬ ಮಾಡುವುದನ್ನು ಸಹಿಸುವುದಿಲ್ಲ, ಪ್ರತಿಯೊಂದು ಸಮಸ್ಯೆಗೂ ತ್ವರಿತ ಪರಿಹಾರ ಒದಗಿಸಲೇಬೇಕು ಎಂದು ಖಡಕ್ ನಿರ್ದೇಶನ ನೀಡಿದರು.



ಕೃಷ್ಣಾ ಮೇಲ್ದಂಡೆ ಯೋಜನೆಗಾಗಿ ಕಾಲುವೆ ಮತ್ತು ಹಳ್ಳಿಗಳು ಸೇರಿ ಒಟ್ಟು 1,33,887 ಹೆಕ್ಟೇರ್ ಭೂಸ್ವಾಧೀನದ ಬೃಹತ್ ಸವಾಲು ಇದ್ದು, ಇದರಿಂದ 100 ಟಿಎಂಸಿ ನೀರು ಶೇಖರಣೆ ಸಾಧ್ಯ. 184 ಗ್ರಾಮಗಳ ಪೈಕಿ 87 ಗ್ರಾಮಗಳಿಗೆ ಶೀಘ್ರ ನೋಟಿಫಿಕೇಷನ್ ಹೊರಡಿಸುವ ಪ್ರಕ್ರಿಯೆಯಲ್ಲಿ ಎದುರಾಗುವ ರಾಜಕೀಯ ಮತ್ತು ಸ್ಥಳೀಯ ಶಾಸಕರ ಒತ್ತಡಗಳಿಗೆ ಮಣಿಯಬೇಡಿ ಎಂದು ಅಧಿಕಾರಿಗಳಿಗೆ ಸಚಿವರು ಅಭಯ ನೀಡಿದರು.

ಕಾನೂನು ಪ್ರಕಾರವೇ ಭೂಸ್ವಾಧೀನ ನಡೆಯಬೇಕು ಎಂದರು. ಈ ಕುರಿತು ಪ್ರಾದೇಶಿಕ ಆಯುಕ್ತರು ಮತ್ತು ಜನರಲ್ ಮ್ಯಾನೇಜರ್ ಜೊತೆ ವಿಶೇಷ ಸಭೆ ನಡೆಸುವುದಾಗಿ ತಿಳಿಸಿದರು.

ನಂದವಾಡಗಿ, ಕೆರೂರು, ಬೂದಿಹಾಳ, ಭಗವತಿ, ಪಾಮನಕಲ್ಲೂರು, ಚಡಚಣ ಸೇರಿದಂತೆ ಏತ ನೀರಾವರಿ ಯೋಜನೆಗಳಿಗೆ ವೇಗ ನೀಡಬೇಕು, ಸ್ಥಗಿತಗೊಂಡ ಕಾಮಗಾರಿಗಳಿಗೆ ಮರು ಟೆಂಡರ್ ಕರೆದು ಸಾರ್ವಜನಿಕ ಹಣ ವ್ಯರ್ಥವಾಗದಂತೆ ನೋಡಿಕೊಳ್ಳಬೇಕು ಎಂದು ಆದೇಶಿಸಿದರು. ಕೇಂದ್ರದಿಂದ ಬರಬೇಕಾದ ಅನುದಾನ ತರಲು ಶ್ರಮಿಸುವಂತೆ ಸೂಚಿಸಿದರು. ನಾರಾಯಣಪುರ ಎಡದಂಡೆ ಕಾಲುವೆಯಲ್ಲಿ ಯಾಂತ್ರೀಕೃತ ಗೇಟ್ ಅಳವಡಿಸಿ ನೀರಿನ ದಕ್ಷತೆ ಹೆಚ್ಚಿಸಿರುವುದು ಹಾಗೂ ರೈತರು ಆಪ್ ಮೂಲಕ ನೀರಿನ ಬೇಡಿಕೆ ಸಲ್ಲಿಸುವ ವ್ಯವಸ್ಥೆಯನ್ನು ಶ್ಲಾಘಿಸಿದರು.

ಸಭೆಯಲ್ಲಿ ಕೆ.ಬಿ.ಜೆ.ಎನ್.ಎಲ್ ವ್ಯವಸ್ಥಾಪಕ ನಿರ್ದೇಶಕರು, ಇಲಾಖೆ ಅಧಿಕಾರಿಗಳು ಹಾಜರಿದ್ದರು.

### ಕಳ್ಳಾಟ ಬಯಲಾದರೆ ಸುಮ್ಮನೆ ಬಿಡಲ್ಲ

ಯಾವುದೇ ಸೇತುವೆ ಅಥವಾ ಕಾಮಗಾರಿಯ ಗುಣಮಟ್ಟದಲ್ಲಿ ರಾಜಿ ಇಲ್ಲ, ಅಂದಾಜು ಪಟ್ಟಿ ತಯಾರಿಸುವಾಗ ಎಚ್ಚರಿಕೆ ವಹಿಸಿ. ಪರಿಶೀಲನೆ ವೇಳೆ ಅಧಿಕಾರಿಗಳ ಕಳ್ಳಾಟ ಬಯಲಾದರೆ ಸುಮ್ಮನೆ ಬಿಡುವ ಪ್ರಶ್ನೆಯೇ ಇಲ್ಲ, ಜಿಲ್ಲಾಡಳಿತಕ್ಕೆ ನೀಡಿದ ಸರ್ಕಾರಿ ಹಣದ ನಯಾ ಪೈಸೆಯೂ ದುರ್ಬಳಕೆಯಾಗಬಾರದು ಎಂದು ಸಚಿವ ಚೆಲುವರಾಯಸ್ವಾಮಿ ಎಚ್ಚರಿಕೆ ನೀಡಿದರು. ಸಿಬ್ಬಂದಿ ಕೊರತೆ, ಅನುದಾನ ಸಮಸ್ಯೆಗಳನ್ನು ಆದ್ಯತೆ ಮೇರೆಗೆ ಬಗೆಹರಿಸುವುದಾಗಿ ಭರವಸೆ ನೀಡಿದರು. ನಂತರ ಗುತ್ತಿಗೆದಾರರೊಂದಿಗೆ ಸಮಾಲೋಚನೆ ನಡೆಸಿದ ಸಚಿವರು, ಅನುದಾನ ಬಿಡುಗಡೆ, ಶೇ.50 ಠೇವಣಿ, ಕಾರ್ಯಾದೇಶ ವಿಳಂಬ ಸಮಸ್ಯೆಗಳನ್ನು ಆಲಿಸಿ, "ನಾನು ಕೂಡ ಈ ಹಿಂದೆ ಗುತ್ತಿಗೆದಾರನಾಗಿದ್ದೆ, ನಿಮ್ಮ ಸಮಸ್ಯೆಗಳ ಅರಿವು ನನಗಿದೆ, ಶೀಘ್ರ ಬಗೆಹರಿಸುತ್ತೇನೆ" ಎಂದು ಭರವಸೆ ನೀಡಿದರು.

# ಭವಿಷ್ಯದ ದೃಷ್ಟಿಯಿಂದ ಸಾರಿಗೆ ಮೂಲಸೌಕರ್ಯ ಅಭಿವೃದ್ಧಿಪಡಿಸುವ ಅಗತ್ಯ: ಸಚಿವ ಯತೀಂದ್ರ

**ಬೆಂಗಳೂರು, ಸೆ.8:** ಕರ್ನಾಟಕದ ನಗರಗಳಲ್ಲಿ ಸಾರ್ವಜನಿಕ ಸಾರಿಗೆ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸುವ ಹಾಗೂ ಭವಿಷ್ಯದ ನಗರೀಕರಣಕ್ಕೆ ತಕ್ಕಂತೆ ಸಮಗ್ರ ಸಾರಿಗೆ ವ್ಯವಸ್ಥೆಯನ್ನು ರೂಪಿಸುವ ನಿಟ್ಟಿನಲ್ಲಿ ಸಾರ್ವಜಕನಿಕ ಸಾರಿಗೆ ಆಧಾರಿತ ಅಭಿವೃದ್ಧಿ ನೀತಿಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ಕುರಿತು ಇಂದು ವಿಧಾನಸೌಧದ ಕಚೇರಿಯಲ್ಲಿ ನಗರ ಭೂ ಸಾರಿಗೆ ನಿರ್ದೇಶನಾಲಯದ ಅಧಿಕಾರಿಗಳೊಂದಿಗೆ ನಗರಾಭಿವೃದ್ಧಿ ಸಚಿವರಾದ ಡಾ.ಯತೀಂದ್ರ ಸಿದ್ದರಾಮಯ್ಯ ಸಭೆ ನಡೆಸಿದರು.

ಕರ್ನಾಟಕದ ನಗರಗಳು ವೇಗವಾಗಿ ವಿಸ್ತರಿಸುತ್ತಿರುವ ಹಿನ್ನೆಲೆಯಲ್ಲಿ, ಮುಂದಿನ ದಿನಗಳಲ್ಲಿ ಜನಸಂಖ್ಯೆ, ನಗರೀಕರಣ ಹಾಗೂ ಸಂಚಾರದ ಪ್ರಮಾಣದಲ್ಲಿ ಉಂಟಾಗುವ ಹೆಚ್ಚಳವನ್ನು ಗಮನದಲ್ಲಿಟ್ಟುಕೊಂಡು ಸಾರಿಗೆ ಮೂಲಸೌಕರ್ಯವನ್ನು ಸಮಗ್ರವಾಗಿ ಅಭಿವೃದ್ಧಿಪಡಿಸುವ ಅಗತ್ಯವಿದೆ. ಈ ಹಿನ್ನೆಲೆಯಲ್ಲಿ ಜನರ ಸಂಚಾರವನ್ನು ಸುಗಮ, ವೇಗದ, ಸುರಕ್ಷಿತ, ಕೈಗೆಟುಕುವ ಹಾಗೂ ಪರಿಸರ ಸ್ನೇಹಿಯಾಗಿಸುವ ನವೀನ ಸಾರಿಗೆ ವ್ಯವಸ್ಥೆಗಳನ್ನು ಅಳವಡಿಸಿಕೊಳ್ಳುವ ಕುರಿತು ಸಭೆಯಲ್ಲಿ ವಿಸ್ತೃತವಾಗಿ ಚರ್ಚಿಸಿದರು.

ಮೆಟ್ರೋ, ಬಸ್, ರೈಲು ಸೇರಿದಂತೆ ವಿವಿಧ ಸಾರ್ವಜನಿಕ ಸಾರಿಗೆ ವ್ಯವಸ್ಥೆಗಳ ನಡುವೆ ಉತ್ತಮ ಸಮನ್ವಯ ಮತ್ತು ಸಂಪರ್ಕ ಕಲ್ಪಿಸುವುದು, ಸಾರ್ವಜನಿಕ ಸಾರಿಗೆಗೆ ಸುಲಭ ಪ್ರವೇಶ ಕಲ್ಪಿಸುವುದು ಹಾಗೂ ಸಾರಿಗೆ ಕೇಂದ್ರಿತವಾಗಿ ನಗರಗಳ ಅಭಿವೃದ್ಧಿಯನ್ನು ಯೋಜಿಸುವ ಕುರಿತು ಸಭೆಯಲ್ಲಿ ಸಚಿವರು ಸಮಾಲೋಚಿಸಿದರು.



ಸಾರ್ವಜನಿಕ ಸಾರಿಗೆ ವ್ಯವಸ್ಥೆಯನ್ನು ಕೇವಲ ಜನರ ಸಂಚಾರದ ಸಾಧನವಾಗಿ ಪರಿಗಣಿಸದೆ, ಸುಸ್ಥಿರ ಹಾಗೂ ಜನಕೇಂದ್ರಿತ ನಗರಾಭಿವೃದ್ಧಿಯ ಪ್ರಮುಖ ಆಧಾರಸ್ತಂಭವನ್ನಾಗಿ ರೂಪಿಸುವುದು ಸಾರಿಗೆ ಆಧಾರಿತ ಅಭಿವೃದ್ಧಿ ನೀತಿಯ ಪ್ರಮುಖ ಉದ್ದೇಶವಾಗಿದೆ. ಸಾರಿಗೆ ವ್ಯವಸ್ಥೆ, ವಸತಿ, ಉದ್ಯೋಗ, ವಾಣಿಜ್ಯ ಹಾಗೂ ಸಾರ್ವಜನಿಕ ಸೌಲಭ್ಯಗಳನ್ನು ಪರಸ್ಪರ ಸಮನ್ವಯಗೊಳಿಸುವ ಮೂಲಕ ಜನರ ದೈನಂದಿನ ಸಂಚಾರವನ್ನು ಮತ್ತಷ್ಟು ಸರಳಗೊಳಿಸುವ ಹಾಗೂ ಖಾಸಗಿ ವಾಹನಗಳ ಮೇಲಿನ ಅವಲಂಬನೆಯನ್ನು ಕಡಿಮೆ ಮಾಡುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳುವ ಕುರಿತು ಸಭೆಯಲ್ಲಿ ಸಮಾಲೋಚನೆ ನಡೆಸಿದರು.

## ಮೈಸೂರಿನಲ್ಲಿ ಚಿತ್ರನಗರಿ: ಅಧಿಕಾರಿಗಳ ಜತೆ ಚರ್ಚೆ

ಮೈಸೂರಿನಲ್ಲಿ ಸಾರ್ವಜನಿಕ–ಖಾಸಗಿ ಪಾಲುದಾರಿಕೆ ಮಾದರಿಯಲ್ಲಿ ನಿರ್ಮಿಸಲು ಉದ್ದೇಶಿಸಿರುವ ಅಂತಾರಾಷ್ಟ್ರೀಯ ದರ್ಜೆಯ ಚಿತ್ರನಗರಿ ಯೋಜನೆಯ ಪ್ರಗತಿ ಕುರಿತು ನಗರಾಭಿವೃದ್ಧಿ ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯ ಅಧಿಕಾರಿಗಳೊಂದಿಗೆ ವಿಕಾಸಸೌಧದ ಸಭಾಂಗಣದಲ್ಲಿ ಪರಿಶೀಲನಾ ಸಭೆ ನಡೆಸಿದರು. ಮೈಸೂರು ಈಗಾಗಲೇ ಕಲೆ, ಸಂಸ್ಕೃತಿ, ಪರಂಪರೆ ಹಾಗೂ ಪ್ರವಾಸೋದ್ಯಮದ ಪ್ರಮುಖ ತಾಣವಾಗಿದ್ದು, ಚಿತ್ರನಗರಿಯಂತಹ ಮಹತ್ವಾಕಾಂಕ್ಷೆಯ ಯೋಜನೆಯು ನಗರದ ಸಾಂಸ್ಕೃತಿಕ ಮತ್ತು ಆರ್ಥಿಕ ಬೆಳವಣಿಗೆಗೆ ಮತ್ತಷ್ಟು ವೇಗ ನೀಡುವ ಸಾಮರ್ಥ್ಯ ಹೊಂದಿದೆ. ಈ ಹಿನ್ನೆಲೆಯಲ್ಲಿ, ಉದ್ದೇಶಿತ ಚಿತ್ರನಗರಿಯನ್ನು ಕೇವಲ ಚಿತ್ರೀಕರಣಕ್ಕೆ ಸೀಮಿತವಾಗಿರದೆ, ಅತ್ಯಾಧುನಿಕ ಚಿತ್ರೀಕರಣ ಸೌಲಭ್ಯಗಳು, ಸ್ಟುಡಿಯೋಗಳು, ತಾಂತ್ರಿಕ ಮೂಲಸೌಕರ್ಯ, ಪೋಸ್ಟ್–ಪ್ರೊಡಕ್ಷನ್ ಸೌಲಭ್ಯಗಳು ಹಾಗೂ ಚಲನಚಿತ್ರ ಕ್ಷೇತ್ರಕ್ಕೆ ಅಗತ್ಯವಿರುವ ಸಮಗ್ರ ವ್ಯವಸ್ಥೆಗಳನ್ನು ಒಳಗೊಂಡ ದೇಶದ ಅತ್ಯುತ್ತಮ ಚಿತ್ರನಗರಿಯಾಗಿ ರೂಪಿಸುವ ನಿಟ್ಟಿನಲ್ಲಿ ಸಭೆಯಲ್ಲಿ ವಿವರವಾದ ಚರ್ಚೆ ನಡೆಸಿದರು. ಸಭೆಯಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಕಾರ್ಯದರ್ಶಿ ಜೆ. ಮಂಜುನಾಥ್ ಮತ್ತು ಜಂಟಿ ನಿರ್ದೇಶಕ ಮಂಜುನಾಥ ಡೊಳ್ಳಿನ್ ಮೊದಲಾದ ಅಧಿಕಾರಿಗಳು ಉಪಸ್ಥಿತರಿದ್ದರು.

# ಇಸ್ರೋ ಸಾಧನೆ ದೇಶದ ಹೆಮ್ಮೆ ಸಚಿವ ಡಾ.ಅಜಯ್ ಧರಂಸಿಂಗ್

**ಬೆಂಗಳೂರು, ಸೆ.8:** ಇತ್ತೀಚಿನ ಜಿ.ಎಸ್.ಎಲ್.ವಿ ಎಫ್ – 17/ ಇಓಎಸ್ –05 ಯಶಸ್ವಿ ಉಡಾವಣೆ ಹಿನ್ನೆಲೆಯಲ್ಲಿ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ. ಅಜಯ್ ಧರಂ ಸಿಂಗ್ ಅವರು ಮಂಗಳವಾರ ಬೆಂಗಳೂರಿನಲ್ಲಿ ಇಸ್ರೋ ಅಧ್ಯಕ್ಷ ಹಾಗೂ ಬಾಹ್ಯಾಕಾಶ ಇಲಾಖೆಯ ಕಾರ್ಯದರ್ಶಿ ಡಾ. ವಿ. ನಾರಾಯಣನ್ ಅವರನ್ನು ಭೇಟಿ ಮಾಡಿ ಅಭಿನಂದಿಸಿದರು.

ಇಸ್ರೋದ ವಿಜ್ಞಾನಿಗಳು, ಎಂಜಿನಿಯರ್‌ಗಳು ಮತ್ತು ತಾಂತ್ರಿಕ ತಂಡದ ಸಾಧನೆಯನ್ನು ಶ್ಲಾಘಿಸಿದ ಸಚಿವರು, ಈ ಯಶಸ್ಸು ಭಾರತದ ವೈಜ್ಞಾನಿಕ ಹಾಗೂ ತಾಂತ್ರಿಕ ಸಾಮರ್ಥ್ಯಕ್ಕೆ ಮತ್ತೊಂದು ಮಹತ್ವದ ಮೈಲಿಗಲ್ಲಾಗಿದೆ ಎಂದು ಹೇಳಿದರು. ಇಸ್ರೋದ ಸಾಧನೆ ದೇಶದ ಹೆಮ್ಮೆ, ಕರ್ನಾಟಕದ ಹೆಮ್ಮೆ. ಬಾಹ್ಯಾಕಾಶ ವಿಜ್ಞಾನ, ಸಂಶೋಧನೆ, ಸ್ಪೇಸ್ ಟೆಕ್, ಡೀಪ್ ಟೆಕ್, ಸ್ಟಾರ್ಟ್‌ಅಪ್‌ಗಳು ಮತ್ತು ಹೊಸ ತಂತ್ರಜ್ಞಾನಗಳ ಅಭಿವೃದ್ಧಿಗೆ ಕರ್ನಾಟಕ ಸರ್ಕಾರ ಅಗತ್ಯವಿರುವ ಎಲ್ಲ ರೀತಿಯ ಸಹಕಾರ ನೀಡಲುಸಿದ್ಧವಾಗಿದೆ ಎಂದು ಡಾ. ಅಜಯ್ ಧರಂ ಸಿಂಗ್ ಹೇಳಿದರು. ಇಸ್ರೋ ಮತ್ತು ಕರ್ನಾಟಕ ಸರ್ಕಾರದ ನಡುವಿನ ವಿಜ್ಞಾನ ಮತ್ತು ತಂತ್ರಜ್ಞಾನ ಸಹಕಾರವನ್ನು ಇನ್ನಷ್ಟು ಬಲಪಡಿಸುವ ಅಗತ್ಯವಿದೆ. ಕರ್ನಾಟಕವು ಇಸ್ರೋದ ಐತಿಹಾಸಿಕ ತವರು.




ಭಾರತದ ಮುಂದಿನ ಬಾಹ್ಯಾಕಾಶ ತಂತ್ರಜ್ಞಾನ ಮತ್ತು ಡೀಪ್ ಟೆಕ್ ಬೆಳವಣಿಗೆಯಲ್ಲೂ ಕರ್ನಾಟಕ ಮುಂಚೂಣಿಯಲ್ಲಿ ಇರಬೇಕು. ಈ ದಿಸೆಯಲ್ಲಿ ಇಸ್ರೋದ ಮಾರ್ಗದರ್ಶನ ಮತ್ತು ಸಹಕಾರ ಅತ್ಯಂತ ಮಹತ್ವದ್ದಾಗಿದೆ. ಈ ತಿಂಗಳ ಕೊನೆಯ ವಾರದಲ್ಲಿ ಮುಖ್ಯಮಂತ್ರಿಗಳೊಂದಿಗೆ ಸಭೆ ಆಯೋಜಿಸುವುದಾಗಿ ಸಚಿವರು ತಿಳಿಸಿದರು.

**ಸಿಎಂ ಅಭಿನಂದನೆ:** ಭೇಟಿಯ ವೇಳೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ದೂರವಾಣಿ ಮೂಲಕ ಇಸ್ರೋ ಅಧ್ಯಕ್ಷ ಡಾ. ವಿ. ನಾರಾಯಣನ್ ಅವರೊಂದಿಗೆ ಮಾತುಕತೆ ನಡೆಸಿದರು. ಇತ್ತೀಚಿನ ಯಶಸ್ವಿ ಉಡಾವಣೆಗೆ ಇಸ್ರೋ ಅಧ್ಯಕ್ಷರು ಹಾಗೂ ಇಡೀ ತಂಡವನ್ನು ಮುಖ್ಯಮಂತ್ರಿ ಅಭಿನಂದಿಸಿದರು.

## ನಾಳೆ ಬಸವ ಅಂತರರಾಷ್ಟ್ರೀಯ ಮಾಹಿತಿ ಕೇಂದ್ರ ಉದ್ಘಾಟನೆ, ಡಾ.ಮಧುಸೂದನ ಸಾಯಿಗೆ ದಾಸೋಹರತ್ನ ಪ್ರಶಸ್ತಿ

# ಡಾ.ಬಿ.ಡಿ.ಜತ್ತಿ ಜಯಂತ್ಯೋತ್ಸವ, ಬಸವ ಸಮಿತಿ ಸಂಸ್ಥಾಪನಾ ದಿನಾಚರಣೆ

ಬೆಂಗಳೂರು, ಸೆ.8: ಬಸವ ಸಮಿತಿಯ ಸಂಸ್ಥಾಪಕರೂ ಹಾಗೂ ಏಕೈಕ ಕನ್ನಡಿಗ ರಾಷ್ಟ್ರಪತಿಗಳೂ ಆಗಿರುವ ಡಾ. ಬಿ.ಡಿ. ಜತ್ತಿಯವರ 114ನೇ ಜಯಂತ್ಯೋತ್ಸವ ಹಾಗೂ ಬಸವ ಸಮಿತಿಯ 62ನೇ ಸಂಸ್ಥಾಪನಾ ದಿನಾಚರಣೆಯನ್ನು ಸೆಪ್ಟೆಂಬರ್ 10 ರಂದು ಬೆಳಿಗ್ಗೆ ಬೆಂಗಳೂರಿನ ಬಸವ ಸಮಿತಿಯ ಆವರಣದಲ್ಲಿರುವ ಅನುಭವ ಮಂಟಪದಲ್ಲಿ ಆಚರಿಸಲಾಗುತ್ತಿದೆ.

ಈ ಕಾರ್ಯಕ್ರಮದಲ್ಲಿ ಬಸವ ಅಂತರರಾಷ್ಟ್ರೀಯ ಮಾಹಿತಿ ಕೇಂದ್ರ ಉದ್ಘಾಟನೆ, ಗಣ್ಯರ ಸನ್ಮಾನ, ದಾಸೋಹ ರತ್ನ ಪ್ರಶಸ್ತಿ ಪ್ರದಾನ, ಪ್ರತಿಭಾ ಪುರಸ್ಕಾರ ಹಾಗೂ ವಚನ ಸಂಗೀತ ಸೇರಿದಂತೆ ವಿವಿಧ ಕಾರ್ಯಕ್ರಮಗಳು ನಡೆಯಲಿವೆ.

ಈ ವರ್ಷದ ದಾಸೋಹ ರತ್ನಪ್ರಶಸ್ತಿಯನ್ನು ನಿಸ್ವಾರ್ಥ ಸೇವೆ, ಶಿಕ್ಷಣ, ಆರೋಗ್ಯ, ಆಧ್ಯಾತ್ಮಿಕತೆ ಮತ್ತು ಮಾನವೀಯ ಮೌಲ್ಯಗಳ ಕ್ಷೇತ್ರದಲ್ಲಿ ಮಹತ್ವದ ಕೊಡುಗೆ ನೀಡುತ್ತಿರುವ ಸದ್ಗುರು ಮಧುಸೂದನ ಸಾಯಿ ಅವರಿಗೆ ಪ್ರದಾನ ಮಾಡಲಾಗುತ್ತಿದೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಬಸವ ಸಮಿತಿ ಅಧ್ಯಕ್ಷ ಡಾ. ಅರವಿಂದ ಜತ್ತಿ ವಹಿಸಲಿದ್ದಾರೆ.



2012ರಿಂದ ಸೇವೆಯನ್ನೇ ಜೀವನದ ಧ್ಯೇಯವನ್ನಾಗಿಸಿಕೊಂಡಿರುವ ಅವರು, ಜಾತಿ, ಧರ್ಮ, ಭಾಷೆ ಮತ್ತು ದೇಶದ ಭೇದಗಳನ್ನು ಮೀರಿ ಮಾನವೀಯ ಸೇವೆಯನ್ನು ವಿಸ್ತರಿಸುತ್ತಿದ್ದಾರೆ. ಶಿಕ್ಷಣ, ವೈದ್ಯಕೀಯ ಸೇವೆ, ಪೌಷ್ಟಿಕತೆ ಹಾಗೂ ಆರೋಗ್ಯ ಕ್ಷೇತ್ರಗಳಲ್ಲಿ ಅವರ ನೇತೃತ್ವದಲ್ಲಿ ಹಲವು ಸಮಾಜಮುಖಿ ಕಾರ್ಯಕ್ರಮಗಳು ನಡೆಯುತ್ತಿವೆ. ಒಂದು ಜಗತ್ತು, ಒಂದು ಕುಟುಂಬ ಎಂಬ ಆಶಯವನ್ನು ಕಾರ್ಯರೂಪಕ್ಕೆ ತರುವ ಅವರ ಸೇವೆಯನ್ನು ಬಸವ ಸಮಿತಿ ಗೌರವಿಸುತ್ತಿದೆ.

ಡಾ. ಬಿ.ಡಿ. ಜತ್ತಿ (1912–2002) ಅವರು ಸರಳತೆ, ಪ್ರಾಮಾಣಿಕತೆ ಮತ್ತು ಸಾರ್ವಜನಿಕ ಸೇವೆಯ ಪ್ರತೀಕವಾಗಿದ್ದರು. 10 ಸೆಪ್ಟೆಂಬರ್ 1912ರಂದು ಜಮಖಂಡಿ ತಾಲ್ಲೂಕಿನ ಸಾವಳಗಿಯಲ್ಲಿ ಜನಿಸಿದ ಅವರು, ಮೈಸೂರು ರಾಜ್ಯದ ಮುಖ್ಯಮಂತ್ರಿಯಾಗಿ, ಪುದುಚೇರಿ ಲೆಫ್ಟಿನೆಂಟ್ ಗವರ್ನರ್, ಒಡಿಶಾ ರಾಜ್ಯಪಾಲ, ಭಾರತದ ಉಪರಾಷ್ಟ್ರಪತಿ ಹಾಗೂ 1977ರಲ್ಲಿ ಕಾರ್ಯನಿರ್ವಹಣಾ ರಾಷ್ಟ್ರಪತಿಯಾಗಿ ಸೇವೆ ಸಲ್ಲಿಸಿದರು. 1964ರಲ್ಲಿ ಬಸವ ಸಮಿತಿಯನ್ನು ಸ್ಥಾಪಿಸಿ, ಬಸವಣ್ಣನವರ ಸಮಾನತೆ, ಕಾಯಕ, ದಾಸೋಹ ಮತ್ತು ಮಾನವೀಯತೆಯ ಸಂದೇಶವನ್ನು ವಿಶ್ವದಾದ್ಯಂತ ಪ್ರಸಾರ ಮಾಡಲು ಬುನಾದಿ ಹಾಕಿದರು.

ಕಾರ್ಯಕ್ರಮಕ್ಕೆ ಸುತ್ತೂರು ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು ಹಾಗೂ ಶಿವರುದ್ರ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸಲಿದ್ದಾರೆ.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಗೌರವಪೂರ್ವಕ ಸನ್ಮಾನ ನಡೆಯಲಿದೆ. ಲಿಂ. ಸಂಗವ್ವ ಜತ್ತಿಯವರ ಸಂಸ್ಮರಣೆಯಲ್ಲಿ ಪ್ರತಿಭಾ ಪುರಸ್ಕಾರವನ್ನು 2025–26ನೇ ಸಾಲಿನ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಅತ್ಯುನ್ನತ ಶ್ರೇಣಿಯಲ್ಲಿ ತೇರ್ಗಡೆಯಾದ ಕೆ.ಎಲ್.ಇ. ಬಸವ ಬಾಲಕಿಯರ ವಸತಿ ಶಾಲೆಯ ವಿದ್ಯಾರ್ಥಿನಿಯರಿಗೆ ಪ್ರದಾನಿಸಲಾಗುತ್ತಿದೆ.

ಇದೇ ಸಂದರ್ಭದಲ್ಲಿ, ಗ್ಲೋಬಲ್ ಹೆರಿಟೇಜ್ ಸೆಂಟರ್ ರೂಪದಲ್ಲಿ ಸಂಶೋಧನಾ ಕೇಂದ್ರ ಹಾಗೂ ವೈಶಿಷ್ಟ್ಯಪೂರ್ಣ ಗ್ರಂಥಾಲಯ ಮತ್ತು ವಸ್ತು ಸಂಗ್ರಹಾಲಯ ಆರಂಭವಾಗಲಿದ್ದು, ಕೇಂದ್ರ ಸರ್ಕಾರದ ಸಂಸ್ಕೃತಿ ಸಚಿವಾಲಯದಿಂದ ಸಹಾಯವೂ ದೊರೆತಿದೆ.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20

Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

ದೆಹಲಿ ವಾರ್ತೆ

ಸೆಪ್ಟೆಂಬರ್ 9, 2026, ಬುಧವಾರ

# ಬೆಳೆ ವಿಮೆ ಹಣ ಕಟ್ಟದ ಕಾರ್ಯದರ್ಶಿ ವಜಾಗೊಳಿಸಿ: ಸಿಎಂ ಡಿ.ಕೆ.ಶಿವಕುಮಾರ್ ಸೂಚನೆ

## ಬೆಂಗಳೂರಿನ ಯಶವಂತಪುರ ಎಪಿಎಂಸಿ ಮಾರುಕಟ್ಟೆಗೆ ದಿಢೀರ್ ಮುಖ್ಯಮಂತ್ರಿ ಭೇಟಿ; ಪರಿಶೀಲನೆ

**ಬೆಂಗಳೂರು, ಸೆ.8:** ದೇವರ ಹಿಪ್ಪರಗಿ ತಾಲ್ಲೂಕಿನ ರೈತರು ಬೆಳೆ ವಿಮೆಗೆ ಪಾವತಿಸಿದ್ದ ಹಣವನ್ನು ಡಿಸಿಸಿ ಬ್ಯಾಂಕಿಗೆ ಪಾವತಿ ಮಾಡದ ಕಾರಣ 93 ರೈತರ ವಿಮೆ ತಿರಸ್ಕಾರಗೊಂಡಿದ್ದು, ಈ ವಿಚಾರದಲ್ಲಿ ನಿರ್ಲಕ್ಷ ತೋರಿರುವ ಸ್ವಸಹಾಯ ಸಂಘದ ಕಾರ್ಯದರ್ಶಿ ವಜಾಗೊಳಿಸಲು ಸಿಎಂ ಡಿ.ಕೆ. ಶಿವಕುಮಾರ್ ಸೂಚನೆ ನೀಡಿದರು.

ಮಂಗಳವಾರ ಬೆಳ್ಳಂಬೆಳಗ್ಗೆ ಯಶವಂತಪುರ ಎಪಿಎಂಸಿ ಮಾರುಕಟ್ಟೆಗೆ ದಿಢೀರ್ ಭೇಟಿ ನೀಡಿದ ಶಿವಕುಮಾರ್ ಅವರು ಅಲ್ಲಿ ಬಂದಿದ್ದ ಈರುಳ್ಳಿ, ಬೆಳ್ಳುಳ್ಳಿ, ಆಲೂಗಡ್ಡೆ, ತೆಂಗು ಬೆಳೆಗಾರರು, ವರ್ತಕರು ಹಾಗೂ ಮಂಡಿ ಮಾಲೀಕರ ಜೊತೆ ಮಾತುಕತೆ ನಡೆಸಿ, ಅವರ ಸಮಸ್ಯೆ ಆಲಿಸಿದರು.

ದೇವರ ಹಿಪ್ಪರಗಿಯ ರೈತರೊಬ್ಬರು ಮುಖ್ಯಮಂತ್ರಿಯವರನ್ನು ಭೇಟಿ ಮಾಡಿ ನಾವು ಬೆಳೆವಿಮೆಗೆ ಸ್ವಸಹಾಯ ಸೊಸೈಟಿಗೆ ಹಣ ಕಟ್ಟಿದ್ದು, ಅವರು ಡಿಸಿಸಿ ಬ್ಯಾಂಕಿಗೆ ಹಣ ಪಾವತಿ ಮಾಡದ ಕಾರಣ ನಮ್ಮ ವಿಮೆ ತಿರಸ್ಕೃತಗೊಂಡಿದೆ ಎಂದು ನಮಗೆ ಸಂದೇಶ ಬಂದಿದೆ ಎಂದು ತಮ್ಮ ಅಳಲು ತೋಡಿಕೊಂಡರು.

ರೈತರು ಹಣ ಪಾವತಿ ಮಾಡಿರುವ ಪಟ್ಟಿ ಪರಿಶೀಲಿಸಿದ ಸಿಎಂ, ಕೂಡಲೇ ನಿರ್ಲಕ್ಷ ತೋರಿರುವ ಅಧಿಕಾರಿಯನ್ನು ವಜಾಗೊಳಿಸುವಂತೆ ಸೂಚನೆ ನೀಡಿದರು.

**ಖುದ್ದಾಗಿ ತೂಕ ಪರಿಶೀಲನೆ:** ನೀವು ಈರುಳ್ಳಿ ತರಬೇಕಾದರೆ ಪೊಲೀಸರು ತಡೆದು ಹಣ ಪಡೆಯುತ್ತಾರಾ ರೈತರಿಗೆ ಸರಿಯಾದ ಸಮಯಕ್ಕೆ ಹಣ ನೀಡುತ್ತಾರೆಯೇ. ರೈತರಿಂದ ಮಾರುಕಟ್ಟೆಯವರು ಕಮೀಷನ್ ಏನಾದರೂ ಪಡೆಯುತ್ತಾರಾ ಪ್ರತಿ ಎಕರೆಗೆ ಎಷ್ಟು ಖರ್ಚು ಆಗುತ್ತದೆ. ನಿಮ್ಮ ಬೆಳೆಯ ತೂಕ ಸರಿಯಾಗಿ ಮಾಡುತ್ತಿದ್ದಾರಾ ಎಂದು ರೈತರನ್ನು ವಿಚಾರಿಸಿ, ಮಾಹಿತಿ ಪಡೆದರು. ತಾವೇ ಖುದ್ದಾಗಿ ಈರುಳ್ಳಿ ತೂಕವನ್ನು ಪರಿಶೀಲನೆ ನಡೆಸಿದರು. ಕಲಬುರ್ಗಿ, ಬೀದರ್, ವಿಜಯಪುರ ಮಾರುಕಟ್ಟೆಯಲ್ಲಿ 8ರಿಂದ 10ರೂ. ಕಮೀಷನ್ ಪಡೆಯುತ್ತಾರೆ. ಯಶವಂತಪುರ ಮಾರುಕಟ್ಟೆಯಲ್ಲಿ ರೈತರಿಂದ ಕಮೀಷನ್ ಪಡೆಯುವುದಿಲ್ಲ. ಹೀಗಾಗಿ ಇಲ್ಲಿಗೆ ತಂದು ಹಾಕುತ್ತೇವೆ ಎಂದು ರೈತರು ಮಾಹಿತಿ ನೀಡಿದರು.

**ಬೆಳೆವಿಮೆ ಸಿಕ್ಕಿಲ್ಲ ಎಂದು ಅಳಲು:** ಬೆಳೆಗೆ ವಿಮೆ ಮಾಡಿಸುವುದಿಲ್ಲವೇ ಎಂದು ಸಿಎಂ ಕೇಳಿದಾಗ, ನಾವು ಹೆಕ್ಟೇರ್ ಗೆ 6,500 ರೂ. ವಿಮೆ ಕಟ್ಟಿದ್ದರೂ ನಮಗೆ ಏನೂ ಸಿಕ್ಕಿಲ್ಲ ಎಂದು ಚಿತ್ರದುರ್ಗ ಜಿಲ್ಲೆಯ ಚಳ್ಳಕೆರೆ ತಾಲ್ಲೂಕಿನ ರೈತ ತಮ್ಮ ನೋವು ತೋಡಿಕೊಂಡರು.



### ರೈತರು, ವರ್ತಕರು, ಮಂಡಿ ಮಾಲೀಕರ ಜತೆ ಸಿಎಂ ಚರ್ಚೆ

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಇಂದು ಬೆಳ್ಳಂಬೆಳಗ್ಗೆ ನಗರದ ಯಶವಂತಪುರ ಎಪಿಎಂಸಿ ಮಾರುಕಟ್ಟೆಗೆ ದಿಢೀರ್ ಭೇಟಿ ನೀಡಿ, ರೈತರು, ವರ್ತಕರು ಹಾಗೂ ಮಂಡಿ ಮಾಲೀಕರೊಂದಿಗೆ ಚರ್ಚೆ ನಡೆಸಿದರು. ಈ ವೇಳೆ ರೈತರು ಬೆಳೆ ವಿಮೆ, ಈರುಳ್ಳಿ ಬೆಲೆ, ತೂಕದಲ್ಲಿ ವಂಚನೆ, ಕಮಿಷನ್ ಹಾಗೂ ವಿದ್ಯುತ್ ಸಂಪರ್ಕ ಸೇರಿದಂತೆ ಹಲವು ಸಮಸ್ಯೆಗಳನ್ನು ಸಿಎಂ ಗಮನಕ್ಕೆ ತಂದರು.

### ಎಪಿಎಂಸಿಗಳಲ್ಲಿ ಬಾಲಕಾರ್ಮಿಕ ಬಳಕೆ ತಕ್ಷಣದಿಂದ ನಿಲ್ಲಿಸಿ

ಯಶವಂತಪುರ ಎಪಿಎಂಸಿಯಲ್ಲಿ ಬಾಲ ಕಾರ್ಮಿಕ ಪದ್ಧತಿಯನ್ನು ತಕ್ಷಣದಿಂದಲೇ ನಿಲ್ಲಿಸುವಂತೆ ಸೂಚಿಸಲಾಗಿದೆ. ಬಾಲಕಾರ್ಮಿಕರಿಂದ ದುಡಿಸುತ್ತಿರುವವರನ್ನು ತಕ್ಷಣವೇ ಬಂಧಿಸಿ ಪ್ರಕರಣ ದಾಖಲಿಸಲು ಜಿಲ್ಲಾಧಿಕಾರಿ ಹಾಗೂ ಪೊಲೀಸರಿಗೆ ಸೂಚನೆ ನೀಡಿದ್ದೇನೆ ಎಂದು ಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು. ಯಶವಂತಪುರ ಎಪಿಎಂಸಿಗೆ ಮಂಗಳವಾರ ದಿಢೀರ್ ಭೇಟಿ ನೀಡಿ ರೈತರೊಂದಿಗೆ ಚರ್ಚಿಸಿದ ನಂತರ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದರು. ಸಣ್ಣ ಮಕ್ಕಳಿಂದ ಕೆಲಸ ಮಾಡಿಸುವುದನ್ನು ತಕ್ಷಣದಿಂದಲೇ ನಿಲ್ಲಿಸಬೇಕು. ರಾಜ್ಯದ ಇತರ ಎಪಿಎಂಸಿಗಳಿಗೆ ಸಚಿವರು ಭೇಟಿ ನೀಡಿ ಸಮಸ್ಯೆ ಹಾಗೂ ದೂರುಗಳನ್ನು ಸರಿಪಡಿಸಲು ಸೂಚಿಸಲಾಗುವುದು" ಎಂದು ಹೇಳಿದರು.

### ಸರಳತೆ ಮೆರೆದ ಮುಖ್ಯಮಂತ್ರಿ



ಬೆಂಗಳೂರಿನ ಯಶವಂತಪುರ ಎಪಿಎಂಸಿಗೆ ಭೇಟಿ ನೀಡಿದ್ದ ಸಿಎಂ ಡಿ.ಕೆ. ಶಿವಕುಮಾರ್ ಅವರು ಸಣ್ಣ ಹೋಟೆಲ್‌ನಲ್ಲಿ ಮಾರುಕಟ್ಟೆಯ ಹಮಾಲಿಗಳ ಜತೆ ತಿಂಡಿ ಸವಿದು ಸರಳತೆ ತೋರಿದ್ದು ಸಾರ್ವಜನಿಕರ ಮೆಚ್ಚುಗೆಗೆ ಪಾತ್ರವಾಗಿದೆ.



ಬೆಂಗಳೂರಿನ ಎಪಿಎಂಸಿ ಮಾರುಕಟ್ಟೆಯಲ್ಲಿ ಮಹಿಳೆಯರ ಸಮಸ್ಯೆ ಆಲಿಸಿದ ಸಿಎಂ

ರೈತರ ಮಾಹಿತಿ ಪಡೆಯುವಂತೆ ಸಿಎಂ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು. ಕಳೆದ 30 ವರ್ಷಗಳಲ್ಲಿ ಯಾವುದೇ ಸಚಿವರು ಮುಖ್ಯಮಂತ್ರಿಗಳು ಮಾರುಕಟ್ಟೆಗೆ ಬಂದು ರೈತರ ಸಮಸ್ಯೆಗಳನ್ನು ವಿಚಾರಿಸಿರಲಿಲ್ಲ. ನೀವು ಬಂದು ಪರಿಸ್ಥಿತಿ ಪರಿಶೀಲನೆ ಮಾಡುತ್ತಿರುವುದು ಬಹಳ ಸಂತೋಷ ತಂದಿದೆ ಎಂದು ರೈತರು ಸಿಎಂ ಕಾರ್ಯವೈಖರಿಯನ್ನು ಶ್ಲಾಘಿಸಿದರು.

**ಹೆಚ್ಚು ಹಣ ಪಡೆದರೆ ದೂರು ನೀಡಿ:** ಮಾರುಕಟ್ಟೆಯಲ್ಲಿನ ಮಂಡಿ ವರ್ತಕರೊಂದಿಗೆ ಮಾತುಕತೆ ನಡೆಸಿದ ಸಿಎಂ, "ನೀವು ಎಪಿಎಂಸಿಗೆ ಎಷ್ಟು ಪಾವತಿ ಮಾಡುತ್ತೀರಿ ಎಂದು ಕೇಳಿದರು. ಅದಕ್ಕೆ ವರ್ತಕರು ನೂರು ರೂ.ಗೆ 60 ಪೈಸೆ ಪಾವತಿ ಮಾಡುತ್ತೇವೆ ಎಂದರು. ಬೇರೆ ವರ್ತಕ 1 ರೂ. ಪಾವತಿ ಮಾಡುತ್ತಿರುವುದಾಗಿ ತಿಳಿಸಿದರು. ಆ ರೀತಿ ಏನಾದರೂ ಹೆಚ್ಚು ಹಣ ಪಡೆದರೆ ನನಗೆ ಹೇಳಿ ಅವರನ್ನು ನಾನು ಮಟ್ಟಹಾಕುತ್ತೇನೆ" ಎಂದು ಹೇಳಿದರು.

## ಒಳಪುಟಗಳಲ್ಲಿ

ಆಕಾಶದಲ್ಲೇ 10 ನಿಮಿಷ ಗಿರಕಿ ಹೊಡೆದ ರಾಹುಲ್ ಗಾಂಧಿ ಪ್ರಯಾಣಿಸುತ್ತಿದ್ದ ವಿಮಾನ- ಪು.4

ವಾಯುಪಡೆ ದಿನಾಚರಣೆಗೆ ಪಾಕ್‌ನ ಎಐ ವೀಡಿಯೊ ಬಿಡುಗಡೆ- ಪು.4

ಅಲ್ಪಸಂಖ್ಯಾತರ ಸಮಸ್ಯೆಗಳಿಗೆ ಸ್ಪಂದಿಸಿ: ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸೂಚನೆ-ಪು.5

## ಶಾಸಕರು , ಕುಟುಂಬ ಸದಸ್ಯರ ಆಸ್ತಿ ವಿವರ ಸಲ್ಲಿಕೆ ಕಡ್ಡಾಯ

**ಬೆಂಗಳೂರು, ಸೆ.8:** 16ನೇ ವಿಧಾನಸಭೆಗೆ ಆಯ್ಕೆಯಾಗಿರುವ ರಾಜ್ಯದ ಎಲ್ಲಾ ಶಾಸಕರು ತಮ್ಮ ಹಾಗೂ ಕುಟುಂಬ ಸದಸ್ಯರ ಆಸ್ತಿ ಮತ್ತು ದಾಯಿತ್ವಗಳ ವಿವರಗಳನ್ನು ಕರ್ನಾಟಕ ಲೋಕಾಯುಕ್ತ ಜಾಲತಾಣದ ಮೂಲಕವೇ ಡಿಜಿಟಲ್ ರೂಪದಲ್ಲಿ ಕಡ್ಡಾಯವಾಗಿ ಸಲ್ಲಿಸಬೇಕಿದೆ.

■ ಲೋಕಾ ವೆಬ್‌ಸೈಟ್‌ನಲ್ಲಿ ಮಾಹಿತಿ ದಾಖಲಿಸಲು ವಿಧಾನಸಭೆ ಸಚಿವಾಲಯ ಕಾರ್ಯದರ್ಶಿ ಪ್ರಕಟಣೆ

ಈ ಕುರಿತು ವಿಧಾನಸಭೆ ಸಚಿವಾಲಯದ ಕಾರ್ಯದರ್ಶಿ ಎಂ.ಕೆ. ವಿಶಾಲಾಕ್ಷಿ ಅಧಿಕೃತ ಪ್ರಕಟಣೆ ಹೊರಡಿಸಿದ್ದು, ಲೋಕಾಯುಕ್ತ ವೆಬ್‌ಸೈಟ್‌ನಲ್ಲಿ ಆಸ್ತಿ ವಿವರ ದಾಖಲಿಸಿ ಆ ಮಾಹಿತಿಯನ್ನು ವಿಧಾನ ಸಭೆ ಸಚಿವಾಲಯಕ್ಕೆ ಕಡ್ಡಾಯವಾಗಿ ಒದಗಿಸಬೇಕು ಎಂದು ತಿಳಿಸಿದ್ದಾರೆ. ಕರ್ನಾಟಕ ಲೋಕಾಯುಕ್ತ ಕಾಯ್ದೆಯ ನಿಯಮ 7ಕ್ಕೆ ತಿದ್ದುಪಡಿ ತಂದು ಹೊಸ ಆದೇಶ ಹೊರಡಿಸಲಾಗಿದೆ. ಇದರನ್ವಯ, 2025–26ನೇ ಆರ್ಥಿಕ ಸಾಲಿನಲ್ಲಿ ಮಾತ್ರ ಶಾಸಕರಿಗೆ ತಮ್ಮ ಆಸ್ತಿ ಮತ್ತು ದಾಯಿತ್ವಗಳ ಪಟ್ಟಿಯನ್ನು ಭೌತಿಕವಾಗಿ ಹಾಗೂ ಲೋಕಾಯುಕ್ತ ಪೋರ್ಟಲ್ ಮೂಲಕ ಆನ್‌ಲೈನ್‌ನಲ್ಲಿ ಸಲ್ಲಿಸಲು ವಿನಾಯಿತಿ ಹಾಗೂ ಅವಕಾಶ ನೀಡಲಾಗಿತ್ತು. ಆದರೆ, ಮುಂಬರುವ ಎಲ್ಲಾ ಆರ್ಥಿಕ ವರ್ಷಗಳಲ್ಲಿ ಸಂಪೂರ್ಣವಾಗಿ ಆನ್‌ಲೈನ್ ಜಾಲತಾಣದ ಮೂಲಕ ಮಾತ್ರವೇ ಈ ವಿವರಗಳನ್ನು ಸ್ವೀಕರಿಸಲಾಗುವುದು ಎಂದು ಲೋಕಾಯುಕ್ತ ನಿಬಂಧಕರು ವಿಧಾನಸಭೆ ಸಚಿವಾಲಯಕ್ಕೆ ಬರೆದಿರುವ ಅಧಿಕೃತ ಪತ್ರದಲ್ಲಿ ಸ್ಪಷ್ಟಪಡಿಸಿದ್ದಾರೆ.

**ನಿಯಮ ಹೇಳೋದೇನು?:** ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 22ರ ನಿಯಮದ ಪ್ರಕಾರ, ಪ್ರತಿ ವರ್ಷ ಮಾರ್ಚ್ 31ರ ವರೆಗಿನ ತಮ್ಮ ಚರಾಸ್ತಿ, ಸ್ಥಿರಾಸ್ತಿ ಹಾಗೂ ದಾಯಿತ್ವಗಳ ಸಂಪೂರ್ಣ ವಿವರಗಳನ್ನು ಎಲ್ಲಾ ಚುನಾಯಿತ ಜನಪ್ರತಿನಿಧಿಗಳು ಕಡ್ಡಾಯವಾಗಿ ಜೂನ್ 30ರ ಒಳಗಾಗಿ ಲೋಕಾಯುಕ್ತ ಸಂಸ್ಥೆಗೆ ಸಲ್ಲಿಸಬೇಕಿರುವುದು ಕಡ್ಡಾಯವಾಗಿದೆ. ಸರ್ಕಾರದ ಈ ಹೊಸ ಆನ್‌ಲೈನ್ ವ್ಯವಸ್ಥೆಯು ಆಡಳಿತದಲ್ಲಿ ಪಾರದರ್ಶಕತೆಯನ್ನು ಮತ್ತಷ್ಟು ಹೆಚ್ಚಿಸಲಿದೆ ಎಂದು ನಿರೀಕ್ಷಿಸಲಾಗಿದೆ.

## ಕಾವೇರಿ ವಿವಾದ: ಕರ್ನಾಟಕಕ್ಕೆ ಮತ್ತೆ ಹಿನ್ನಡೆ 6 ಸಾವಿರ ಕ್ಯೂಸೆಕ್ ನೀರು ಹರಿಸಲು ಸೂಚನೆ



**ನವದೆಹಲಿ, ಸೆ.8:** ತೀವ್ರ ಜಲ ಸಂಕಷ್ಟ ಎದುರಿಸುತ್ತಿರುವ ಕರ್ನಾಟಕಕ್ಕೆ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ಮತ್ತೆ ನೀರು ಹರಿಸುವಂತೆ ಸೂಚನೆ ನೀಡಿದೆ. ಕಾವೇರಿ ನೀರು ನಿಯಂತ್ರಣ ಸಮಿತಿ ಶಿಫಾರಸಿನ ಅನ್ವಯ ಮುಂದಿನ 15 ದಿನಗಳ ಕಾಲ ತಮಿಳುನಾಡಿನ ಪ್ರತಿದಿನ 6,000 ಕ್ಯೂಸೆಕ್ ನೀರು ಹರಿಸಲು ನಿರ್ದೇಶನ ನೀಡಿದೆ. ಈ ಆದೇಶದಿಂದಾಗಿ 15 ದಿನಗಳ ಅವಧಿಯಲ್ಲಿ ಒಟ್ಟು 7.776 ಟಿಎಂಸಿ ನೀರು ಹರಿಯಲಿದೆ.

ಕರ್ನಾಟಕವು ರಾಜ್ಯದಲ್ಲಿ ತೀವ್ರ ಜಲ ಸಂಕಷ್ಟವಿದ್ದು, ಹೆಚ್ಚಿನ ಪ್ರಮಾಣದಲ್ಲಿ ನೀರು ಬಿಡುಗಡೆ ಮಾಡಲು ಸಾಧ್ಯವಿಲ್ಲ ಎಂದು ಸಭೆಯಲ್ಲಿ ವಾದಿಸಿತು. ಜೂನ್ 1ರಿಂದ ಸೆಪ್ಟೆಂಬರ್ 7ರವರೆಗೆ ಕರ್ನಾಟಕದ ನಾಲ್ಕು ಪ್ರಮುಖ ಕಾವೇರಿ ಜಲಾಶಯಗಳಿಗೆ ಬಂದಿರುವ ಒಟ್ಟು ನೀರಿನ ಪ್ರಮಾಣ 108.313 ಟಿಎಂಸಿ ಮಾತ್ರವಾಗಿದ್ದು, 30 ವರ್ಷಗಳ ಸರಾಸರಿ 216.401 ಟಿಎಂಸಿಗೆ ಹೋಲಿಸಿದರೆ 49.95ರಷ್ಟು ಕೊರತೆ ಉಂಟಾಗಿದೆ ಎಂದು ತಿಳಿಸಿತು. ಹಿಂದಿನ CWRC/CWMA ನಿರ್ದೇಶನದಂತೆ ಬಿಳಿಗುಂಡ್ಲುವಿನಲ್ಲಿ ಒಟ್ಟು 27.864 ಟಿಎಂಸಿ ನೀರು ತಲುಪಬೇಕಾಗಿತ್ತು ಜುಲೈ 29ರಿಂದ ಸೆಪ್ಟೆಂಬರ್ 7ರವರೆಗೆ 30.752 ಟಿಎಂಸಿ ನೀರು ತಲುಪಿದೆ. ಅಂದರೆ ನಿಗದಿಗಿಂತ 2.888 ಟಿಎಂಸಿ ಹೆಚ್ಚುವರಿ ನೀರು ಹರಿದಿದೆ ಎಂದು ಕರ್ನಾಟಕ ಸಮಿತಿಯ ಗಮನಕ್ಕೆ ತಂದಿತು.

ಸೆ.7ರವರೆಗೆ ತಮಿಳುನಾಡು ಮೆಟ್ಟೂರು, ಭವಾನಿ ಮತ್ತು ಅಮರಾವತಿ ಮೂಲಗಳಿಂದ ಸುಮಾರು 86.983 ಟಿಎಂಸಿ ನೀರು ಪಡೆದಿದ್ದು, ಅದರಲ್ಲಿ 35.660 ಟಿಎಂಸಿ ಬಳಕೆ ಮಾಡಿಕೊಂಡಿದೆ. ಇದಲ್ಲದೆ ಅಂತರ್ಜಲ ಲಭ್ಯತೆಯೂ ಇದೆ ಎಂದು ಕರ್ನಾಟಕ ತಿಳಿಸಿದೆ.

ಕಾವೇರಿ ನೀರು ನ್ಯಾಯಮಂಡಳಿ ಅನುಮತಿಸಿದ ಕುರುವೈ ಬೆಳೆ ಪ್ರದೇಶ 1.85 ಲಕ್ಷ ಎಕರೆ ಎಂದು ಉಲ್ಲೇಖಿಸಿದ ಕರ್ನಾಟಕ, ತಮಿಳುನಾಡಿನಲ್ಲಿ ಈ ಬಾರಿ ಕುರುವೈ ಕೃಷಿ 8.41 ಲಕ್ಷ ಎಕರೆಗೆ ವಿಸ್ತರಿಸಿದೆ ಎಂದು ಹೇಳಿದೆ. ಇದು ಅನುಮತಿಸಲಾದ ಪ್ರದೇಶದ ಸುಮಾರು 454ರಷ್ಟಾಗಿದೆ.ಇದೇ ವೇಳೆ, ಕರ್ನಾಟಕದಲ್ಲೂ ನೀರಾವರಿಗೆ ತೀವ್ರ ಕಡಿತ ಮಾಡಲಾಗಿದೆ ಎಂದು ರಾಜ್ಯ ತಿಳಿಸಿದೆ. ಸಾಮಾನ್ಯ ಖರೀಫ್ ಋತುವಿನ ನೀರಿನ ಅವಶ್ಯಕತೆ 111.52 ಟಿಎಂಸಿ ಇದ್ದರೂ, ಸಂಕಷ್ಟ ಪರಿಸ್ಥಿತಿಗೆ ಹೊಂದಿಸಿ ಅದನ್ನು 56.37 ಟಿಎಂಸಿಗೆ ಇಳಿಸಲಾಗಿದೆ. ಆಗಸ್ಟ್‌ವರೆಗೆ ಕಾಲುವೆಗಳಿಗೆ ಕೇವಲ 17.83 ಟಿಎಂಸಿ ನೀರು ಬಿಡುಗಡೆ ಮಾಡಲಾಗಿದೆ ಎಂದು ತಿಳಿಸಿದೆ.

ಸೆ.7ರಂದು ಕರ್ನಾಟಕದ ನಾಲ್ಕು ಕಾವೇರಿ ಜಲಾಶಯಗಳಲ್ಲಿ ಒಟ್ಟು 63.218 ಟಿಎಂಸಿ ನೀರು ಮಾತ್ರ ಇತ್ತು. ಇದರಲ್ಲಿ 32 ಟಿಎಂಸಿ ಕುಡಿಯುವ ನೀರಿಗಾಗಿ, 10 ಟಿಎಂಸಿ ಪರಿಸರ ಹರಿವಿಗಾಗಿ ಮೀಸಲಿಡಬೇಕಾಗಿದ್ದು, ಆವಿಯಾಗುವಿಕೆ ಸೇರಿ ಲೆಕ್ಕ ಹಾಕಿದಾಗ ನೀರಾವರಿಗೆ ಕೇವಲ 15.218 ಟಿಎಂಸಿ ಉಳಿಯಲಿದೆ. ಇದರಿಂದ ಸುಮಾರು 23.322 ಟಿಎಂಸಿ ಕೊರತೆ ಉಂಟಾಗಲಿದೆ. ಜಲಾಶಯಗಳಿಗೆ ಒಳಹರಿವಿನ ಪ್ರಮಾಣವೂ ಕುಸಿದಿದೆ. ಆ.27ರಂದು 26,930 ಕ್ಯೂಸೆಕ್ ಇದ್ದ ಒಳಹರಿವು ಸೆ.7ರಂದು ಕೇವಲ 4,823 ಕ್ಯೂಸೆಕ್‌ಗೆ ಇಳಿದಿದೆ. ಅಂದರೆ ಶೇ. 82.09ರಷ್ಟು ಕುಸಿತವಾಗಿದೆ. ಕಾವೇರಿ ಜಲಾನಯನ ಪ್ರದೇಶದ ಸುಮಾರು 75ರಷ್ಟು ಭಾಗ ಬರಪೀಡಿತವಾಗಿದೆ ಎಂದು ಕರ್ನಾಟಕ ಸಭೆಯಲ್ಲಿ ಹೇಳಿದೆ.

ಕರ್ನಾಟಕದ ಕಾವೇರಿ ಜಲಾನಯನ ಪ್ರದೇಶವು ಮುಖ್ಯವಾಗಿ ನೈರುತ್ಯ ಮುಂಗಾರು ಅವಲಂಬಿತವಾಗಿದ್ದು, ಈ ಮುಂಗಾರು ಅಂತ್ಯದ ಹಂತದಲ್ಲಿದೆ. ಆದರೆ ತಮಿಳುನಾಡಿಗೆ ಈಶಾನ್ಯ ಮುಂಗಾರಿನಿಂದಲೂ ಹೆಚ್ಚುವರಿ ನೀರಿನ ಲಾಭ ದೊರೆಯುತ್ತದೆ. ಈ ಹಿನ್ನೆಲೆಯಲ್ಲಿ ಬಿಳಿಗುಂಡ್ಲುವಿನಲ್ಲಿ ಖಚಿತಪಡಿಸಬೇಕಾದ ನೀರಿನ ಹರಿವನ್ನು 9,000 ದಿಂದ 2,000 ಕ್ಯೂಸೆಕ್‌ಗೆ ಇಳಿಸಬೇಕು ಎಂದು ಕರ್ನಾಟಕ ತುರ್ತು ಮನವಿ ಮಾಡಿತು. ತನ್ನ ಜಲಾಶಯಗಳಿಂದ ಇನ್ನು ಹೆಚ್ಚಿನ ಪ್ರಮಾಣದಲ್ಲಿ ನೀರು ಬಿಡುಗಡೆ ಮಾಡಲು ಸಾಧ್ಯವಿಲ್ಲ ಎಂದೂ ಸ್ಪಷ್ಟಪಡಿಸಿತು.


ವಾದಗಳನ್ನು ಪರಿಗಣಿಸಿದ CWMA ಸೆ.9ರ ಬೆಳಿಗ್ಗೆ 8 ಗಂಟೆಯಿಂದ 15 ದಿನ ಬಿಳಿಗುಂಡ್ಲುವಿನಲ್ಲಿ 6,000 ಕ್ಯೂಸೆಕ್ ಹರಿವು ಖಚಿತಪಡಿಸುವಂತೆ ಕರ್ನಾಟಕಕ್ಕೆ ಸೂಚಿಸಿದೆ.

### 20,370 ಕ್ಯೂಸೆಕ್‌ಗೆ ತಮಿಳುನಾಡು ಬೇಡಿಕೆ

ಇದಕ್ಕೆ ಪ್ರತಿಯಾಗಿ ತಮಿಳುನಾಡು, ತನ್ನ ಮೆಟ್ಟೂರು ಜಲಾಶಯದಲ್ಲಿ ಸುಮಾರು 55.4 ಟಿಎಂಸಿ ನೀರಿದ್ದು, ಈಶಾನ್ಯ ಮುಂಗಾರು ಆರಂಭವಾಗುವವರೆಗೆ ಸುಮಾರು 45 ದಿನ ಸಾಂಬಾ ಬೆಳೆ ಉಳಿಸಿಕೊಳ್ಳಲು ಹೆಚ್ಚಿನ ನೀರು ಅಗತ್ಯವಿದೆ ಎಂದು ತಮಿಳುನಾಡು ತಿಳಿಸಿತು. ಸೆ.7ರವರೆಗೆ ಬಿಳಿಗುಂಡ್ಲುವಿನಲ್ಲಿ 34.325 ಟಿಎಂಸಿ ನೀರು ಮಾತ್ರ ಲಭ್ಯವಾಗಿದ್ದು, ಸಂಕಷ್ಟ ಪರಿಸ್ಥಿತಿಗೆ ಹೊಂದಿಸಿದ ತನ್ನ ಪಾಲಿನ 50.337 ಟಿಎಂಸಿಗೆ ಹೋಲಿಸಿದರೆ 16.012 ಟಿಎಂಸಿ ಬಾಕಿ ಇದೆ ಎಂದು ಹೇಳಿದೆ. ಕರ್ನಾಟಕದ ಜಲಾಶಯಗಳಲ್ಲಿ 63.218 ಟಿಎಂಸಿ ನೀರು ಇರುವುದನ್ನು ಉಲ್ಲೇಖಿಸಿದ ತಮಿಳುನಾಡು, ಕರ್ನಾಟಕವೂ ತನ್ನ ನೀರಾವರಿ ಬಳಕೆಯನ್ನು ಪ್ರಮಾಣಾನುಪಾತದಲ್ಲಿ ಕಡಿತಗೊಳಿಸಿ ಲಭ್ಯವಿರುವ ನೀರನ್ನು ಸಂಕಷ್ಟದ ಪರಿಸ್ಥಿತಿಯಲ್ಲಿ ಎರಡೂ ರಾಜ್ಯಗಳ ನಡುವೆ ಹಂಚಿಕೊಳ್ಳಬೇಕು ಎಂದು ವಾದಿಸಿತು. ಮುಂದಿನ 15 ದಿನ ಬಿಳಿಗುಂಡ್ಲುವಿನಲ್ಲಿ ಪ್ರತಿದಿನ 20,370 ಕ್ಯೂಸೆಕ್ (1.76 ಟಿಎಂಸಿ) ನೀರು ಹರಿಸಬೇಕು ಎಂದು ಬೇಡಿಕೆ ಇಟ್ಟಿತು.

## ಭಾರತಕ್ಕೆ ಪುಟಿನ್ ಭೇಟಿ: ಮೋದಿ ಜೊತೆ ದ್ವಿಪಕ್ಷೀಯ ಮಾತುಕತೆ





**ನವದೆಹಲಿ, ಸೆ.8:** ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರು ಭಾರತದಲ್ಲಿ ನಡೆಯಲಿರುವ ಮುಂಬರುವ ಬ್ರಿಕ್ಸ್ ಶೃಂಗಸಭೆಯಲ್ಲಿ ಭಾಗವಹಿಸಲಿದ್ದಾರೆ. ಈ ವೇಳೆ ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ ಎಂದು ಕ್ರೆಮ್ಲಿನ್ ವಕ್ತಾರ ಡಿಮಿಟ್ರಿ ಪೆಸ್ಕೋವ್ ತಿಳಿಸಿದ್ದಾರೆ.

ಭಾರತದ ಆತಿಥ್ಯದಲ್ಲಿ ನಡೆಯಲಿರುವ 18ನೇ ಬ್ರಿಕ್ಸ್ ಶೃಂಗಸಭೆ ಸೆಪ್ಟೆಂಬರ್ 12 ಮತ್ತು 13ರಂದು ನವದೆಹಲಿಯಲ್ಲಿ ನಡೆಯಲಿದೆ. ಜಾಗತಿಕ ಹಾಗೂ ಪ್ರಾದೇಶಿಕ ಬೆಳವಣಿಗೆಗಳು, ಆರ್ಥಿಕ ಸಹಕಾರ, ವ್ಯಾಪಾರ ಸೇರಿದಂತೆ ಹಲವು ಪ್ರಮುಖ ವಿಚಾರಗಳು ಶೃಂಗಸಭೆಯಲ್ಲಿ ಚರ್ಚೆಯಾಗುವ ನಿರೀಕ್ಷೆಯಿದೆ.

ಪುಟಿನ್ ಭಾರತ ಭೇಟಿಯ ಸಂದರ್ಭದಲ್ಲಿ ಉಭಯ ದೇಶಗಳ ನಡುವಿನ ವ್ಯಾಪಾರ ಮತ್ತು ಆರ್ಥಿಕ ಸಹಕಾರವನ್ನು ಮತ್ತಷ್ಟು ಬಲಪಡಿಸುವುದು ಮಾತುಕತೆಯ ಪ್ರಮುಖ ವಿಷಯಗಳಾಗುವ ಸಾಧ್ಯತೆಯಿದೆ ಎಂದು ಪೆಸ್ಕೋವ್ ಹೇಳಿದ್ದಾರೆ.

ಬ್ರಿಕ್ಸ್ ಶೃಂಗ ಸಭೆಯಲ್ಲಿ ಬ್ರೆಜಿಲ್, ರಷ್ಯಾ, ಭಾರತ, ಚೀನಾ ಮತ್ತು ದಕ್ಷಿಣ ಆಫ್ರಿಕಾ ಸೇರಿದಂತೆ ಸದಸ್ಯ ರಾಷ್ಟ್ರಗಳ ನಾಯಕರು ಭಾಗವಹಿಸಲಿದ್ದಾರೆ. ವಿಸ್ತರಿಸಿರುವ ಬ್ರಿಕ್ಸ್ ಗುಂಪಿನ ಹಿನ್ನೆಲೆಯಲ್ಲಿ ಜಾಗತಿಕ ವ್ಯಾಪಾರ, ಹಣಕಾಸು, ಇಂಧನ ಭದ್ರತೆ, ತಂತ್ರಜ್ಞಾನ ಹಾಗೂ ಜಾಗತಿಕ ಆಡಳಿತ ವ್ಯವಸ್ಥೆಯಲ್ಲಿ ಸುಧಾರಣೆ ಸೇರಿದಂತೆ ಹಲವು ವಿಚಾರಗಳು ಚರ್ಚೆಗೆ ಬರಲಿವೆ.

ಭಾರತ ಈ ಬಾರಿ ಬ್ರಿಕ್ಸ್ ಅಧ್ಯಕ್ಷತೆ ವಹಿಸಿಕೊಂಡಿರುವ ಹಿನ್ನೆಲೆಯಲ್ಲಿ ದೆಹಲಿಯಲ್ಲಿ ನಡೆಯಲಿರುವ ಶೃಂಗಸಭೆಗೆ ಮಹತ್ವ ದೊರೆತಿದೆ. ಜಾಗತಿಕ ದಕ್ಷಿಣ ರಾಷ್ಟ್ರಗಳ ಸಹಕಾರ ಮತ್ತು ಬಹುಪಕ್ಷೀಯ ವ್ಯವಸ್ಥೆಯನ್ನು ಬಲಪಡಿಸುವ ಕುರಿತೂ ಭಾರತ ಒತ್ತು ನೀಡುವ ನಿರೀಕ್ಷೆಯಿದೆ. ಭಾರತಕ್ಕೆ ಚೀನಾ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಕೂಡಾ ಭಾಗವಹಿಸುವ ಸಾಧ್ಯತೆಗಳಿದೆ.

## ಕರ್ನಾಟಕದೊಂದಿಗೆ ಸಾಂಸ್ಕೃತಿಕ, ಉತ್ಪಾದನೆ ಎಐ ಸಾರಿಗೆ ಕ್ಷೇತ್ರದಲ್ಲಿ ಸಹಕಾರಕ್ಕೆ ಇಟಲಿ ಆಸಕ್ತಿ

■ ಸರ್ಕಾರದ ಮುಖ್ಯ ಕಾರ್ಯದರ್ಶಿ ಜತೆ ಇಟಲಿ ರಾಯಭಾರಿ ಆಂಟೋನಿಯೋ ಬಾರ್ತೋಲಿ ಚರ್ಚೆ

**ಬೆಂಗಳೂರು, ಸೆ.8:** ಭಾರತ ಮತ್ತು ನೇಪಾಳಕ್ಕೆ ಇಟಲಿ ರಾಯಭಾರಿ ಅಂಟೋನಿಯೋ ಬಾರ್ತೋಲಿ ಹಾಗೂ ಬೆಂಗಳೂರಿನ ಇಟಲಿ ಕಾನ್ಸುಲ್ ಜನರಲ್ ಜಿಯಾಂಡೊ ಮೆನಿಕೊ ಮಿಲಾನೊ ಅವರು ಕರ್ನಾಟಕ ಸರ್ಕಾರದ ಮುಖ್ಯ ಕಾರ್ಯದರ್ಶಿ ಯವರನ್ನು ಮಂಗಳವಾರ ಭೇಟಿಯಾಗಿ, ಉಭಯ ವಲಯಗಳ ನಡುವಿನ ಸಹಕಾರ ಮತ್ತು ಬಾಂಧವ್ಯವನ್ನು ಬಲಪಡಿಸುವ ಕುರಿತು ಸಮಾಲೋಚನೆ ನಡೆಸಿದರು.

ಈ ಸಭೆಯಲ್ಲಿ ಇಟಲಿ ಸರ್ಕಾರವು ಕರ್ನಾಟಕದೊಂದಿಗೆ ಸಾಂಸ್ಕೃತಿಕ ವಿನಿಮಯ, ವಿವಿಧ ಕಲಾ ಪ್ರದರ್ಶನಗಳು ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳ ಮೂಲಕ ಇಟಲಿ ಮತ್ತು ಕರ್ನಾಟಕದ ನಡುವೆ ಸಾಂಸ್ಕೃತಿಕ ಸಹಕಾರ ಉತ್ತೇಜಿಸುವ ಪ್ರಮುಖ ಕ್ಷೇತ್ರಗಳಲ್ಲಿ ನಿಕಟವಾಗಿ ಕಾರ್ಯ ನಿರ್ವಹಿಸಲು ಆಸಕ್ತಿ ವ್ಯಕ್ತಪಡಿಸಿದೆ.

ಬೆಂಗಳೂರಿನಿಂದ ಹೊರ ಭಾಗದಲ್ಲಿ ಎಂ.ಎಸ್.ಎಂ.ಇ ವಲಯವನ್ನು ಗುರಿಯಾಗಿಸಿ ಕೊಂಡು ಯಂತ್ರೋಪಕರಣಗಳು, ಕೃಷಿ–ಆಹಾರ ಮತ್ತು 'ತ್ಯಾಜ್ಯದಿಂದ ಇಂಧನ' ತಯಾರಿಸುವ ಉತ್ಪಾದನಾ ಘಟಕಗಳನ್ನು ಸ್ಥಾಪಿಸುವುದು. ಸಮಗ್ರ ಮತ್ತು ಸಮರ್ಥ ನಗರ ಸಂಚಾರ ನಿರ್ವಹಣೆಗಾಗಿ ಎಐ ತಂತ್ರಜ್ಞಾನದಲ್ಲಿ ಪರಿಣತಿ ಹೊಂದಿರುವ ಇಟಾಲಿಯನ್ ಕಂಪನಿಗಳ ಸೇವೆ ಸಾರಿಗೆ ಕ್ಷೇತ್ರದಲ್ಲಿ ಬಳಸಿಕೊಳ್ಳುವುದು.

■ ...4ನೇ ಪುಟಕ್ಕೆ

# 2027ರಲ್ಲಿ ಪ್ರಾಯೋಗಿಕ ಸ್ವದೇಶಿ ಬುಲೆಟ್ ರೈಲು ಪರೀಕ್ಷೆ

## ಮೊದಲ ಬಾಡಿ ಫ್ರೇಮ್ ಸಿದ್ಧ; 2-4 ತಿಂಗಳ ಪರೀಕ್ಷೆ ಬಳಿಕ ಉದ್ಘಾಟನೆ: ಅಶ್ವಿನಿ ವೈಷ್ಣವ್



**ವಡೋದರ, ಸೆ.8:** ಭಾರತದಲ್ಲೇ ನಿರ್ಮಾಣ ವಾಗುತ್ತಿರುವ ದೇಶದ ಮೊದಲ ಸ್ವದೇಶಿ ಬುಲೆಟ್ ರೈಲು 2027ರ ಮೇ ಅಥವಾ ಜೂನ್‌ನಲ್ಲಿ ಹಳಿಗಿಳಿಸಿ ಪರೀಕ್ಷೆಗೆ ಒಳಪಡಿಸಲಾಗುವುದು ಎಂದು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ. ವಡೋದರದಲ್ಲಿ ನಡೆದ ನಮೋ ಫಾರ್ ವಿಕಸಿತ ಭಾರತ ಕಾರ್ಯಕ್ರಮದಲ್ಲಿ ಅವರು ಈ ಮಾಹಿತಿ ನೀಡಿದರು.

ಬುಲೆಟ್ ರೈಲಿನ ಮೊದಲ ಬಾಡಿ ಫ್ರೇಮ್ ಸಿದ್ಧಗೊಂಡಿದ್ದು, ಅದನ್ನು ಸ್ಕ್ವೀಸ್ ಟೆಸ್ಟ್‌ಗೆ ಕಳುಹಿಸಲಾಗಿದೆ. ರೈಲಿನ ದೇಹದ ಚೌಕಟ್ಟು ನಿಗದಿತ ಒತ್ತಡವನ್ನು ತಡೆದುಕೊಳ್ಳುವ ಸಾಮರ್ಥ್ಯ ಹೊಂದಿದೆಯೇ ಎಂಬುದನ್ನು ಈ ಪರೀಕ್ಷೆಯಲ್ಲಿ ಪರಿಶೀಲಿಸಲಾಗುತ್ತದೆ. ಪರೀಕ್ಷಾ ಹಂತ ಪೂರ್ಣಗೊಂಡ ಬಳಿಕ ರೈಲನ್ನು ಹಳಿ ಪರೀಕ್ಷೆಗೆ ಒಳಪಡಿಸಲಾಗುತ್ತದೆ.

ಮೇ ಅಥವಾ ಜೂನ್ 2027ರಲ್ಲಿ ಹಳಿ ಪರೀಕ್ಷೆ ಆರಂಭವಾದ ಬಳಿಕ 2ರಿಂದ 4 ತಿಂಗಳ ಕಾಲ ಪರೀಕ್ಷೆ ನಡೆಸಲಾಗುತ್ತದೆ. ಆ ಬಳಿಕ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಬುಲೆಟ್ ರೈಲು ಸೇವೆಗೆ ಚಾಲನೆ ನೀಡಲಿದ್ದಾರೆ ಎಂದು ವೈಷ್ಣವ್ ಹೇಳಿದರು.



**ವಡೋದರ–ಮುಂಬೈ ಪ್ರಯಾಣ ಕೇವಲ 1.5 ಗಂಟೆ:** ಬುಲೆಟ್ ರೈಲು ಸೇವೆ ಆರಂಭವಾದ ಬಳಿಕ ವಡೋದರದಿಂದ ಮುಂಬೈಗೆ ಪ್ರಯಾಣಿಸಲು 1 ಗಂಟೆ 30 ನಿಮಿಷ ಮಾತ್ರ ಬೇಕಾಗಲಿದೆ ಎಂದು ಸಚಿವರು ತಿಳಿಸಿದ್ದಾರೆ. ಈ ಯೋಜನೆ ಆತ್ಮನಿರ್ಭರ ಭಾರತದ ದೃಷ್ಟಿಕೋನಕ್ಕೆ ಅನುಗುಣವಾಗಿ ದೇಶದಲ್ಲೇ ಹೈಸ್ಪೀಡ್ ರೈಲು ನಿರ್ಮಾಣ ಸಾಮರ್ಥ್ಯವನ್ನು ಅಭಿವೃದ್ಧಿಪಡಿಸುವ ಮಹತ್ವದ ಹೆಜ್ಜೆಯಾಗಿದೆ ಎಂದು ಅವರು ಹೇಳಿದ್ದಾರೆ. ಮುಂಬೈ–ಅಹಮದಾಬಾದ್ ಹೈಸ್ಪೀಡ್ ರೈಲು ಕಾರಿಡಾರ್‌ನ ಕಾಮಗಾರಿಯೂ ವೇಗವಾಗಿ ಸಾಗುತ್ತಿದೆ. ಸೂರತ್–ವಾಪಿ ವಿಭಾಗದ ಕಾಮಗಾರಿ ಈ ವರ್ಷದ ಡಿಸೆಂಬರ್ ವೇಳೆಗೆ ಪೂರ್ಣಗೊಳ್ಳಲಿದೆ ಎಂದು ವೈಷ್ಣವ್ ತಿಳಿಸಿದ್ದಾರೆ. ಸೂರತ್–ಬಿಲಿಮೋರಾ ವಿಭಾಗವನ್ನು ಮುಂದಿನ ವರ್ಷ ಮೊದಲ ಕಾರ್ಯಾಚರಣಾ ವಿಭಾಗವಾಗಿ ಆರಂಭಿಸುವ ಗುರಿಯೂ ಇದೆ.

ಒಟ್ಟು 508 ಕಿ.ಮೀ. ಉದ್ದದ ಮುಂಬೈ–ಅಹಮದಾಬಾದ್ ಹೈಸ್ಪೀಡ್ ರೈಲು ಕಾರಿಡಾರ್ ಮಹಾರಾಷ್ಟ್ರ, ಗುಜರಾತ್ ಹಾಗೂ ದಾದ್ರಾ ಮತ್ತು ನಗರ ಹವೇಲಿ ಮತ್ತು ದಮನ್–ದಿಯು ಪ್ರದೇಶದ ಮೂಲಕ ಸಾಗಲಿದೆ. ಮುಂಬೈ, ಥಾಣೆ, ವಿರಾರ್, ಬೋಯಿಸರ್, ವಾಪಿ, ಬಿಲಿಮೋರಾ, ಸೂರತ್, ಭರೂಚ್, ವಡೋದರ, ಆನಂದ, ಅಹಮದಾಬಾದ್ ಮತ್ತು ಸಬರಮತಿ ಸೇರಿದಂತೆ 12 ನಿಲ್ದಾಣಗಳನ್ನು ಹೊಂದಲಿದೆ. ಯೋಜನೆಗೆ ಜಪಾನ್‌ನ ತಂತ್ರಜ್ಞಾನ ಮತ್ತು ಸಹಕಾರವೂ ಇದೆ.

### ರೈಲ್ವೆ ಆಧುನೀಕರಣಕ್ಕೂ ಒತ್ತು

ಭಾರತೀಯ ರೈಲ್ವೆಯ ಕಾರ್ಯಾಚರಣೆ, ಮೀಸಲಾತಿ ವ್ಯವಸ್ಥೆ ಹಾಗೂ ಹಳೆಯ ನಿರ್ಮಾಣ ಪದ್ಧತಿಗಳನ್ನು ಆಧುನೀಕರಿಸಲಾಗುತ್ತಿದೆ ಎಂದು ವೈಷ್ಣವ್ ಹೇಳಿದ್ದಾರೆ. ದೇಶದಲ್ಲಿ 280 ರೈಲು ನಿಲ್ದಾಣಗಳನ್ನು ಪುನರಾಭಿವೃದ್ಧಿಪಡಿಸಲಾಗಿದೆ ಹಾಗೂ 36,000 ಕಿ.ಮೀ. ಹೊಸ ಹಳಿಗಳನ್ನು ನಿರ್ಮಿಸಲಾಗಿದೆ ಎಂದು ಅವರು ಮಾಹಿತಿ ನೀಡಿದ್ದಾರೆ. ಸರಕು ಸಾಗಣೆಗಾಗಿ ವಂದೇ ಭಾರತ್ ತಂತ್ರಜ್ಞಾನ ಆಧಾರಿತ ಹೊಸ ಮಾದರಿಯ ರೈಲುಗಳ ಅಭಿವೃದ್ಧಿಯೂ ನಡೆಯುತ್ತಿದೆ ಎಂದು ತಿಳಿಸಿದ್ದಾರೆ.

# ಶೀಘ್ರದಲ್ಲೇ ಇನ್ನೂ 25 ತಾಲ್ಲೂಕು ಬರಪೀಡಿತ ಘೋಷಣೆ: ಪರಂ



■ ವೈಜ್ಞಾನಿಕ ಅಧ್ಯಯನದ ಬಳಿಕ ಕ್ರಮ: ಡಿಸಿಎಂ ಪರಮೇಶ್ವರ್

**ಬೆಂಗಳೂರು, ಸೆ.8:** ರಾಜ್ಯದಲ್ಲಿ ಬರ ಪರಿಶೀಲನೆ ಮುಕ್ತಾಯವಾಗಿಲ್ಲ. ಹಂತ ಹಂತವಾಗಿ ನಡೆಯುತ್ತಿದೆ. ಮೊದಲ ಹಂತದಲ್ಲಿ 101 ತಾಲ್ಲೂಕುಗಳನ್ನು ಈಗಾಗಲೇ ಬರಪೀಡಿತ ಪ್ರದೇಶಗಳೆಂದು ಘೋಷಣೆ ಮಾಡಲಾಗಿದ್ದು, ಎರಡನೇ ಹಂತದ ಪರಿಶೀಲನೆ ನಡೆಯುತ್ತಿದೆ. 25 ತಾಲ್ಲೂಕುಗಳು ಬರಪೀಡಿತ ಪ್ರದೇಶಗಳೆಂದು ಘೋಷಣೆಗೆ ಅರ್ಹತೆ ಪಡೆದಿದ್ದು, ಶೀಘ್ರದಲ್ಲೇ ಘೋಷಣೆ ಮಾಡಲಾಗುವುದು ಎಂದು ಉಪಮುಖ್ಯಮಂತ್ರಿ ಹಾಗೂ ಕಂದಾಯ ಸಚಿವ ಡಾ. ಜಿ. ಪರಮೇಶ್ವರ್ ಹೇಳಿದರು.

ಸದಾಶಿವನಗರದ ನಿವಾಸದ ಬಳಿ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಬರ ಪೀಡಿತ ಪ್ರದೇಶಗಳ ಘೋಷಣೆ ಪ್ರಕ್ರಿಯೆ ವಿಳಂಬವಾಗಿಲ್ಲ. ಮುಂಗಾರು ಹಾಗೂ ಹಿಂಗಾರು ಕಡಿಮೆ ಆಗುವವರೆಗೂ ಪರಿಶೀಲನೆ ಮುಂದುವರಿಯುತ್ತದೆ. ಕಳೆದ ಬಾರಿ ಸುಮಾರು 200 ತಾಲ್ಲೂಕುಗಳನ್ನು ಬರಪೀಡಿತ ಪ್ರದೇಶಗಳೆಂದು ಘೋಷಣೆ ಮಾಡಲಾಗಿತ್ತು. ಈ ಬಾರಿಯೂ 200ಕ್ಕೂ ಹೆಚ್ಚು ತಾಲ್ಲೂಕುಗಳು ಬರಪೀಡಿತ ಪ್ರದೇಶಗಳೆಂದು ಘೋಷಿಸಲ್ಪಡುವ ಪರಿಸ್ಥಿತಿ ಇದೆ. ಕರಾವಳಿ ಪ್ರದೇಶವನ್ನು ಹೊರತುಪಡಿಸಿ ಉಳಿದೆಲ್ಲೆಡೆ ಬರ ಪರಿಸ್ಥಿತಿ ಇದೆ ಎಂದರು.

ಕೆಲವು ಶಾಸಕರು ತಮ್ಮ ತಾಲ್ಲೂಕುಗಳನ್ನು ಬೇಕೆಂದೇ ಬರಪೀಡಿತ ಪ್ರದೇಶವೆಂದು ಘೋಷಣೆ ಮಾಡಿಲ್ಲ ಎಂದು ಆರೋಪಿಸಿ ಪ್ರತಿಭಟನೆ ನಡೆಸುತ್ತಿರುವ ವಿಚಾರವಾಗಿ ಪ್ರತಿಕ್ರಿಯಿಸಿದ ಪರಮೇಶ್ವರ ಅವರು, ತೀವ್ರ ಬರ ಇದ್ದರೂ ತಮ್ಮ ತಾಲ್ಲೂಕುಗಳನ್ನು ಬರಪೀಡಿತ ಪ್ರದೇಶವೆಂದು ಘೋಷಣೆ ಮಾಡಿಲ್ಲ ಎಂದು ಯಾರೂ ಆತಂಕಪಡುವ ಅಗತ್ಯವಿಲ್ಲ. ಇಡೀ ರಾಜ್ಯವೇ ಬರಗಾಲ ಎದುರಿಸುತ್ತಿದೆ. ಬರಪೀಡಿತ ಪ್ರದೇಶಗಳೆಂದು ಘೋಷಿಸುವ ವಿಚಾರದಲ್ಲಿ ರಾಜ್ಯ ಸರ್ಕಾರದ ಯಾರೊಬ್ಬರ ಪಾತ್ರವೂ ಇಲ್ಲ. ಬೇಕೆಂದೆ ಕೆಲವು ತಾಲ್ಲೂಕುಗಳನ್ನು ಕೈಬಿಟ್ಟಿದ್ದಾರೆ ಎಂಬುದು ಆಧಾರರಹಿತ ಆರೋಪವಾಗಿದೆ. ಪಕ್ಷ ನೋಡಿಕೊಂಡು ಬರ ಸಂಭವಿಸಿಲ್ಲ. ಈಗಾಗಲೇ ಘೋಷಿತ ಪಟ್ಟಿಯಲ್ಲಿ ವಿರೋಧ ಪಕ್ಷದ ಶಾಸಕರಿರುವ ತಾಲ್ಲೂಕುಗಳೂ ಇವೆಯಲ್ಲವೇ ಎಂದು ಪ್ರಶ್ನಿಸಿದರು.

**ನೈಸ್ ನಿವೇಶನ ಹಂಚಿಕೆ: ಮಾನವೀಯತೆ ದೃಷ್ಟಿಯಿಂದ ತೀರ್ಮಾನ:** ಸರ್ಕಾರವು ಸುಪ್ರೀಂ ಕೋರ್ಟ್ ಆದೇಶಕ್ಕೆ ಅನುಗುಣವಾಗಿ ಮಾನವೀಯತೆ ದೃಷ್ಟಿಯಿಂದ ನೂರಾರು ಕೋಟಿ ಬೆಲೆಬಾಳುವ ಭೂಮಿಯನ್ನು ಕೆಲವು ಲಕ್ಷಗಳಿಗೆ ಬಿಟ್ಟುಕೊಟ್ಟ ರೈತರಿಗೆ ಅನ್ಯಾಯವಾಗದಿರಲು 1453 ನಿವೇಶಗಳನ್ನು ಹಂಚಿಕೆ ಮಾಡುವ ನಿರ್ಧಾರ ತೆಗೆದುಕೊಳ್ಳಲಾಗಿದೆ. ಈ ವಿಚಾರದಲ್ಲಿ ಯಾರಿಗೂ ವೈಯಕ್ತಿಕ ಲಾಭ ಮಾಡಿಕೊಡುವ ಉದ್ದೇಶವಿಲ್ಲ ಎಂದು ಡಾ.ಜಿ. ಪರಮೇಶ್ವರ್ ಸ್ಪಷ್ಟಪಡಿಸಿದರು.

## ಕ್ಷಮೆಯಾಚಿಸಿದ ನಿರ್ವಹಣಾ ಸಂಸ್ಥೆ: ಸಿಬ್ಬಂದಿ ಮುಷ್ಕರ ಅಂತ್ಯ, ಸಾರ್ವಜನಿಕ ವೀಕ್ಷಣೆಗೆ ಐಫೆಲ್ ಟವರ್ ಮುಕ್ತ

**ಪ್ಯಾರಿಸ್, ಸೆ.8:** ಪ್ರವಾಸಿ ತಾಣವಾದ ಐಫೆಲ್ ಟವರ್‌ನ ಸಿಬ್ಬಂದಿ ನಡೆಸುತ್ತಿದ್ದ ದಿಢೀರ್ ಮುಷ್ಕರ ಕೊನೆಗೊಂಡಿದ್ದು, ಮಂಗಳವಾರದಿಂದ ಸಾರ್ವಜನಿಕ ವೀಕ್ಷಣೆಗೆ ಐಫೆಲ್ ಟವರ್ ಪುನಃ ಮುಕ್ತವಾಗಿದೆ. ಹಿಂದೂ ಧಾರ್ಮಿಕ ನಿಯೋಗವೊಂದರ ಭೇಟಿಯ ವೇಳೆ ಮಹಿಳಾ ಉದ್ಯೋಗಿಗಳಿಗೆ ತಾರತಮ್ಯ ಎಸಗಲಾಗಿದೆ ಎಂದು ಆರೋಪಿಸಿ ಸಿಬ್ಬಂದಿ ಸೋಮವಾರ ಪ್ರತಿಭಟನೆ ನಡೆಸಿದ್ದರು. ಇದೀಗ ಐಫೆಲ್ ಟವರ್ ನಿರ್ವಹಣಾ ಸಂಸ್ಥೆ ಅಧಿಕೃತವಾಗಿ ಕ್ಷಮೆಯಾಚಿಸಿದ ಬಳಿಕ ಪರಿಸ್ಥಿತಿ ತಿಳಿಯಾಗಿದೆ. ಫ್ರಾನ್ಸ್‌ನಲ್ಲಿ ಹೊಸ ದೇವಾಲಯ ಉದ್ಘಾಟನೆಗೆ ಆಗಮಿಸಿದ್ದ 'ಬಿಎಪಿಎಸ್' ಸ್ವಾಮಿನಾರಾಯಣ ಸಂಸ್ಥೆಯ 100 ಜನರ ನಿಯೋಗವು ಐಫೆಲ್ ಟವರ್‌ಗೆ ಖಾಸಗಿ ಭೇಟಿ ನೀಡಿತ್ತು. ಈ ವೇಳೆ, ನಿಯೋಗದ ಕೋರಿಕೆಯ ಮೇರೆಗೆ ಅಲ್ಲಿ ಕರ್ತವ್ಯದಲ್ಲಿದ್ದ ಮಹಿಳಾ ಸಿಬ್ಬಂದಿಗೆ ತಾವಿದ್ದ ಜಾಗದಿಂದ ದೂರವಿರಲು ಮತ್ತು "ಕಾಣಿಸದಂತೆ" ಇರುವಂತೆ ಮ್ಯಾನೇಜ್‌ಮೆಂಟ್ ಸೂಚಿಸಿತ್ತು. ಅಷ್ಟೇ ಅಲ್ಲದೆ, ಮಹಿಳೆಯರಿದ್ದ ಜಾಗಕ್ಕೆ ಪುರುಷ ಸಿಬ್ಬಂದಿಯನ್ನು ನಿಯೋಜಿಸಲಾಗಿತ್ತು ಎಂದು ಕಾರ್ಮಿಕ ಸಂಘಟನೆಗಳು ಆರೋಪಿಸಿವೆ.

## ವಾಯುಪಡೆ ದಿನಾಚರಣೆಗೆ ಪಾಕ್‌ನ ಎಐ ವೀಡಿಯೊ ಬಿಡುಗಡೆ

■ 32 ಭಾರತೀಯ ವಾಯುನೆಲೆ ಧ್ವಂಸ, ಸಂಸತ್ ಮೇಲೂ ದಾಳಿ

**ನವದೆಹಲಿ, ಸೆ.8:** ಆಪರೇಷನ್ ಸಿಂಧೂರ್ ಸಂದರ್ಭದಲ್ಲಿ ಭಾರತಕ್ಕೆ ಭಾರಿ ಹಾನಿ ಉಂಟುಮಾಡಿದ್ದೇವೆ ಎಂದು ಬಿಂಬಿಸುವ ಕೃತಕ ಬುದ್ಧಿಮತ್ತೆ ಆಧಾರಿತ ವಿಡಿಯೊವೊಂದನ್ನು ಪಾಕಿಸ್ತಾನ ವಾಯುಪಡೆ ಬಿಡುಗಡೆ ಮಾಡಿದೆ.

ಪಾಕಿಸ್ತಾನದ ವಾಯುಪಡೆ ದಿನಾಚರಣೆಯ ಅಂಗವಾಗಿ ಬಿಡುಗಡೆ ಮಾಡಿರುವ ಫಿಜಾ‌ಓನ್ ಕೆ ಪಸ್ಬಾನ್ ಎಂಬ ಶೀರ್ಷಿಕೆಯ ವಿಡಿಯೊದಲ್ಲಿ ಭಾರತದ 32 ವಾಯುನೆಲೆಗಳ ಮೇಲೆ ದಾಳಿ ನಡೆಸಿರುವುದಾಗಿ ಹಾಗೂ ಎರಡು ಎಸ್–400 ವಾಯು ರಕ್ಷಣಾ ವ್ಯವಸ್ಥೆಗಳನ್ನು ಧ್ವಂಸಗೊಳಿಸಿರುವುದಾಗಿ ಪ್ರತಿಪಾದಿಸಲಾಗಿದೆ.

ವಿಡಿಯೊದಲ್ಲಿ ಭಾರತದ ಸಂಸತ್ ಭವನ, ಗುಜರಾತ್ನ ಕಾಂಡ್ಲಾ ಬಂದರು ಹಾಗೂ ಐಎನ್‌ಎಸ್ ವಿಕ್ರಾಂತ್ ಮೇಲೆಯೂ ದಾಳಿ ನಡೆದಿರುವಂತೆ ಎಐ ಆಧಾರಿತ ದೃಶ್ಯಗಳನ್ನು ಸೃಷ್ಟಿಸಲಾಗಿದೆ. ಉಪಗ್ರಹಗಳನ್ನು ಜಾಮ್ ಮಾಡುವುದು, ಇಂಧನ ಪೂರೈಕೆಯನ್ನು ಸ್ಥಗಿತಗೊಳಿಸುವುದು ಮತ್ತು ರಾಷ್ಟ್ರೀಯ ವಿದ್ಯುತ್ ಜಾಲಕ್ಕೆ ಅಡ್ಡಿಪಡಿಸುವಂತಹ ಹಲವು ಕಾರ್ಯಾಚರಣೆಗಳನ್ನು ಪಾಕಿಸ್ತಾನ ನಡೆಸಿದಂತೆ ವಿಡಿಯೊದಲ್ಲಿ ಚಿತ್ರಿಸಲಾಗಿದೆ.

ವಿಡಿಯೊದಲ್ಲಿ ನಾಲ್ಕು ರಫೇಲ್ ಯುದ್ಧವಿಮಾನಗಳು, ಒಂದು ಸುಖೋಯ್–30ಎಂಕೆಐ, ಒಂದು ಮಿಗ್–29, ಒಂದು ಮಿರಾಜ್–2000 ಹಾಗೂ ಒಂದು ಹೆರಾನ್ ಡ್ರೋನ್ ಅನ್ನು ಹೊಡೆದುರುಳಿಸಿರುವುದಾಗಿ ಪಾಕಿಸ್ತಾನ ಹೇಳಿಕೊಂಡಿದೆ. ಅಲ್ಲದೆ, 32 IAF bases hit ಎಂಬ ಸಂದೇಶವನ್ನೂ ವಿಡಿಯೊದಲ್ಲಿ ಪ್ರಮುಖವಾಗಿ ಪ್ರದರ್ಶಿಸಲಾಗಿದೆ.

ಆದರೆ 32 ಭಾರತೀಯ ವಾಯುನೆಲೆಗಳ ಮೇಲೆ ದಾಳಿ, ರನ್‌ವೇ, ಹ್ಯಾಂಗರ್ ಮತ್ತಿತರ ಮೂಲಸೌಕರ್ಯಗಳಿಗೆ ಆಗಿರುವ ಹಾನಿಯ ಉಪಗ್ರಹ ಚಿತ್ರಗಳು ಅಥವಾ ದಾಳಿಗೆ ಮುನ್ನ ಮತ್ತು ನಂತರದ ಚಿತ್ರಗಳಂತಹ ಪುರಾವೆಗಳನ್ನು ಪಾಕಿಸ್ತಾನ ಬಿಡುಗಡೆ ಮಾಡಿಲ್ಲ. ಆಪರೇಷನ್ ಸಿಂಧೂರ್ ವೇಳೆ ಭಾರತದ ಎಸ್–400 ವ್ಯವಸ್ಥೆಗಳನ್ನು ಧ್ವಂಸಗೊಳಿಸಿದ್ದೇವೆ ಎಂಬ ಪಾಕಿಸ್ತಾನದ ಹಿಂದಿನ ಹೇಳಿಕೆಯನ್ನೇ ಹೊಸ ಎಐ ವಿಡಿಯೊದಲ್ಲೂ ಪುನರುಚ್ಚರಿಸಲಾಗಿದೆ. ಆದರೆ ಇದಕ್ಕೂ ನೈಜ ಪುರಾವೆ ನೀಡಲಾಗಿಲ್ಲ.

## ಕರ್ನಾಟಕದೊಂದಿಗೆ ಸಾಂಸ್ಕೃತಿಕ, ಉತ್ಪಾದನೆ ಎಐ ಸಾರಿಗೆ ಕ್ಷೇತ್ರದಲ್ಲಿ ಸಹಕಾರಕ್ಕೆ ಇಟಲಿ ಆಸಕ್ತಿ

■ ಮೂರನೇ ಪುಟದಿಂದ...

ಸಭೆಯ ಸಂದರ್ಭದಲ್ಲಿ ಮುಖ್ಯ ಕಾರ್ಯದರ್ಶಿಯವರು, ಇಟಲಿ ರಾಯಭಾರಿಯವರನ್ನು ಮೈಸೂರು ದಸರಾ ಮಹೋತ್ಸವಕ್ಕೆ ಗೌರವಪೂರ್ವಕವಾಗಿ ಆಹ್ವಾನಿಸಿದರು. ಜೊತೆಗೆ ಕರ್ನಾಟಕದ ಶ್ರೀಮಂತ ಸಾಂಸ್ಕೃತಿಕ ಪರಂಪರೆಯನ್ನು ಸಾರುವ 'ಮೈಸೂರು ದಸರಾ ಕಾಫಿ ಟೇಬಲ್ ಪುಸ್ತಕ'ವನ್ನು ಅವರಿಗೆ ಉಡುಗೊರೆಯಾಗಿ ನೀಡಿದರು. ಈ ಆಹ್ವಾನಕ್ಕೆ ಕೃತಜ್ಞತೆ ಸಲ್ಲಿಸಿದ ಇಟಲಿ ರಾಯಭಾರಿಯವರು, ಮುಂದಿನ ವರ್ಷದ ಮೈಸೂರು ದಸರಾ ಜಂಬೂಸವಾರಿ ಮೆರವಣಿಗೆಯಲ್ಲಿ ಇಟಲಿಯ ಸಾಂಸ್ಕೃತಿಕ ಕಲಾವಿದರ ತಂಡದೊಂದಿಗೆ ಪಾಲ್ಗೊಳ್ಳುವ ಕುರಿತು ಆಸಕ್ತಿ ವ್ಯಕ್ತಪಡಿಸಿದರು. ಇದರಿಂದ ಎರಡೂ ಪ್ರದೇಶಗಳ ಜನರ ನಡುವಿನ ಸಾಂಸ್ಕೃತಿಕ ಸಂಬಂಧ ಇನ್ನಷ್ಟು ಗಟ್ಟಿಯಾಗಲಿದೆ ಎಂದು ತಿಳಿಸಿದರು.

# 35 ಸಾವಿರ ಕೋಟಿ ರೂ. ಯೋಜನೆಗಳಿಗೆ ಪ್ರಧಾನಿ ಮೋದಿ ಚಾಲನೆ



**ವಡೋದರಾ, ಸೆ.8:** ಗುಜರಾತ್‌ನ ವಡೋದರದಲ್ಲಿ ನಡೆದ ನಮೋ ಫಾರ್ ವಿಕಸಿತ ಭಾರತ ಕಾರ್ಯಕ್ರಮದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು 35 ಸಾವಿರ ಕೋಟಿ ಮೊತ್ತದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಚಾಲನೆ ನೀಡಿದರು. ಇದೇ ವೇಳೆ ತಮ್ಮ ಸರ್ಕಾರದ ಅಭಿವೃದ್ಧಿ ಕಾರ್ಯಗಳನ್ನು ಪ್ರಶ್ನಿಸುವ ಟೀಕಾಕಾರರನ್ನು ಗುರಿಯಾಗಿಸಿಕೊಂಡು ನಾರಾಜ್ ಫೂಫಾಜಿ (ಅಸಮಾಧಾನಗೊಂಡ ಚಿಕ್ಕಪ್ಪ) ಎಂದು ವ್ಯಂಗ್ಯ ಮಾಡಿದರು.

ಕಾರ್ಯಕ್ರಮದಲ್ಲಿ ರೈಲ್ವೆ, ಸರಕು ಸಾಗಣೆ ಹಾಗೂ ಸಂಪರ್ಕ ಮೂಲಸೌಕರ್ಯಕ್ಕೆ ಸಂಬಂಧಿಸಿದ ಹಲವು ಯೋಜನೆಗಳನ್ನು ಉದ್ಘಾಟಿಸಿ, ಕೆಲವು ಯೋಜನೆಗಳಿಗೆ ಶಂಕುಸ್ಥಾಪನೆ ನೆರವೇರಿಸಲಾಯಿತು. ಇವುಗಳಲ್ಲಿ 2,800 ಕಿಲೋಮೀಟರ್ ಉದ್ದದ ಸರಕು ಸಾಗಣೆ ಹಡಗುಗಳ ಕಾರಿಡಾರ್ ಪ್ರಮುಖ ಯೋಜನೆಯಾಗಿದೆ. ಈ ಯೋಜನೆಯನ್ನು 21ನೇ ಶತಮಾನದ ಭಾರತದ ಐತಿಹಾಸಿಕ ಸಾಧನೆ ಎಂದು ಮೋದಿ ಬಣ್ಣಿಸಿದರು.

ಅಭಿವೃದ್ಧಿ ಯೋಜನೆಗಳ ಅನುಷ್ಠಾನದ ವಿಚಾರದಲ್ಲಿ ಹಿಂದಿನ ಯುಪಿಎ ಸರ್ಕಾರವನ್ನು ಪ್ರಧಾನಿ ಟೀಕಿಸಿದರು. 2014ರ ಬಳಿಕ ಭಾರತದಲ್ಲಿ 50 ಸಾವಿರ ಆಧುನಿಕ ರೈಲು ಬೋಗಿಗಳನ್ನು ನಿರ್ಮಿಸಲಾಗಿದೆ ಎಂದು ಅವರು ಹೇಳಿದರು. ಇದಕ್ಕೆ ವ್ಯತಿರಿಕ್ತವಾಗಿ, ಹಿಂದಿನ ಸರ್ಕಾರ 10 ವರ್ಷಗಳ ಅವಧಿಯಲ್ಲಿ 50 ಸಾವಿರ ಶೌಚಾಲಯಗಳನ್ನೂ ನಿರ್ಮಿಸಲು ಸಾಧ್ಯವಾಗಿರಲಿಲ್ಲ ಎಂದು ಮೋದಿ ಹೇಳಿದರು. ರೈಲ್ವೆ ಮೂಲಸೌಕರ್ಯ ವಿಸ್ತರಣೆ ಮತ್ತು ಆಧುನೀಕರಣದಲ್ಲಿ ತಮ್ಮ ಸರ್ಕಾರ ಕೈಗೊಂಡಿರುವ ಕ್ರಮಗಳನ್ನು ವಿವರಿಸುವ ಸಂದರ್ಭದಲ್ಲಿ ಅವರು ಈ ಹೋಲಿಕೆ ಮಾಡಿದರು.

**ಚಿಪ್‌ನಿಂದ ಹಡಗಿನವರೆಗೆ ತಯಾರಿಕೆ:** ಭಾರತ ಈಗ ಹೊಸ ಉತ್ಪಾದನಾ ಯುಗಕ್ಕೆ ಪ್ರವೇಶಿಸುತ್ತಿದೆ ಎಂದು ಮೋದಿ ಹೇಳಿದರು. ಚಿಪ್‌ನಿಂದ ಹಡಗಿನವರೆಗೆ ದೇಶದಲ್ಲೇ ಉತ್ಪಾದನೆ ನಡೆಯಬೇಕು ಎಂಬ ಗುರಿಯೊಂದಿಗೆ ಸರ್ಕಾರ ಕಾರ್ಯನಿರ್ವಹಿಸುತ್ತಿದೆ ಎಂದು ಅವರು ಹೇಳಿದರು. ಉತ್ಪಾದನೆಗೆ ಅಗತ್ಯವಿರುವ ಬಿಡಿಭಾಗಗಳಿಂದ ಹಿಡಿದು ಅಂತಿಮ ಉತ್ಪನ್ನಗಳವರೆಗೆ ದೇಶೀಯವಾಗಿ ತಯಾರಿಸುವ ಮೂಲಕ ಭಾರತದ ಸ್ವಾವಲಂಬನೆಯನ್ನು ಬಲಪಡಿಸುವ ಪ್ರಯತ್ನ ನಡೆಯುತ್ತಿದೆ ಎಂದು ಪ್ರಧಾನಿ ಹೇಳಿದರು. ಸರಕು ಸಾಗಣೆಗಾಗಿ ಪ್ರತ್ಯೇಕ ರೈಲು ಮಾರ್ಗಗಳ ಅಭಿವೃದ್ಧಿ ಕೈಗಾರಿಕಾ ಪ್ರದೇಶಗಳು, ಮಾರುಕಟ್ಟೆಗಳು ಹಾಗೂ ಬಂದರುಗಳ ನಡುವಿನ ಸಂಪರ್ಕವನ್ನು ಮತ್ತಷ್ಟು ಸುಧಾರಿಸುವ ನಿರೀಕ್ಷೆಯಿದೆ.

### ನಾರಾಜ್ ಫೂಫಾಜಿಗೆ ಈಗ ಕೆಲಸ ಸಿಕ್ಕಿದೆ: ವಿಪಕ್ಷಗಳಿಗೆ ವ್ಯಂಗ್ಯ

**ಡೆಡಿಕೇಟೆಡ್ ಫ್ರೈಟ್ ಕಾರಿಡಾರ್ ಯೋಜನೆಯನ್ನು 2004ರಲ್ಲಿ ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರ ಅವಧಿಯಲ್ಲಿ ರೂಪಿಸಲಾಗಿತ್ತು ಎಂದು ಮೋದಿ ಹೇಳಿದರು. ಆದರೆ 2014ರಲ್ಲಿ ಬಿಜೆಪಿ ಅಧಿಕಾರಕ್ಕೆ ಬರುವವರೆಗೆ ಯೋಜನೆಯಲ್ಲಿ ನಿರೀಕ್ಷಿತ ಪ್ರಗತಿ ಕಂಡುಬರಲಿಲ್ಲ ಎಂದು ಅವರು ಹೇಳಿದರು.ಯೋಜನೆಯ ಉಪಯುಕ್ತತೆಯನ್ನು ಪ್ರಶ್ನಿಸುವವರನ್ನು ಉಲ್ಲೇಖಿಸಿದ ಮೋದಿ, ನಾರಾಜ್ ಫೂಫಾಜಿಯೊಬ್ಬರು ಟ್ರಕ್ ಚಾಲಕರು ಏನು ಮಾಡುತ್ತಾರೆ ಎಂದು ಪ್ರಶ್ನಿಸುತ್ತಿದ್ದರು. ಆದರೆ ಇದೀಗ ಆ ಫೂಫಾಜಿಗೆ ಕೆಲಸ ಸಿಕ್ಕಿದೆ ಎಂದು ವ್ಯಂಗ್ಯವಾಡಿದರು. ಡೆಡಿಕೇಟೆಡ್ ಫ್ರೈಟ್ ಕಾರಿಡಾರ್ ಮೂಲಕ ಸ್ವಾತಂತ್ರ್ಯಾನಂತರವೂ ರೈಲು ಸಂಪರ್ಕದಿಂದ ವಂಚಿತವಾಗಿದ್ದ ಪ್ರದೇಶಗಳಿಗೆ ಸಂಪರ್ಕ ಕಲ್ಪಿಸಲಾಗುತ್ತಿದೆ ಎಂದು ಪ್ರಧಾನಿ ಹೇಳಿದರು. ದೇಶದ ವಿವಿಧ ಭಾಗಗಳ ನಡುವೆ ಸರಕು ಸಾಗಣೆಯನ್ನು ವೇಗಗೊಳಿಸುವುದರ ಜತೆಗೆ ದೇಶೀಯ ಪೂರೈಕೆ ಸರಪಳಿಯನ್ನು ಬಲಪಡಿಸುವುದು ಈ ಯೋಜನೆಯ ಉದ್ದೇಶವಾಗಿದೆ ಎಂದು ಪ್ರಧಾನಿ ವಿವರಿಸಿದರು.**

ಇದರಿಂದ ಸರಕು ಸಾಗಣೆಯ ಸಮಯವನ್ನು ಕಡಿಮೆ ಮಾಡುವುದರ ಜತೆಗೆ ದೇಶದ ಸಾಗಣೆ ವ್ಯವಸ್ಥೆಗೆ ವೇಗ ನೀಡುವ ಉದ್ದೇಶ ಸರ್ಕಾರ ಹೊಂದಿದೆ ಎಂದು ಮೋದಿ ಹೇಳಿದರು.

# ಆಕಾಶದಲ್ಲೇ 10 ನಿಮಿಷ ಗಿರಕಿ ಹೊಡೆದ ರಾಹುಲ್ ಗಾಂಧಿ ಪ್ರಯಾಣಿಸುತ್ತಿದ್ದ ವಿಮಾನ



**ಲಖನೌ, ಸೆ.8:** ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರು ಪ್ರಯಾಣಿಸುತ್ತಿದ್ದ ಏರ್ ಇಂಡಿಯಾ ವಿಮಾನವು ಮಂಗಳವಾರ ಲಖನೌನ ಚೌಧರಿ ಚರಣ್ ಸಿಂಗ್ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಪ್ರತಿಕೂಲ ಹವಾಮಾನದಿಂದಾಗಿ 10 ನಿಮಿಷ ಆಕಾಶದಲ್ಲೇ ಸುತ್ತಾಟ ನಡೆಸಿ, ಎರಡನೇ ಪ್ರಯತ್ನದಲ್ಲಿ ಸುರಕ್ಷಿತವಾಗಿ ಲ್ಯಾಂಡ್ ಆಗಿದೆ ಎಂದು ಮೂಲಗಳು ತಿಳಿಸಿವೆ.

ದೆಹಲಿಯಿಂದ ಲಖನೌಗೆ ಪ್ರಯಾಣಿಸುತ್ತಿದ್ದ AI-1717 ವಿಮಾನವು ಪ್ರತಿಕೂಲ ಹವಾಮಾನದಿಂದಾಗಿ ಮಧ್ಯಾಹ್ನ 3.45 ರ ಸುಮಾರಿಗೆ ತನ್ನ ಮೊದಲ ಲ್ಯಾಂಡಿಂಗ್ ಪ್ರಯತ್ನವನ್ನು ರದ್ದುಗೊಳಿಸಿತು. ನಂತರ ವಿಮಾನವು ಸುಮಾರು 10 ನಿಮಿಷಗಳ ಕಾಲ ಗೋ–ಅರೌಂಡ್ ಮಾಡಿದೆ. ಬಳಿಕ ಮಧ್ಯಾಹ್ನ 3.55ಕ್ಕೆ ಸುರಕ್ಷಿತವಾಗಿ ಲ್ಯಾಂಡ್ ಆಗಿದೆ.

ಗೋ–ಅರೌಂಡ್ ಎಂದರೆ ವಿಮಾನವು ಲ್ಯಾಂಡಿಂಗ್‌ಗೆ ಮುನ್ನ ಲ್ಯಾಂಡಿಂಗ್ ಪ್ರಕ್ರಿಯೆ ಸ್ಥಗಿತಗೊಳಿಸಿ ಮತ್ತೆ ಮೇಲಕ್ಕೆ ಏರಿ, ಪರಿಸ್ಥಿತಿ ಅನುಕೂಲಕರವಾದ ನಂತರ ಮತ್ತೊಮ್ಮೆ ಲ್ಯಾಂಡಿಂಗ್‌ಗೆ ಪ್ರಯತ್ನಿಸುವ ಪ್ರಕ್ರಿಯೆ. ವಿಮಾನ ಲ್ಯಾಂಡ್ ಆದ ಬಳಿಕ ಎಲ್ಲಾ ಪ್ರಯಾಣಿಕರು ಸುರಕ್ಷಿತವಾಗಿ ಹೊರ ಬಂದಿದ್ದಾರೆ. ಘಟನೆ ಕುರಿತು ಏರ್ ಇಂಡಿಯಾ ಅಧಿಕೃತ ಹೇಳಿಕೆ ಬಿಡುಗಡೆ ಮಾಡಿಲ್ಲ.




**ಸಿಎಂ ಡಿ.ಕೆ. ಶಿವಕುಮಾರ್ ಅಧ್ಯಕ್ಷತೆಯಲ್ಲಿ ಮಂಗಳವಾರ ವಿಧಾನಸೌಧದಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಪರಿಶೀಲನಾ ಸಭೆ ನಡೆಯಿತು. ಆರೋಗ್ಯ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವ ಯು.ಟಿ.ಖಾದರ್, ಬಿಡಿಎ ಅಧ್ಯಕ್ಷ ಎನ್.ಎ.ಹ್ಯಾರಿಸ್, ಕೆಎಂಡಿಸಿ ಅಧ್ಯಕ್ಷ ಬಿ.ಕೆ. ಅಲ್ತಾಫ್ ಖಾನ್, ಶಾಸಕರಾದ ರಹೀಂ ಖಾನ್, ಆಸೀಫ್ (ರಾಜು) ಸೇಠ್, ಯಾಸಿರ್ ಅಹ್ಮದ್ ಖಾನ್ ಪಠಾಣ್, ಸರ್ಕಾರದ ಕಾರ್ಯದರ್ಶಿ ಮನೋಜ್ ಜೈನ್ ಹಾಗೂ ಮತ್ತಿತರ ಅಧಿಕಾರಿಗಳು ಉಪಸ್ಥಿತರಿದ್ದರು.**

## ಭಾರತದ ನಕ್ಷೆಯಲ್ಲಿ ಪಿಓಕೆ: ಅಫ್ಘಾನ್ ಕ್ರಿಕೆಟ್ ವಿಡಿಯೋ ನೋಡಿ ಬೆಚ್ಚಿಬಿದ್ದ ಪಾಕ್

**ನವದೆಹಲಿ, ಸೆ.8:** ಪಾಕಿಸ್ತಾನ ಆಕ್ರಮಿತ ಕಾಶ್ಮೀರ (ಪಿಓಕೆ) ಮತ್ತು ಗಿಲ್ಗಿಟ್–ಬಾಲ್ಟಿಸ್ತಾನ್ ಪ್ರದೇಶಗಳು ಭಾರತದ ಅವಿಭಾಜ್ಯ ಅಂಗ. ಆದರೆ, ಪಾಕಿಸ್ತಾನ ಮಾತ್ರ ಇದರ ಬಗ್ಗೆ ಯಾವಾಗಲೂ ತಕರಾರು ತೆಗೆಯುತ್ತದೆ. ಇತ್ತೀಚೆಗೆ ಅಮೆರಿಕ ಕೂಡ ಪಾಕಿಸ್ತಾನ ಆಕ್ರಮಿತ ಕಾಶ್ಮೀರವನ್ನು ಭಾರತದ ಭಾಗವೆಂದು ಹೇಳಿದಾಗ ಅಪಸ್ವರವೆತ್ತಿತ್ತು. ಈಗ ಅಫ್ಘಾನಿಸ್ತಾನ ಕೂಡ ಪಿಓಕೆ ಮತ್ತು ಗಿಲ್ಗಿಟ್–ಬಾಲ್ಟಿಸ್ತಾನ್ ಭಾರತಕ್ಕೆ ಸೇರಿದೆ ಎಂದಿದ್ದು, ಪಾಕಿಸ್ತಾನಕ್ಕೆ ಇದೀಗ ಉರಿಯೋ ಬೆಂಕಿಗೆ ತುಪ್ಪ ಸುರಿದಂತಾಗಿದೆ.

ಭಾರತ ಮತ್ತು ಅಫ್ಘಾನಿಸ್ತಾನ ನಡುವಿನ ಮುಂಬರುವ ಟಿ20 ಕ್ರಿಕೆಟ್ ಸರಣಿಯ ಹಿನ್ನೆಲೆಯಲ್ಲಿ ಅಫ್ಘಾನಿಸ್ತಾನ ಕ್ರಿಕೆಟ್ ಮಂಡಳಿ ಬಿಡುಗಡೆ ಮಾಡಿರುವ ವಿಡಿಯೋ ಪ್ರೋಮೋ ಭಾರಿ ರಾಜತಾಂತ್ರಿಕ ಸಂಚಲನ ಮೂಡಿಸಿದೆ. ಈ ವಿಡಿಯೋದಲ್ಲಿ ಪಾಕಿಸ್ತಾನ ಆಕ್ರಮಿತ ಕಾಶ್ಮೀರ ಮತ್ತು ಗಿಲ್ಗಿಟ್–ಬಾಲ್ಟಿಸ್ತಾನ್ ಪ್ರದೇಶಗಳನ್ನು ಭಾರತದ ನಕ್ಷೆಯೊಳಗೆ ತೋರಿಸಿರುವುದು ಪಾಕಿಸ್ತಾನವನ್ನು ಕೆರಳಿಸಿದೆ. ಇದನ್ನು ಕಂಡ ತಕ್ಷಣವೇ ಪಾಕಿಸ್ತಾನ ಕ್ರಿಕೆಟ್ ಮಂಡಳಿ, ಈ ನಕ್ಷೆಯ ಪ್ರದರ್ಶನದ ವಿರುದ್ಧ ತೀವ್ರ ಆಕ್ಷೇಪ ವ್ಯಕ್ತಪಡಿಸಿ ಪಾಕಿಸ್ತಾನದ ವಿದೇಶಾಂಗ ಇಲಾಖೆಗೆ ತುರ್ತು ದೂರು ಕೊಂಡೊಯ್ದಿದೆ. ಜೊತೆಗೆ, ಈ ವಿಷಯವನ್ನು ಜಾಗತಿಕ ವೇದಿಕೆಯಲ್ಲಿ ಪ್ರಸ್ತಾಪಿಸಲು ಗಂಭೀರವಾಗಿ ಆಲೋಚಿಸುತ್ತಿದೆ ಎನ್ನಲಾಗಿದೆ. ಇನ್ನು, ಈಗಾಗಲೇ, ರಾಜತಾಂತ್ರಿಕ ಮತ್ತು ರಾಜಕೀಯ ಭಿನ್ನಾಭಿಪ್ರಾಯಗಳು ಹೆಚ್ಚಾದ ಹಿನ್ನೆಲೆಯಲ್ಲಿ, ಈಗಾಗಲೇ, ಅಫ್ಘಾನಿಸ್ತಾನ ಕ್ರಿಕೆಟ್ ಮಂಡಳಿಯು ಪಾಕಿಸ್ತಾನದ ಜೊತೆ ಇನ್ನು ಮುಂದೆ ಯಾವುದೇ ದ್ವಿಪಕ್ಷೀಯ ಕ್ರಿಕೆಟ್ ಸರಣಿಗಳನ್ನು ಆಡುವುದಿಲ್ಲ ಎಂದು ಅಧಿಕೃತವಾಗಿ ಪ್ರಕಟಿಸಿದೆ.

ಮತ್ತೊಂದೆಡೆ, ವಿಡಿಯೋ ಆರಂಭದಲ್ಲಿ ಈ ಪ್ರದೇಶಗಳನ್ನು ಭಾರತದ ನಕ್ಷೆಯಲ್ಲಿ ತೋರಿಸಲಾಗಿದ್ದರೂ, ಮುಂದಿನ ಕೆಲವು ಫ್ರೇಮ್‌ಗಳಲ್ಲಿ ಕ್ಯಾಮೆರಾ ಜೂಮ್ ಔಟ್ ಆದಾಗ ಆ ಭಾಗ ಮಸುಕಾಗಿ ಕಾಣುವಂತೆ ಎಡಿಟ್ ಮಾಡಿರುವುದು ಭಾರತೀಯ ಸಾಮಾಜಿಕ ಜಾಲತಾಣಗಳ ಬಳಕೆದಾರರಲ್ಲೂ ತೀವ್ರ ಚರ್ಚೆಗೆ ಕಾರಣವಾಗಿದೆ.

ತಜ್ಞರ ಪ್ರಕಾರ, ಇತ್ತೀಚಿನ ದಿನಗಳಲ್ಲಿ ಅಫ್ಘಾನಿಸ್ತಾನ ಮತ್ತು ಪಾಕಿಸ್ತಾನದ ನಡುವೆ ಗಡಿ ಸಂಘರ್ಷ ಹಾಗೂ ರಾಜತಾಂತ್ರಿಕ ಬಿರುಕು ಹೆಚ್ಚಾಗಿದೆ. ಈ ಹಿನ್ನೆಲೆಯಲ್ಲಿ ಅಫ್ಘಾನಿಸ್ತಾನವು ಪಾಕಿಸ್ತಾನದ ಆಕ್ಷೇಪಣೆಗಳನ್ನು ಲೆಕ್ಕಿಸದೆ ಭಾರತದೊಂದಿಗೆ ತನಗಿರುವ ನಿಕಟ ಸಂಬಂಧವನ್ನು ಜಗತ್ತಿಗೆ ತೋರಿಸಲು ಈ ನಕ್ಷೆಯನ್ನು ಬಳಸಿದೆ ಎಂದು ವಿಶ್ಲೇಷಿಸಲಾಗುತ್ತಿದೆ.

# ಬರವಿದ್ದರೂ ವಿದ್ಯುತ್‌ಗೆ ಸಮಸ್ಯೆಯಾಗದಂತೆ ಮುನ್ನೆಚ್ಚರಿಕೆ ಕ್ರಮ



■ ಇಂಧನ ಸಚಿವ ಕೆ.ಜೆ. ಜಾರ್ಜ್

**ಬೆಂಗಳೂರು, ಸೆ.8:** ರಾಜ್ಯದಲ್ಲಿ ಬರಗಾಲ ಇದ್ದರೂ ವಿದ್ಯುತ್ ಸಮಸ್ಯೆ ತಲೆದೋರದಂತೆ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಲಾಗುತ್ತಿದ್ದು, ಅಗತ್ಯ ವಿದ್ಯುತ್ ಪೂರೈಕೆಗೆ ಸರ್ಕಾರ ಬದ್ಧವಾಗಿದೆ ಎಂದು ಇಂಧನ ಮತ್ತು ಪ್ರವಾಸೋದ್ಯಮ ಸಚಿವ ಕೆ.ಜೆ.ಜಾರ್ಜ್ ಹೇಳಿದ್ದಾರೆ.

ಭಾರತ್ ನವೀಕರಿಸಬಹುದಾದ ಇಂಧನ ಶೃಂಗಸಭೆ ಮತ್ತು ಎಕ್ಸ್‌ಪೋದ ಬೆಂಗಳೂರು ರೋಡ್ ಶೋ ವೇಳೆ ಮಾತನಾಡಿದ ಅವರು, ಇದುವರೆಗೆ ವಿದ್ಯುತ್ ಸಮಸ್ಯೆ ತಲೆದೋರಿಲ್ಲ. ಮುಂದಿನ ದಿನಗಳಲ್ಲೂ ಸಮಸ್ಯೆಯಾಗದಂತೆ ನೋಡಿಕೊಳ್ಳಲು ಯೋಜನೆ ಸಿದ್ಧಪಡಿಸಲಾಗುತ್ತಿದೆ ಎಂದರು.

ರಾಜ್ಯದಲ್ಲಿ ಬರಗಾಲ ಇದ್ದರೂ ಇದುವರೆಗೆ ಕೃಷಿ ಪಂಪ್ ಸೆಟ್ ಗಳಿಗೆ ವಿದ್ಯುತ್ ಕಡಿತಗೊಳಿಸಿಲ್ಲ. ಲಾಸ್ಟ್ ಮೈಲ್ ಕನೆಕ್ಟಿವಿಟಿ ಇಲ್ಲದ ಪ್ರದೇಶಗಲ್ಲಿ ಸ್ವಲ್ಪಮಟ್ಟಿನ ಸಮಸ್ಯೆ ಕಂಡು ಬರುತ್ತದೆಯಾದರೂ ಅದು ಸ್ವಲ್ಪ ಸಮಯ ಮಾತ್ರ. ಕೂಡಲೇ ಸಮಸ್ಯೆ ಸರಿಪಡಿಸಲಾಗುತ್ತದೆ. ಈ ಹಿನ್ನೆಲೆಯಲ್ಲಿ ಲಾಸ್ಟ್ ಮೈಲಿ ಕನೆಕ್ಟಿವಿಟಿಗೆ ಒತ್ತು ನೀಡಲಾಗುತ್ತಿದೆ ಎಂದು ಹೇಳಿದರು.

ಈ ನಿಟ್ಟಿನಲ್ಲಿ ವಿದ್ಯುತ್ ಮೂಲ ಸೌಕರ್ಯಕ್ಕೆ ಆದ್ಯತೆ ನೀಡಲಾಗುತ್ತಿದ್ದು, ಪ್ರಸಕ್ತ ಆರ್ಥಿಕ ವರ್ಷದಲ್ಲಿ 12 ಸಬ್ ಸ್ಟೇಷನ್‌ಗಳನ್ನು ನಿರ್ಮಾಣ ಮಾಡಲಾಗುತ್ತಿದೆ. ಮಂದಿನ 2–3 ವರ್ಷದಲ್ಲಿ 400 ಸಬ್‌ಸ್ಟೇಷನ್‌ಗಳ ನಿರ್ಮಾಣಕ್ಕೆ ಯೋಜನೆ ಸಿದ್ಧಪಡಿಸಲಾಗುತ್ತಿದೆ. ಅದಕ್ಕೆ ತಕ್ಕಂತೆ ವಿದ್ಯುತ್ ಲೈನ್ ಗಳನ್ನು ಸ್ಥಾಪಿಸುವುದು, ಪ್ರಸ್ತುತ ಇರುವ ವಿದ್ಯುತ್ ಲೈನ್ ಗಳನ್ನು ಮೇಲ್ದರ್ಜೆಗೇರಿಸುವ ಕಾರ್ಯವನ್ನೂ ಕೈಗೆತ್ತಿಕೊಳ್ಳಲಾಗುತ್ತಿದೆ. ಈ ಎಲ್ಲಾ ಕಾರ್ಯ ಮುಗಿದರೆ ಎಲ್ಲರಿಗೂ ಸಮರ್ಪಕ ವಿದ್ಯುತ್ ಲಭ್ಯವಾಗಲಿದೆ ಎಂದರು.

### ಉತ್ತರದ ರಾಜ್ಯಗಳಿಂದ ವಿನಿಮಯ ಆಧಾರದ ಮೇಲೆ ವಿದ್ಯುತ್

**ಸಮರ್ಪಕ ವಿದ್ಯುತ್ ಪೂರೈಕೆಗಾಗಿ ಕಳೆದ ಬಾರಿ ಬೇಸಿಗೆಯಲ್ಲಿ ಉತ್ತರ ಪ್ರದೇಶ, ಪಂಜಾಬ್ ಮತ್ತು ಹರಿಯಾಣ ರಾಜ್ಯಗಳಿಂದ ವಿನಿಮಯ ಆಧಾರದ ಮೇಲೆ ವಿದ್ಯುತ್ ಪಡೆದುಕೊಳ್ಳಲಾಗಿತ್ತು. ಜೂನ್ ಬಳಿಕ ಸೆಪ್ಟೆಂಬರ್‌ವರೆಗೆ ಅದನ್ನು ಹಿಂತಿರುಗಿಸಲಾಗಿದೆ. ಮುಂದಿನ ದಿನಗಳಲ್ಲಿ ಮತ್ತೆ ವಿನಿಮಯ ಆಧಾರದ ಮೇಲೆ ಆ ರಾಜ್ಯಗಳಿಂದ ವಿದ್ಯುತ್ ಪಡೆಯಲಾಗುವುದು. ಒಂದು ವೇಳೆ ಆ ರಾಜ್ಯಗಳಿಂದ ವಿನಿಮಯ ಆಧಾರದ ಮೇಲೆ ನಿರೀಕ್ಷಿತ ವಿದ್ಯುತ್ ಬಾರದೇ ಇದ್ದರೆ ಬೇರೆ ಕಡೆಯಿಂದ ಖರೀದಿಸಿ ಪೂರೈಸಲಾಗುವುದು. ಖರೀದಿಗೆ ಎಷ್ಟೇ ವೆಚ್ಚವಾದರೂ ಭರಿಸಲು ಸರ್ಕಾರ ಸಿದ್ಧವಿದೆ ಎಂದು ಕೆ.ಜೆ. ಜಾರ್ಜ್ ತಿಳಿಸಿದರು.**

### ಪಂಪ್ಡ್ ಸ್ಟೋರೇಜ್ ಅನುಷ್ಠಾನಗೊಂಡರೆ ವಿದ್ಯುತ್ ಸಮಸ್ಯೆ ದೂರ

**ಪಂಪ್ಡ್ ಸ್ಟೋರೇಜ್ ಯೋಜನೆ ಅನುಷ್ಠಾನಗೊಂಡರೆ ವಿದ್ಯುತ್ ಸಮಸ್ಯೆ ಇರುವುದಿಲ್ಲ. ರಾಜ್ಯದಲ್ಲಿ ಪ್ರಸ್ತುತ 18,000 ಮೆಗಾವ್ಯಾಟ್‌ನಷ್ಟು ವಿದ್ಯುತ್ ಬೇಡಿಕೆ ಇದೆ. ಅದರಲ್ಲಿ ಶೇ. 70ರಷ್ಟನ್ನು ನವೀಕರಿಸಬಹುದಾದ ಇಂಧನ ಮೂಲಗಳಿಂದ ಬರುತ್ತದೆ. ಆದರೆ, ಈ ಮೂಲಗಳಿಂದ ಹಗಲು ವೇಳೆ ಮಾತ್ರ ವಿದ್ಯುತ್ ಲಭ್ಯವಾಗುತ್ತದೆ. ಹೀಗಾಗಿ ಅದನ್ನು ಸಂಗ್ರಹಿಸಿ ಬೇಡಿಕೆ ಅವಧಿಯಲ್ಲಿ ಪೂರೈಸಲು ಸರ್ಕಾರ ಪಂಪ್ಡ್ ಸ್ಟೋರೇಜ್ ಯೋಜನೆ ಜಾರಿಗೊಳಿಸಲು ಮುಂದಾಗಿದೆ. ಆದರೆ, ಕೆಲವರು ಅದಕ್ಕೆ ವಿರೋಧ ವ್ಯಕ್ತಪಡಿಸುತ್ತಿದ್ದಾರೆ ಎಂದು ಸಚಿವರು ಬೇಸರ ವ್ಯಕ್ತಪಡಿಸಿದರು. ಪಂಪ್ಡ್ ಸ್ಟೋರೇಜ್ ಯೋಜನೆಯ ಅನಿವಾರ್ಯತೆ ಕಂಡು ಇದನ್ನು ಜಾರಿಗೊಳಿಸುತ್ತಿದ್ದೇವೆ. ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ವನ್ಯಜೀವಿ ಮಂಡಳಿಯಿಂದ ಒಪ್ಪಿಗೆ ಪಡೆದು ಅದನ್ನು ಕೇಂದ್ರ ಅರಣ್ಯ ಮತ್ತು ಪರಿಸರ ಇಲಾಖೆಗೆ ಕಳುಹಿಸಿಕೊಡುತ್ತೇವೆ. ಅಲ್ಲಿ ಒಪ್ಪಿಗೆಯಾದರೆ ಮಾತ್ರ ಯೋಜನೆ ಜಾರಿಗೊಳಿಸುತ್ತೇವೆ. ಒಪ್ಪಿಗೆ ಸಿಗದಿದ್ದರೆ ಜಾರಿಗೊಳಿಸುವುದಿಲ್ಲ ಎಂದು ಕೆ.ಜೆ. ಜಾರ್ಜ್ ಸ್ಪಷ್ಟಪಡಿಸಿದರು.**

# ಕರ್ನಾಟಕದ ನೆರೆರಾಜ್ಯಗಳಲ್ಲೂ ಕೆಎಸ್‌ಓಯು ಕೇಂದ್ರ ತೆರೆಯಲು ಅವಕಾಶ ನೀಡಿ

### ಕೇಂದ್ರ ಶಿಕ್ಷಣ ಸಚಿವ ಪ್ರಲ್ಹಾದ್‌ಜೋಶಿಗೆ ಮನವಿ, ಹೊರನಾಡು ಕನ್ನಡಿಗರಿಗೆ ಬಿ.ಇಡಿ., ಉನ್ನತ ಶಿಕ್ಷಣ ಕಲಿಯಲು ಅನುಕೂಲ

**ನವದೆಹಲಿ, ಸೆ.8:** ಕರ್ನಾಟಕದ ನೆರೆಯ ರಾಜ್ಯಗಳಾದ ಮಹಾರಾಷ್ಟ್ರ, ಗೋವಾ, ಕೇರಳ, ತಮಿಳುನಾಡು, ಆಂಧ್ರಪ್ರದೇಶ ಮತ್ತು ತೆಲಂಗಣದಲ್ಲಿಯೂ ಹೊರನಾಡು ಕನ್ನಡಿಗರಿಗೆ ಬಿ.ಇಡಿ. ಹಾಗೂ ಉನ್ನತ ಶಿಕ್ಷಣಕ್ಕೆ ಅನುಕೂಲವಾಗುವಂತೆ ಕರ್ನಾಟಕ ರಾಜ್ಯ ಮುಕ್ತ ವಿವಿ (ಕೆಎಸ್‌ಓಯು) ಹಾಗೂ ಇತರ ಸರ್ಕಾರಿ ವಿವಿಗಳು ಕೇಂದ್ರಗಳನ್ನು ತೆರೆಯಲು ಅವಕಾಶ ನೀಡುವಂತೆ ಈ ಸಂಬಂಧ ಗಡಿ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಸೋಮಣ್ಣ ಬೇವಿನಮರದ ಹಾಗೂ ಕಾರ್ಯದರ್ಶಿ ಪ್ರಕಾಶ್ ಮತ್ತಿಹಳ್ಳಿ ಅವರು ಕೇಂದ್ರ ಶಿಕ್ಷಣ ಸಚಿವ ಪ್ರಲ್ಹಾದ್ ಜೋಶಿ ಅವರಿಗೆ ಮನವಿ ಸಲ್ಲಿಸಿದರು.

ಪ್ರಸ್ತುತ ಯುಜಿಸಿ ಮತ್ತು ನಿಯಂತ್ರಕ ನಿಯಮಗಳ ಪ್ರಕಾರ, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ – ಕೆಎಸ್‌ಒಯು, ಮೈಸೂರು, ಕರ್ನಾಟಕ ರಾಜ್ಯದ ಹೊರಗೆ ವಾಸಿಸುವ ವಿದ್ಯಾರ್ಥಿಗಳನ್ನು ದಾಖಲಿಸಲು ನಿರ್ಬಂಧ ಹೇರಲಾಗಿದೆ. ಇದರಿಂದಾಗಿ, ಕರ್ನಾಟಕದ ಹೊರಗೆ ವಾಸಿಸುವ ಕನ್ನಡಿಗರಿಗೆ ತಮ್ಮ ತಮ್ಮ ರಾಜ್ಯಗಳಲ್ಲಿ ಕನ್ನಡ ಮಾಧ್ಯಮ ಉನ್ನತ ಶಿಕ್ಷಣದ ಅವಕಾಶವಿಲ್ಲದಿದ್ದರೂ, ಕೆಎಸ್‌ಓಯು ಮೂಲಕ ಬಿ.ಎಡ್, ಎಂ.ಎ, ಎಂ.ಕಾಂ ಮತ್ತು ಇತರ ಪದವಿ/ಸ್ನಾತಕೋತ್ತರ ಕೋರ್ಸ್‌ಗಳನ್ನು ಕನ್ನಡ ಮಾಧ್ಯಮದಲ್ಲಿ ಅಭ್ಯಸಿಸಲು ಸಾಧ್ಯವಾಗುತ್ತಿಲ್ಲ.

ವಿಧಿಗಳು ಭಾಷಾ ಅಲ್ಪಸಂಖ್ಯಾತರಿಗೆ ತಮ್ಮ ಭಾಷೆಯನ್ನು ಸಂರಕ್ಷಿಸುವ ಹಕ್ಕನ್ನು ಸಂವಿಧಾನ ಖಾತ್ರಿಪಡಿಸುತ್ತವೆ. ಕನ್ನಡದಲ್ಲಿ ದೂರ ಶಿಕ್ಷಣವನ್ನು ನಿರಾಕರಿಸುವುದು ಈ ಹಕ್ಕಿನ ಮೇಲೆ ಪರಿಣಾಮ ಬೀರುತ್ತಿದೆ. ರಾಷ್ಟ್ರೀಯ ಶಿಕ್ಷಣ ನೀತಿ 2020 ಮಾತೃಭಾಷೆಯಲ್ಲಿ ಶಿಕ್ಷಣವನ್ನು ಉತ್ತೇಜಿಸುತ್ತದೆ. ಕರ್ನಾಟಕದ ಹೊರಗಿನ ಕನ್ನಡಿಗರಿಗೆ ಕನ್ನಡ ಮಾಧ್ಯಮದಲ್ಲಿ ಅಭ್ಯಸಿಸಲು ಅವಕಾಶ ನೀಡುವುದು ಈ ವಿವಿಗಳಿಗೆ ಅನುಮತಿ ನೀಡುವುದರಿಂದ ಸಾಧ್ಯವಾಗುತ್ತದೆ.

ಕರ್ನಾಟಕ ಸರ್ಕಾರದ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಅಯುಕ್ತರ ಅಧ್ಯಕ್ಷತೆಯಲ್ಲಿ ಆ.10ರಂದು ನಡೆದ ಸಭೆಯ ನಿರ್ಣಯದಂತೆ ಕೇಂದ್ರ ಶಿಕ್ಷಣ ಸಚಿವರನ್ನು ಭೇಟಿ ಮಾಡಿ ಮನವಿ ಸಲ್ಲಿಸಲಾಯಿತು. ಹಾಗೂ ಸಂಬಂಧಪಟ್ಟವರಿಗೆ ಈ ಸಂಬಂಧ ಸೂಕ್ತ ನಿರ್ದೇಶನ ನೀಡುವಂತೆಯೂ ಕೋರಲಾಯಿತು.



### ಗಡಿ ಪ್ರದೇಶಗಳಲ್ಲಿ ಅಪಾರ ಬೇಡಿಕೆ

ಅದವಾನಿ, ಜತ್ರ, ಅಕ್ಕಲಕೋಟ, ಕಾಸರಗೋಡು, ಜಹೀರಾಬಾದ್, ಕೃಷ್ಣ ಸೊಲ್ಲಾಪುರ, ಹೊಸೂರು ಮುಂತಾದ ಹೊರ–ರಾಜ್ಯ ಗಡಿ ಪ್ರದೇಶಗಳಲ್ಲಿ ಬಿ.ಇಡಿ. ಮತ್ತು ಇತರ ಸ್ನಾತಕೋತ್ತರ ಕೋರ್ಸ್‌ಗಳನ್ನು ಕನ್ನಡದಲ್ಲಿ ಮಾಡಲು ಬಯಸುವ, ಆದರೆ ಯಾವುದೇ ಆಯ್ಕೆ ಇಲ್ಲದ ಕನ್ನಡಿಗ ವಿದ್ಯಾರ್ಥಿಗಳು/ ಕನ್ನಡ ಮಾಧ್ಯಮ ಶಾಲಾ ಶಿಕ್ಷಕರಿಂದ ಗಣನೀಯ ಬೇಡಿಕೆ ಇದೆ. ಜತೆಗೆ ಶಿಕ್ಷಣವನ್ನು ಮನೆ ಬಾಗಿಲಿಗೆ ತಲುಪಿಸುವ ಉದ್ದೇಶದಿಂದ ಆರಂಭವಾಗಿರುವ ಕೆಎಸ್‌ಒಯು ಉದ್ದೇಶವನ್ನು ಈಡೇರಿಸಿದಂತಾಗುತ್ತದೆ ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ. ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ ಮತ್ತು ಅಕ್ಕಮಹಾದೇವಿ ವಿಶ್ವವಿದ್ಯಾಲಯ, ವಿಜಯಪುರ ಮುಂತಾದ ರಾಜ್ಯ ವಿಶ್ವವಿದ್ಯಾಲಯಗಳಿಗೆ ಮಹಾರಾಷ್ಟ್ರದ ಜತ್ತ ಮತ್ತದ ಅಕ್ಕಲಕೋಟ ತಾಲೂಕುಗಳಲ್ಲಿ ತಮ್ಮ ಉಪ ಕೇಂದ್ರಗಳನ್ನು ತೆರೆಯಲು ಮತ್ತು ಮಂಗಳೂರು ವಿಶ್ವವಿದ್ಯಾಲಯಕ್ಕೆ ಕಾಸರಗೋಡು ಜಿಲ್ಲೆಯ ಕನ್ನಡ ಮಾಧ್ಯಮ ಕಾಲೇಜುಗಳಲ್ಲಿ ತಮ್ಮ ಕೇಂದ್ರಗಳನ್ನು ತೆರೆಯಲು ಅನುಮತಿ ನೀಡಬೇಕು ಎಂದು ಕೋರಲಾಗಿದೆ.

# ಅಲ್ಪಸಂಖ್ಯಾತರ ಸಮಸ್ಯೆಗಳಿಗೆ ಸ್ಪಂದಿಸಿ: ಡಿ.ಕೆ. ಶಿವಕುಮಾರ್ ಸೂಚನೆ

**ಬೆಂಗಳೂರು, ಸೆ.8:** ಜನಪ್ರತಿನಿಧಿ ಗಳು ಹಾಗೂ ಅಧಿಕಾರಿಗಳು ತಮ್ಮ ವ್ಯಾಪ್ತಿಯಲ್ಲಿ ಅಲ್ಪಸಂಖ್ಯಾತ ಸಮುದಾಯಗಳ ಸಮಸ್ಯೆಗಳನ್ನು ಆಲಿಸಿ ಸ್ಪಂದಿಸಬೇಕು ಎಂದು ಸಿಎಂ ಡಿ. ಕೆ. ಶಿವಕುಮಾರ್ ತಿಳಿಸಿದರು.

ವಿಧಾನಸೌಧದಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಪ್ರಗತಿ ಪರಿಶೀಲನೆ ನಡೆಸಿ ಮಾತನಾಡಿದ ಅವರು, ಅಲ್ಪಸಂಖ್ಯಾತರ ಶಿಕ್ಷಣಕ್ಕೆ ಹೆಚ್ಚು ಒತ್ತು ನೀಡಬೇಕೆಂದು ಸೂಚಿಸಿದರು. ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ರೇಷ್ಮೆಕೃಷಿ ಯೋಜನೆಯಡಿ ನೀಡಲಾಗುತ್ತಿರುವ ಸಹಾಯಧನ, ಸಾಲ ಸೌಲಭ್ಯದ ಕುರಿತಂತೆ ಚರ್ಚಿಸಿದ ಮುಖ್ಯಮಂತ್ರಿಗಳು, ರೇಷ್ಮೆ ಕೃಷಿಕರೊಂದಿಗೆ ಸಮಾಲೋಚಿಸಿ ಯೋಜನೆ ಪುನಃ ರೂಪಿಸುವಂತೆ ಸೂಚಿಸಿದರು.

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ಬರುವ ಎಲ್ಲ ನಿಗಮ ಮಂಡಳಿಗಳ ಅಧ್ಯಕ್ಷರು ರಾಜ್ಯಾದ್ಯಂತ ಪ್ರವಾಸ ಮಾಡಿ, ಸಮುದಾಯಗಳ ಸಮಸ್ಯೆಗಳನ್ನು ಆಲಿಸಬೇಕು. ಆಯವ್ಯಯದಲ್ಲಿ ಘೋಷಿಸಲಾದ ಮೌಲಾನಾ ಆಜಾದ್ ಶಾಲೆಗಳನ್ನು ಕೆಪಿಎಸ್ ಮಾದರಿಯಲ್ಲಿ ಉನ್ನತೀಕರಣ, ಮಹಿಳಾ ಕಾಲೇಜು ಪ್ರಾರಂಭ ಮತ್ತಿತರ ಯೋಜನೆಗಳನ್ನು ತ್ವರಿತವಾಗಿ ಪ್ರಾರಂಭಿಸಲು" ಸೂಚಿಸಿದರು.



### ಶಿಕ್ಷಣ, ಹಾಸ್ಟೆಲ್ ವ್ಯವಸ್ಥೆ ಪರಿಶೀಲನೆಗೆ ಸಮಿತಿ

ರಾಜ್ಯಸಭಾ ಸದಸ್ಯ ಮನ್ಸೂರ್ ಖಾನ್ ಅಧ್ಯಕ್ಷತೆಯಲ್ಲಿ ಅಲ್ಪಸಂಖ್ಯಾತರ ಶಿಕ್ಷಣ ಕುರಿತಂತೆ ಸಮಿತಿ ರಚಿಸಲಾಗಿದೆ. ಅಂತೆಯೇ ಹಾಸ್ಟೆಲ್ ಗಳಲ್ಲಿ ನೀಡುವ ಭೋಜನ ವ್ಯವಸ್ಥೆಯನ್ನು ಸುಧಾರಿಸುವ ನಿಟ್ಟಿನಲ್ಲಿ ಉತ್ತರ ಕರ್ನಾಟಕ ಭಾಗದಲ್ಲಿ ಶಾಸಕ ಯಾಸಿರ್ ಪಠಾಣ್ ಅಧ್ಯಕ್ಷತೆಯ ಸಮಿತಿ ಹಾಗೂ ದಕ್ಷಿಣ ಭಾಗದಲ್ಲಿ ಶಾಸಕಿ ಬಿಲ್ಕಿಸ್ ಬಾನು ಅಧ್ಯಕ್ಷತೆಯ ಸಮಿತಿ ಪ್ರವಾಸ ಮಾಡಿ ವರದಿ ಸಲ್ಲಿಸಿದೆ. ಇದರ ಆಧಾರದಲ್ಲಿ ಕ್ರಮ ವಹಿಸಲಾಗುವುದು. ಈ ಸಂದರ್ಭದಲ್ಲಿ ಆಯ್ದ ಹಾಸ್ಟೆಲ್ ಗಳಲ್ಲಿ ವಿದ್ಯಾರ್ಥಿಗಳೇ ನಡೆಸುವ ಮೆಸ್ ಅನ್ನು ಪ್ರಾಯೋಗಿಕವಾಗಿ ಅನುಷ್ಠಾನಗೊಳಿಸಲು ತೀರ್ಮಾನಿಸಲಾಗಿದೆ ಇಲಾಖೆಯು ರೂಪಿಸಿರುವ ಉತ್ತಮ ಯೋಜನೆಗಳನ್ನು ಕಾಲಮಿತಿಯಲ್ಲಿ ಅನುಷ್ಠಾನಗೊಳಿಸುವಂತೆ ಸೂಚಿಸಿದರು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ, ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಸಚಿವ ಯು.ಟಿ. ಖಾದರ್, ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕ ವ್ಯವಹಾರಗಳ ಸಚಿವ ರಿಜ್ವಾನ್ ಅರ್ಷದ್, ಬಿಡಿಎ ಅಧ್ಯಕ್ಷ ಎನ್ ಎ ಹ್ಯಾರಿಸ್, ಮಾಜಿ ಸಚಿವ ರಹೀಂ ಖಾನ್, ವಕ್ಫ್ ಮಂಡಳಿ ಅಧ್ಯಕ್ಷ ಅಲಿ ಬಾಬಾ ಹುಸೇನಿ, ಅಲ್ಪಸಂಖ್ಯಾತರ ಆಯೋಗ ಅಧ್ಯಕ್ಷ ಯು. ನಿಸಾರ್ ಅಹ್ಮದ್, ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಅಧ್ಯಕ್ಷ ಅಲ್ತಾಫ್ ಖಾನ್, ಕ್ರಿಶ್ಚಿಯನ್ ಅಭಿವೃದ್ಧಿ ನಿಗಮದ ಅಧ್ಯಕ್ಷ ಪ್ರೊ. ಜಾಫೆಟ್, ಹಜ್ ಸಮಿತಿ ಅಧ್ಯಕ್ಷ ಟಿಪ್ಪು, ಮುಖ್ಯಮಂತ್ರಿಯವರ ಆರ್ಥಿಕ ಸಲಹೆಗಾರ ಎಲ್.ಕೆ. ಅತೀಕ್, ಆರ್ಥಿಕ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ರಿತೇಶ್ ಕುಮಾರ್ ಸಿಂಗ್, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಕಾರ್ಯದರ್ಶಿ ಮನೋಜ್ ಜೈನ್ ಸಭೆಯಲ್ಲಿ ಭಾಗವಹಿಸಿದ್ದರು.



ಆಹಾರ ಸುರಕ್ಷತಾ ಅಧಿಕಾರಿಗಳು ಬೆಂಗಳೂರಿನ ಅಮೆಜಾನ್/ಸ್ವಿಗ್ಗಿ, ಇನ್‌ಸ್ಟಾ ಮಾರ್ಟ್‌ಗಳ ಆಹಾರ ಸಂಗ್ರಹಣಾ/ಪೂರೈಕೆ ಘಟಕಗಳ ಮೇಲೆ ಮಂಗಳವಾರ ದಾಳಿ ನಡೆಸಿ ಪರೀಶೀಲನೆ ನಡೆಸಿದರು. ಕಾರ್ಯಾಚರಣೆ ವೇಳೆ ನಿಯಮಾನುಸಾರ ತಪ್ಪು/ಅಸಮರ್ಪಕ ಲೇಬಲ್ ಹೊಂದಿದ್ದ ಆಹಾರ ಪದಾರ್ಥ ಹಾಗೂ ಅವಧಿ ಮೀರಿದ ಆಹಾರ. ಪದಾರ್ಥಗಳು ಹಾಗೂ ಪರವಾನಗಿ ಇಲ್ಲದೆ ಸಂಗ್ರಹಿಸಲಾಗಿದ್ದ ಲಕ್ಷಾಂತರ ರೂ. ಮೌಲ್ಯದ ಔಷಧಗಳನ್ನು ವಶಪಡಿಸಿಕೊಂಡಿದ್ದಾರೆ.

---

**ಮೊದಲ ಹಂತದಲ್ಲಿ ಎಲೆಕ್ಟ್ರಾನಿಕ್ ಸಿಟಿ ವಿಭಾಗದ ೬೦೦ ಸಿಬ್ಬಂದಿಗೆ ಕಾರ್ಯಕ್ರಮ**

# ಬೆಂಗಳೂರು ಪೊಲೀಸರ ಆರೋಗ್ಯ ಕ್ಷೇಮಾಭಿವೃದ್ಧಿಗೆ ಪ್ರಾಜೆಕ್ಟ್ ಖುಷಿ

**ಬೆಂಗಳೂರು, ಸೆ.8:** ಬೆಂಗಳೂರು ನಗರ ಪೊಲೀಸರ ದೀರ್ಘಕಾಲೀನ ಆರೋಗ್ಯ ಮತ್ತು ಕ್ಷೇಮಾಭಿವೃದ್ಧಿ ಬೆಂಬಲಿಸುವ ಉದ್ದೇಶದಿಂದ ಪ್ರಾಜೆಕ್ಟ್ ಖುಷಿ ಎಂಬ ವ್ಯವಸ್ಥಿತ ಆರೋಗ್ಯ ಮತ್ತು ಕ್ಷೇಮಾಭಿವೃದ್ಧಿ ಕಾರ್ಯಕ್ರಮ ಆರಂಭಿಸಲಾಗಿದೆ ಎಂದು ಗೃಹ, ಮಾಹಿತಿ ಹಾಗೂ ಜೈವಿಕ ತಂತ್ರಜ್ಞಾನ ಮತ್ತು ಇ–ಆಡಳಿತ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಈ ಕಾರ್ಯಕ್ರಮದ ಮೊದಲ ಹಂತವನ್ನು ಬೆಂಗಳೂರು ನಗರದ ಎಲೆಕ್ಟ್ರಾನಿಕ್ ಸಿಟಿ ಪೊಲೀಸ್ ವಿಭಾಗದಲ್ಲಿ ಅನುಷ್ಠಾನಗೊಳಿಸಲಾಗುತ್ತಿದ್ದು, 600 ಪೊಲೀಸ್ ಸಿಬ್ಬಂದಿಯನ್ನು ಇದರ ವ್ಯಾಪ್ತಿಗೆ ತರಲಾಗುವುದು ಎಂದು ತಿಳಿಸಿದ್ದಾರೆ.

ಪ್ರತಿ ಬ್ಯಾಚ್‌ಗೆ ಮೂರು ತಿಂಗಳ ಅವಧಿಯ ಕಾರ್ಯಕ್ರಮ ನಡೆಯಲಿದ್ದು, ಇದರಲ್ಲಿ ಆರೋಗ್ಯ ತಪಾಸಣೆ, ತಜ್ಞರಿಂದ ಮಾರ್ಗದರ್ಶನದ ಅವಧಿಗಳು ಹಾಗೂ ಡಿಜಿಟಲ್ ತೊಡಗಿಸಿಕೊಳ್ಳುವಿಕೆ ಸೇರಿದಂತೆ ವಿವಿಧ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತದೆ.

ಪೊಲೀಸ್ ಸಿಬ್ಬಂದಿಯ ಮುಂಜಾಗ್ರತಾ ಆರೋಗ್ಯ ಆರೈಕೆ, ಪೌಷ್ಟಿಕಾಂಶ, ದೈಹಿಕ ಚಟುವಟಿಕೆ, ಉತ್ತಮ ನಿದ್ರೆ ಹಾಗೂ ಒತ್ತಡ ನಿರ್ವಹಣೆ ಸೇರಿದಂತೆ ದೀರ್ಘಕಾಲೀನ ಆರೋಗ್ಯ ಮತ್ತು ಕ್ಷೇಮಾಭಿವೃದ್ಧಿಗೆ ಅಗತ್ಯವಾದ ಜೀವನಶೈಲಿಯ ವಿವಿಧ ಅಂಶಗಳ ಕುರಿತು ಕಾರ್ಯಕ್ರಮದಲ್ಲಿ ಗಮನ ಹರಿಸಲಾಗುತ್ತದೆ ಎಂದು ಸಚಿವರು ಮಾಹಿತಿ ನೀಡಿದ್ದಾರೆ.

ಪ್ರಾಜೆಕ್ಟ್ ಖುಷಿಯ ಭಾಗವಾಗಿ ಈ ಹಿಂದೆ ನಡೆದ ಪ್ರಾಯೋಗಿಕ ಕಾರ್ಯಕ್ರಮವು ಉತ್ತೇಜನಕಾರಿ ಫಲಿತಾಂಶಗಳನ್ನು ನೀಡಿದೆ.

ಭಾಗವಹಿಸಿದವರಲ್ಲಿ 61%ರಷ್ಟು ಮಂದಿಯಲ್ಲಿ ರಕ್ತದಲ್ಲಿನ ಸಕ್ಕರೆ ಪ್ರಮಾಣದಲ್ಲಿ ಇಳಿಕೆ ಕಂಡುಬಂದಿದ್ದು, 70%ರಷ್ಟು ಮಂದಿ ವಿಟಮಿನ್ ಬಿ12 ಕೊರತೆಯನ್ನು ಸರಿಪಡಿಸಿಕೊಂಡಿದ್ದಾರೆ.



ಅದೇ ರೀತಿ 59%ರಷ್ಟು ಮಂದಿ ತಮ್ಮ ದೇಹದ ತೂಕವನ್ನು ಕಡಿಮೆ ಮಾಡಿಕೊಂಡಿದ್ದಾರೆ. ಈ ಫಲಿತಾಂಶಗಳು ಪೊಲೀಸ್ ಸಿಬ್ಬಂದಿಯ ಆರೋಗ್ಯದ ಬಗ್ಗೆ ನಿರಂತರ ಹಾಗೂ ವೈಜ್ಞಾನಿಕವಾಗಿ ರೂಪಿಸಿದ ಕಾಳಜಿ ಕಾರ್ಯಕ್ರಮಗಳು ಉತ್ತಮ ಪರಿಣಾಮ ಬೀರಬಲ್ಲವು ಎಂಬುದನ್ನು ತೋರಿಸಿವೆ ಎಂದು ಸಚಿವರು ತಿಳಿಸಿದ್ದಾರೆ.

ಈ ಮಹತ್ವದ ಉಪಕ್ರಮದಲ್ಲಿ ಬೆಂಗಳೂರು ನಗರ ಪೊಲೀಸರೊಂದಿಗೆ ಸಹಭಾಗಿತ್ವ ಹೊಂದಿರುವ ಹ್ಯಾಪಿಯೆಸ್ಟ್ ಹೆಲ್ತ್, ಟೈಟಾನ್ ಕಂಪನಿ ಲಿಮಿಟೆಡ್ ಹಾಗೂ ಬೆಂಗಳೂರು ಇಂದಿರಾನಗರ ರೋಟರಿ ಟ್ರಸ್ಟ್ ಸಂಸ್ಥೆಗಳಿಗೆ ಸಚಿವ ಪ್ರಿಯಾಂಕ್ ಖರ್ಗೆ ಅವರು ಕೃತಜ್ಞತೆ ಸಲ್ಲಿಸಿದ್ದಾರೆ.

---

## ಮೊಬೈಲ್ ಪತ್ತೆ ಪ್ರಕರಣ: ವಿಚಾರಣೆಗಾಗಿ ಪ್ರಜ್ವಲ್ ರೇವಣ್ಣ 2 ದಿನ ಪೊಲೀಸ್ ಕಸ್ಟಡಿಗೆ

**ಬೆಂಗಳೂರು, ಸೆ.8:** ಪರಪ್ಪನ ಅಗ್ರಹಾರ ಜೈಲಿನಲ್ಲಿ ಜೀವಾವಧಿ ಶಿಕ್ಷೆ ಅನುಭವಿಸುತ್ತಿರುವ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಬಳಿ ಮೊಬೈಲ್ ಸಿಕ್ಕ ಪ್ರಕರಣ ತೀವ್ರ ಸ್ವರೂಪ ಪಡೆದುಕೊಂಡಿದ್ದು, ಇದೀಗ ಪ್ರಜ್ವಲ್ ರೇವಣ್ಣನನ್ನು ಎರಡು ದಿನ ಪೊಲೀಸ್ ಕಸ್ಟಡಿಗೆ ನೀಡಿ ನ್ಯಾಯಾಲಯ ಆದೇಶಿಸಿದೆ.

ಜೈಲಿನಲ್ಲಿ ಅಕ್ರಮವಾಗಿ ಮೊಬೈಲ್ ಬಳಸಿದ ಆರೋಪ ಸಂಬಂಧ ಪೊಲೀಸರು, ತನಿಖೆ ತೀವ್ರಗೊಳಿಸಿದ್ದು, ಮೊಬೈಲ್ ಹೇಗೆ ಬಂತು, ಯಾರದ್ದು ಎನ್ನುವುದನ್ನು ಪತ್ತೆ ಮಾಡಲು ಪ್ರಜ್ವಲ್ ರೇವಣ್ಣನನ್ನು ವಶಕ್ಕೆ ನೀಡುವಂತೆ ಪೊಲೀಸರು ಕೋರ್ಟ್‌ಗೆ ಮನವಿ ಮಾಡಿದ್ದರು.



ಈ ಅರ್ಜಿ ವಿಚಾರಣೆ ನಡೆಸಿದ ಬೆಂಗಳೂರಿನ 42 ಎಸಿಜೆಎಂ ಕೋರ್ಟ್, ಪ್ರಜ್ವಲ್ ರೇವಣ್ಣ ಹಾಗೂ ಪ್ರತಾಪ್ ಇಬ್ಬರನ್ನೂ ಎರಡು ದಿನ ಪೊಲೀಸ್ ಕಸ್ಟಡಿಗೆ ನೀಡಿ ಆದೇಶ ಹೊರಡಿಸಿದೆ. ಆಗಸ್ಟ್ 11ರಂದು ಕೇಂದ್ರ ಅಪರಾಧ ವಿಭಾಗ ನಡೆಸಿದ ದಾಳಿಯಲ್ಲಿ ಪ್ರಜ್ವಲ್ ರೇವಣ್ಣ ಅವರ ಬಳಿ ಮೊಬೈಲ್ ಫೋನ್ ಪತ್ತೆಯಾಗಿತ್ತು.

---

# ಗ್ರಾಮಾನುಭವ ಕಾರ್ಯಕ್ರಮ ರಾಜ್ಯಾದ್ಯಂತ ಅನುಷ್ಠಾನಗೊಳಿಸಲು ಸರ್ಕಾರದ ಆದೇಶ

**ಬೆಂಗಳೂರು.ಸೆ.8:** ನಗರ ಪ್ರದೇಶದ ವಿದ್ಯಾರ್ಥಿಗಳಿಗೆ ಗ್ರಾಮೀಣ ಭಾಗದ ಅನುಭವ ದೊರಕಿಸಿಕೊಡುವ ಗ್ರಾಮಾನುಭವ ಕಾರ್ಯಕ್ರಮ ರಾಜ್ಯಾದ್ಯಂತ ಅನುಷ್ಠಾನಗೊಳಿಸಲು ಸರ್ಕಾರ ಆದೇಶ ಹೊರಡಿಸಿದೆ.

ನೀವು ತಿನ್ನುವ ಅನ್ನವನ್ನು ಮಾಡುವ ಅಕ್ಕಿ ಎಲ್ಲಿಂದ ಬರುತ್ತದೆ, ಭತ್ತ ಗಿಡದಲ್ಲಿ ಬಿಡುತ್ತೋ, ಮರದಲ್ಲಿ ಬಿಡುತ್ತೋ...? ಎಂದು ನಗರಗಳಲ್ಲಿ ಓದುವ ವಿದ್ಯಾರ್ಥಿಗಳನ್ನು ಕೇಳಿದರೆ ಉತ್ತರ ಗೊತ್ತಿರುವುದಿಲ್ಲ ಎಂದು ನಾವು ಮಾತನಾಡಿಕೊಳ್ಳುವುದುಂಟು. ನಮ್ಮ ದೇಶ ಈಗ ಗ್ರಾಮೀಣ ಭಾರತ, ನಗರ ಭಾರತ ಎಂದು ಎರಡು ಭಾಗಗಳಾಗಿವೆ. ಇದರ ನಡುವಿನ ಕಂದಕ ದಿನದಿಂದ ದಿನಕ್ಕೆ ಆಳವಾಗುತ್ತಿದೆ, ಅಗಲವಾಗುತ್ತಿದೆ. ನಮ್ಮ ನಗರಗಳ ವಿದ್ಯಾರ್ಥಿಗಳನ್ನು ಗ್ರಾಮೀಣ ಭಾರತದ ಬೇರುಗಳಿಗೆ ಜೋಡಿಸಿ ಈ ಕಂದಕವನ್ನು ಮುಚ್ಚುವ ಉದ್ದೇಶದಿಂದ ನಮ್ಮ ಸರ್ಕಾರವು ಗ್ರಾಮಾನುಭವ ಎಂಬ ಯೋಜನೆನ್ನು ಜಾರಿಗೆ ತರುತ್ತಿದೆ. ಈ ಯೋಜನೆಯಡಿ ಜಿಲ್ಲಾ ಕೇಂದ್ರಗಳ ವ್ಯಾಪ್ತಿಯಲ್ಲಿರುವ ನಗರ ಪ್ರದೇಶದ ಸರ್ಕಾರಿ ಅನುದಾನಿತ ಮತ್ತು ಅನುದಾನ ರಹಿತ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ 8, 9 ಮತ್ತು 11 ನೇ ತರಗತಿಯ ವಿದ್ಯಾರ್ಥಿಗನ್ನು ಹಳ್ಳಿಗಳಿಗೆ ಕರೆದುಕೊಂಡು ಹೋಗಿ ಕೃಷಿ, ತೋಟಗಾರಿಕೆ, ಪಶುಸಂಗೋಪನೆ, ಕಲೆ ಮತ್ತು ಸಂಸ್ಕೃತಿ ಸೇರಿದಂತೆ ಗ್ರಾಮೀಣ ಜೀವನದ ವಿಶಿಷ್ಟ ಅನುಭವ ಒದಗಿಸಲಾಗುತ್ತದೆ.

ಒಂದು ರಾತ್ರಿ ಸೇರಿದಂತೆ ಎರಡು ದಿನಗಳ ಕಾಲ ಗ್ರಾಮದಲ್ಲಿಯೇ ಉಳಿದುಕೊಳ್ಳುವ ಮಕ್ಕಳಿಗೆ ಗ್ರಾಮೀಣದ ಜನಜೀವನದ ಬಗ್ಗೆ, ಕೃಷಿ ಚಟುವಟಿಕೆಗಳ ಬಗ್ಗೆ, ಸಾಂಸ್ಕೃತಿಕ ಜಗತ್ತಿನ ಬಗ್ಗೆ ಮಾಹಿತಿ ನೀಡಲಾಗುತ್ತದೆ. ಪ್ರತಿ ಶೈಕ್ಷಣಿಕ ಸಾಲಿನಲ್ಲಿಯೂ ಸೆಪ್ಟೆಂಬರ್‌ನಿಂದ ಡಿಸೆಂಬರ್ ಒಳಗೆ ಈ ಕಾರ್ಯಕ್ರಮವನ್ನು



ಜಾರಿಗೆ ತರಲಾಗುತ್ತದೆ. ಜನವರಿ ಅಥವಾ ಫೆಬ್ರವರಿಯಲ್ಲಿ ಈ ಭೇಟಿ ಕುರಿತು ಶಾಲಾ ಮಟ್ಟದ ಸಂವಹನ ಚಟುವಟಿಕೆಗಳನ್ನು ನಡೆಸಬೇಕೆಂದು ಸೂಚಿಸಲಾಗಿದೆ.

ಮೊದಲಿಗೆ ರಾಜ್ಯದ ಒಟ್ಟು 160 ಸರ್ಕಾರಿ ಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ಅಂದಾಜು 2.46 ಕೋಟಿ ರೂ. ವೆಚ್ಚದಲ್ಲಿ ಈ ಯೋಜನೆಯನ್ನು ಅನುಷ್ಠಾನಕ್ಕೆ ತರಲಾಗುತ್ತಿದೆ. ನಗರ ಪ್ರದೇಶದ ಎಲ್ಲಾ ಪಿಎಂಶ್ರೀ ಮತ್ತು ಕೆಪಿಎಸ್ ಶಾಲೆಗಳಲ್ಲಿಯೂ ಈ ಯೋಜನೆ ಜಾರಿಗೆ ಬರಲಿದೆ. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದ ನಮ್ಮ ಸರ್ಕಾರ ಅಧಿಕಾರಕ್ಕೆ ಬಂದು ನೂರು ದಿನಗಳಾಗುತ್ತಿರುವ ಈ ಹೊತ್ತಿನಲ್ಲಿ ಈ ಯೋಜನೆಯನ್ನು ಪ್ರಕಟಿಸಲಾಗಿದೆ.

> **ನಮ್ಮ ದೇಶ ಈಗ ಗ್ರಾಮೀಣ ಭಾರತ, ನಗರ ಭಾರತ ಎಂದು ಎರಡು ಭಾಗಗಳಾಗಿವೆ. ಇದರ ನಡುವಿನ ಕಂದಕ ದಿನದಿಂದ ದಿನಕ್ಕೆ ಆಳವಾಗುತ್ತಿದೆ, ಅಗಲವಾಗುತ್ತಿದೆ. ನಮ್ಮ ನಗರಗಳ ವಿದ್ಯಾರ್ಥಿಗಳನ್ನು ಗ್ರಾಮೀಣ ಭಾರತದ ಬೇರುಗಳಿಗೆ ಜೋಡಿಸಿ ಈ ಕಂದಕವನ್ನು ಮುಚ್ಚುವ ಉದ್ದೇಶದಿಂದ ನಮ್ಮ ಸರ್ಕಾರವು ಗ್ರಾಮಾನುಭವ ಎಂಬ ಯೋಜನೆನ್ನು ಜಾರಿಗೆ ತರುತ್ತಿದೆ.**
>
> – ಮಧು ಬಂಗಾರಪ್ಪ

---

# ಸ್ಯಾಂಕಿ ಕೆರೆಗೆ ಲೋಕಾಯುಕ್ತ ತಂಡ ಭೇಟಿ: ಮಾಲಿನ್ಯ ಕುರಿತು ಸಮಗ್ರ ವರದಿ ಸಲ್ಲಿಸಲು ತೀರ್ಮಾನ

**ಬೆಂಗಳೂರು, ಸೆ.8:** ಸೇವ್ ಸ್ಯಾಂಕಿ ಟ್ಯಾಂಕ್ ಇನಿಶಿಯೇಟಿವ್ ಕಾರ್ಯಕ್ರಮದಡಿ ವಾಯ್ಸ್ ಆಫ್ ಸದಾಶಿವನಗರ ಸಂಘಟನೆಯಿಂದ ಸ್ಯಾಂಕಿಕೆರೆ ಉಳಿಸಿ ಅಭಿಯಾನ ಕೈಗೊಂಡು ಕೆರೆ ಮಾಲೀನ್ಯ ನಿಯಂತ್ರಣಕ್ಕಾಗಿ ನಿರಂತರ ಹೋರಾಟ ಮಾಡಿದ ಹಿನ್ನೆಲೆಯಲ್ಲಿ ಸ್ವಯಂ ಪ್ರೇರಿತವಾಗಿ ದೂರು ದಾಖಲಿಸಿಕೊಂಡಿದ್ದ ಲೋಕಾಯುಕ್ತ ಅಧಿಕಾರಿಗಳ ತಂಡ ಇಂದು ಕೆರೆ ಆವರಣಕ್ಕೆ ಭೇಟಿ ನೀಡಿ ಪರಿಶೀಲಿಸಿತು.



ಲೋಕಾಯುಕ್ತ ಎಸ್.ಪಿ, ಮಹಾಂತೇಶ್ವರ ಎಸ್ ಜಿದ್ದಿ, ಮುಖ್ಯ ಅಭಿಯಂತರ ಬಿ.ವಿ. ರಮೇಶ್ ನೇತೃತ್ವದ ಮಾಲಿನ್ಯಕ್ಕೆ ಕಾರಣಗಳು, ಅಧಿಕಾರಿಗಳ ನಿರ್ಲಕ್ಷ್ಯ, ಕೆರೆ ಅಭಿವೃದ್ಧಿ ಪ್ರಾಧಿಕಾರದ ಪಾತ್ರ ಮತ್ತಿತರ ವಿಷಯಗಳನ್ನು ಲೋಕಾಯುಕ್ತ ಅಧಿಕಾರಿಗಳು ಕಲೆಹಾಕಿದರು.

ಬಳಿಕ ಮಾತನಾಡಿದ ಮುಖ್ಯ ಅಭಿಯಂತರರಾದ ಬಿ.ವಿ. ರಮೇಶ್, ಕೆರೆ ಮಾಲಿನ್ಯ ಸಮಸ್ಯೆ ಕುರಿತು ಖುದ್ದಾಗಿ ಪರಿಶೀಲಿಸಲಾಗಿದೆ. ಈ ಬಗ್ಗೆ ಸಮಗ್ರ ವರದಿ ಸಲ್ಲಿಸಲಾಗುವುದು ಎಂದು ಹೇಳಿದರು.

ವಾಯ್ಸ್ ಆಫ್ ಸದಾಶಿವನಗರ ಸಂಘದ ಸದಸ್ಯೆ ಶಿಲ್ಪಾ ಜತ್ತಿ ಮಾತನಾಡಿ, ಕೆರೆ ಒಳಚರಂಡಿ ನೀರು ಹರಿಯುವುದನ್ನು ತಡೆಗಟ್ಟಲು ಬೆಂಗಳೂರು ಜಲಮಂಡಳಿ ಸೂಕ್ತ ರೀತಿಯಲ್ಲಿ ಪ್ರಯತ್ನ ಕೈಗೊಂಡಿದ್ದು, ಇದು ಮತ್ತೆ ಪುನರಾರ್ತನೆಯಾಗಬಾರದು. ಕೆರೆ ಸಂಪೂರ್ಣವಾಗಿ ಕಾಂಕ್ರೀಟೀಕರಣಗೊಳಿಸಿದ್ದು, ಇಲ್ಲಿ ನೀರು ಇಂಗಲು ಸಾಧ್ಯವಾಗದ ಪರಿಸ್ಥಿತಿ ಇದೆ. ಕೆರೆ ಅಭಿವೃದ್ಧಿ ಕುರಿತ ತಜ್ಞರ ತಂಡದ ಅಭಿಪ್ರಾಯ ಪಡೆದು ಸೂಕ್ತ ಕ್ರಮಗಳನ್ನು ಕೈಗೊಳ್ಳಬೇಕು. ಕೆರೆ ಪುನಶ್ಚೇತನಕ್ಕೆ ನೂರಾರು ಕೋಟಿ ರೂ ವೆಚ್ಚ ಮಾಡಿದ್ದು, ಕಾಂಕ್ರೀಟೀಕರಣ ಬಿಟ್ಟರೆ ಬೇರೆ ಅಭಿವೃದ್ಧಿಯಾಗಿಲ್ಲ. ಈ ಕಾಮಗಾರಿಯನ್ನು ಯಾರಿಗೆ ವಹಿಸಿ ದ್ದರೂ ಸಹ ಕಾಮಗಾರಿ ಹಣ ಪಾವತಿ ಮಾಡಬಾರದು. ತನಿಖೆ ನಂತರವೇ ಮುಂದಿನ ಕ್ರಮ ಕೈಗೊಳ್ಳಬೇಕು ಎಂದರು.

ಕಾಡುಮಲ್ಲೇಶ್ವರ ಗೆಳೆಯರ ಬಳಗದ ಅಧ್ಯಕ್ಷ ಬಿ.ಕೆ. ಶಿವರಾಂ ಮಾತನಾಡಿ, ಸ್ಯಾಂಕಿ ಕೆರೆ ಮಲ್ಲೇಶ್ವರಂ, ಯಶವಂತಪುರ, ಹೆಬ್ಬಾಳ ಭಾಗದ ಪ್ರಮುಖ ಜಲ ಮೂಲವಾಗಿದ್ದು, ಕೆರೆ ಉಳಿಸಿದರೆ ಜಲಮೂಲ ಉಳಿಸಲು ಸಾಧ್ಯ.

ಅವೈಜ್ಞಾನಿಕ ಕಾಮಗಾರಿಯಿಂದ ಮಳೆ ನೀರು ಕೆರೆ ಸೇರುತ್ತಿಲ್ಲ. ಎಲ್ಲಾ ಕಾಲುವೆಗಳು ಮುಚ್ಚಿದ್ದು, ಹೂಳು ತೆಗೆದಿಲ್ಲ. ಹೀಗಾಗಿ ಕೆರೆ ನೀರು ನಿಂತಲ್ಲೇ ಕೊಳೆಯುತ್ತಿದ್ದು, ಈ ಬಗ್ಗೆ ಕೆರೆ ಪ್ರಾಧಿಕಾರದವರು ಸೂಕ್ತ ಕ್ರಮ ತೆಗೆದುಕೊಳ್ಳಬೇಕು ಎಂದು ಒತ್ತಾಯಿಸಿದರು.

---

# 90 ಸಾವಿರ ವಿದ್ಯಾರ್ಥಿಗಳಿಗೆ ಆನ್‌ಲೈನ್ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕಾರ್ಯಕ್ರಮ

**ಬೆಂಗಳೂರು, ಸೆ.8:** ಸರ್ಕಾರಿ ಉದ್ಯೋಗ ಪಡೆಯುವ ಕನಸು ಕಾಣುತ್ತಿರುವ ಕರ್ನಾಟಕದ ಸಾವಿರಾರು ಯುವಜನರಿಗೆ ಮಹತ್ವದ ಅವಕಾಶ ಕಲ್ಪಿಸಲು ರಾಜ್ಯ ಸರ್ಕಾರ ಮುಂದಾಗಿದೆ.

ಕಾಲೇಜು ಶಿಕ್ಷಣ ಇಲಾಖೆ ವತಿಯಿಂದ ಸುಮಾರು ರೂ.9 ಕೋಟಿ ವೆಚ್ಚದಲ್ಲಿ 90 ಸಾವಿರ ವಿದ್ಯಾರ್ಥಿಗಳಿಗೆ ಉಚಿತ ಆನ್‌ಲೈನ್ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ನೀಡುವ ಯೋಜನೆ ರೂಪಿಸಲಾಗಿದೆ.

ಯೋಜನೆ ಶೀಘ್ರದಲ್ಲೇ ಜಾರಿಗೆ ಬರುವ ಸಾಧ್ಯತೆಯಿದ್ದು, ಆರ್ಥಿಕವಾಗಿ ಹಿಂದುಳಿದ ವಿದ್ಯಾರ್ಥಿಗಳಿಗೂ ಗುಣಮಟ್ಟದ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಸುಲಭವಾಗಿ ಲಭ್ಯವಾಗಲಿದೆ ಎಂಬ ನಿರೀಕ್ಷೆಯಿದೆ.

ಕರ್ನಾಟಕದ ನಿವಾಸಿಗಳಾಗಿರುವ ಅರ್ಹ ವಿದ್ಯಾರ್ಥಿಗಳು ಸೇವಾ ಸಿಂಧು ಪೋರ್ಟಲ್ ಮೂಲಕ ನೋಂದಣಿ ಮಾಡಿಕೊಳ್ಳಬೇಕಾಗುತ್ತದೆ. ಒಬ್ಬ ವಿದ್ಯಾರ್ಥಿ ಒಂದೇ ಸಂದರ್ಭದಲ್ಲಿ ಗರಿಷ್ಠ ಮೂರು ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತರಬೇತಿ ಆಯ್ಕೆ ಮಾಡಿಕೊಳ್ಳಲು ಅವಕಾಶವಿರಲಿದೆ.

ಸಹಾಯಕ ಪ್ರಾಧ್ಯಾಪಕ, ಪ್ರಥಮ ದರ್ಜೆ ಸಹಾಯಕ (ಎಫ್‌ಡಿಎ), ಪಂಚಾಯಿತಿ ಅಭಿವೃದ್ಧಿ ಅಧಿಕಾರಿ (ಪಿಡಿಓ), ಗ್ರೂಪ್–ಸಿ, ಪೊಲೀಸ್ ಸಬ್‌ಇನ್‌ಸ್ಪೆಕ್ಟರ್, ಗ್ರಾಮ ಆಡಳಿತ ಅಧಿಕಾರಿ (ವಿಎಓ), ಪೊಲೀಸ್ ಕಾನ್‌ಸ್ಟೆಬಲ್ ಸೇರಿದಂತೆ ರಾಜ್ಯ ಮತ್ತು ಕೇಂದ್ರ ಸರ್ಕಾರದ ವಿವಿಧ ನೇಮಕಾತಿ ಪರೀಕ್ಷೆಗಳಿಗೆ ಅಗತ್ಯವಿರುವ ವಿಷಯಗಳನ್ನು ತರಬೇತಿ ವ್ಯಾಪ್ತಿಯಲ್ಲಿ ಒಳಗೊಳ್ಳುವ ಉದ್ದೇಶ ಹೊಂದಲಾಗಿದೆ.

ಸೇವಾಸಿಂಧು ಈಗಾಗಲೇ ರಾಜ್ಯ ಸರ್ಕಾರದ ವಿವಿಧ ಇಲಾಖೆಗಳ ಸೇವೆಗಳನ್ನು ಒಂದೇ ಡಿಜಿಟಲ್ ವೇದಿಕೆಯಲ್ಲಿ ಒದಗಿಸುವ ಪ್ರಮುಖ ವ್ಯವಸ್ಥೆಯಾಗಿದ್ದು, ನೂರಾರು ಸರ್ಕಾರಿ ಸೇವೆಗಳು ಈ ವೇದಿಕೆಯೊಂದಿಗೆ ಸಂಯೋಜಿಸಲ್ಪಟ್ಟಿವೆ. ಆಯ್ಕೆಯಾಗುವ ತರಬೇತಿ ಸಂಸ್ಥೆಯು ಕನ್ನಡ ಮತ್ತು ಇಂಗ್ಲಿಷ್ ಭಾಷೆಗಳಲ್ಲಿ ವಿಶೇಷ ವೆಬ್ ಪೋರ್ಟಲ್ ಹಾಗೂ ಮೊಬೈಲ್ ಆ?ಯಪ್ ಅಭಿವೃದ್ಧಿಪಡಿಸಿ ನಿರ್ವಹಿಸಲಿದೆ.

### 360 ಆನ್‌ಲೈನ್ ತರಗತಿಗಳು

ಯೋಜನೆಯಡಿ ಸುಮಾರು 360 ಸಂವಾದಾತ್ಮಕ ಆನ್‌ಲೈನ್ ತರಬೇತಿ ಅವಧಿಗಳನ್ನು ನಡೆಸುವ ಉದ್ದೇಶವಿದೆ. ಪ್ರತಿ ತರಗತಿಯು ಸುಮಾರು 90ರಿಂದ 120 ನಿಮಿಷಗಳ ಅವಧಿಯದ್ದಾಗಿರಲಿದೆ.

ಪ್ರತಿ ಪರೀಕ್ಷೆಗೆ ಸಂಬಂಧಿಸಿದ ತರಬೇತಿ ಕಾರ್ಯಕ್ರಮವನ್ನು ಗರಿಷ್ಠ 90 ದಿನಗಳಲ್ಲಿ ಪೂರ್ಣಗೊಳಿಸಲು ಉದ್ದೇಶಿಸಲಾಗಿದೆ. ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಾಮಾನ್ಯವಾಗಿರುವ ಪಠ್ಯಕ್ರಮವನ್ನು ಸಮಗ್ರವಾಗಿ ಒಳಗೊಳ್ಳುವಂತೆ ತರಬೇತಿ ರೂಪಿಸಲಾಗುತ್ತಿದೆ.

---

# ಸಾಕ್ಷಿ ವಿಚಾರಣೆ: ವಿಡಿಯೋ ಕಾನ್ಫರೆನ್ಸ್ ಬದಲು ಭೌತಿಕವಾಗಿ ಹಾಜರುಪಡಿಸುವಂತೆ ಹೈಕೋರ್ಟ್ ಮೆಟ್ಟಿಲೇರಿದ ದರ್ಶನ್

**ಬೆಂಗಳೂರು, ಸೆ.8:** ರೇಣುಕಾಸ್ವಾಮಿ ಕೊಲೆ ಪ್ರಕರಣ ಸಂಬಂಧ ವಿಚಾರಣಾ ನ್ಯಾಯಾಲಯ ದಲ್ಲಿ ಸಾಕ್ಷಿಗಳ ವಿಚಾರಣೆ ವೇಳೆ ತಮ್ಮನ್ನು ವಿಡಿಯೊ ಕಾನ್ಫರೆನ್ಸ್ (ವಿಸಿ) ಬದಲಿಗೆ ಭೌತಿಕವಾಗಿ ಹಾಜರುಪಡಿಸಲು ಪೊಲೀಸರು ಹಾಗೂ ಜೈಲು ಅಧಿಕಾರಿಗಳಿಗೆ ನಿರ್ದೇಶಿಸುವಂತೆ ಕೋರಿ ಪ್ರಕರಣದ 2ನೇ ಆರೋಪಿಯಾಗಿರುವ ನಟ ದರ್ಶನ್ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದಾರೆ.

ಅರ್ಜಿಯಲ್ಲಿ ಕಾಮಾಕ್ಷಿಪಾಳ್ಯ ಠಾಣೆ ಪೊಲೀಸರು, ರೇಣುಕಾಸ್ವಾಮಿ ಮೃತದೇಹವನ್ನು ಮೊದಲು ನೋಡಿದ್ದ ಸುಮನಹಳ್ಳಿಯ ಸತ್ವ ಅನುಗ್ರಹ ಅಪಾರ್ಟ್‌ಮೆಂಟ್‌ನ ಭದ್ರತಾ ಸಿಬ್ಬಂದಿ ಕೇವಲ್ ರಾಮ್ ದೋರ್ಜಿ ಹಾಗೂ ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದ ಮುಖ್ಯ ಅಧೀಕ್ಷಕರನ್ನು ಪ್ರತಿವಾದಿಯನ್ನಾಗಿಸಲಾಗಿದ್ದು, ಅರ್ಜಿ ಇನ್ನಷ್ಟೇ ನ್ಯಾಯಾಲಯದ ಮುಂದೆ ವಿಚಾರಣೆಗೆ ನಿಗದಿಯಾಗಬೇಕಿದೆ. ಸಾಕ್ಷ್ಯ ದಾಖಲಿಸುವಾಗ ಭೌತಿಕ ಹಾಜರಾತಿಗೆ ಅನುಮತಿ ಕೋರಿ ಅಪರಾಧ ಪ್ರಕ್ರಿಯಾ ಸಂಹಿತೆ ಸೆಕ್ಷನ್ 273ರ ಅಡಿ ಸಲ್ಲಿಸಿದ್ದ ಅರ್ಜಿ ವಜಾಗೊಳಿಸಿ 58ನೇ ಹೆಚ್ಚುವರಿ ಸಿಟಿ ಸಿವಿಲ್ ಮತ್ತು ಸೆಷನ್ಸ್ ನ್ಯಾಯಾಲಯ ಆಗಸ್ಟ್ 17ರಂದು ಹೊರಡಿಸಿದ್ದ ಆದೇಶ ರದ್ದು ಕೋರಿರುವ ದರ್ಶನ್, ಸಾಕ್ಷಿಗಳ ವಿಚಾರಣೆ ವೇಳೆ ತಮ್ಮನ್ನು ಖುದ್ದು ನ್ಯಾಯಾಲಯಕ್ಕೆ ಹಾಜರು ಪಡಿಸಲು ಕಾಮಾಕ್ಷಿಪಾಳ್ಯ ಠಾಣೆ ಪೊಲೀಸರು ಹಾಗೂ ಜೈಲು ಅಧೀಕ್ಷಕರಿಗೆ ನಿರ್ದೇಶನ ನೀಡುವಂತೆ ಅರ್ಜಿಯಲ್ಲಿ ಮನವಿ ಮಾಡಿದ್ದಾರೆ.

ವಿಸಿ ಮೂಲಕ ಹಾಜರುಪಡಿಸಲಾಗುತ್ತಿದ್ದು, ಆಗಾಗ ತಾಂತ್ರಿಕ ಅಡಚಣೆಗಳಾಗುತ್ತಿದೆ. ಇದರಿಂದ, ನ್ಯಾಯಾಲಯದಲ್ಲಿ ನಡೆಯುತ್ತಿರುವ ಪ್ರಕ್ರಿಯೆಗಳನ್ನು ಸರಿಯಾಗಿ ಗ್ರಹಿಸಲು ಸಾಧ್ಯವಾಗುತ್ತಿಲ್ಲ. ಪ್ರಮುಖ ಸಾಕ್ಷಿಗಳ ಪಾಟಿ ಸವಾಲು ನಡೆಯುವಾಗ ಆರೋಪಿಯು ತನ್ನ ವಕೀಲರಿಗೆ ಸೂಕ್ತ ನಿರ್ದೇಶನಗಳನ್ನು ನೀಡಲು ಭೌತಿಕ ಹಾಜರಾತಿ ಅತ್ಯಗತ್ಯವಾಗಿದೆ. ಇಲ್ಲವಾದಲ್ಲಿ ನ್ಯಾಯಸಮ್ಮತ ವಿಚಾರಣೆಯ ಹಕ್ಕಿನಿಂದ ವಂಚಿತರಾದಂತಾಗುತ್ತದೆ.

ಭೌತಿಕವಾಗಿ ಕೋರ್ಟ್‌ಗೆ ಹಾಜರಾಗುವುದಕ್ಕೂ, ವಿಸಿ ಮೂಲಕ ಹಾಜರಾಗುವುದಕ್ಕೂ ಸಾಕಷ್ಟು ವ್ಯತ್ಯಾಸವಿದೆ. ಗಂಭೀರ ಅಪರಾಧ ಕೃತ್ಯದ ವಿಚಾರಣೆ ಎದುರಿಸುವಾಗ ಆರೋಪಿಯು ಖುದ್ದು ಕೋರ್ಟ್‌ಗೆ ಹಾಜರಾಗಿ ಪ್ರಾಸಿಕ್ಯೂಷನ್ ಸಾಕ್ಷಿಯ



ಸಾಕ್ಷ್ಯ ನಿರೂಪಣೆಯನ್ನು ವೀಕ್ಷಿಸುವ ಅರ್ಹತೆ ಹೊಂದಿರುತ್ತಾನೆ ಎಂದು ದರ್ಶನ್ ಅರ್ಜಿಯಲ್ಲಿ ವಿವರಿಸಲಾಗಿದೆ.

ಇತ್ತೀಚಿನ ದಿನಗಳಲ್ಲಿ ತಂತ್ರಜ್ಞಾನ ಸಾಕಷ್ಟು ಅಭಿವೃದ್ಧಿ ಹೊಂದಿದ್ದು, ಸಾಕ್ಷಿಗಳ ಹೇಳಿಕೆ ದಾಖಲಿಸಿಕೊಳ್ಳಲು ವಿಡಿಯೊ ಕಾನ್ಫರೆನ್ಸ್ ಒಂದು ವಿಧಾನವಾಗಿದೆಯಾದರೂ, ಅದೊಂದೇ ಏಕೈಕ ವಿಧಾನವಾಗಲಾರದು. ವಿಚಾರಣೆಯ ಪ್ರಮುಖ ಹಾಗೂ ನಿರ್ಣಾಯಕ ಹಂತಗಳಲ್ಲಿ ಆರೋಪಿಯ ಸಮ್ಮುಖದಲ್ಲೇ ಸಾಕ್ಷ್ಯ ದಾಖಲಿಸಿಕೊಳ್ಳಬೇಕು ಎನ್ನುವುದು ದರ್ಶನ್ ವಾದವಾಗಿದೆ. ಜತೆಗೆ, ಈ ಪ್ರಕರಣಕ್ಕೆ ಕಾರಣವಾದ ಘಟನೆಯು 2024ರ ಜುಲೈ 1ಕ್ಕೂ ಮುನ್ನ ನಡೆದಿರುವುದರಿಂದ, ಹಿಂದಿನ ಸಿಆರ್‌ಪಿಸಿ ನಿಯಮಗಳೇ ಅನ್ವಯವಾಗಲಿದೆ. ಸೆಕ್ಷನ್ 273ರ ಪ್ರಕಾರ ಸಾಕ್ಷ್ಯಗಳನ್ನು ಆರೋಪಿಯ ಸಮಕ್ಷಮದಲ್ಲಿಯೇ ದಾಖಲಿಸುವುದು ಕಡ್ಡಾಯವಾಗಿದೆ ಎಂದು ಅರ್ಜಿಯಲ್ಲಿ ಹೇಳಲಾಗಿದೆ.

---

# ಎಸ್‌ಐಆರ್ ನೋಟೀಸ್ ತಲುಪಿಸುವುದೇ ಅಧಿಕಾರಿಗಳಿಗೆ ದೊಡ್ಡ ಸವಾಲು

**ಬೆಂಗಳೂರು, ಸೆ.8:** ರಾಜ್ಯದಲ್ಲಿ ನಡೆಯುತ್ತಿರುವ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆ ಮತದಾರರಲ್ಲಿ ಗೊಂದಲ ಹಾಗೂ ಆತಂಕಕ್ಕೆ ಕಾರಣವಾಗಿದ್ದು, ನೋಟಿಸ್ ವಿತರಣೆ ಪ್ರಕ್ರಿಯೆಯೇ ಅಧಿಕಾರಿಗಳಿಗೆ ಸವಾಲಾಗಿ ಪರಿಣಮಿಸಿದೆ.

ನಿಗದಿತ ವೇಳಾಪಟ್ಟಿಯಂತೆ ನೋಟಿಸ್‌ಗಳನ್ನು ವಿತರಿಸಲಾಗುತ್ತಿದೆ ಎಂದು ಮುಖ್ಯ ಚುನಾವಣಾಧಿಕಾರಿ ಕಚೇರಿ ಸ್ಪಷ್ಟಪಡಿಸಿದ್ದರೂ, ಸಿದ್ಧಪಡಿಸಿರುವ ನೋಟಿಸ್‌ಗಳ ಪೈಕಿ ಶೇ.83ರಷ್ಟು ಇನ್ನೂ ಮತದಾರರನ್ನು ತಲುಪಿಲ್ಲ.

ರಾಜ್ಯದಲ್ಲಿ ಇದುವರೆಗೆ 43.8 ಲಕ್ಷ ನೋಟಿಸ್‌ಗಳನ್ನು ಸಿದ್ಧಪಡಿಸಲಾಗಿದ್ದು, ಈ ಪೈಕಿ ಕೇವಲ 7.3 ಲಕ್ಷ ನೋಟಿಸ್‌ಗಳು ಮಾತ್ರ ಸಂಬಂಧಪಟ್ಟ ಮತದಾರರಿಗೆ ತಲುಪಿವೆ. ಸುಮಾರು 36.4 ಲಕ್ಷ ನೋಟಿಸ್‌ಗಳು ಇನ್ನೂ ವಿತರಣೆ ಬಾಕಿಯಿದ್ದು, ಇದು ಒಟ್ಟು ನೋಟಿಸ್‌ಗಳ ಶೇ.83ರಷ್ಟಾಗಿದೆ.

ಚುನಾವಣಾ ಕಚೇರಿ ಪ್ರಕಟಿಸಿರುವ ಪಟ್ಟಿಗಳಲ್ಲೂ ಕೆಲವೆಡೆ ನಿಖರವಾದ ವಿಚಾರಣೆಯ ದಿನಾಂಕವನ್ನು ನಮೂದಿಸದಿರುವುದು ಸಮಸ್ಯೆಗೆ ಕಾರಣವಾಗಿದೆ. ಬಿಎಲ್‌ಓ ಭೇಟಿ ಯಾವಾಗ ನಡೆಯಲಿದೆ ಹಾಗೂ ವಿಚಾರಣೆಗೆ ಯಾವ ದಿನ ಹಾಜರಾಗಬೇಕು ಎಂಬ ಬಗ್ಗೆ ಮತದಾರರಲ್ಲಿ ಅನಿಶ್ಚಿತತೆ ಮುಂದುವರಿದಿದೆ.

ಬೆಂಗಳೂರು ಅಪಾರ್ಟ್‌ಮೆಂಟ್ ಫೆಡರೇಷನ್ ಸೇರಿ ವಿವಿಧ ನಾಗರಿಕ ವೇದಿಕೆಗಳು ಕೂಡ ನೋಟಿಸ್‌ಗಳು ವಿಚಾರಣೆಗೆ ಕೇವಲ ಒಂದು ದಿನ ಮುನ್ನ ತಲುಪುತ್ತಿರುವ ಬಗ್ಗೆ ಆಕ್ಷೇಪ ವ್ಯಕ್ತಪಡಿಸಿವೆ. ಸೂಕ್ತ ದಾಖಲೆಗಳನ್ನು ಸಂಗ್ರಹಿಸಿ ವಿಚಾರಣೆಗೆ ಸಿದ್ಧರಾಗಲು ಇದರಿಂದ ಸಾಕಷ್ಟು ಸಮಯ ಸಿಗುತ್ತಿಲ್ಲ ಎಂಬುದು ಅವರ ಅಳಲು.

ಮತದಾರರ ದಾಖಲೆಗಳ ಪರಿಶೀಲನೆ ಸಂದರ್ಭದಲ್ಲಿ ಬೂತ್ ಮಟ್ಟದ ಅಧಿಕಾರಿಗಳ (ಬಿಎಲ್‌ಓ) ನಡುವೆ ಏಕರೂಪತೆಯಿಲ್ಲದಿರುವುದು ಮತ್ತಷ್ಟು ಗೊಂದಲಕ್ಕೆ ಕಾರಣವಾಗಿದೆ. ಆಧಾರ್ ಕಾರ್ಡ್ ಸೇರಿದಂತೆ ದಾಖಲೆಗಳ ಸ್ವೀಕಾರದ ವಿಚಾರದಲ್ಲಿ ಕೆಲವೆಡೆ ವಿಭಿನ್ನ ರೀತಿಯಲ್ಲಿ ಸೂಚನೆ




ನೀಡಲಾಗುತ್ತಿದೆ ಎಂಬ ದೂರುಗಳು ಕೇಳಿಬಂದಿವೆ. ಕೆಲವು ಕಡೆ ಆಧಾರ್ ಕಾರ್ಡ್ ಸ್ವೀಕರಿಸದೆ, ಎಲ್‌ಐಸಿ ಬಾಂಡ್, ಬ್ಯಾಂಕ್ ಪಾಸ್‌ಬುಕ್ ಸೇರಿದಂತೆ ಇತರ ದಾಖಲೆಗಳನ್ನು ಸಲ್ಲಿಸುವಂತೆ ಒತ್ತಾಯಿಸಲಾಗುತ್ತಿದೆ ಎನ್ನಲಾಗಿದೆ.

ವಿಶೇಷವಾಗಿ ಬೆಂಗಳೂರು ನಗರದಲ್ಲಿ ಸಮಸ್ಯೆ ಹೆಚ್ಚು ಗೋಚರಿಸುತ್ತಿದೆ. ನೋಟಿಸ್ ನೀಡಬೇಕಾದ ಮತದಾರರ ಪಟ್ಟಿಯನ್ನು ಅಧಿಕಾರಿಗಳು ಆನ್‌ಲೈನ್‌ನಲ್ಲಿ ಪ್ರಕಟಿಸಿದ್ದರೂ, ಹಲವೆಡೆ ವಿಚಾರಣೆಯ ನಿಖರ ದಿನಾಂಕವನ್ನು ನಮೂದಿಸದಿರುವುದು ಮುಂದಿನ ಕ್ರಮವೇನು ಎಂಬ ಗೊಂದಲಕ್ಕೆ ಕಾರಣವಾಗಿದೆ.

ಎಸ್‌ಐಆರ್‌ನ ಈ ಹಂತದಲ್ಲಿ ಮುಖ್ಯವಾಗಿ 2002ರ ಹಿಂದಿನ ಮತದಾರರ ಪಟ್ಟಿಯೊಂದಿಗೆ ತಮ್ಮ ವಿವರಗಳನ್ನು ಮ್ಯಾಪ್ ಮಾಡಲು ಸಾಧ್ಯವಾಗದವರು ಹಾಗೂ ದಾಖಲೆಗಳಲ್ಲಿ ತಾರ್ಕಿಕ ವ್ಯತ್ಯಾಸ ಕಂಡುಬಂದಿರುವ ಮತದಾರರಿಗೆ ವಿಚಾರಣೆಯ ನೋಟಿಸ್ ನೀಡಲಾಗುತ್ತಿದೆ. ಕರ್ನಾಟಕದಲ್ಲಿ ಸುಮಾರು 4.47 ಕೋಟಿ ಮತದಾರರು ಕರಡು ಪಟ್ಟಿಯಲ್ಲಿದ್ದು, ಹಿಂದಿನ ಹಂತದಲ್ಲಿ 5.54 ಕೋಟಿಗೂ ಅಧಿಕ ದಾಖಲೆಗಳನ್ನು ಪರಿಶೀಲಿಸಲಾಗಿತ್ತು. ಈ ಪರಿಶೀಲನೆ ವೇಳೆ ಹೆಚ್ಚಿನ ಸಂಖ್ಯೆಯ ಹೆಸರುಗಳು ಗೈರು (ಅಬ್ಸೆಂಟ್), ಸ್ಥಳಾಂತರಗೊಂಡ (ಶಿಫ್ಟೆಡ್), ಮೃತಪಟ್ಟ (ಡೆಡ್), ದ್ವಿಪ್ರತಿಗಳು (ಡೂಪ್ಲಿಕೇಟ್) ಹಾಗೂ ಇತರೆ ವರ್ಗಗಳಿಗೆ ಸೇರಿರುವುದು ಪತ್ತೆಯಾಗಿತ್ತು.

### ಹಂತಹಂತವಾಗಿ ನೋಟಿಸ್ ವಿತರಣೆ

ನೋಟಿಸ್‌ಗಳನ್ನು ಎಲ್ಲ ಮತದಾರರಿಗೂ ಒಂದೇ ಬಾರಿಗೆ ನೀಡದೆ, ವಿಚಾರಣೆಯ ದಿನಾಂಕದ ಆಧಾರದ ಮೇಲೆ ಹಂತ ಹಂತವಾಗಿ ವಿತರಿಸಲಾಗುತ್ತಿದೆ ಎಂದು ಚುನಾವಣಾ ಅಧಿಕಾರಿಗಳು ತಿಳಿಸಿದ್ದಾರೆ. ಮೊದಲು ವಿಚಾರಣೆ ನಿಗದಿಯಾಗಿರುವ ಮತದಾರರಿಗೆ ನೋಟಿಸ್ ನೀಡಲಾಗುತ್ತಿದೆ. ಹೀಗಾಗಿ ನೋಟಿಸ್ ಇನ್ನೂ ತಲುಪಿಲ್ಲವೆಂದು ಮತದಾರರು ಆತಂಕಪಡಬೇಕಾಗಿಲ್ಲ ಎಂದು ಸಿಇಓ ಕಚೇರಿ ಮನವಿ ಮಾಡಿದೆ. ಆದರೆ ವಿಚಾರಣೆಗೆ ಕೆಲವೇ ದಿನಗಳು ಅಥವಾ ಒಂದು ದಿನ ಮುನ್ನ ನೋಟಿಸ್ ತಲುಪುತ್ತಿರುವುದರಿಂದ ಅಗತ್ಯ ದಾಖಲೆಗಳನ್ನು ಸಿದ್ಧಪಡಿಸಲು ಸಮಯದ ಕೊರತೆ ಎದುರಾಗುತ್ತಿದೆ ಎಂಬುದು ಮತದಾರರ ಅಸಮಾಧಾನವಾಗಿದೆ.

### ಮ್ಯಾಪಿಂಗ್ ದೋಷದ ಪ್ರಶ್ನೆ

ಬೆಂಗಳೂರಿನಲ್ಲಿ ಮೊದಲ ಹಂತದ ವಿಚಾರಣೆಗಳು ಸೆಪ್ಟೆಂಬರ್ ಮೊದಲ ವಾರದಲ್ಲೇ ಆರಂಭವಾಗಿವೆ. ಸೆಪ್ಟೆಂಬರ್ 4ರ ಮಧ್ಯಾಹ್ನದವರೆಗೆ 206 ವಿಚಾರಣೆಗಳು ಪೂರ್ಣಗೊಂಡಿದ್ದು, ಈ ಪ್ರಕರಣಗಳಲ್ಲಿ ಯಾವುದನ್ನೂ ತಿರಸ್ಕರಿಸಲಾಗಿಲ್ಲ ಎಂದು ಸಿಇಓ ಕಚೇರಿ ತಿಳಿಸಿತ್ತು. ಆದರೆ ಸರಿಯಾದ ಮಾಹಿತಿ ನೀಡಿದ್ದ ಕೆಲ ಮತದಾರರನ್ನೂ ನಾಟ್ ಮ್ಯಾಪ್ಡ್ ಎಂದು ಗುರುತಿಸಿರುವ ಪ್ರಕರಣಗಳು ಬೆಳಕಿಗೆ ಬಂದಿರುವುದು ಮತ್ತೊಂದು ಪ್ರಶ್ನೆಯನ್ನು ಹುಟ್ಟುಹಾಕಿದೆ. ಮತದಾರರು ತಮ್ಮ ಗುರುತು, ವಿಳಾಸ ಹಾಗೂ ಹಿಂದಿನ ಮತದಾರರ ಪಟ್ಟಿಯಲ್ಲಿನ ವಿವರಗಳನ್ನು ಸಮರ್ಥಿಸಲು ದಾಖಲೆಗಳನ್ನು ಸಲ್ಲಿಸಬೇಕಾದ ಪರಿಸ್ಥಿತಿಯಲ್ಲಿದ್ದಾರೆ. ಆದರೆ ಯಾವ ಸಂದರ್ಭದಲ್ಲಿ ಯಾವ ದಾಖಲೆಗಳನ್ನು ಸಲ್ಲಿಸಿದರೆ ಸಾಕು ಎಂಬ ಬಗ್ಗೆ ನೆಲಮಟ್ಟದಲ್ಲಿ ಏಕರೂಪದ ಮಾಹಿತಿ ದೊರೆಯುತ್ತಿಲ್ಲ ಎಂಬ ದೂರುಗಳು ಕೇಳಿಬರುತ್ತಿವೆ.



ತಮಿಳುನಾಡಿಗೆ ಇನ್ನೂ 15 ದಿನಗಳ ಕಾಲ ದಿನಕ್ಕೆ 6,000 ಕ್ಯೂಸೆಕ್ ಕಾವೇರಿ ನೀರು ಬಿಡುವಂತೆ ಕರ್ನಾಟಕವನ್ನು ಒತ್ತಾಯಿಸಿದ ಕಾವೇರಿ ನೀರು ನಿಯಂತ್ರಣ ಸಮಿತಿ (ಸಿಡಬ್ಲ್ಯೂಆರ್ಎ) ಮಂಗಳವಾರ ಮಂಡ್ಯದಲ್ಲಿ ರೈತರ ಪ್ರತಿಭಟನೆ ನಡೆಸಿತು.

### ಕಲಬುರಗಿ ಸ್ಪೋರ್ಟ್ಸ್ ಹಬ್ಬಕ್ಕೆ ನೋಂದಣಿ ಆರಂಭ

# ಸೆ.25, 26, 27ರಂದು ಕ್ರೀಡಾ ಸಂಭ್ರಮದಲ್ಲಿ ಪಾಲ್ಗೊಳ್ಳಿ: ಪ್ರಿಯಾಂಕ್ ಖರ್ಗೆ

**ಕಲಬುರಗಿ, ಸೆ. 8:** ಜಿಲ್ಲೆಯ ಅತಿದೊಡ್ಡ ಕ್ರೀಡಾ ಸಂಭ್ರಮವಾದ 'ಕಲಬುರಗಿ ಸ್ಪೋರ್ಟ್ಸ್ ಹಬ್ಬ–2026'ಕ್ಕೆ ನೋಂದಣಿ ಪ್ರಕ್ರಿಯೆ ಆರಂಭವಾಗಿದ್ದು, ಸೆಪ್ಟೆಂಬರ್ 25, 26 ಮತ್ತು 27ರಂದು ಮೂರು ದಿನಗಳ ಕಾಲ ಕ್ರೀಡಾ ಹಬ್ಬ ನಡೆಯಲಿದೆ. ಜಿಲ್ಲಾಡಳಿತದ ನೇತೃತ್ವದಲ್ಲಿ ಕಲಬುರಗಿ ನೆಕ್ಸ್ಟ್ ಫೌಂಡೇಷನ್ ಸಹಯೋಗದೊಂದಿಗೆ ಆಯೋಜಿಸಲಾಗುತ್ತಿರುವ ಈ ಕ್ರೀಡಾ ಹಬ್ಬದಲ್ಲಿ ಜಿಲ್ಲೆಯಾದ್ಯಂತದ ಕ್ರೀಡಾಪಟುಗಳು, ಕ್ರೀಡಾಭಿಮಾನಿಗಳು ಹಾಗೂ ಕುಟುಂಬಗಳು ಭಾಗವಹಿಸಲಿದ್ದಾರೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದರು..

ಈ ಕುರಿತು ನಗರದಲ್ಲಿ ಮಾಧ್ಯಮ ಗೋಷ್ಠಿಯಲ್ಲಿ ಮಾತನಾಡಿದದ ಅವರು, ಕಲಬುರಗಿ ತನ್ನ ಅತಿದೊಡ್ಡ ಕ್ರೀಡಾ ಸಂಭ್ರಮಕ್ಕೆ ಸಜ್ಜಾಗುತ್ತಿದೆ. ಕ್ರಿಕೆಟ್, ಫುಟ್‌ಬಾಲ್, ವಾಲಿಬಾಲ್, ಬ್ಯಾಡ್ಮಿಂಟನ್, ಟೇಬಲ್ ಟೆನಿಸ್, ಚೆಸ್ ಸೇರಿದಂತೆ ವಿವಿಧ ಕ್ರೀಡೆಗಳಲ್ಲಿ ಭಾಗವಹಿಸಲು ಅವಕಾಶ ಕಲ್ಪಿಸಲಾಗಿದೆ. ಸೈಕ್ಲಿಂಗ್‌ನಂತಹ ಕ್ರೀಡಾ ಚಟುವಟಿಕೆಗಳಲ್ಲಿಯೂ ಕ್ರೀಡಾಭಿಮಾನಿಗಳು ಪಾಲ್ಗೊಳ್ಳಬಹುದಾಗಿದೆ. ಕ್ರೀಡಾ ಸ್ಪರ್ಧೆಗಳ ಜತೆಗೆ ಮನರಂಜನೆ, ವಿವಿಧ ಚಟುವಟಿಕೆಗಳು ಮತ್ತು ಸಮುದಾಯದ ಎಲ್ಲ ವರ್ಗದ ಜನರು ಒಟ್ಟಾಗಿ ಸೇರಿ ಸಂಭ್ರಮಿಸುವಂತಹ ಹಲವು ಕಾರ್ಯಕ್ರಮಗಳನ್ನು ಆಯೋಜಿಸಲು ಯೋಜಿಸಲಾಗಿದೆ. ಈ ಮೂಲಕ ಕ್ರೀಡೆಯನ್ನು ಕೇವಲ ಸ್ಪರ್ಧೆಯಾಗಿ ನೋಡದೆ, ಇಡೀ ಸಮುದಾಯವನ್ನು ಒಗ್ಗೂಡಿಸುವ ಉತ್ಸವವನ್ನಾಗಿ ರೂಪಿಸುವ ಉದ್ದೇಶ ಹೊಂದಲಾಗಿದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ಮಾಹಿತಿ ನೀಡಿದರು.



ನಮ್ಮ ಯುವ ಕ್ರೀಡಾಪಟುಗಳು ಈ ಅವಕಾಶವನ್ನು ಸದುಪಯೋಗಪಡಿಸಿಕೊಂಡು ಹೆಚ್ಚಿನ ಸಂಖ್ಯೆಯಲ್ಲಿ ವೆಬ್ ಲಿಂಕ್ ಮೂಲಕ ತಮ್ಮ ಹೆಸರುಗಳನ್ನು ನೋಂದಾಯಿಸಿಕೊಂಡು, ಸ್ಪರ್ಧೆಗಳಲ್ಲಿ ಭಾಗವಹಿಸಬೇಕು. ತಮ್ಮ ಪ್ರತಿಭೆಯನ್ನು ಪ್ರದರ್ಶಿಸುವುದರ ಜತೆಗೆ ಕ್ರೀಡಾ ಸ್ಪೂರ್ತಿಯನ್ನು ಬೆಳೆಸಿಕೊಳ್ಳಬೇಕು ಎಂದು ಪ್ರಿಯಾಂಕ್ ಖರ್ಗೆ ಅವರು ಕರೆ ನೀಡಿದರು.

'ನಿಮ್ಮ ನೆಚ್ಚಿನ ಕ್ರೀಡೆಯನ್ನು ಆಯ್ಕೆ ಮಾಡಿಕೊಳ್ಳಿ. ನಿಮ್ಮ ತಂಡವನ್ನು ಕರೆತನ್ನಿ. ಬನ್ನಿ, ಕಲಬುರಗಿ – ಆಟವಾಡೋಣ!" ಎಂದು ಸಚಿವ ಪ್ರಿಯಾಂಕ್ ಖರ್ಗೆ ಸಂದೇಶ ನೀಡಿದ್ದು, ಜಿಲ್ಲೆಯ ಕ್ರೀಡಾ ಪ್ರತಿಭೆಗಳಿಗೆ ವೇದಿಕೆ ಕಲ್ಪಿಸುವುದು, ಯುವಜನರಲ್ಲಿ ಕ್ರೀಡಾಸಕ್ತಿ ಹೆಚ್ಚಿಸುವುದು ಹಾಗೂ ಕ್ರೀಡೆಯ ಮೂಲಕ ಆರೋಗ್ಯಕರ ಮತ್ತು ಸಕ್ರಿಯ ಸಮುದಾಯವನ್ನು ನಿರ್ಮಿಸುವ ನಿಟ್ಟಿನಲ್ಲಿ ಈ ಕ್ರೀಡಾ ಹಬ್ಬ ಮಹತ್ವದ ಹೆಜ್ಜೆಯಾಗಲಿದೆ ಎಂದೂ ಸಚಿವರು ವಿವರಿಸಿದರು.

ಸೆ.25, 26 ಮತ್ತು 27ರಂದು ನಡೆಯಲಿರುವ ಈ ಕಲಬುರಗಿ ಸ್ಪೋರ್ಟ್ಸ್ ಹಬ್ಬ–2026ರಲ್ಲಿ ಜಿಲ್ಲೆಯ ಜನರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸುವಂತೆ ಸಚಿವರು ಮನವಿ ಮಾಡಿದ್ದಾರೆ.

### ರೌಡಿಶೀಟರ್‌ಗೆ ಪೊಲೀಸ್ ಠಾಣೆಯಲ್ಲೇ ಸನ್ಮಾನ

# ಪಿಎಸ್ಐ ವಿರುದ್ಧ ಸಾರ್ವಜನಿಕರ ತೀವ್ರ ಆಕ್ರೋಶ

**ಕಲಬುರಗಿ, ಸೆ. 8:** ಪೊಲೀಸ್ ಇಲಾಖೆ ಎಂದರೆ ಕಾನೂನು ಸುವ್ಯವಸ್ಥೆ ಕಾಪಾಡುವ ವ್ಯವಸ್ಥೆ. ಅಪರಾಧ ಹಿನ್ನೆಲೆಯುಳ್ಳವರ ಮೇಲೆ ನಿಗಾ ವಹಿಸಿ, ಕಾನೂನು ಉಲ್ಲಂಘನೆ ನಡೆಯದಂತೆ ಕ್ರಮ ಕೈಗೊಳ್ಳಬೇಕಾದ ಜವಾಬ್ದಾರಿ ಪೊಲೀಸರ ಮೇಲಿದೆ. ಆದರೆ ಜಿಲ್ಲೆಯ ದೇವಲ ಗಾಣಗಾಪುರ ಪೊಲೀಸ್ ಠಾಣೆಗೆ ಸಂಬಂಧಿಸಿದಂತೆ ಇದೀಗ ಕೇಳಿಬರುತ್ತಿರುವ ಆರೋಪಗಳು ಸಾರ್ವಜನಿಕ ವಲಯದಲ್ಲಿ ತೀವ್ರ ಚರ್ಚೆಗೆ ಕಾರಣವಾಗಿವೆ.ದೇವಲಗಾಣಗಾಪುರ ಠಾಣೆಯ ವ್ಯಾಪ್ತಿಯಲ್ಲಿ ರೌಡಿಶೀಟರ್‌ಗೆ ಪೊಲೀಸ್ ಠಾಣೆಯಲ್ಲೇ ಸನ್ಮಾನ ಮಾಡಲಾಗಿದೆ ಎಂಬ ಆರೋಪ ಕೇಳಿಬಂದಿದ್ದು, ಇದಕ್ಕೆ ಸಂಬಂಧಿಸಿದ ಫೋಟೋ ಗಳು ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿವೆ ಎಂದು ಹೇಳಲಾಗುತ್ತಿದೆ. ಪೊಲೀಸ್ ಅಧಿಕಾರಿಯೊಬ್ಬರು ರೌಡಿ ಶೀಟರ್‌ಗೆ ಆತಿಥ್ಯ ನೀಡುತ್ತಿರುವುದು ಹಾಗೂ ಸನ್ಮಾನಿಸುತ್ತಿರುವ ರೀತಿಯಲ್ಲಿರುವ ದೃಶ್ಯಗಳು ಸಾರ್ವಜನಿಕರ ಅಸಮಾಧಾನಕ್ಕೆ ಕಾರಣವಾಗಿವೆ. ಈ ಘಟನೆಗೆ ಸಂಬಂಧಿಸಿದಂತೆ ಠಾಣೆಯ ಪಿಎಸ್ಐ ಅವರ ಹೆಸರನ್ನೂ ಪ್ರಸ್ತಾಪಿಸಲಾಗುತ್ತಿದ್ದು, ರೌಡಿ ಶೀಟರ್‌ಗೆ ಸನ್ಮಾನ ಮಾಡಿರುವ ಆರೋಪ ಕೇಳಿಬಂದಿದೆ. ಈ ಆರೋಪಗಳ ಕುರಿತು ಪೊಲೀಸ್ ಇಲಾಖೆಯಿಂದ ಸ್ಪಷ್ಟನೆ ಅಥವಾ ಅಧಿಕೃತ ತನಿಖಾ ಮಾಹಿತಿ ಹೊರಬರಬೇಕಿದೆ.



ಸಾಮಾನ್ಯವಾಗಿ ರೌಡಿಶೀಟರ್‌ಗಳ ಮೇಲೆ ಪೊಲೀಸರು ವಿಶೇಷ ನಿಗಾ ಇಡುತ್ತಾರೆ. ಅವರ ಚಟುವಟಿಕೆಗಳ ಮೇಲೆ ಕಣ್ಣಿಟ್ಟಿರುವುದು ಪೊಲೀಸ್ ಇಲಾಖೆಯ ಜವಾಬ್ದಾರಿಯ ಭಾಗವಾಗಿದೆ. ಇಂತಹ ವ್ಯಕ್ತಿಯೊಬ್ಬರಿಗೆ ಠಾಣೆಯಲ್ಲೇ ವಿಶೇಷ ಗೌರವ ನೀಡಲಾಗಿದೆ ಎಂಬ ಆರೋಪ ಕೇಳಿಬಂದಿರುವುದು ಹಲವು ಪ್ರಶ್ನೆಗಳನ್ನು ಹುಟ್ಟುಹಾಕಿದೆ.

ರೌಡಿಶೀಟರ್‌ಗೆ ಖಾಕಿಯಿಂದಲೇ ವಿಐಪಿ ಆತಿಥ್ಯ ನೀಡಲಾಗಿತ್ತೇ ಎಂಬ ಪ್ರಶ್ನೆ ಇದೀಗ ಸಾರ್ವಜನಿಕ ವಲಯದಲ್ಲಿ ಕೇಳಿಬರುತ್ತಿದೆ. ರೌಡಿ ಶೀಟರ್ ಪೊಲೀಸ್ ಅಧಿಕಾರಿಗಳೊಂದಿಗೆ ಆತ್ಮೀಯವಾಗಿ ಕಾಣಿಸಿಕೊಂಡಿರುವ ಫೋಟೋಗಳು ವೈರಲ್ ಆಗಿರುವ ಹಿನ್ನೆಲೆಯಲ್ಲಿ, ಈ ಭೇಟಿಯ ಉದ್ದೇಶವೇನು? ಯಾವ ಸಂದರ್ಭದಲ್ಲಿ ಸನ್ಮಾನ ಮಾಡಲಾಯಿತು? ಪೊಲೀಸ್ ಠಾಣೆಯಲ್ಲಿ ನಡೆದ ಕಾರ್ಯಕ್ರಮದ ಸ್ವರೂಪವೇನು ಎಂಬ ಪ್ರಶ್ನೆಗಳಿಗೆ ಉತ್ತರ ಬೇಕಾಗಿದೆ.

ಇದೇ ಪ್ರಕರಣಕ್ಕೆ ಸಂಬಂಧಿಸಿದಂತೆ ಮತ್ತೊಂದು ಆರೋಪವೆಂದರೆ, ರೌಡಿ ಶೀಟರ್‌ನ ಬರ್ತ್‌ಡೇ ಪಾರ್ಟಿಯಲ್ಲೂ ಪಿಎಸ್ಐ ಅವರೂ ಭಾಗಿಯಾಗಿದ್ದರು ಎನ್ನಲಾಗುತ್ತಿದೆ. ಒಬ್ಬ ಪೊಲೀಸ್ ಅಧಿಕಾರಿಯು ಅಪರಾಧ ಹಿನ್ನೆಲೆಯುಳ್ಳ ವ್ಯಕ್ತಿಯ ವೈಯಕ್ತಿಕ ಕಾರ್ಯಕ್ರಮದಲ್ಲಿ ಭಾಗಿಯಾಗಿರುವುದು ನಿಜವೇ? ಭಾಗಿಯಾಗಿದ್ದರೆ ಯಾವ ಕಾರಣಕ್ಕಾಗಿ? ಪೊಲೀಸ್ ಅಧಿಕಾರಿಯಾಗಿ ಅವರ ಉಪಸ್ಥಿತಿಗೆ ಇಲಾಖೆಯ ಅನುಮತಿ ಅಥವಾ ಅಧಿಕೃತ ಕಾರಣವಿತ್ತೇ? ಎಂಬ ಪ್ರಶ್ನೆಗಳು ಉದ್ಭವಿಸಿವೆ. ಆದರೆ ಈ ಆರೋಪಗಳ ಸತ್ಯಾಸತ್ಯತೆ ಅಧಿಕೃತ ತನಿಖೆಯಿಂದಲೇ ಸ್ಪಷ್ಟವಾಗಬೇಕಿದೆ. ವೈರಲ್ ಆಗಿರುವ ಫೋಟೋಗಳು ಅಥವಾ ಸಾಮಾಜಿಕ ಜಾಲತಾಣದ ಮಾಹಿತಿಯ ಆಧಾರದ ಮೇಲೆ ಅಂತಿಮ ತೀರ್ಮಾನಕ್ಕೆ ಬರುವುದು ಸೂಕ್ತವಲ್ಲ. ಇದೀಗ ಕೇಳಿಬರುತ್ತಿರುವ ಮತ್ತೊಂದು ಗಂಭೀರ ಆರೋಪವೆಂದರೆ, ಪೊಲೀಸ್ ಇಲಾಖೆಯ ಕಾರ್ಯಕ್ರಮವೊಂದರಲ್ಲೂ ಇದೇ ರೌಡಿಶೀಟರ್ ಭಾಗಿಯಾಗಿದ್ದರು ಎಂಬುದು. ಪೊಲೀಸರೇ ಆಯೋಜಿಸುವ ಕಾರ್ಯಕ್ರಮದಲ್ಲಿ ರೌಡಿಶೀಟರ್‌ನಂತಹ ವ್ಯಕ್ತಿಯೊಬ್ಬರು ಭಾಗಿಯಾಗಿದ್ದರೆ, ಅವರಿಗೆ ಅಲ್ಲಿ ಪ್ರವೇಶ ಹೇಗೆ ದೊರೆಯಿತು ಎಂಬ ಪ್ರಶ್ನೆ ಸಹಜವಾಗಿಯೇ ಮೂಡುತ್ತದೆ. ಪೊಲೀಸ್ ಇಲಾಖೆಯ ಕಾರ್ಯಕ್ರಮಗಳು ಸಾರ್ವಜನಿಕರಲ್ಲಿ ಕಾನೂನು ಮತ್ತು ಪೊಲೀಸ್ ವ್ಯವಸ್ಥೆಯ ಮೇಲಿನ ನಂಬಿಕೆಯನ್ನು ಹೆಚ್ಚಿಸುವ ಉದ್ದೇಶ ಹೊಂದಿರುತ್ತವೆ. ಅಂತಹ ಕಾರ್ಯಕ್ರಮದಲ್ಲಿ ರೌಡಿ ಶೀಟರ್ ಭಾಗಿಯಾಗಿದ್ದಾನೆ ಎಂಬ ಆರೋಪ ಕೇಳಿಬಂದಿರುವುದು ಇಲಾಖೆಯ ಕಾರ್ಯವೈಖರಿ ಕುರಿತು ಚರ್ಚೆಗೆ ಕಾರಣವಾಗಿದೆ.

# ಕಷ್ಟ ಎದುರಿಸಿ, ಸಾಧನೆಯ ಹಾದಿ ಕ್ರಮಿಸಬೇಕು: ಸಾಧಕರ ಜತೆ ಡಾ.ಕೃಷ್ಣ ಕೊಲ್ಹಾರ ಕುಲಕರ್ಣಿ ಸಂವಾದ

**ವಿಜಯಪುರ,ಸೆ.8–**ಕಷ್ಟಗಳನ್ನು ಎದುರಿಸಿ ಸ್ವಯಂ ಸಾಧನೆಯ ಹಾದಿ ತುಳಿಯಬೇಕು ಎಂದು ಖ್ಯಾತ ಲೇಖಕ ಹಾಗೂ ಇತಿಹಾಸ ತಜ್ಞ,ಡಾ. ಕೃಷ್ಣ ಕೊಲ್ಹಾರಕುಲಕರ್ಣಿ ತಿಳಿಸಿದರು.



ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಳಗಾವಿ ವಿಭಾಗದ ವತಿಯಿಂದ ನಗರದ ಬಿ.ಎಲ್.ಡಿ.ಇ ಆವರಣದಲ್ಲಿರುವ ವಚನ ಪಿತಾಮಹ ಡಾ. ಫ.ಗು. ಹಳಕಟ್ಟಿ ಸಂಶೋಧನಾ ಕೇಂದ್ರದಲ್ಲಿ ಸೆ.5ರ ಶನಿವಾರ ಹಮ್ಮಿಕೊಳ್ಳಲಾಗಿದ್ದ ಸಾಧಕರೊಂದಿಗೆ ಸಂವಾದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಬಾಲ್ಯದಿಂದ ಇಲ್ಲಿಯವರೆಗೆ ತಾವು ಸಾಗಿಬಂದ ಸಾಧನಾ ಪಯಣವನ್ನು ಮೆಲುಕು ಹಾಕಿದ ಅವರು, ಜೀವನದಲ್ಲಿ ಎದುರಾದ ಸಮಸ್ಯೆಗಳನ್ನು ನಾವೇ ಧೈರ್ಯದಿಂದ ಮೆಟ್ಟಿ ನಿಲ್ಲಬೇಕು ಎಂದರು. ವಿವಿಧ ಕ್ಷೇತ್ರಗಳಲ್ಲಿ ತಾವು ನಿರ್ವಹಿಸಿದ ವೈವಿಧ್ಯಮಯ ಜವಾಬ್ದಾರಿಗಳು ತಮ್ಮ ಸಾಧನೆಯ ಮೆಟ್ಟಿಲುಗಳಾದ ಬಗೆಯನ್ನು ಇದೇ ವೇಳೆ ಕೃಷ್ಣ ಕೊಲ್ಹಾರ ಕುಲಕರ್ಣಿ ಅವರು ಹಂಚಿಕೊಂಡರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಬೆಳಗಾವಿ ವಿಭಾಗದ ಜಂಟಿ ನಿರ್ದೇಶಕ ಕೆ.ಎಚ್. ಚನ್ನೂರ ಪ್ರಾಸ್ತಾವಿಕವಾಗಿ ಮಾತನಾಡಿ, ಬೆಂಗಳೂರಿನ ಜನಪ್ರಿಯ ಮನೆಯಂಗಳದಲ್ಲಿ ಮಾತುಕತೆ ಮಾದರಿಯನ್ನು ಪ್ರತಿ ಜಿಲ್ಲೆಗೂ ವಿಸ್ತರಿಸುವ ಉದ್ದೇಶದಿಂದ ಪ್ರಸಕ್ತ ಸಾಲಿನಿಂದ ವಿಭಾಗ ಮಟ್ಟದಲ್ಲಿ ಸಾಧಕರೊಂದಿಗೆ ಸಂವಾದ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದರು. ಈ ಸಾಲಿನ ಮೊದಲ ಸಾಧಕರಾಗಿ ಡಾ. ಕೃಷ್ಣ ಕೊಲ್ಹಾರ ಕುಲಕರ್ಣಿ ಆಯ್ಕೆಯಾಗಿರುವುದು ಕಾರ್ಯಕ್ರಮದ ಘನತೆಯನ್ನು ಹೆಚ್ಚಿಸಿದೆ ಎಂದು ತಿಳಿಸಿದರು.

### ಆರೋಗ್ಯಕರ ಜೀವನಶೈಲಿ ಅಳವಡಿಸಿಕೊಳ್ಳಿ: ಡಾ. ಬಸರೆಡ್ಡಿ ಕರೆ

# ಬಳ್ಳಾರಿಯಲ್ಲಿ ಎಚ್ಐವಿ ಜಾಗೃತಿ ಮ್ಯಾರಥಾನ್ 200ಕ್ಕೂ ಹೆಚ್ಚು ವಿದ್ಯಾರ್ಥಿಗಳಿಂದ ಉತ್ಸಾಹದ ಓಟ

**ಬಳ್ಳಾರಿ,ಸೆ.08.**ಮ್ಯಾರಥಾನ್ ಓಟವು ದೈಹಿಕ ಸಾಮರ್ಥ್ಯವನ್ನು ವೃದ್ಧಿಸಿದರೆ, ನಡಿಗೆಯು ಮನೋಬಲ ಮತ್ತು ಆತ್ಮವಿಶ್ವಾಸವನ್ನು ಹೆಚ್ಚಿಸುತ್ತದೆ. ಯುವಜನತೆ ದುಶ್ಚಟಗಳಿಗೆ ಬಲಿಯಾಗದೆ ಉತ್ತಮ ಆರೋಗ್ಯ ಕಾಪಾಡಿಕೊಳ್ಳಬೇಕು ಎಂದು ಜಿಲ್ಲಾ ಆಸ್ಪತ್ರೆಯ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ಬಸರೆಡ್ಡಿ ಅವರು ಕರೆ ನೀಡಿದರು.



ಕರ್ನಾಟಕ ರಾಜ್ಯ ಏಡ್ಸ್ ಪ್ರಿವೆನ್ಷನ್ ಸೊಸೈಟಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಎಚ್ಐವಿ ನಿಯಂತ್ರಣ ಮತ್ತು ನಿರ್ವಹಣಾ ಘಟಕ ಹಾಗೂ ನಗರದ ಪದವಿ ಮತ್ತು ಪದವಿ ಪೂರ್ವ ಕಾಲೇಜುಗಳ ಸಂಯುಕ್ತ ಆಶ್ರಯದಲ್ಲಿ ?ಓಟ ಆರೋಗ್ಯಕ್ಕೆ–ನಡಿಗೆ ಎಚ್ಐವಿ ನಿಯಂತ್ರಣಕ್ಕೆ? ಎಂಬ ಧ್ಯೇಯವಾಕ್ಯದೊಂದಿಗೆ ಮಂಗಳವಾರ ಇಂದಿರಾ ವೃತ್ತದಲ್ಲಿ ಆಯೋಜಿಸಿದ್ದ ಎಚ್ಐವಿ ಜಾಗೃತಿ ಮ್ಯಾರಥಾನ್ ಚಾಲನೆ ನೀಡಿ, ಜಿಲ್ಲಾ ಎಚ್ಐವಿ ನಿಯಂತ್ರಣ ಅಧಿಕಾರಿ ಡಾ. ಇಂದ್ರಾಣಿ ಪ್ರಾಸ್ತಾವಿಕ ಮಾತನಾಡಿ, ಎಚ್ಐವಿ ನಿಯಂತ್ರಣದಲ್ಲಿ ಸಾರ್ವಜನಿಕ ಜಾಗೃತಿ ಅತ್ಯಂತ ಮಹತ್ವದ ಪಾತ್ರ ವಹಿಸುತ್ತದೆ. ವಿದ್ಯಾರ್ಥಿಗಳು ವಿದ್ಯಾಭ್ಯಾಸದ ಜತೆಗೆ ಉತ್ತಮ ಜೀವನಶೈಲಿ ರೂಢಿಸಿಕೊಳ್ಳಬೇಕು ಹಾಗೂ ಇಂತಹ ಸೋಂಕುಗಳಿಂದ ದೂರವಿರಲು ತಮ್ಮ ನಡವಳಿಕೆಯಲ್ಲಿ ಸಕಾರಾತ್ಮಕ ಬದಲಾವಣೆ ತಂದುಕೊಳ್ಳ ಬೇಕು ಎಂದು ಸಲಹೆ ನೀಡಿದರು.

ಇದೇ ವೇಳೆ, ಮೊಬಲೈಸೇಶನ್ ಫಾರ್ ಏಡ್ಸ್ ಸುರಕ್ಷಾ ಯೋಜನೆಯಡಿ ಕ್ಯೂಆರ್ ಕೋಡ್ ಬಳಸಿಕೊಂಡು, ಅಪಾಯದಲ್ಲಿರುವ ಸಾರ್ವಜನಿಕರು ಸಮೀಪದ ಐಸಿಟಿಸಿ ಪರೀಕ್ಷಾ ಕೇಂದ್ರಗಳನ್ನು ಪತ್ತೆಹಚ್ಚಿ ಉಚಿತ ತಪಾಸಣೆ ಮಾಡಿಸಿಕೊಳ್ಳುವ ವಿಧಾನದ ಕುರಿತೂ ಅರಿವು ಮೂಡಿಸಲಾಯಿತು.

ನಗರದ ಇಂದಿರಾ ವೃತ್ತದಲ್ಲಿ ಮ್ಯಾರಥಾನ್‌ಗೆ ಗಣ್ಯರು ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿದರು. ಅಲ್ಲಿಂದ ಪ್ರಾರಂಭವಾದ ಮ್ಯಾರಾಥಾನ್ ಕೂಲ್ ಕಾರ್ನರ್, ಸತ್ಯ ನಾರಾಯಣಪೇಟೆ ಮೇಲ್ಸೇತುವೆ ಹಾಗೂ ಕೆಇಬಿ ವೃತ್ತದ ಮಾರ್ಗವಾಗಿ ಚನ್ನಬಸಪ್ಪ ಲೇಔಟ್ ಎದುರಿನ ಭಾರತ್ ಪೆಟ್ರೋಲ್ ಬಂಕ್‌ವರೆಗೆ ಸಾಗಿ ಮುಕ್ತಾಯಗೊಂಡಿತು.

ನಗರದ ವಿವಿಧ ಪದವಿ, ಪಿಯುಸಿ ಹಾಗೂ ಡಿಪ್ಲೋಮಾ ಕಾಲೇಜುಗಳ 200ಕ್ಕೂ ಅಧಿಕ ವಿದ್ಯಾರ್ಥಿ–ವಿದ್ಯಾರ್ಥಿನಿಯರು ಅತ್ಯಂತ ಉತ್ಸಾಹದಿಂದ ಪಾಲ್ಗೊಂಡಿದ್ದರು.

*ಮ್ಯಾರಥಾನ್ ವಿಜೇತರು:*

ಕಾರ್ಯಕ್ರಮದಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಪ್ರಥಮ ರೂ.5,000, ದ್ವಿತೀಯ ರೂ.3,500 ಹಾಗೂ ತೃತೀಯ ರೂ.2,500 ನಗದು ಬಹುಮಾನದೊಂದಿಗೆ ಪಾರಿತೋಷಕ ನೀಡಿ ಗೌರವಿಸಲಾಯಿತು.

*ಪುರುಷರ ವಿಭಾಗ:*

ಪ್ರಥಮ:ಎಸ್. ಪವನ್ ದ್ವಿತೀಯ: ಜಗದೀಶ್ ಬಿ. ತೃತೀಯ: ಉಮೇಶ್ ಜಿ.

*ಮಹಿಳೆಯರ ವಿಭಾಗ:*

ಪ್ರಥಮ: ಪವಿತ್ರ, ದ್ವಿತೀಯ: ಸಂಧ್ಯಾ ಜಿ. ತೃತೀಯ: ನಾಗೇಶ್ವರಿ

ಕಾರ್ಯಕ್ರಮದಲ್ಲಿ ಡ್ಯಾಪ್ಕು, ಐಸಿಟಿಸಿ, ಮೊಬೈಲ್ ಐಸಿಟಿಸಿ, ಡಿಎಸ್‌ಆರ್‌ಸಿ, ಎಆರ್‌ಟಿ, ಎಸ್‌ಎಸ್‌ಕೆ ಹಾಗೂ ವಿಮುಕ್ತಿ, ಸೌಖ್ಯ, ಬೆಳಕು ಸಮುದಾಯ ಸೇವಾ ಸಂಸ್ಥೆ, ನಿತ್ಯ ಜೀವನ ಮತ್ತು ಎಫ್‌ಪಿಎಐ ಸಂಸ್ಥೆಗಳ ಪ್ರತಿನಿಧಿಗಳು, ರಕ್ತಕೇಂದ್ರದ ಸಿಬ್ಬಂದಿ ಭಾಗವಹಿಸಿದ್ದರು.

### ಕಾಯ್ದೆ ನಿಯಮ ಅರಿಯಲು ಹಿರಿಯರಿಗೆ ಸಲಹೆ

# ಹಿರಿಯ ಸಿವಿಲ್ ನ್ಯಾಯಾಧೀಶ ಅರವಿಂದ ಹಾಗರಗಿ ಸಲಹೆ

**ವಿಜಯಪುರ,ಸೆ.7–**ಹಿರಿಯ ನಾಗರಿಕರ ರಕ್ಷಣೆಗಾಗಿ ಜಾರಿಗೆ ತಂದಿರುವ 2007ರ ಕಾಯ್ದೆ ಜಾರಿಗೆ ತಂದಿದ್ದು, ಈ ಕಾಯ್ದೆ ಮತ್ತು ನಿಯಮಗಳನ್ನು ಹಿರಿಯ ನಾಗರಿಕರು ತಿಳಿದುಕೊಳ್ಳಬೇಕು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಅರವಿಂದ ಹಾಗರಗಿ ಹೇಳಿದರು.

ಅಧಿಕಾರಿಗಳು ಮಾಹಿತಿ ನೀಡಬೇಕು ಎಂದರು. ತಾಲೂಕಾ ಪಂಚಾಯಿತಿ ಮುಖ್ಯ ಕಾರ್ಯ ನಿರ್ವಾಹಣಾಧಿಕಾರಿ ಗುರುಶಾಂತಪ್ಪ ಬೆಳ್ಳುಂಡಗಿ ಮಾತನಾಡಿ, ಹಿರಿಯ ನಾಗರಿಕರಿಗೆ ಇರುವ ಸರ್ಕಾರಿ ಸೌಲಭ್ಯಗಳ ಕುರಿತು ತೊಂದರೆ ಎದುರಾಗದಂತೆ, ಸೌಲಭ್ಯಗಳನ್ನು ತಲುಪಿಸಲು ಹಾಜರಿದ್ದ ವಿವಿಧ ಇಲಾಖೆಗಳ ಅಧಿಕಾರಿಗಳಿಗೆ ಸೂಚನೆ ನೀಡಿದರು.



ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಿಂದ ಹಿರಿಯ ನಾಗರಿಕರ ಕಾಯ್ದೆ –2007, ಹಿರಿಯ ನಾಗರಿಕರಿಗೆ ಕೇಂದ್ರ ಮತ್ತು ರಾಜ್ಯ ಸರ್ಕಾರದ ಯೋಜನೆಗಳು ಸೈಬರ್ ಮತ್ತು ಡಿಜಿಟಲ್ ವಂಚನೆ ಕುರಿತು ಹಮ್ಮಿಕೊಳ್ಳಲಾಗಿದ್ದ ಕಾನೂನು ಅರಿವು ಮತ್ತು ನೆರವು ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಆದ್ದರಿಂದ ಕಾರ್ಯಕ್ರಮದಲ್ಲಿ ಪಾಲ್ಗೊಂಡಿರುವ ಹಿರಿಯ ನಾಗರಿಕರಿಗೆ ಇರುವ ಕಾನೂನುಗಳ ಕುರಿತು

ಸಂಪನ್ಮೂಲ ವ್ಯಕ್ತಿಗಳಾದ ಬಾಬು ಅವತಾಡೆ ಮಾತನಾಡಿ, ಹಿರಿಯ ನಾಗರಿಕರ ಕಾಯ್ದೆಯ ಪ್ರಮುಖ ಅಂಶಗಳ ಕುರಿತು, ಆಸ್ತಿ ವರ್ಗಾವಣೆ ಹಾಗೂ ನಿರ್ವಹಣಾ ವೆಚ್ಚಗಳ ಕುರಿತು ಹಾಜರಿದ್ದ ಹಿರಿಯ ನಾಗರಿಕಗೆ ಅರಿವು ಮೂಡಿಸಿದರು,

ನ್ಯಾಯವಾದಿ ಆರ್. ಕೆ. ಪೂಜಾರಿ ಮಾತನಾಡಿ, ಇತ್ತೀಚಿಗೆ ಎದುರಾಗುತ್ತಿರುವ ಡಿಜಿಟಲ್ ವಂಚನೆ ಕುರಿತು ಹಾಗೂ ಹಿರಿಯ ನಾಗರಿಕರಿಗೆ ಇರುವ ಕೇಂದ್ರ ಮತ್ತು ರಾಜ್ಯ ಸರ್ಕಾರದ ಯೋಜನೆಗಳ ಕುರಿತು ಮಾಹಿತಿ ನೀಡಿದರು.

# ನಗರಗಳ ಸಮಗ್ರ ಅಭಿವೃದ್ಧಿ ಸರ್ಕಾರದ ಗುರಿ: ಡಾ.ಯತೀಂದ್ರ



**ರಾಯಚೂರು, ಸೆ. 8:** ನಗರವನ್ನು ಸಮಗ್ರವಾಗಿ ಅಭಿವೃದ್ಧಿಪಡಿಸುವ ನಿಟ್ಟಿನಲ್ಲಿ ಮೂಲಸೌಕರ್ಯ, ನೈರ್ಮಲ್ಯ ಮತ್ತು ಕುಡಿಯುವ ನೀರಿನ ಪೂರೈಕೆ ಯೋಜನೆಗಳನ್ನು ಚುರುಕುಗೊಳಿಸುವಂತೆ ನಗರಾಭಿವೃದ್ಧಿ ಸಚಿವ ಡಾ. ಯತೀಂದ್ರ ಸಿದ್ದರಾಮಯ್ಯ ಅವರು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ರಾಯಚೂರಿನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಭವನದಲ್ಲಿ ಮಹಾನಗರ ಪಾಲಿಕೆ ಹಾಗೂ ರಾಯಚೂರು ನಗರಾಭಿವೃದ್ಧಿ ಪ್ರಾಧಿಕಾರದ ಪ್ರಗತಿ ಪರಿಶೀಲನಾ ಸಭೆ ನಡೆಸಿ ಅವರು ಮಾತನಾಡಿ, ನಗರದ ಸಾರ್ವಜನಿಕ ಸೌಲಭ್ಯಗಳನ್ನು ಬಲಪಡಿಸಲು ಶೇ 100ರಷ್ಟು ಕಸ ವಿಂಗಡಣೆ, 24/7 ನಿರಂತರ ಕುಡಿಯುವ ನೀರು ಪೂರೈಕೆ, ಗೃಹ ಬಳಕೆಯ ಒಳಚರಂಡಿ ಜೋಡಣೆ (ಗಉಳ) ಹೆಚ್ಚಳ ಹಾಗೂ ಮಹಾತ್ಮಾ ಗಾಂಧಿ ನಗರ ವಿಕಾಸ ಯೋಜನೆಯಡಿ ರೂ.185 ಕೋಟಿ ರೂ. ವೆಚ್ಚದ ಕಾಮಗಾರಿಗಳಿಗೆ ಸೂಕ್ತ ರೂಪುರೇಷೆ ಸಿದ್ಧಪಡಿಸುವಂತೆ ಅಧಿಕಾರಿಗಳಿಗೆ ತಿಳಿಸಿದರು.

ಇ–ವೇಸ್ಟ್ ಬಳಸಿ ಸಿದ್ಧಪಡಿಸಲಾಗಿದ್ದ ಸುಂದರ ಅಲಂಕಾರಿಕ ವಸ್ತುಗಳ ಪ್ರದರ್ಶನವನ್ನು ವೀಕ್ಷಿಸಿದ ಸಚಿವರು, ತ್ಯಾಜ್ಯವನ್ನು ಅತ್ಯಂತ ಸೃಜನಶೀಲವಾಗಿ ಮರುಬಳಕೆ ಮಾಡಿದ ಸಿಬ್ಬಂದಿಯ ಕಾರ್ಯವನ್ನು ಶ್ಲಾಘಿಸಿ ಅಭಿನಂದಿಸಿದರು. ಸಾರ್ವಜನಿಕರ ಆಸ್ತಿ ಸುರಕ್ಷತೆ ಹಾಗೂ ಪಾರದರ್ಶಕ ಆಡಳಿತಕ್ಕೆ ವೇಗ ನೀಡುವ ನಿಟ್ಟಿನಲ್ಲಿ ಫಲಾನುಭವಿಗಳಿಗೆ ಈ–ಖಾತಾ ವಿತರಿಸಿದ ಸಚಿವರು ಡಿಜಿಟಲೀಕರಣದ ಮೂಲಕ ಯಾವುದೇ ಅಡೆತಡೆಯಿಲ್ಲದೆ ಸಾರ್ವಜನಿಕರಿಗೆ ತ್ವರಿತವಾಗಿ ಆಸ್ತಿ ದಾಖಲೆ ತಲುಪಿಸಲು ಅಧಿಕಾರಿಗಳಿಗೆ ಸೂಚಿಸಿದರು. ಜೊತೆಗೆ, ನಗರ ನೈರ್ಮಲ್ಯಕ್ಕೆ ಶ್ರಮಿಸುವ ಪೌರ ಕಾರ್ಮಿಕರಿಗೆ ಸಮವಸ್ತ್ರ ವಿತರಿಸಿದರು.

ನಗರದಲ್ಲಿ ಶೇ 100 ರಷ್ಟು ಕಸ ವಿಂಗಡಣೆಯನ್ನು ಕಡ್ಡಾಯಗೊಳಿಸಲು ತಿಳಿಸಿದ ಅವರು, ತಕ್ಷಣವೇ ಕಸ ವಿಂಗಡಣೆ ಯಂತ್ರಗಳು ಮತ್ತು ಹೊಸ ತ್ಯಾಜ್ಯ ಸಂಗ್ರಹಣೆ ವಾಹನಗಳನ್ನು ಖರೀದಿಸಲು ನಿರ್ದೇಶಿಸಿದರು. ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ 301 ಪೌರಕಾರ್ಮಿಕರ ಜೊತೆಗೆ, ಬಾಕಿ ಇರುವ 138 ಹುದ್ದೆಗಳನ್ನು (ಒಟ್ಟು 439) ಶೀಘ್ರ ಭರ್ತಿ ಮಾಡಲು ಸೂಚಿಸಿದರು. ದಿನದ 24 ಗಂಟೆಯೂ ನಿರಂತರ ಕುಡಿಯುವ ನೀರು ಪೂರೈಕೆಗೆ ಕ್ರಮ ವಹಿಸಲು ಹಾಗೂ ಬಾಕಿ ನೀರಿನ ಬಿಲ್ ವಸೂಲಿ ಚುರುಕುಗೊಳಿಸಲು ಸೂಚಿಸಿದರು. ಗೃಹ ಬಳಕೆಯ ಒಳಚರಂಡಿ ಜೋಡಣೆ ವೇಗಗೊಳಿಸಿ, ಖಳಿಕ ಸಾಮರ್ಥ್ಯವನ್ನು ಹಾಲಿ 33.5 MLD ಯಿಂದ 50 ಒಐಆ ಗೆ ಹೆಚ್ಚಿಸಲು ಅಗತ್ಯ ಕ್ರಮ ಕೈಗೊಳ್ಳಲು ತಿಳಿಸಿದರು.

'ಅಮೃತ್ 2.0' ಯೋಜನೆಯಡಿ 4.05 ಕೋಟಿ ವೆಚ್ಚದ ಹೊಸ ಪ್ರಸ್ತಾವನೆಗೆ ಅನುಮೋದನೆ ನೀಡಲಾಗಿದೆ. ರಸ್ತೆ, ಒಳಚರಂಡಿ, ಪಾದಚಾರಿ ಮಾರ್ಗ ಹಾಗೂ ನೀರಿನ ಘಟಕ ನಿರ್ಮಾಣಕ್ಕಾಗಿ 'ಮಹಾತ್ಮ ಗಾಂಧಿ ನಗರ ವಿಕಾಸ ಯೋಜನೆ'ಯಡಿ 185 ಕೋಟಿ ಅನುದಾನದ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಲಾಗಿದ್ದು, ಈ ಯೋಜನೆಗೆ ಸೂಕ್ತ ರೂಪುರೇಷೆ ಸಿದ್ಧಪಡಿಸಲು ಅಧಿಕಾರಿಗಳಿಗೆ ನಿರ್ದೇಶಿಸಿದರು.

# ಬರಪೀಡಿತ ಘೋಷಣೆಗೆ ಕೇಂದ್ರದ ಮಾನದಂಡ ಮುಖ್ಯ: ಈಶ್ವರ ಖಂಡ್ರೆ

**ಬೀದರ, ಸೆ. 8:** ರೈತ ಸಂಘ ಸೇರಿದಂತೆ ವಿವಿಧ ಸಂಘ ಸಂಸ್ಥೆಗಳು ಮುಖಂಡರು ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ನಡೆಸುತ್ತಿದ್ದ ಧರಣಿ ಸತ್ಯಾಗ್ರಹ ಸ್ಥಳಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಭೇಟಿ ನೀಡಿದರು.




ನಗರದ ಮಹಾತ್ಮ ಗಾಂಧಿ ವೃತ್ತದಲ್ಲಿ ಕಳೆದ ಏಳು ದಿನಗಳಿಂದ ನಡೆಸುತ್ತಿದ್ದ ರೈತರ ಧರಣಿ ಸತ್ಯಾಗ್ರಹ ನಿರತ ಟೆಂಟ್ ಸ್ಥಳಕ್ಕೆ ಸೋಮವಾರ ಭೇಟಿ ನೀಡಿದ ಅವರು ರೈತ ನಾಯಕ, ಗಾಂಧಿವಾದಿ ನಂಜುಂಡಸ್ವಾಮಿ ಭಾವಚಿತ್ರಕ್ಕೆ ನಮನ ಸಲ್ಲಿಸಿದರು.

ಬಳಿಕ ಮಾತನಾಡಿದ ಸಚಿವರು, ಜಿಲ್ಲೆಯ ಉಳಿದ ತಾಲ್ಲೂಕು ಬರಪೀಡಿತ ಘೋಷಣೆ ಸೇರಿ ವಿವಿಧ ಬೇಡಿಕೆ ಈಡೇರಿಸುವಂತೆ ರೈತರು ಧರಣಿ ಸತ್ಯಾಗ್ರಹ ನಡೆಸುತ್ತಿರುವುದು ಗಮನಕ್ಕೆ ಬಂದಿದೆ. ರೈತರ ಪರವಾಗಿ ರಾಜ್ಯ ಸರ್ಕಾರ ಸದಾಕಾಲ ನಿಲ್ಲಲಿದೆ. ಬರಪೀಡಿತ ತಾಲ್ಲೂಕು ಘೋಷಣೆ ಮಾಡುವಲ್ಲಿ ರಾಜ್ಯ ಸರ್ಕಾರದ ಪಾತ್ರ ಇರುವುದಿಲ್ಲ. ಇದರಲ್ಲಿ ಕೇಂದ್ರ ಸರ್ಕಾರದ ಮಾನದಂಡ ಅತ್ಯಂತ ಮುಖ್ಯವಾಗಿರುತ್ತದೆ. ವೈಜ್ಞಾನಿಕ ಮಾರ್ಗಸೂಚಿ ಅನುಸರಿಸಿ ಕೇಂದ್ರ ಸರ್ಕಾರ ಬರ ಘೋಷಣೆ ಬಗ್ಗೆ ನಿರ್ಧಾರ ಕೈಗೊಳ್ಳುತ್ತದೆ ಎಂದರು.

ಮುಂಗಾರಿನಲ್ಲಿ ಶೇ 60ರಷ್ಟು ಮಳೆ ಕೊರತೆಯಾದಲ್ಲಿ ಮತ್ತು ಸತತ ಮೂರು ವಾರ ಮಳೆ ಸುರಿಯದಿದ್ದರೇ ಕೇಂದ್ರ ಸರ್ಕಾರ ನಿಯಮಾನುಸಾರ ಬರ ಪೀಡಿತ ತಾಲ್ಲೂಕು ಎಂದು ಘೋಷಣೆ ಮಾಡುತ್ತದೆ. ಜಿಲ್ಲೆಯ ನಾಲ್ಕು ತಾಲ್ಲೂಕುಗಳಲ್ಲಿ ಮಳೆಯ ಕೊರತೆ ತೀವ್ರತೆ ಆಗಿದ್ದರಿಂದ ಬರಪೀಡಿತ ಪಟ್ಟಿಗೆ ಸೇರಿವೆ. ಉಳಿದ ತಾಲ್ಲೂಕುಗಳು ಬರಪೀಡಿತ ಪಟ್ಟಿಯಿಂದ ಹೊರಗುಳಿದಿವೆ. ಆದರೂ ಕೂಡ ನಿಯಮಗಳು ಪರಿಷ್ಕರಿಸಿ ಎರಡನೇ ಹಂತದ ಬರಪೀಡಿತ ಪಟ್ಟಿಯಲ್ಲಿ ಭಾಲ್ಕಿ, ಹುಲಸೂರು, ಔರಾದ್ ಮತ್ತು ಕಮಲನಗರ ತಾಲ್ಲೂಕು ಬರಪೀಡಿತ ಪಟ್ಟಿಗೆ ಸೇರ್ಪಡೆ ಮಾಡುವಂತೆ ಕೇಂದ್ರಕ್ಕೆ ರಾಜ್ಯದಿಂದ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದರು.

ಕೇಂದ್ರ ಮಟ್ಟದಲ್ಲಿ ನಿರಂತರ ಪ್ರಯತ್ನ ಮತ್ತು ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆ ಬಗ್ಗೆ ನಿರಂತರ ಜಾಗೃತಿ ಪರಿಣಾಮ ಗಡಿ ಜಿಲ್ಲೆ ಬೀದರ್‌ಗೆ ದಾಖಲೆ ರೀತಿಯಲ್ಲಿ ?264 ಕೋಟಿ ಬಿಡುಗೊಳಿಸಿ ರೈತರ ಖಾತೆಗೆ ಜಮಾ ಮಾಡಲಾಗಿದೆ. ಜತೆಗೆ ಕಳೆದ ವರ್ಷ ಪ್ರವಾಹ ಉಂಟಾದ ಸಂದರ್ಭದಲ್ಲಿ ರೂ.260 ಕೋಟಿ ಬಿಡುಗಡೆಗೊಳಿಸಿ ರೈತರ ನೆರವಿಗೆ ಧಾವಿಸಲಾಗಿದೆ. ಹಾಗಾಗಿ, ನಾವು ಯಾವಾಗಲೂ ರೈತರ ಪರವಾಗಿದ್ದೇವೆ. ರೈತರು ಸರಕಾರದ ನಿಯಮಗಳನ್ನು ಅರ್ಥಮಾಡಿಕೊಂಡು ಸಹಕಾರ ನೀಡಬೇಕು ಎಂದು ತಿಳಿಸಿದರು.ಜಿಲ್ಲಾ ರೈತಸಂಘದ ಅಧ್ಯಕ್ಷ ಮಲ್ಲಿಕಾರ್ಜುನ ಸ್ವಾಮಿ ಮಾತನಾಡಿ, ಜಿಲ್ಲೆಯಲ್ಲಿ ಮಳೆಯ ಕೊರತೆ ಎದುರಾಗಿದೆ ಗಡಿಜಿಲ್ಲೆ ಬೀದರ್ ಸಂಪೂರ್ಣ ಬರಪೀಡಿತ ಪ್ರದೇಶ ಎಂದು ಘೋಷಣೆ ಮಾಡುವುದರ ಜತೆಗೆ ರೈತರ ಸಂಪೂರ್ಣ ಸಾಲಮನ್ನಾ, ಟನ್ ಕಬ್ಬಿಗೆ ರೂ.5 ಸಾವಿರ ನಿಗದಿ ಪಡಿಸಬೇಕು ಎಂದು ಒತ್ತಾಯಿಸಿದರು.

## ಧರಣಿ ಹಿಂಪಡೆದ ರೈತರು

**ಕಳೆದ ಏಳು ದಿನಗಳಿಂದ ಅಹೋರಾತ್ರಿ ನಡೆಸುತ್ತಿದ್ದ ಧರಣಿ ಸತ್ಯಾಗ್ರಹವನ್ನು ರೈತರು ಹಿಂಪಡೆದಿದ್ದಾರೆ. ಈ ಬಗ್ಗೆ ಜಿಲ್ಲಾ ರೈತಸಂಘದ ಅಧ್ಯಕ್ಷ ಮಲ್ಲಿಕಾರ್ಜುನ ಸ್ವಾಮಿ ಮಾತನಾಡಿ, 'ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರು ರೈತರ ಧರಣಿ ಸತ್ಯಾಗ್ರಹ ಸ್ಥಳಕ್ಕೆ ಭೇಟಿ ರೈತರಿಗೆ ಮನುವರಿಕೆ ಮಾಡಿಕೊಡುವುದರ ಜತೆಗೆ ನಮ್ಮ ವಿವಿಧ ಬೇಡಿಕೆ ಈಡೇರಿಕೆಗೆ ಬಗ್ಗೆ ಕೇಂದ್ರದ ಗಮನಕ್ಕೆ ತರುವುದಾಗಿ ಭರವಸೆ ನೀಡಿದ್ದಾರೆ. ಈ ಹಿನ್ನೆಲೆಯಲ್ಲಿ ಧರಣಿ ಸತ್ಯಾಗ್ರಹ ಹಿಂಪಡೆದಿರುವುದಾಗಿ ತಿಳಿಸಿದರು. ಧರಣಿ ಸತ್ಯಾಗ್ರಹಕ್ಕೆ ಸಹಕಾರ ನೀಡಿದ ರೈತರು ಸೇರಿ ವಿವಿಧ ಪಕ್ಷದ ಮುಖಂಡರು, ವಿವಿಧ ಸಂಘ ಸಂಸ್ಥೆಗಳ ಮುಖಂಡರಿಗೆ ಧನ್ಯವಾದ ತಿಳಿಸಿದರು.**

# ವಿವಿಧ ಕಾಮಗಾರಿಗಳಿಗೆ ಚಾಲನೆ ನೀಡಿದ ಶಾಸಕ ನಾರಾ ಭರತ್‌ರೆಡ್ಡಿ

ಬಳ್ಳಾರಿ, ಸೆ.08: ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿಯವರು ಮಂಗಳವಾರ ನಗರದ ವಿವಿಧೆಡೆ ಭೂಮಿ ಪೂಜೆ ನೆರವೇರಿಸುವ ಮೂಲಕ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿದರು.



ನಗರದ ವಾರ್ಡ್ ಸಂಖ್ಯೆ 21ರ ವ್ಯಾಪ್ತಿಯ ಸುಷ್ಮಾ ಸ್ವರಾಜ್ ಬಡಾವಣೆಯ ಎಚ್.ಲಕ್ಷ್ಮೀಕಾಂತ್ ಅವರ ನಿವಾಸದಿಂದ ಬಿ.ಶ್ರೀನಿವಾಸ ಅವರ ನಿವಾಸದವರೆಗೆ ರಸ್ತೆ ಹಾಗೂ 4ನೇ ಅಡ್ಡ ರಸ್ತೆಯ ಅಭಿವೃದ್ಧಿ ಕಾಮಗಾರಿಗೆ (ಅಂದಾಜು 90 ಲಕ್ಷ ರೂ.ಗಳು) ಭೂಮಿಪೂಜೆ ನೆರವೇರಿಸುವ ಮೂಲಕ ಚಾಲನೆ ನೀಡಿದರು. ಅದೇ ರೀತಿ ನಗರದ ವಾರ್ಡ್ ಸಂಖ್ಯೆ 24ರ ವ್ಯಾಪ್ತಿಯ ಕಪ್ಪಗಲ್ ರಸ್ತೆಯ 7ನೇ ಅಡ್ಡ ರಸ್ತೆಯ ಅಭಿವೃದ್ಧಿ ಕಾಮಗಾರಿಗೆ (ಅಂದಾಜು 1 ಕೋಟಿ ರೂ.ಗಳು) ಭೂಮಿ ಪೂಜೆ ನೆರವೇರಿಸುವ ಮೂಲಕ ಚಾಲನೆ ನೀಡಿದರು.

ಬಳ್ಳಾರಿ ನಗರದ ವಾರ್ಡ್ ಸಂಖ್ಯೆ 17 ಹಾಗೂ 18ನ್ನು ಸಂಪರ್ಕಿಸುವ ವಿವಿಧ ರಸ್ತೆಗಳ ಅಭಿವೃದ್ಧಿಗಾಗಿ (ಅಂದಾಜು 1 ಕೋಟಿ ರೂ.ಗಳ ವೆಚ್ಚ) ಹನುಮಾನ ನಗರದ ರಮ್ಯಾ ಬಡಾವಣೆಯ ಬಳಿ ಇಂದು ಭೂಮಿ ಪೂಜೆ ನೆರವೇರಿಸುವ ಮೂಲಕ ಶಾಸಕ ನಾರಾ ಭರತ್ ರೆಡ್ಡಿಯವರು ಚಾಲನೆ ನೀಡಿದರು.

ಅದೇ ರೀತಿ ಬಳ್ಳಾರಿ ನಗರದ ವಾರ್ಡ್ ಸಂಖ್ಯೆ 9ರ ವ್ಯಾಪ್ತಿಯ ವೆಂಕಟರಮಣ ನಗರದಲ್ಲಿ ಇಂದು ವಿವಿಧ ರಸ್ತೆಗಳನ್ನು ಸಂಪರ್ಕಿಸುವ ರಸ್ತೆ ಕಾಮಗಾರಿಗೆ (ಅಂದಾಜು ವೆಚ್ಚ 1 ಕೋಟಿ ರೂ.ಗಳು) ಭೂಮಿ ಪೂಜೆ ನೆರವೇರಿಸುವ ಮೂಲಕ ಚಾಲನೆ ನೀಡಿದರು.

# ಕೆಪಿಎಸ್‌ಸಿ ಅಕ್ರಮ ಪ್ರಕರಣ: ಬಸವರಾಜ್ ಕನ್ನಾಳೆಯ 17 ಖಾತೆ ಸ್ಥಗಿತ

**ಬೀದರ, ಸೆ. 8:** ಕರ್ನಾಟಕ ಲೋಕಸೇವಾ ಆಯೋಗದ (ಕೆಪಿಎಸ್‌ಸಿ) ಅಕ್ರಮ ಪ್ರಕರಣದಲ್ಲಿ ಬಂಧಿತರಾಗಿರುವ ಜಿಲ್ಲೆಯ ಭಾಲ್ಕಿ ತಾಲ್ಲೂಕಿನ ಆರೋಪಿ ಬಸವರಾಜ್ ಕನ್ನಾಳೆ ಅವರ ಹಣಕಾಸು ವ್ಯವಹಾರಗಳ ಬೆಂಬತ್ತಿರುವ ಸಿಐಡಿ ತನಿಖಾಧಿಕಾರಿಗಳು, ತಮ್ಮ ಸಂಬಂಧಿಕರು ಹಾಗೂ ಸ್ನೇಹಿತರ ಹೆಸರಿನಲ್ಲಿ ಕನ್ನಾಳೆ ವಿವಿಧ ಬ್ಯಾಂಕ್‌ಗಳಲ್ಲಿ ತೆರೆದಿರುವ 17 ಖಾತೆಗಳನ್ನು 'ಫ್ರೀಜ್' (ಹಣ ವರ್ಗಾವಣೆಗೆ ತಡೆ) ಮಾಡಿಸಿದ್ದಾರೆ.

ವಾಮಮಾರ್ಗ ಹಿಡಿದು ಪಶು ವೈದ್ಯಾಧಿಕಾರಿ ಹುದ್ದೆ ಗಿಟ್ಟಿಸಲು ಮುಂದಾಗಿದ್ದ ಅಭ್ಯರ್ಥಿಗಳು ಲಕ್ಷಾಂತರ ರೂಪಾಯಿಯನ್ನು ಮುಂಗಡವಾಗಿ ಕನ್ನಾಳೆಗೆ ನೀಡಿದ್ದರು. ಆ ಹಣವನ್ನು, ಬೀದರ್ ಜಿಲ್ಲೆ ಭಾಲ್ಕಿ ಪಟ್ಟಣದ ಲೆಕ್ಚರರ್ ಕಾಲೊನಿಯಲ್ಲಿ ಇರುವ ಓಂ ಲಕ್ಷ್ಮಿ ಸೌಹಾರ್ದ ಸಹಕಾರ ಸಂಘ ಹಾಗೂ ರಾಷ್ಟ್ರೀಕೃತ ಬ್ಯಾಂಕ್‌ಗಳಲ್ಲಿ ಕನ್ನಾಳೆ ಜಮೆ ಮಾಡಿದ್ದರು. ಆ ಖಾತೆಗಳನ್ನು ಪತ್ತೆಹಚ್ಚಿ ಹಣ ವರ್ಗಾವಣೆಗೆ ತಡೆ ಒಡ್ಡಲಾಗಿದೆ ಎಂದು ಮೂಲಗಳು ಹೇಳಿವೆ.

ಸಹಕಾರ ಸಂಘದ ನಿರ್ದೇಶಕರೊಬ್ಬರ ನೆರವು ಪಡೆದಿದ್ದ ಕನ್ನಾಳೆ, ಹಲವು ಖಾತೆಗಳನ್ನು ತೆರೆದಿದ್ದರು. ಆ ಖಾತೆಗಳಿಗೆ ಅಭ್ಯರ್ಥಿಗಳಿಂದ ಹಣ ವರ್ಗಾವಣೆ ಮಾಡಿಸಿಕೊಂಡಿದ್ದರು ಎಂದು ಸಿಐಡಿ ಪೊಲೀಸರು ಹೇಳಿದರು.

ಕಳೆದ ನಾಲ್ಕು ದಿನಗಳಿಂದ ಬಸವರಾಜ್ ಕನ್ನಾಳೆಯನ್ನು ತೀವ್ರ ವಿಚಾರಣೆಗೆ ಒಳಪಡಿಸಲಾಗಿದೆ. ಹಲವು ಅಭ್ಯರ್ಥಿಗಳಿಂದ ಮುಂಗಡ ಹಣ ಪಡೆದುಕೊಂಡಿರುವುದಾಗಿ ತಪ್ಪೊಪ್ಪಿಕೊಂಡಿದ್ದಾರೆ ಎಂದು ಸಿಐಡಿ ತನಿಖಾ ಮೂಲಗಳು ತಿಳಿಸಿವೆ.

ದೇವನಹಳ್ಳಿಯಲ್ಲಿರುವ, ಕನ್ನಾಳೆಗೆ ಸೇರಿದ ಫ್ಲ್ಯಾಟ್ ಮೇಲೆ ಸಿಐಡಿ ಪೊಲೀಸರು ಶುಕ್ರವಾರ ದಾಳಿ ನಡೆಸಿ ಪರಿಶೀಲನೆ ನಡೆಸಿದರು. ಬೆಳಿಗ್ಗೆ 11ರಿಂದ ಮಧ್ಯಾಹ್ನ 1ರವರೆಗೂ ಶೋಧ ಕಾರ್ಯ ನಡೆಸಿದರು. ಈ ವೇಳೆ, ಅಕ್ರಮಕ್ಕೆ ಸಂಬಂಧಿಸಿದ ಕೆಲವು ದಾಖಲೆಗಳು ಪತ್ತೆಯಾಗಿವೆ.

ನೋಟಿಸ್ ಜಾರಿಯಾದ ಬೆನ್ನಲ್ಲೇ ಗುರುವಾರ ರಾತ್ರಿಯೇ ಸಿಐಡಿ ಕಚೇರಿಗೆ ಬಂದಿದ್ದ ಆಯೋಗದ ಹಿಂದಿನ ಅಧ್ಯಕ್ಷ ಶಿವಶಂಕರಪ್ಪ ಸಾಹುಕಾರ ಅವರು ತನಿಖಾಧಿಕಾರಿಗಳ ಎದುರು ಹಾಜರಾಗಿದ್ದರು. ದಾಖಲೆ ಪ್ರಸ್ತುತಪಡಿಸಿ ಹಾಗೂ ವಿಚಾರಣೆಗೆ ಬರಲು ಸಮಯ ಕೋರಿದರು.

ಹೈಕೋರ್ಟ್‌ನಲ್ಲಿ ಸಲ್ಲಿಸಿರುವ ನಿರೀಕ್ಷಣಾ ಜಾಮೀನು ಅರ್ಜಿಯು ಸೆ. 7ಕ್ಕೆ ವಿಚಾರಣೆಗೆ ಬರಲಿದ್ದು, ಅಲ್ಲಿಯವರೆಗೂ ಕಾಲಾವಕಾಶ ನೀಡುವಂತೆ ಕೋರಿ ತೆರಳಿದರು ಎಂದು ಗೊತ್ತಾಗಿದೆ. ಪ್ರಕರಣದ ಮತ್ತೊಬ್ಬ ಆರೋಪಿ ಶಾಂತಾ ಹೊಸಮನಿ



ಅವರಿಗೂ ಸಿಐಡಿ 2ನೇ ನೋಟಿಸ್ ಜಾರಿ ಮಾಡಿದೆ. ಈ ಹಿಂದೆ ನೀಡಿದ್ದ ನೋಟಿಸ್‌ಗೆ ಅವರು ಪ್ರತಿಕ್ರಿಯೆ ನೀಡಿರಲಿಲ್ಲ.



ಬೆಂಗಳೂರಿನ ಶಿವಾಜಿನಗರದ ಸೇಂಟ್ ಮೇರಿಸ್ ಬೆಸಿಲಿಕಾದಲ್ಲಿ ವಾರ್ಷಿಕ ಸೇಂಟ್ ಮೇರಿಸ್ ಹಬ್ಬವು ಮಂಗಳವಾರ ವಿಶೇಷ ಸಾಮೂಹಿಕ ಮತ್ತು ಭವ್ಯ ರಥೋತ್ಸವದೊಂದಿಗೆ ಮುಕ್ತಾಯವಾಯಿತು.

## ಮಂಗಳೂರು ಜಿಲ್ಲಾ ಕಾರಾಗೃಹದ ಮೇಲೆ ಪೊಲೀಸರ ದಾಳಿ, 10 ಮೊಬೈಲ್ ವಶ



**ಮಂಗಳೂರು, ಸೆ.8:** ಜಿಲ್ಲಾ ಕಾರಾಗೃಹದಲ್ಲಿ ನ್ಯಾಯಾಂಗ ಬಂಧನದಲ್ಲಿರುವ ಕೈದಿಗಳು ನಿಷೇಧಿತ ಮೊಬೈಲ್‌ಗಳನ್ನು ಬಳಸುತ್ತಿರುವ ಬಗ್ಗೆ ಖಚಿತ ಮಾಹಿತಿ ಪಡೆದ ಮಂಗಳೂರು ಪೊಲೀಸರು, ಸೆ.8ರ ರಾತ್ರಿ ಮಂಗಳೂರು ಜಿಲ್ಲಾ ಕಾರಾಗೃಹಕ್ಕೆ ದಿಢೀರ್ ದಾಳಿ ನಡೆಸಿ ತಪಾಸಣೆ ನಡೆಸಿದ್ದಾರೆ. ತಪಾಸಣೆ ವೇಳೆ ಕಾರಾಗೃಹದ ಎ-ಬ್ಲಾಕ್‌ನಲ್ಲಿದ್ದ 9 ಕೈದಿಗಳಿಂದ ಅಕ್ರಮವಾಗಿ ಬಚ್ಚಿಟ್ಟಿದ್ದ 10 ಮೊಬೈಲ್ ಸ್ಮಾರ್ಟ್‌ಫೋನ್‌ಗಳನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ. ಮೊಬೈಲ್‌ಗಳು ಪತ್ತೆಯಾದ ಕೈದಿಗಳನ್ನು ರಿಫತ್ ಅಲಿ, ಇಬ್ರಾಹಿಂ ಖಲೀಲ್, ಅಸ್ಕ್ ಅಲಿಯಾಸ್ ಬುಟ್ಟು ಅಸ್ಕ್, ಅರ್ಷದ್, ದಾವುದ್ ಫರ್ವೇಜ್, ನಝುರತ್ ಅಲಿ, ಶಿಫಾನ್, ಅಬ್ದುಲ್ ಸಾದಿಕ್ ಹಾಗೂ ಅಫಜ್ ಎಂದು ಗುರುತಿಸಲಾಗಿದೆ. ಪೊಲೀಸ್ ಮಾಹಿತಿಯಂತೆ, ಮೊದಲ ನಾಲ್ವರು ತೊಕ್ಕೊಟ್ಟು ಬಳಿ ನಡೆದ ಆಸಿಫ್ ಕೊಲೆ ಪ್ರಕರಣದ ಆರೋಪಿಗಳಾಗಿದ್ದಾರೆ. 5ರಿಂದ 8ನೇ ಕೈದಿಗಳು ಎನ್‌ಡಿಪಿಎಸ್ ಡ್ರಗ್ ಪೆಡ್ಲಿಂಗ್ ಪ್ರಕರಣಗಳ ಆರೋಪಿಗಳಾಗಿದ್ದು, 9ನೇ ಕೈದಿ ಕಂಕನಾಡಿ ನಗರ ಠಾಣೆಯಲ್ಲಿ ದಾಖಲಾಗಿರುವ ಕೊಲೆ ಪ್ರಕರಣದ ಆರೋಪಿಯಾಗಿದ್ದಾನೆ. ಕೈದಿಗಳು ಮೊಬೈಲ್‌ಗಳನ್ನು ಬಳಸುತ್ತಿರುವ ಬಗ್ಗೆ ದೊರೆತ ಮಾಹಿತಿಯ ಆಧಾರದ ಮೇಲೆ ಬರ್ಕೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದೆ. ವಶಪಡಿಸಿಕೊಂಡಿರುವ ಮೊಬೈಲ್‌ಗಳ ಬಳಕೆ ಹಾಗೂ ಅವುಗಳನ್ನು ಕಾರಾಗೃಹದೊಳಗೆ ಯಾರು ಪೂರೈಸಿದರು ಎಂಬುದರ ಕುರಿತು ಬರ್ಕೆ ಪೊಲೀಸರು ತನಿಖೆ ಮುಂದುವರಿಸಿದ್ದಾರೆ. ಪ್ರಕರಣಕ್ಕೆ ಸಂಬಂಧಿಸಿದ ಇತರ ಮಾಹಿತಿಗಳನ್ನೂ ಪೊಲೀಸರು ಪರಿಶೀಲಿಸುತ್ತಿದ್ದಾರೆ

## ಬಿಜೆಪಿ ಬಳ್ಳಾರಿ ಚಲೋ: ನಾಳಿನ ಸಮಾರೋಪ ಸಮಾರಂಭದ ಸಿದ್ಧತೆಗೆ ಮುಂದಾದ ಬಿಜೆಪಿ ನಾಯಕರು

**ಬಳ್ಳಾರಿ, ಸೆ.8:** ಜಿಲ್ಲಾಡಳಿತದಿಂದ ಅನುಮತಿ ಸಿಗುತ್ತಿದ್ದಂತೆಯೇ ನಿರಾಳರಾದ ನಾಯಕರು ಸಮಾವೇಶದ ಸಿದ್ಧತೆಗೆ ಮುಂದಾಗಿದ್ದಾರೆ. ಜನಾರ್ದನ ರೆಡ್ಡಿ, ವಿಧಾನ ಪರಿಷತ್ ಸದಸ್ಯ ವೈ.ಎಂ. ಸತೀಶ್, ರಾಜ್ಯ ಪ್ರಧಾನ ಕಾರ್ಯದರ್ಶಿ ಪಿ. ರಾಜೀವ್, ರಾಜ್ಯ ಕಾರ್ಯದರ್ಶಿ ಶರಣು ತಳ್ಳಿಕೇರಿ ಹಾಗೂ ಜಿಲ್ಲಾಧ್ಯಕ್ಷ ಅನಿಲ್ ಕುಮಾರ್ ಮೋಕಾ ಸ್ಥಳಕ್ಕೆ ಭೇಟಿ ನೀಡಿ ಮೈದಾನದ ಸಿದ್ಧತೆಗಳನ್ನು ಖುದ್ದು ಪರಿಶೀಲಿಸಿದರು.

ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಎಲ್ಲಿ ಬೇಕಾದರೂ ಸಮಾವೇಶ ಮಾಡಬಹುದು. ರಸ್ತೆ ಹೊರತುಪಡಿಸಿ ಎಲ್ಲಿ ಬೇಕಾದರೂ ರ್‍ಯಾಲಿ ಮಾಡಿ ಕೊಳ್ಳಲಿ. ರಾಜಕೀಯ ಸಮಾವೇಶಕ್ಕೆ ಯಾವುದೇ ರೀತಿ ಅಡ್ಡಿ. ಎಷ್ಟೇ ದೊಡ್ಡ ಸಮಾವೇಶ ವನ್ನಾದರೂ ಮಾಡಿಕೊಳ್ಳಲಿ, ಅನುಮತಿ ಕೊಡಿ ಎಂದು ಬಳ್ಳಾರಿ ಡಿಸಿ ಸಂಪರ್ಕಿಸಿ ಸಿಎಂ ಡಿ.ಕೆ.ಶಿವಕುಮಾರ್ ಸೂಚನೆ ನೀಡಿದ್ದಾರೆ. ಈ ಬಗ್ಗೆ ಮಾಧ್ಯಮಗಳಿಗೆ ಮುಖ್ಯಮಂತ್ರಿಗಳ ಕಚೇರಿಯ ಉನ್ನತ ಮೂಲಗಳಿಂದ ಮಾಹಿತಿ ನೀಡಲಾಗಿದೆ.

ಬಳ್ಳಾರಿಯ ಸಮಾವೇಶಕ್ಕೆ ಅನುಮತಿ ನಿರಾಕರಣೆ ವಿಚಾರವಾಗಿ ನಗರದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಶಿಕ್ಷಣ ಸಚಿವ ಮಧು ಬಂಗಾರಪ್ಪ, ಮೈದಾನಗಳ ಬಳಕೆಗೆ ಸಂಬಂಧಿಸಿದಂತೆ ಸ್ಪಷ್ಟವಾದ ನಿಯಮಾವಳಿಗಳಿವೆ. ರಾಜ್ಯದಲ್ಲಿ ಕಾನೂನಿನ ಚೌಕಟ್ಟಿನಲ್ಲಿಯೇ ವ್ಯವಸ್ಥೆಗಳು ನಡೆಯುತ್ತವೆ. ಈ ಹಿಂದೆ ಸರ್ಕಾರ ಜಾರಿಗೆ ತಂದಿರುವ ಕಾಯ್ದೆಯ ಅನ್ವಯ, ಯಾವುದೇ ಸಾರ್ವಜನಿಕ ಕಾರ್ಯಕ್ರಮಗಳಿಗೆ ಮುಂಚಿತವಾಗಿ ನಿಗದಿತ ನಿಯಮಗಳ ಪ್ರಕಾರ ಅನುಮತಿ ಪಡೆಯ ಬೇಕಾಗು ತ್ತದೆ. ಕಾನೂನಿನಲ್ಲಿ ಅವಕಾಶವಿಲ್ಲ ದಿದ್ದ್ರಾ ನಮಗೆ ಬೇಕೋ ಹಾಗೆ ಅನುಮತಿ ನೀಡಲು ಸಾಧ್ಯವಿಲ್ಲ. ಸಮಾವೇಶವನ್ನು ನಿಯಮಬದ್ಧವಾಗಿ ಬೇರೆಡೆ ಎಲ್ಲಿ ಬೇಕಾದರೂ ಅವರು ಮಾಡಿ ಕೊಳ್ಳಲಿ ಎಂದು ಸ್ಪಷ್ಟನೆ ನೀಡಿದರು.

ಕೇವಲ ಮಾಧ್ಯಮಗಳಲ್ಲಿ ಪ್ರಚಾರ ಸಿಗುತ್ತದೆ ಎಂಬ ಕಾರಣಕ್ಕೆ ಬೀದಿಗೆ ಬಂದು ಗಲಾಟೆ ಮಾಡುವುದರಿಂದ ಯಾವುದೇ ಪ್ರಯೋಜನವಿಲ್ಲ.

ಜನರೇನು ದಡ್ಡರಲ್ಲ, ಎಲ್ಲವನ್ನೂ ಸೂಕ್ಷ್ಮವಾಗಿ ಗಮನಿಸುತ್ತಿದ್ದಾರೆ. ಪ್ರಜಾಪ್ರಭುತ್ವದ ಮೇಲೆ ನಂಬಿಕೆಯಿದ್ದರೆ, ಬೀದಿಯಲ್ಲಿ ನಿಂತು ಪುಕ್ಕಟೆ ಭಾಷಣ ಬಿಗಿಯುವುದನ್ನು ಬಿಟ್ಟು ವಿಧಾನಸೌಧಕ್ಕೆ ಬಂದು ಚರ್ಚೆ ನಡೆಸಲಿ. ಸೆಪ್ಟೆಂಬರ್ 21ರಂದು ಮೂರು ದಿನಗಳ ವಿಶೇಷ ಅಧಿವೇಶನ ಕರೆಯಲಾಗಿದೆ. ಅಲ್ಲಿ ಬರ ಪರಿಸ್ಥಿತಿ, ರೈತರ ಸಮಸ್ಯೆ ಹಾಗೂ ಕಸ್ತೂರಿರಂಗನ್ ವರದಿಯಂತಹ ಗಂಭೀರ ವಿಚಾರಗಳ ಬಗ್ಗೆ ಚರ್ಚೆಯಾಗಲಿದೆ. ಧೈರ್ಯವಿದ್ದರೆ ಸದನಕ್ಕೆ ಬಂದು ಸರ್ಕಾರವನ್ನು ಪ್ರಶ್ನಿಸಲಿ, ಪ್ರತಿಯೊಂದಕ್ಕೂ ಉತ್ತರಿಸಲು ನಾವು ಸಿದ್ಧರಿದ್ದೇವೆ? ಎಂದು ಸವಾಲು ಹಾಕಿದರು.

### ಕಾಂಗ್ರೆಸ್‌ನವರಿಂದ ಗೂಂಡಾಗಿರಿ

## ಬಿಜೆಪಿ ಕಾರ್ಯಕರ್ತರ ಮೇಲೆ ದಬ್ಬಾಳಿಕೆ: ಮಾಜಿ ಸಂಸದ ಜಾಧವ್ ಆರೋಪ



**ಕಲಬುರಗಿ, ಸೆ. 8:** ನಗರದಲ್ಲಿ ಇತ್ತೀಚೆಗೆ ನಡೆದ ಬಿಜೆಪಿ ಪ್ರತಿಭಟನೆ ವೇಳೆ ಬೈಕ್ ಸವಾರನ ಹೆಲ್ಮೆಟ್ ಧ್ವಂಸಗೊಳಿಸಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಜಿ ಶಾಸಕ ರಾಜಕುಮಾರ್ ಪಾಟೀಲ್ ತೇಲ್ಕೂರ್ ಹಾಗೂ ಬಿಜೆಪಿ ಜಿಲ್ಲಾಧ್ಯಕ್ಷರ ಮೇಲೆ ಎಫ್‌ಐಆರ್ ದಾಖಲಿಸುವ ಮೂಲಕ ಕಾಂಗ್ರೆಸ್ ಬಿಜೆಪಿಯವರ ಮೇಲೆ ಗೂಂಡಾಗಿರಿ ನಡೆಸುತ್ತಿದೆ. ಹೆದರಿಕೆ ಬೆದರಿಕೆಯ ಮೂಲಕ ಹೋರಾಟ ಹತ್ತಿಕ್ಕುವ ಪ್ರಯತ್ನ ಮಾಡುತ್ತಿದೆ. ಗೃಹ ಸಚಿವರು ತಮ್ಮ ಅಧಿಕಾರ ದುರುಪಯೋಗಪಡಿಸಿಕೊಂಡು ಪ್ರತಿಭಟನಾಕಾರರ ವಿರುದ್ಧ ಎಫ್‌ಐಆರ್ ದಾಖಲಿಸುವ ಮೂಲಕ ಬೆದರಿಕೆಯೊಡ್ಡುತ್ತಿದ್ದಾರೆ ಎಂದು ಮಾಜಿ ಸಂಸದ ಡಾ.ಉಮೇಶ್ ಜಾಧವ್ ತೀವ್ರವಾಗಿ ಖಂಡಿಸಿದ್ದಾರೆ.

ಇಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರಿಗೆ ಅಭದ್ರತೆ ಕಾಡುತ್ತಿದೆ. ಮುಂದಿನ ಚುನಾವಣೆಯಲ್ಲಿ ತಮಗೆ ಸೋಲು ಕಟ್ಟಿಟ್ಟ ಬುತ್ತಿ ಎಂಬುದು ಖಚಿತವಾಗಿದೆ. ಹಾಗಾಗಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದಲೂ ಕಲಬುರಗಿಯಲ್ಲಿ ಬಿಜೆಪಿ ಕಾರ್ಯಕರ್ತರನ್ನು ಹತ್ತಿಕ್ಕುವ ಮೂಲಕ ಭಯದ ವಾತಾವರಣ ಸೃಷ್ಟಿಸಲಾಗುತ್ತಿದೆ ಎಂದು ಆರೋಪಿಸಿದರು.

ಕಳೆದ ಮೂರು ವರ್ಷಗಳಲ್ಲಿ ಕಲಬುರಗಿಯಲ್ಲಿ ಇದುವರೆಗೆ ಎಷ್ಟು ಜನ ಅನುಮತಿ ಪಡೆದುಕೊಂಡು ಪ್ರತಿಭಟನೆ ನಡೆಸಿದ್ದಾರೆ? ಕೇವಲ ಅನುಮತಿ ಪಡೆಯಲಿಲ್ಲ ಎಂಬ ಕಾರಣಕ್ಕೆ ಎಫ್‌ಐಆರ್ ದಾಖಲಿಸಿರುವುದು ಪ್ರಜಾಪ್ರಭುತ್ವದ ಮೌಲ್ಯಗಳಿಗೆ ವಿರೋಧವಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿರುವ ವಿಡಿಯೋ ಕುರಿತು ಸ್ಪಷ್ಟನೆ ನೀಡಿದ ಅವರು, ಪ್ರತಿಭಟನೆಯಲ್ಲಿ ನಡೆದ ಗಲಾಟೆಯ ಕೇವಲ 30 ಸೆಕೆಂಡ್‌ಗಳ ತುಣುಕು ಮಾತ್ರ ಹರಿದಾಡುತ್ತಿದೆ. ಸುಡು ಬಿಸಿಲಿನಲ್ಲಿ ಎರಡು ಗಂಟೆಗಳ ಕಾಲ ಸತತವಾಗಿ ಪ್ರತಿಭಟನೆ ನಡೆಸಿದಾಗ ಆಕ್ರೋಶಗೊಂಡು ಮಾತಿನ ಚಕಮಕಿ ನಡೆದಿರಬಹುದು ಎಂದರು. ಇದೇ ವೇಳೆ ಸರ್ಕಾರದ ಧೋರಣೆಯನ್ನು ಪ್ರಶ್ನಿಸಿದ ಅವರು, 2025ರಲ್ಲಿ ಕಲಬುರಗಿಯಲ್ಲಿ ನಡೆದ ಪ್ರತಿಭಟನೆ ವೇಳೆ ಕಲ್ಲುತೂರಾಟ ನಡೆಸಲಾಗಿತ್ತು, ಆಗ ಯಾರ ಮೇಲೆ ಎಫ್‌ಐಆರ್ ದಾಖಲಿಸಲಾಗಿತ್ತು? ಕಾಂಗ್ರೆಸ್ ಸರ್ಕಾರವು ಒಂದು ಕಣ್ಣಿಗೆ ಬೆಣ್ಣೆ, ಮತ್ತೊಂದು ಕಣ್ಣಿಗೆ ಸುಣ್ಣ ಸವರುವ ನೀತಿ ಅನುಸರಿಸುತ್ತಿದೆ ಎಂದು ಕಿಡಿಕಾರಿದರು.

ರೈತರ ಪರವಾಗಿ ಹೋರಾಟ ನಡೆಸಿದ ಬಿಜೆಪಿ ಜಿಲ್ಲಾಧ್ಯಕ್ಷರ ವಿರುದ್ಧವೇ ಪ್ರಕರಣ ದಾಖಲಿಸಲಾಗಿದೆ. ಪ್ರತಿಭಟನೆ ನಡೆಸಿದವರನ್ನು ಕರೆದು ಸೌಹಾರ್ದಯುತವಾಗಿ ಮಾತನಾಡಿಸುವ ಬದಲು, ಎಫ್‌ಐಆರ್ ಅಸ್ತ್ರ ಬಳಸಿ ಪೊಲೀಸ್ ಮೂಲಕ ಬೆದರಿಸುವ ತಂತ್ರಗಾರಿಕೆ ನಡೆಯುತ್ತಿದೆ ಎಂದು ದೂರಿದರು.

## ಬಾಲ್ಯವಿವಾಹ, ಹದಿಹರೆಯದ ಗರ್ಭಧಾರಣೆ ತಡೆಗೆ ಜಾಗೃತಿ ಅಗತ್ಯ: ನ್ಯಾ.ನವಲೆ

**ಕಲಬುರಗಿ, ಸೆ. 8:** ಹದಿಹರೆಯದ ಅವಧಿಯಲ್ಲಿ ಮಕ್ಕಳು ಎದುರಿಸುವ ಕಿರುಕುಳ, ಬಾಲ್ಯವಿವಾಹದಂತಹ ಸಾಮಾಜಿಕ ಪಿಡುಗು ಹಾಗೂ ಹಿರಿಯರು ಮಾಡುವ ಅಪರಾಧಗಳಿಂದ ಮಕ್ಕಳ ರಕ್ಷಣೆಗೆ ಹಲವು ಕಾನೂನುಗಳಿವೆ. ವಿದ್ಯಾರ್ಥಿಗಳ ಮೇಲೆ ನಡೆಯುವ ಯಾವುದೇ ತೊಂದರೆ ಅಥವಾ ಅಪರಾಧಗಳು ಕಂಡುಬಂದಲ್ಲಿ ತಕ್ಷಣ 1098 ಉಚಿತ ಸಹಾಯವಾಣಿಗೆ ಕರೆ ಮಾಡಿ ದೂರು ನೀಡಬೇಕು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರೂ ಆದ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಕಾರ್ಯದರ್ಶಿ ಶ್ರೀನಿವಾಸ ನವಲೆ ಹೇಳಿದರು.




ಹೆಬ್ಬಾಳ (ಬಿ) ವಲಯದ ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಆರ್‌ಸಿಎಚ್ ಕಲಬುರಗಿ ವಿಭಾಗ, ರಾಷ್ಟ್ರೀಯ ಕಿಶೋರ್ ಸ್ವಾಸ್ಥ್ಯ ಕಾರ್ಯಕ್ರಮ, ಶಿಶು ಅಭಿವೃದ್ಧಿ ಯೋಜನೆ ಹಾಗೂ ಸಮುದಾಯ ಆರೋಗ್ಯ ಕೇಂದ್ರ ಇವುಗಳ ಸಂಯುಕ್ತ ಆಶ್ರಯದಲ್ಲಿ ಬಾಲ್ಯ ವಿವಾಹ, ಹದಿಹರೆಯದ ಗರ್ಭಧಾರಣೆ ತಡೆ ಹಾಗೂ ಪೋಕ್ಸೋ ಕಾಯ್ದೆ ಕುರಿತು ಕಾನೂನು ಅರಿವು ಕಾರ್ಯಕ್ರಮ ಉದ್ಘಾಟಿಸಿ, ಪೋಕ್ಸೋ ಕಾಯ್ದೆಯಡಿ ಬಾಲ್ಯವಿವಾಹ ಹಾಗೂ ಬಾಲಗರ್ಭ ತಡೆಗಟ್ಟಲು ಗ್ರಾಮ ಮಟ್ಟದಿಂದ ಜಿಲ್ಲಾ ಮಟ್ಟದವರೆಗೆ ಆರೋಗ್ಯ ಇಲಾಖೆ ಸನ್ನದ್ಧವಾಗಿ ಕಾರ್ಯನಿರ್ವಹಿಸುತ್ತಿದೆ.

ಬಾಲಗರ್ಭಿಣಿಯರ ಆರೈಕೆ ಮತ್ತು ಸುರಕ್ಷಿತ ಹೆರಿಗೆಗೆ ಇಲಾಖೆಯಿಂದ ವಿಶೇಷ ಕಾಳಜಿ ವಹಿಸಲಾಗುತ್ತಿದೆ ಎಂದರು.

ವಸತಿ ಶಾಲೆಯ ಪ್ರಾಂಶುಪಾಲರಾದ ಈರಣ್ಣ ಕೆ. ಅರಕೇರಿ, ಶಾಲೆಯಲ್ಲಿನ ಪ್ರತಿಯೊಬ್ಬ ಮಗುವಿನ ರಕ್ಷಣೆ ನಮ್ಮ ಕರ್ತವ್ಯವಾಗಿದ್ದು, ಎಲ್ಲಾ ಸಿಬ್ಬಂದಿಗಳು ಈ ನಿಟ್ಟಿನಲ್ಲಿ ಶ್ರಮಿಸುತ್ತಿದ್ದೇವೆ ಎಂದರು.

## ವಿಬಿ-ಜಿ ರಾಮ್-ಜಿ ಯೋಜನೆ ಪರಿಣಾಮಕಾರಿ ಅನುಷ್ಠಾನಕ್ಕೆ ಉಪ ಕಾರ್ಯದರ್ಶಿ ಪ್ರಕಾಶ ವಡ್ಡರ ಸೂಚನೆ

**ವಿಜಯಪುರ,ಸೆ.8.–** ಜಿಲ್ಲೆಯಲ್ಲಿ ಬರಪರಿಸ್ಥಿತಿ ಹಿನ್ನೆಲೆಯಲ್ಲಿ ಗ್ರಾಮೀಣ ಪ್ರದೇಶದಲ್ಲಿ ಉದ್ಯೋಗದ ಅವಶ್ಯಕತೆ ಹೆಚ್ಚಿರುವುದರಿಂದ, ಅರ್ಹ ಪ್ರತಿಯೊಂದು ಗ್ರಾಮೀಣ ಕುಟುಂಬಕ್ಕೂ ಹೆಚ್ಚಿನ ಉದ್ಯೋಗಾವಕಾಶ ಕಲ್ಪಿಸಿ ವಿಬಿ–ಜಿ ರಾಮ್–ಜಿ ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನ ಗೊಳಿಸುವಂತೆ ಜಿಲ್ಲಾ ಪಂಚಾಯತಿ ಉಪ ಕಾರ್ಯದರ್ಶಿ ಪ್ರಕಾಶ ವಡ್ಡರ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.



ತಾಳಿಕೋಟಿ ತಾಲೂಕಿನ ಸಾಸನೂರ, ಹಿರೂರ, ಮೂಕಿಹಾಳ ಹಾಗೂ ಮಿಣಜಗಿ ಗ್ರಾಮ ಪಂಚಾಯಿತಿಗಳಿಗೆ ಭೇಟಿ ನೀಡಿದ ಅವರು, ನಡೆಯುತ್ತಿರುವ ವಿವಿಧ ಕಾಮಗಾರಿಗಳು, ಕೂಲಿಕಾರರ ಹಾಜರಾತಿ ಮತ್ತು ಮಾನವ ದಿನಗಳ ಸೃಜನೆಯ ಪ್ರಗತಿ ಪರಿಶೀಲಿಸಿದರು. ವಿಬಿ–ಜಿ ರಾಮ್–ಜಿ ಯೋಜನೆಯಡಿ ಪ್ರತಿ ದಿನ 382 ರೂ. ಕೂಲಿ ಹಾಗೂ ಪ್ರತಿ ಕುಟುಂಬಕ್ಕೆ ವರ್ಷಕ್ಕೆ 125 ದಿನಗಳ ಉದ್ಯೋಗಾವಕಾಶ ಕಲ್ಪಿಸಲಾಗುತ್ತಿದ್ದು, ಅರ್ಹ ಕುಟುಂಬಗಳು ಇದರ ಸದುಪಯೋಗ ಪಡಿಸಿಕೊಳ್ಳುವಂತೆ ಕರೆ ನೀಡಿದರು.

ಹಿರೂರ ಮತ್ತು ಮಿಣಜಗಿ ಗ್ರಾಮ ಪಂಚಾಯತಿಗಳಲ್ಲಿ ಮಾನವ ದಿನಗಳ ಸೃಜನೆ ಹೆಚ್ಚಿಸಲು ಗ್ರಾಮಗಳಲ್ಲಿ ಡಂಗೂರ ಸಾರುವ ಮೂಲಕ ಹಾಗೂ ಸ್ವ–ಸಹಾಯ ಸಂಘಗಳ ಮೂಲಕ ವ್ಯಾಪಕ ಜಾಗೃತಿ ಮೂಡಿಸಿ, ಉದ್ಯೋಗ ಕೋರಿ ಅರ್ಜಿ ಸಲ್ಲಿಸುವ ಪ್ರತಿಯೊಬ್ಬರಿಗೂ ಕಡ್ಡಾಯವಾಗಿ ಕೆಲಸ ನೀಡುವಂತೆ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಸೂಚಿಸಿದರು.

## ಗ್ರಾಮೀಣ ಭಾಗದಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಮುನ್ನೆಚ್ಚರಿಕೆ

**ವಿಜಯಪುರ,ಸೆ.8–**ಮುಂಬರುವ ದಿನಗಳಲ್ಲಿ ಗ್ರಾಮೀಣ ಪ್ರದೇಶದ ಸಾರ್ವಜನಿಕರಿಗೆ ಕುಡಿಯುವ ನೀರಿನ ತೊಂದರೆಯಾಗದಂತೆ ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಬೇಕು ಹಾಗೂ ಜಲಜೀವನ್ ಮಿಷನ್ ಸೇರಿದಂತೆ ವಿವಿಧ ಯೋಜನೆಗಳ ಕಾಮಗಾರಿಗಳನ್ನು ಡಿಸೆಂಬರ್ ಅಂತ್ಯದೊಳಗೆ ಪೂರ್ಣಗೊಳಿಸಬೇಕು ಎಂದು ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಿಷಿ ಆನಂದ್ ಅವರು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದ್ದಾರೆ.



ಜಿಲ್ಲೆಯಲ್ಲಿ ಅನುಷ್ಠಾನಗೊಳ್ಳುತ್ತಿರುವ 1,000 ಜಲಜೀವನ್ ಮಿಷನ್ ಕಾಮಗಾರಿಗಳ ಪೈಕಿ 841 ಪೂರ್ಣಗೊಂಡಿದ್ದು, ಬಾಕಿ ಉಳಿದ ಕಾಮಗಾರಿಗಳನ್ನು ಡಿಸೆಂಬರ್ 2026ರೊಳಗೆ ಮುಗಿಸಲು ಸೂಚಿಸಲಾಗಿದೆ. ಜಿಲ್ಲೆಯ 654 ಗ್ರಾಮಗಳಲ್ಲಿ ಈಗಾಗಲೇ 367 ಗ್ರಾಮಗಳು 'ಹರ್ ಘರ್ ಜಲ್' ಆಪ್‌ನಲ್ಲಿ ಪ್ರಮಾಣೀಕರಿಸಲ್ಪಟ್ಟಿದ್ದು, ಬಾಕಿ 287 ಗ್ರಾಮಗಳ ಪ್ರಕ್ರಿಯೆಯನ್ನು ವೇಗಗೊಳಿಸಲು ಇಂಜಿನಿಯರ್‌ಗಳಿಗೆ ವಾರಕ್ಕೆ ಕನಿಷ್ಠ ಒಂದು ಗ್ರಾಮದ ಗುರಿ ನಿಗದಿಪಡಿಸಲಾಗಿದೆ.ಎಂದು ತಿಳಿಸಿದರು

## ಬಿಜೆಪಿ ಬೃಹತ್ ಸಾರ್ವಜನಿಕ ಸಮಾವೇಶ: ಬಳ್ಳಾರಿ ಜಿಲ್ಲಾಡಳಿತದಿಂದ ಷರತ್ತುಬದ್ಧ ಅನುಮತಿ– ಜಿಲ್ಲಾಧಿಕಾರಿ

**ಬಳ್ಳಾರಿ,ಸೆ.08.** ನಗರದ ಮುನ್ಸಿಪಲ್ ಹೈಸ್ಕೂಲ್ ಮೈದಾನದಲ್ಲಿ ಭಾರತೀಯ ಜನತಾ ಪಕ್ಷದ (ಬಿಜೆಪಿ) ವತಿಯಿಂದ ಬೃಹತ್ ಸಾರ್ವಜನಿಕ ಸಮಾವೇಶ ನಡೆಸಲು ಜಿಲ್ಲಾಡಳಿತ ಷರತ್ತುಬದ್ಧ ಅನುಮತಿ ನೀಡಿದೆ.

ಕಾರ್ಯಕ್ರಮದ ವೇಳೆ ಕಾನೂನು ಮತ್ತು ಸುವ್ಯವಸ್ಥೆಗೆ ಯಾವುದೇ ಧಕ್ಕೆಯಾಗದಂತೆ ಹಾಗೂ ಸಾರ್ವಜನಿಕ ಆಸ್ತಿ–ಪಾಸ್ತಿಗೆ ಹಾನಿಯಾಗದಂತೆ ಮುನ್ನೆಚ್ಚರಿಕೆ ವಹಿಸಲು ಜಿಲ್ಲಾಧಿಕಾರಿ ಕೆ. ನಾಗೇಂದ್ರ ಪ್ರಸಾದ್ ಅವರು ಸಂಘಟಕರಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.



ನಗರದಾದ್ಯಂತ ಎಲ್ಲೆಂದರಲ್ಲಿ ಬ್ಯಾನರ್, ಫ್ಲೆಕ್ಸ್ ಅಥವಾ ಕಟೌಟ್‌ಗಳನ್ನು ಅಳವಡಿಸುವಂತಿಲ್ಲ. ಕೇವಲ ಕಾರ್ಯಕ್ರಮ ನಿಗದಿಯಾಗಿರುವ ಮುನ್ಸಿಪಲ್ ಹೈಸ್ಕೂಲ್ ಮೈದಾನದ ಆವರಣದಲ್ಲಿ ಮಾತ್ರ ಬ್ಯಾನರ್ ಹಾಕಲು ಅನುಮತಿ ನೀಡಲಾಗಿದೆ.

ಸಾರ್ವಜನಿಕ ಹಾಗೂ ಸರ್ಕಾರಿ ಆಸ್ತಿಪಾಸ್ತಿಗೆ ಯಾವುದೇ ಹಾನಿಯಾಗಬಾರದು. ಒಂದು ವೇಳೆ ನಷ್ಟ ಸಂಭವಿಸಿದರೆ ಸಂಘಟಕರನ್ನೇ ನೇರ ಹೊಣೆಗಾರರನ್ನಾಗಿ ಮಾಡಲಾಗುತ್ತದೆ.

ಸಭೆಗೆ ಆಗಮಿಸುವ ಕಾರ್ಯಕರ್ತರ ವಾಹನಗಳಿಂದ ಸಾರ್ವಜನಿಕರ ದಿನನಿತ್ಯದ ಓಡಾಟಕ್ಕೆ ಹಾಗೂ ವಾಹನ ಸಂಚಾರಕ್ಕೆ ಅಡ್ಡಿಯಾಗದಂತೆ ಪಾರ್ಕಿಂಗ್ ವ್ಯವಸ್ಥೆ ಕಲ್ಪಿಸಬೇಕು.

ನಿಗದಿತ ಡೆಸಿಬಲ್ ಮಿತಿಯೊಳಗೆ ಮಾತ್ರ ಧ್ವನಿವರ್ಧಕಗಳನ್ನು ಬಳಸಬೇಕು ಹಾಗೂ ಅನುಮತಿಸಲಾದ ಸಮಯದ ಮಿತಿಯನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು.ನಗರದಲ್ಲಿ ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡುವ ದೃಷ್ಟಿಯಿಂದ ಪೊಲೀಸ್ ಇಲಾಖೆಯು ಮೈದಾನ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಬಿಗಿ ಬಂದೋಬಸ್ತ್ ಕೈಗೊಳ್ಳಲು ಸಿದ್ಧತೆ ನಡೆಸಿದೆ.

ಜಿಲ್ಲಾಡಳಿತ ವಿಧಿಸಿರುವ ನಿಯಮಗಳನ್ನು ಉಲ್ಲಂಘಿಸಿದರೆ ಕಾನೂನು ರೀತ್ಯಾ ಕ್ರಮ ಜರುಗಿಸಲಾಗುವುದು ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದ್ದಾರೆ.

## ರಾಯಚೂರು ಜಿಲ್ಲೆಯಲ್ಲಿ ನಿಯಮ ಮೀರಿ ವಿಂಡ್ ಟರ್ಬೈನ್ ಅಳವಡಿಕೆ

**ರಾಯಚೂರು, ಸೆ. 8:** ಜಿಲ್ಲೆಯ ಲಿಂಗಸುಗೂರು ತಾಕಲ್ಲೂಕಿನ ಮುದಗಲ್ ಮತ್ತು ಅಕ್ಕಪಕ್ಕದ ಪ್ರದೇಶಗಳಲ್ಲಿ ನಿಯಮ ಗಾಳಿಗೆ ತೂರಿ ವಿವಿಧ ಕಂಪನಿಗಳು ಪವನ ವಿದ್ಯುತ್ ಘಟಕ (ವಿಂಡ್ ಟರ್ಬೈನ್)ಗಳನ್ನು ಅಳವಡಿಸುತ್ತಿವೆ.

ಬನ್ನಿಗೋಳ, ಜನತಾಪುರ, ಮಾಕಾಪುರ, ಕಾಚಾಪುರ, ಅಡವಿಭಾವಿ, ಖೈರವಾಡಗಿ, ಆಮದಿಹಾಳ, ಹೂನೂರು, ಆದಾಪುರ, ಯರದಿಹಾಳ, ಲಕ್ಕಿಹಾಳ, ಕಿಲಾರಹಟ್ಟಿ ಸೇರಿದಂತೆ ವಿವಿಧ ಗ್ರಾಮಗಳಲ್ಲಿ ಅಳವಡಿಸಲಾಗಿದೆ.

ಮುದಗಲ್ ಹೋಬಳಿ ವ್ಯಾಪ್ತಿಯಲ್ಲಿ ವಿವಿಧ ಕಂಪನಿಗಳು 200ಕ್ಕೂ ಅಧಿಕ ಪವನ ವಿದ್ಯುತ್ ಘಟಕಗಳನ್ನು ಅಳವಡಿಕೆ ಕಾರ್ಯದಲ್ಲಿ ತೊಡಗಿವೆ. ಆದರೆ, ಕೆಲವು ಕಡೆ ಅನುಮತಿ ಹಾಗೂ ಸುರಕ್ಷತಾ ಕ್ರಮಗಳನ್ನು ಪಾಲಿಸಲಾಗುತ್ತಿಲ್ಲ ಎಂದು ಗ್ರಾಮಸ್ಥರು ದೂರಿದ್ದಾರೆ.

ಭೂ ಪರಿವರ್ತನೆ ನಿಯಮ ಉಲ್ಲಂಘನೆ ಆರೋಪ: ಕಿಲಾರಹಟ್ಟಿ ಸೇರಿದಂತೆ ಕೆಲವು ಗ್ರಾಮಗಳಲ್ಲಿ ವಿಂಡ್ ಟರ್ಬೈನ್ ಅಳವಡಿಕೆಗೆ ಅಗತ್ಯ ವಿರುವಷ್ಟು ಜಮೀನನ್ನು ಭೂ ಪರಿವರ್ತನೆ (ಎನ್‌ಎ) ಮಾಡಿಸದೆ ಕಾಮಗಾರಿ ನಡೆಸಲಾಗುತ್ತಿದೆ ಎಂಬ ಆರೋಪ ಕೇಳಿ ಬಂದಿದೆ. ಐದು ಎಕರೆ ಜಮೀನಿನ ಬದಲಿಗೆ ಕೇವಲ ಒಂದು ಎಕರೆ ಭೂಮಿಗೆ ಎನ್‌ಎ ಮಾಡಿಸಿ ಟರ್ಬೈನ್ ಅಳವಡಿಸಲಾಗುತ್ತಿದೆ. ಇದರಿಂದ ಸರ್ಕಾರಕ್ಕೆ ಸೇರಬೇಕಾದ ರಾಜದಧನದಲ್ಲಿ ವಂಚಿಸಲಾಗುತ್ತಿದೆ ಎಂದು ಸ್ಥಳೀಯರು ಆರೋಪಿಸಿದ್ದಾರೆ.

ಫಲವತ್ತಾದ ಕೃಷಿ ಭೂಮಿಯಲ್ಲಿಯೇ ಟರ್ಬೈನ್‌ಗಳನ್ನು ಅಳವಡಿಸಲಾಗುತ್ತಿದೆ. ಕಾಮಗಾರಿ ನಡೆಯುವ ಸ್ಥಳದಲ್ಲಿ ಅಂದಾಜು ಹಾಗೂ ಅಗತ್ಯ ಮಾಹಿತಿಯ ನಾಮಫಲಕ ಅಳವಡಿಸಿಲ್ಲ. ಜಾನುವಾರು ಸುರಕ್ಷತೆಗಾಗಿ ತಂತಿಬೇಲಿ ಹಾಕಿಲ್ಲ. ಅಪಾಯ ವಲಯದ ಸೂಚನಾ ಫಲಕ, ಹಸಿರು ವಲಯ ಸೇರಿದಂತೆ ಎಚ್ಚರಿಕೆ ಫಲಕಗಳನ್ನೂ ಅಳವಡಿಸಿಲ್ಲ ಎಂಬ ದೂರುಗಳಿವೆ.

ಕಂಬ ಅಳವಡಿಸುವ ಸಂದರ್ಭದಲ್ಲಿ ಸಂಬಂಧಿಸಿದ ವಿದ್ಯುತ್ ಇಲಾಖೆಯ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿ, ನಿಯಮಾನುಸಾರ ಕಾಮಗಾರಿ ನಡೆಯುತ್ತಿದೆಯೇ ಎಂಬುದನ್ನು ಖಚಿತಪಡಿಸಬೇಕು. ಆದರೆ, ಈ ವಿಚಾರದಲ್ಲಿ ಸಮರ್ಪಕ ಪರಿಶೀಲನೆ ನಡೆಯುತ್ತಿಲ್ಲ ಎಂದು ಗ್ರಾಮಸ್ಥರು ದೂರಿದ್ದಾರೆ. ಭೂಪರಿವರ್ತನೆ ನಂತರ ಪಟ್ಟಣ ಯೋಜನೆ ಹಾಗೂ ಗ್ರಾಮ ಪಂಚಾಯಿತಿಯಿಂದ ಅಗತ್ಯ ವಿನ್ಯಾಸ ಮತ್ತು ಅನುಮತಿಗಳನ್ನು ಪಡೆಯಬೇಕು. ಉದ್ಯಾನ, ಸಾರ್ವಜನಿಕ ಸೌಲಭ್ಯ ಹಾಗೂ ಇತರ ಅಗತ್ಯ ವ್ಯವಸ್ಥೆಗಳನ್ನು ಕಲ್ಪಿಸಬೇಕು ಎಂಬ ನಿಯಮಗಳಿದ್ದರೂ ಕೆಲವು ಕಡೆ ಅವುಗಳ ಪಾಲನೆಯಾಗುತ್ತಿಲ್ಲ ಎಂದು ಸ್ಥಳೀಯರು ಆರೋಪಿಸಿದ್ದಾರೆ.

**ಬ್ರೋಕರ್‌ಗಳ ಹಾವಳಿ:** ವಿಂಡ್ ಪವರ್ ಕಂಪನಿಗಳ ಹೆಸರಿನಲ್ಲಿ ಕೆಲ ಖಾಸಗಿ ವ್ಯಕ್ತಿಗಳು ರೈತರನ್ನು ಸಂಪರ್ಕಿಸಿ, ಜಮೀನು ಲೀಸ್‌ಗೆ ಕೊಡಿಸುವ ಮಧ್ಯಸ್ಥಿಕೆ ವಹಿಸುತ್ತಿದ್ದಾರೆ ಎಂಬ ಆರೋಪವೂ ಕೇಳಿಬಂದಿದೆ.

ತಾವು ವಿಂಡ್ ಪವರ್ ಕಂಪನಿಯಲ್ಲಿ ಕೆಲಸ ಮಾಡುತ್ತೇವೆ ಎಂದು ಪರಿಚಯಿಸಿಕೊಂಡು ರೈತರ ವಿಶ್ವಾಸ ಗಳಿಸುವ ಕೆಲ ಮಧ್ಯವರ್ತಿಗಳು, ಕಂಪನಿ ಮತ್ತು ರೈತರ ನಡುವೆ ಜಮೀನು ಗುತ್ತಿಗೆ ಒಪ್ಪಂದ ಮಾಡಿಸುವುದಕ್ಕೆ ಪ್ರತಿಯಾಗಿ ಎರಡೂ ಕಡೆಯಿಂದ ಲಕ್ಷಾಂತರ ರೂಪಾಯಿ ಕಮಿಷನ್ ಪಡೆಯುತ್ತಿದ್ದಾರೆ ಎಂದು ಸ್ಥಳೀಯರು ಆರೋಪಿಸಿದ್ದಾರೆ.

ವಿಂಡ್ ಟರ್ಬೈನ್ ಅಳವಡಿಕೆಯಿಂದ ಗ್ರಾಮೀಣ ಪ್ರದೇಶಕ್ಕೆ ವಿದ್ಯುತ್ ಉತ್ಪಾದನೆಯಂತಹ ಪ್ರಯೋಜನಗಳಿದ್ದರೂ, ಕೃಷಿ ಭೂಮಿ, ಪರಿಸರ, ರಸ್ತೆ ಹಾಗೂ ಸಾರ್ವಜನಿಕ ಸುರಕ್ಷತೆಗೆ ಸಂಬಂಧಿಸಿದ ನಿಯಮಗಳ ಕಟ್ಟುನಿಟ್ಟಿನ ಪಾಲನೆ ಅಗತ್ಯ. ಈ ಹಿನ್ನೆಲೆಯಲ್ಲಿ ಜಿಲ್ಲಾಡಳಿತ, ಲೋಕೋಪಯೋಗಿ ಇಲಾಖೆ, ಗ್ರಾ.ಪಂ ಹಾಗೂ ವಿದ್ಯುತ್ ಇಲಾಖೆ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿ, ನಿಯಮಾನುಸಾರ ಅನುಮತಿಗಳು ಹಾಗೂ ಸುರಕ್ಷತಾ ಕ್ರಮ ಪಾಲಿಸಲಾ ಗುತ್ತಿದೆಯೇ ಎಂಬುದನ್ನು ಪರಿಶೀಲಿಸಬೇಕು ಎಂದು ಗ್ರಾಮಸ್ಥರು ಆಗ್ರಹಿಸಿದ್ದಾರೆ.

**ಗ್ರಾಮೀಣ ರಸ್ತೆಗೆ ಹಾನಿ:** ವಿಂಡ್ ಟರ್ಬೈನ್‌ಗಳ ಬೃಹತ್ ಯಂತ್ರೋಪಕರಣ ಹಾಗೂ ಸಾಮಗ್ರಿಗಳನ್ನು ಸಾಗಿಸಲು ಲೋಕೋಪಯೋಗಿ ಇಲಾಖೆಯಿಂದ ಅಗತ್ಯ ಅನುಮತಿ ಪಡೆಯದೆ ರಾತ್ರಿ ವೇಳೆ ಸಾಗಿಸಲಾಗುತ್ತಿದೆ ಎಂದು ಗ್ರಾಮಸ್ಥರು ದೂರಿದ್ದಾರೆ.

ನಿಗದಿತ ಮಿತಿಗಿಂತ ಹೆಚ್ಚಿನ ಭಾರದ ವಾಹನಗಳು ಗ್ರಾಮೀಣ ರಸ್ತೆಯಲ್ಲಿ ಸಂಚರಿಸುತ್ತಿರುವುದರಿಂದ ರಸ್ತೆಗಳು ಹಾಳಾಗಿವೆ. ಕಿರಿದಾದ ಗ್ರಾಮೀಣ ರಸ್ತೆಗಳಲ್ಲಿ ಬೃಹತ್ ಗಾತ್ರದ ಟರ್ಬೈನ್ ಭಾಗಗಳನ್ನು ಸಾಗಿಸುವುದರಿಂದ ಸಂಚಾರಕ್ಕೂ ಅಡಚಣೆ ಉಂಟಾಗುತ್ತಿದೆ. ಕೆಲವೊಮ್ಮೆ ವಾಹನಗಳು ರಸ್ತೆ ಮಧ್ಯೆಯೇ ನಿಂತು ಸಾರ್ವಜನಿಕರ ಸಂಚಾರಕ್ಕೆ ತೊಂದರೆ ಉಂಟುಮಾಡುತ್ತಿವೆ ಎಂದು ಸ್ಥಳೀಯರು ಆರೋಪಿಸಿದ್ದಾರೆ.

ಕಾಚಾಪುರ, ಕನಸಾವಿ ಹಾಗೂ ಲಕ್ಕಿಹಾಳ ಗ್ರಾಮದ ಹೊರವಲಯದಲ್ಲಿ ರಸ್ತೆ ಪಕ್ಕದಲ್ಲಿಯೇ ವಿಂಡ್ ಟರ್ಬೈನ್ ಅಳವಡಿಸಲಾಗುತ್ತಿದೆ. ಟರ್ಬೈನ್‌ನ ಬೃಹತ್ ಭಾಗಗಳನ್ನು ಸಾಗಿಸಲು ಸೂಕ್ತ ಅಗಲದ ಪ್ರತ್ಯೇಕ ರಸ್ತೆ ಹಾಗೂ ಅಗತ್ಯ ಮೂಲಸೌಕರ್ಯ



ಅಭಿವೃದ್ಧಿಪಡಿಸಿಲ್ಲ ಎಂಬ ಆರೋಪವೂ ಕೇಳಿಬಂದಿದೆ.

**ಕೃಷಿಭೂಮಿಯಲ್ಲಿ ಟರ್ಬೈನ್ ಅಳವಡಿಕೆ:** ಲಿಂಗಸುಗೂರು ಮತ್ತು ಮುದಗಲ್ ಹೋಬಳಿ ವ್ಯಾಪ್ತಿಯಲ್ಲಿ ನೂರಾರು ಎಕರೆ ಕೃಷಿ ಭೂಮಿಯಲ್ಲಿ ವಿಂಡ್ ಪವರ್ ಘಟಕಗಳನ್ನು ಅಳವಡಿಸಲಾಗುತ್ತಿದೆ. ವಿಂಡ್ ಟರ್ಬೈನ್‌ಗಳನ್ನು ಬರಡು ಭೂಮಿಯಲ್ಲಿ ಅಳವಡಿಸಬೇಕು ಎಂಬ ನಿಯಮವಿದ್ದರೂ, ಮಧ್ಯವರ್ತಿಗಳ ಮೂಲಕ ಕೃಷಿ ಭೂಮಿಯನ್ನು ಲೀಸ್‌ಗೆ ಪಡೆದು ಟರ್ಬೈನ್‌ಗಳನ್ನು ಅಳವಡಿಸಲಾಗುತ್ತಿದೆ ಎಂದು ರೈತರು ಆರೋಪಿಸಿದ್ದಾರೆ. ರೈತರ ಜಮೀನಿನಲ್ಲಿರುವ ಗಿಡಮರಗಳು ಹಾಗೂ ಜಮೀನಿನ ಬದುಗಳನ್ನು ಕಾಮಗಾರಿಯ ವೇಳೆ ಹಾನಿಗೊಳಿಸಲಾಗುತ್ತಿದೆ. ಇದರಿಂದ ಪರಿಸರ ಹಾಗೂ ಜೀವವೈವಿಧ್ಯಕ್ಕೂ ಹಾನಿಯಾಗುವ ಸಾಧ್ಯತೆ ಇದೆ. ಈ ಬಗ್ಗೆ ಸಂಬಂಧಿಸಿದ ಅಧಿಕಾರಿಗಳು ಗಮನಹರಿಸಬೇಕು ಎಂದು ರೈತ ಶರಣಪ್ಪ ಕಟ್ಟಿಮನಿ ಒತ್ತಾಯಿಸಿದ್ದಾರೆ.

# ಮೋದಿ ಕಾರ್ಯಕ್ರಮಕ್ಕೂ ಮುನ್ನ ಭದ್ರತಾಲೋಪ ನಕಲಿ ಗನ್ ಹೊಂದಿದ್ದ ಇಬ್ಬರ ಬಂಧನ!



**ಮುಂಬೈ, ಸೆ.8:** ಪ್ರಧಾನಿ ನರೇಂದ್ರ ಮೋದಿ ಅವರು ಭಾಗವಹಿಸಬೇಕಿದ್ದ ಕಾರ್ಯಕ್ರಮದ ಸ್ಥಳದಲ್ಲಿ ಭಾರೀ ಭದ್ರತಾ ಲೋಪವಾಗಿದ್ದು, ಅನುಮಾನಾಸ್ಪದ ರೀತಿಯಲ್ಲಿ ಓಡಾಡುತ್ತಿದ್ದ ಇಬ್ಬರನ್ನ ಮುಂಬೈ ಪೊಲೀಸರು ಮಂಗಳವಾರ ವಶಕ್ಕೆ ಪಡೆದುಕೊಂಡಿದ್ದಾರೆ.

ಮಂಗಳವಾರದಂದು ಪ್ರಧಾನಿ ಮೋದಿ ಅವರ ಕಾರ್ಯಕ್ರಮ ನಡೆಯಬೇಕಿದ್ದ ಮುಂಬೈನ ಬಾಂದ್ರಾ-ಕುರ್ಲಾ ಕಾಂಪ್ಲೆಕ್ಸ್ (ಬಿಕೆಸಿ)ನಲ್ಲಿರುವ ನೀತಾ ಅಂಬಾನಿ ಸಾಂಸ್ಕೃತಿಕ ಕೇಂದ್ರದಲ್ಲಿ ಇಬ್ಬರನ್ನು ಬಂಧಿಸಲಾಗಿದೆ ಎಂದು ಪೊಲೀಸರು ಪುಣೆಯಲ್ಲಿ ತಿಳಿಸಿದ್ದಾರೆ.

ಲಭ್ಯವಿರುವ ಮಾಹಿತಿಯ ಪ್ರಕಾರ, ಬಂಧಿತರಲ್ಲಿ 24 ವರ್ಷದ ವ್ಯಕ್ತಿಯೊಬ್ಬರು ತಾನು ಪ್ರಧಾನಿ ಕಚೇರಿಯ(ಪಿಎಂಒ) ಅಧಿಕಾರಿ ಎಂದು ಹೇಳಿಕೊಂಡಿದ್ದಾರೆ. ಆದರೆ ಪರಿಶೀಲನೆ ವೇಳೆ ಆತ ಹೊಂದಿದ್ದ ಗುರುತಿನ ಚೀಟಿ ನಕಲಿ ಎಂಬುದು ಬೆಳಕಿಗೆ ಬಂದಿದೆ. ಇನ್ನು ಬಂಧಿತ ಮತ್ತೊಬ್ಬ ವ್ಯಕ್ತಿಯ ಬಳಿ ಬಂದೂಕು ಪತ್ತೆಯಾಗಿದ್ದು, ಪ್ರಧಾನಿ ಮೋದಿ ಭಾಗವಹಿಸುವುದಕ್ಕೆ ಮುನ್ನವೇ ಈ ಬೆಳವಣಿಗೆ ಭದ್ರತಾ ಆತಂಕ ಹೆಚ್ಚಿಸಿದೆ. ಮುಂಬೈ ಪೊಲೀಸರು ಇಬ್ಬರನ್ನು ವಶಕ್ಕೆ ಪಡೆದಿದ್ದು, ತನಿಖೆ ಆರಂಭಿಸಿದ್ದಾರೆ. ತನಿಖೆಯನ್ನು ಈಗ ಮುಂಬೈ ಅಪರಾಧ ವಿಭಾಗ ಕೈಗೆತ್ತಿಕೊಂಡಿದೆ.

ಮುಂಬೈ ಪೊಲೀಸರ ಮಾಹಿತಿ ಪ್ರಕಾರ, ಕಾರ್ಯಕ್ರಮದ ಸ್ಥಳದಲ್ಲಿ ಓರ್ವ ವ್ಯಕ್ತಿ ಅನುಮಾನಾಸ್ಪದ ರೀತಿಯಲ್ಲಿ ಓಡಾಡುತ್ತಿರುವುದನ್ನು ಭದ್ರತಾ ಸಿಬ್ಬಂದಿ ಗಮನಿಸಿದ್ದಾರೆ. ಕೂಡಲೇ ಆತನನ್ನ ಪೊಲೀಸರು ವಶಕ್ಕೆ ಪಡೆದು ವಿಚಾರಣೆ ನಡೆಸಿದ್ದಾರೆ. ಬಳಿಕ ಆತನೊಂದಿಗೆ ಬಂದಿದ್ದ ಅಂಗರಕ್ಷಕನನ್ನೂ ವಶಕ್ಕೆ ಪಡೆದು ವಿಚಾರಿಸಿದ್ದಾರೆ. ವಶಕ್ಕೆ ಪಡೆದ 24 ವರ್ಷದ ರೋಹನ್ ಪಾರೇಖ್ ಎಂಬಾತ ತಾನು ಪ್ರಧಾನಮಂತ್ರಿ ಕಚೇರಿಯ ಅಧಿಕಾರಿಯಾಗಿರುವುದಾಗಿ ಪೊಲೀಸರಿಗೆ ತಿಳಿಸಿದ್ದಾನೆ. ಆದರೆ ಆತನ ಐಡಿ ಕಾರ್ಡ್ ಪರಿಶೀಲಿಸಿದಾಗ, ಗುರುತಿನ ಚೀಟಿ ನಕಲಿ ಎಂಬುದು ಪತ್ತೆಯಾಗಿದೆ. ಇದೇ ವೇಳೆ ರೋಹನ್ ಪಾರೇಖ್‌ನೊಂದಿಗೆ ಇದ್ದ ಆತನ ಅಂಗರಕ್ಷಕನ ಬಳಿ ಬಂದೂಕು ಪತ್ತೆಯಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

# ದೆಹಲಿ: 3 ವರ್ಷದಲ್ಲಿ 1100ಕ್ಕೂ ಹೆಚ್ಚು ಕಟ್ಟಡ ಕುಸಿತ

**ನವದೆಹಲಿ, ಸೆ. 8:** ರಾಷ್ಟ್ರ ರಾಜಧಾನಿ ನವದೆಹಲಿಯಲ್ಲಿ ಕಟ್ಟಡಗಳು ಕುಸಿದು ಬೀಳುವುದು ಸರ್ವೇಸಾಮಾನ್ಯವೆಂಬ ಪರಿಸ್ಥಿತಿ ಎದುರಾಗಿದೆ. ನಗರದ ಮೂಲೆ ಮೂಲೆಯಲ್ಲಿ ಆತಂಕ ಸೃಷ್ಟಿಸುತ್ತಿರುವ ಈ ದುರಂತಗಳು ನಡೆಯುತ್ತಲೇ ಇವೆ. ಕಳೆದ ಮೂರು ವರ್ಷಗಳಲ್ಲಿ ಬರೋಬ್ಬರಿ 1,100ಕ್ಕೂ ಹೆಚ್ಚು ಕಟ್ಟಡ ಕುಸಿತ ಪ್ರಕರಣಗಳು ದಾಖಲಾಗಿವೆ. ಈ ಸಾಲಿಗೆ, ದಕ್ಷಿಣ ದೆಹಲಿಯ ಸತ್ಯ ನಿಕೇತನ ಪ್ರದೇಶ ಪಿಜಿ ಕಟ್ಟಡ ಕುಸಿತ ಸೇರ್ಪಡೆಯಾಗಿದೆ. 7 ಜೀವಗಳನ್ನು ಬಲಿ ಪಡೆದ ಈ ದುರಂತದ ಬಳಿಕವಾದರೂ ದೆಹಲಿಯ ಆಡಳಿತ ಎಚ್ಚೆತ್ತುಕೊಳ್ಳುವುದೇ? ಇಂತಹ ಘಟನೆಗಳು ಮರುಕಳಿಸದಂತೆ ಕ್ರಮ ಕೈಗೊಳ್ಳುವುದೇ ಎಂಬ ಪ್ರಶ್ನೆ ದೆಹಲಿವಾಸಿಗಳಲ್ಲಿದೆ.

ದೆಹಲಿಯ ಸತ್ಯ ನಿಕೇತನ ಪ್ರದೇಶದಲ್ಲಿ ಕೇವಲ 55 ಚದರ ಗಜದ ಅತ್ಯಂತ ಕಿರಿದಾದ ಜಾಗದಲ್ಲಿ ನಿಯಮಬಾಹಿರವಾಗಿ ನಿರ್ಮಿಸಲಾಗಿದ್ದ ಐದು ಮಹಡಿಯ ಕಟ್ಟಡ ಭಾನುವಾರ ಸಂಜೆ ಕ್ಷಣಾರ್ಧದಲ್ಲಿ ಕುಸಿದು ಬಿದ್ದಿದೆ. ದುರಂತದಲ್ಲಿ, ವಿದ್ಯಾರ್ಥಿಗಳು ಸೇರಿದಂತೆ ಏಳು ಮಂದಿ ದಾರುಣವಾಗಿ ಮೃತಪಟ್ಟಿದ್ದಾರೆ. 12 ಜನರ ಸ್ಥಿತಿ ಗಂಭೀರವಾಗಿದ್ದು, ಅವರನ್ನು ಆಸ್ಪತ್ರೆಗಳಿಗೆ ದಾಖಲಿಸಲಾಗಿದೆ. ಈ ಘಟನೆಯು ದೆಹಲಿ ಮಹಾನಗರ ಪಾಲಿಕೆಯ ಅಂಧ ಆಡಳಿತ ಮತ್ತು ಅಕ್ರಮ ನಿರ್ಮಾಣಗಳ ಜಾಲವನ್ನು ಮತ್ತೊಮ್ಮೆ ಬೆತ್ತಲೆ ಮಾಡಿದೆ.

ದೆಹಲಿ ವಿಶ್ವವಿದ್ಯಾಲಯದ ದಕ್ಷಿಣ ಕ್ಯಾಂಪಸ್‌ಗೆ ತೀರಾ ಸಮೀಪದಲ್ಲಿರುವ ಸತ್ಯ ನಿಕೇತನ ಪ್ರದೇಶವು ಹೊರರಾಜ್ಯಗಳಿಂದ ಬರುವ ಅಪಾರ ಸಂಖ್ಯೆಯ ವಿದ್ಯಾರ್ಥಿಗಳ ಪ್ರಮುಖ ವಸತಿ ಕೇಂದ್ರವಾಗಿದೆ. ವಿಶ್ವವಿದ್ಯಾಲಯದಲ್ಲಿ 2.5 ಲಕ್ಷಕ್ಕೂ ಹೆಚ್ಚು ವಿದ್ಯಾರ್ಥಿಗಳಿದ್ದರೂ, ಅಧಿಕೃತ ಹಾಸ್ಟೆಲ್‌ಗಳಲ್ಲಿ ಕೇವಲ 9,000 ಹಾಸಿಗೆಗಳು ಮಾತ್ರ ಲಭ್ಯವಿವೆ. ಈ ತೀವ್ರ ವಸತಿ ಅಭಾವವನ್ನು ಬಂಡವಾಳ ಮಾಡಿಕೊಂಡಿರುವ ಸ್ಥಳೀಯರು, ಅರ್ಧ ಶತಮಾನಕ್ಕೂ ಹಳೆಯದಾದ ಪುಟ್ಟ ಮನೆಗಳಿಗೆ ಯಾವುದೇ ಸುರಕ್ಷತಾ



ಮಾನದಂಡಗಳಿಲ್ಲದೆ ಹೆಚ್ಚುವರಿ ಮಹಡಿಗಳನ್ನು ನಿರ್ಮಿಸಿ, ಪೇಯಿಂಗ್ ಗೆಸ್ಟ್ ಮತ್ತು ಖಾಸಗಿ ಹಾಸ್ಟೆಲ್‌ಗಳನ್ನಾಗಿ ಪರಿವರ್ತಿಸುತ್ತಿದ್ದಾರೆ. ಹೀಗೆ ನಿರ್ಮಾಣವಾಗಿದ್ದ 50 ವರ್ಷ ಹಳೆಯ ಕಟ್ಟಡದ ಬೇಸ್ಮೆಂಟ್ನಲ್ಲಿ ಅಕ್ರಮವಾಗಿ ದುರಸ್ತಿ ಕಾಮಗಾರಿ ನಡೆಸುತ್ತಿದ್ದಾಗ, ಇಡೀ ಕಟ್ಟಡ ದುರ್ಬಲಗೊಂಡು ಏಕಾಏಕಿ ನೆಲಸಮಗೊಂಡಿದೆ. ಈ ಕಟ್ಟಡಕ್ಕೆ ಪಾಲಿಕೆಯಿಂದ ಅನುಮೋದಿತ ನಕ್ಷೆಯಾಗಲಿ, ಅಗ್ನಿಶಾಮಕ ಇಲಾಖೆಯ ನಿರಾಕ್ಷೇಪಣಾ ಪತ್ರವಾಗಲಿ ಇರಲಿಲ್ಲ ಎಂಬುದು ಪ್ರಾಥಮಿಕ ತನಿಖೆಯಿಂದ ಖಚಿತವಾಗಿದೆ. ವಿಪರ್ಯಾಸವೆಂದರೆ, ಇದೇ ಸತ್ಯನಿಕೇತನ ಪ್ರದೇಶದಲ್ಲಿ ಕೇವಲ ನಾಲ್ಕು ವರ್ಷಗಳ ಹಿಂದೆ ಇದೇ ಮಾದರಿಯ ದುರಂತ ಸಂಭವಿಸಿ ಇಬ್ಬರು ಕಾರ್ಮಿಕರು ಪ್ರಾಣ ಕಳೆದುಕೊಂಡಿದ್ದರು. ಅಂದು ಪಾಲಿಕೆಯು ಆ ಕಟ್ಟಡವನ್ನು ಅಪಾಯಕಾರಿ ಎಂದು ಗುರುತಿಸಿದ್ದರೂ, ಕ್ರಮ ಕೈಗೊಳ್ಳುವ ಮುನ್ನವೇ ದುರಂತ ನಡೆದುಹೋಗಿತ್ತು. ಇಷ್ಟೆಲ್ಲಾ ಅನುಭವಗಳಿದ್ದರೂ ಆಡಳಿತ ವ್ಯವಸ್ಥೆ ಯಾವುದೇ ಪಾಠ ಕಲಿತಿಲ್ಲ ಎಂಬುದಕ್ಕೆ ಭಾನುವಾರದ ಘಟನೆ ಸ್ಪಷ್ಟ ನಿದರ್ಶನವಾಗಿದೆ.

ದೆಹಲಿ ಅಗ್ನಿಶಾಮಕ ಇಲಾಖೆಯ ದಾಖಲೆಗಳ ಪ್ರಕಾರ, ದೆಹಲಿಯಲ್ಲಿ ಕಳೆದ ಮೂರು ವರ್ಷಗಳಲ್ಲಿ 1,100ಕ್ಕೂ ಹೆಚ್ಚು ಕಟ್ಟಡಗಳು ಕುಸಿದುಬಿದ್ದಿವೆ. ಈ ಪೈಕಿ, 2022–23ರಲ್ಲಿ 349, 2023–24ರಲ್ಲಿ 371 ಹಾಗೂ 2024ರಿಂದ 2025ರ ಜನವರಿ ಅವಧಿಯಲ್ಲೇ 413 ಕಟ್ಟಡ ಕುಸಿತದ ಘಟನೆಗಳು ಸಂಭವಿಸಿವೆ. ಪ್ರಸಕ್ತ ವರ್ಷದ ಮೇ ತಿಂಗಳಿನಲ್ಲೂ ಸೈದುಲಾಜಾಬ್ ಪ್ರದೇಶದಲ್ಲಿ ಅಕ್ರಮ ಕಟ್ಟಡ ಕುಸಿದು ಆರು ಮಂದಿ ಬಲಿಯಾಗಿದ್ದರು. ಆ ವೇಳೆ ಪೊಲೀಸ್ ಇಲಾಖೆಯು ಅಕ್ರಮ ನಿರ್ಮಾಣದ ಬಗ್ಗೆ ಮುಂಚಿತವಾಗಿಯೇ ನೋಟಿಸ್ ನೀಡಿದ್ದರೂ, ಪಾಲಿಕೆಯ ಅಧಿಕಾರಿಗಳು ನಿರ್ಲಕ್ಷ್ಯ ವಹಿಸಿದ್ದರು. ಮಾತ್ರವಲ್ಲದೆ, ತನಿಖೆ ತಡೆಯಲು ಹಿಂದಿನ ದಿನಾಂಕದ ನಕಲಿ ದಾಖಲೆ ಸೃಷ್ಟಿಸಿದ್ದರೆಂಬ ಗಂಭೀರ ಆರೋಪಗಳೂ ಕೇಳಿಬಂದಿದ್ದವು.

ಸಾಮಾನ್ಯವಾಗಿ ದೆಹಲಿಯಲ್ಲಿ ಇಂತಹ ದೊಡ್ಡ ದುರಂತಗಳು ಸಂಭವಿಸಿದಾಗಲೆಲ್ಲ ಆಡಳಿತ ವ್ಯವಸ್ಥೆಯು ಒಂದೇ ರೀತಿಯ ನಾಟಕೀಯ ಪ್ರತಿಕ್ರಿಯೆ ನೀಡುತ್ತಾ ಬಂದಿದೆ. ಘಟನೆ ನಡೆದ ತಕ್ಷಣ ಸ್ಥಳೀಯ ಸರ್ವೆ, ಅಕ್ರಮ ಕಟ್ಟಡಗಳಿಗೆ ನೋಟಿಸ್, ಕೆಲವು ಕಟ್ಟಡಗಳ ಸೀಲಿಂಗ್, ತನಿಖಾ ಸಮಿತಿ ರಚನೆ ಹಾಗೂ ಕೆಳಹಂತದ ಅಧಿಕಾರಿಗಳ ಅಮಾನತು ಇವಿಷ್ಟೇ ಸರ್ಕಾರದ ತತ್ಕ್ಷಣದ ಕ್ರಮಗಳಾಗಿರುತ್ತವೆ.ಸತ್ಯ ನಿಕೇತನ ಪ್ರಕರಣದಲ್ಲೂ ದಕ್ಷಿಣ ವಲಯದ ಐವರು ಅಧಿಕಾರಿಗಳನ್ನು ಅಮಾನತುಗೊಳಿಸಲಾಗಿದೆ. ಸುತ್ತಮುತ್ತಲಿನ ಆರು ಅಪಾಯಕಾರಿ ಕಟ್ಟಡಗಳನ್ನು ಸೀಲ್ ಮಾಡಲಾಗಿದೆ ಹಾಗೂ ಹೈಕೋರ್ಟ್‌ನ ಚಾಟಿಯೇಟಿನ ಬಳಿಕ ಕಟ್ಟಡಗಳಿಗೆ ಸ್ಟ್ರಕ್ಚರಲ್ ಆಡಿಟ್ ಕಡ್ಡಾಯಗೊಳಿಸುವ ಭರವಸೆ ಸಿಕ್ಕಿದೆ. ಆದರೆ, ಸಾವುಗಳು ಸಂಭವಿಸಿದ ನಂತರವಷ್ಟೇ ಎಚ್ಚೆತ್ತುಕೊಂಡು ಕಣ್ಣು ಬಿಡುವ ನಗರಾಡಳಿತದ ಈ ಧೋರಣೆ ಎಂದಿಗೆ ಕೊನೆಗೊಳ್ಳಲಿದೆ ಎಂದು ಸ್ಥಳೀಯರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

# ಯುಕ್ರೇನ್ ವಿರುದ್ಧದ ಯುದ್ಧ: ಭಾರತದ ಶಾಂತಿ ಯತ್ನಗಳಿಗೆ ರಷ್ಯಾ ಸ್ವಾಗತ

**ನವದೆಹಲಿ, ಸೆ.8:** ಯುಕ್ರೇನ್ ಸಂಘರ್ಷವನ್ನು ಶಾಂತಿಯುತ ಮಾರ್ಗಗಳ ಮೂಲಕ ಪರಿಹರಿಸಲು ಭಾರತ ನಡೆಸುವ ಯಾವುದೇ ಪ್ರಯತ್ನಗಳನ್ನು ಸ್ವಾಗತಿಸುವುದಾಗಿ ರಷ್ಯಾ ಮಂಗಳವಾರ ಹೇಳಿದೆ ಮತ್ತು ಅದನ್ನು ಕೊನೆಗೊಳಿಸುವ ಮಾರ್ಗಗಳಲ್ಲಿ ಮಾಸ್ಕೋ ನವದೆಹಲಿಯೊಂದಿಗೆ ಸಮನ್ವಯ ಹೊಂದಿದೆ.

ಬ್ರಿಕ್ಸ್ ಶೃಂಗಸಭೆಯ ಹೊರತಾಗಿ ಶುಕ್ರವಾರದಂದು ರಷ್ಯಾ ಅಧ್ಯಕ್ಷ ವ್ಲಾದಿಮಿರ್ ಪುಟಿನ್ ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ದ್ವಿಪಕ್ಷೀಯ ಸಭೆ ನಡೆಸಲಿದ್ದಾರೆ ಎಂದು ರಷ್ಯಾದ ಅಧ್ಯಕ್ಷೀಯ ವಕ್ತಾರ ಡಿಮಿಟ್ರಿ ಪೆಸ್ಕೋವ್ ಹೇಳಿದ್ದಾರೆ. ಯುಕ್ರೇನಿಯನ್ ಸಂಘರ್ಷದ ಬಗ್ಗೆ ಭಾರತದ ನಿಲುವು ನಮಗೆ ತಿಳಿದಿದೆ ಮತ್ತು ಹೆಚ್ಚಿನ ಮಟ್ಟಿಗೆ, ಅದು ನಮ್ಮ ಸ್ವಂತ ನಿಲುವಿಗೆ ಅನುಗುಣವಾಗಿದೆ. ಏಕೆಂದರೆ ನಾವು ಯುಕ್ರೇನಿಯನ್ ಸಂಘರ್ಷವನ್ನು ಶಾಂತಿಯುತ ಮಾರ್ಗಗಳಿಂದ ಪರಿಹರಿಸಲು ಬಯಸುತ್ತೇವೆ" ಎಂದು ಮಾಸ್ಕೋದಿಂದ ಆನ್‌ಲೈನ್ ಬ್ರೀಫಿಂಗ್‌ನಲ್ಲಿ ಪೆಸ್ಕೋವ್ ಹೇಳಿದರು.

### ತೈಲ ಖರೀದಿ ಮೇಲೆ ಒತ್ತಡ ಹೇರುವುದರಿಂದ ಯುದ್ಧ ನಿಲ್ಲಲ್ಲ: ಜೈಶಂಕರ್

ರಷ್ಯಾದ ಕಚ್ಚಾ ತೈಲವನ್ನು ಖರೀದಿಸುವ ದೇಶಗಳ ಮೇಲೆ ಶೇ.100 ರಷ್ಟು ಸುಂಕವನ್ನು ವಿಧಿಸುವ ಪ್ರಸ್ತಾವಿತ ಅಮೆರಿಕದ ಕ್ರಮದ ಬಗ್ಗೆ, ಅದು "ಕಾನೂನುಬಾಹಿರ ಮತ್ತು ಸ್ವೀಕಾರಾರ್ಹವಲ್ಲ" ಎಂದು ಹೇಳಿದರು. ಹೊಸ ಪರಮಾಣು ಸ್ಥಾವರಗಳನ್ನು ಸ್ಥಾಪಿಸುವ ಕುರಿತು ಭಾರತದೊಂದಿಗೆ ಮಾತುಕತೆಗಾಗಿ ರಷ್ಯಾ ಕಾಯುತ್ತಿದೆ ಎಂದು ರಷ್ಯಾದ ಅಧ್ಯಕ್ಷೀಯ ವಕ್ತಾರರು ಹೇಳಿದರು.

# ರಾಹುಲ್ ಗಾಂಧಿ ವಿರುದ್ಧದ ಮೊಕದ್ದಮೆ ರದ್ದತಿಗೆ ಕೋರ್ಟ್ ನಕಾರ

**ಮುಂಬೈ, ಸೆ. 8:** ಪ್ರಧಾನಿ ಮೋದಿ ಅವರನ್ನು ಉದ್ದೇಶಿಸಿ ದೌಕಿದಾರ್ ಚೋರ್ ಹೈ ಎಂದಿದ್ದಕ್ಕಾಗಿ ರಾಹುಲ್ ಗಾಂಧಿ ವಿರುದ್ಧ ದಾಖಲಾಗಿದ್ದ ಮಾನನಷ್ಟ ಮೊಕದ್ದಮೆಯನ್ನು ರದ್ದುಗೊಳಿಸಲು ಬಾಂಬೆ ಹೈಕೋರ್ಟ್ ನಿರಾಕರಿಸಿದೆ. ತಮ್ಮ ವಿರುದ್ಧದ ಮೊಕದ್ದಮೆಯನ್ನು ರದ್ದುಗೊಳಿಸುವಂತೆ ಕೋರಿ ರಾಹುಲ್ ಗಾಂಧಿ ಸಲ್ಲಿಸಿದ್ದ ಅರ್ಜಿಯನ್ನು ವಜಾಗೊಳಿಸಿದೆ.

ರಾಹುಲ್ ಗಾಂಧಿ ಅವರ ಅರ್ಜಿಯನ್ನು ವಿಚಾರಣೆ ನಡೆಸಿದ ಹೈಕೋರ್ಟ್‌ನ ನ್ಯಾಯಮೂರ್ತಿ ಎನ್.ಆರ್. ಬೋರ್ಕರ್ ಅವರಿದ್ದ ಏಕಸದಸ್ಯ ಪೀಠ, ಮ್ಯಾಜಿಸ್ಟ್ರೇಟ್ ನ್ಯಾಯಾಲಯ ಹೊರಡಿಸಿದ್ದ ಸಮನ್ಸ್‌ನಲ್ಲಿ ಯಾವುದೇ ಕಾನೂನುಬಾಹಿರತೆ ಅಥವಾ ಲೋಪ ಕಂಡುಬಂದಿಲ್ಲ? ಎಂದು ಹೇಳಿದೆ.

ಆದಾಗ್ಯೂ, ಈ ತೀರ್ಪುನ್ನು ಸುಪ್ರೀಂ ಕೋರ್ಟ್‌ನಲ್ಲಿ ಪ್ರಶ್ನಿಸಲು ರಾಹುಲ್ ಗಾಂಧಿ ಅವರಿಗೆ ಆರು ವಾರಗಳ ಕಾಲಾವಕಾಶ ನೀಡಿದೆ. ಈ ಅವಧಿಯಲ್ಲಿ ಅವರು ಮ್ಯಾಜಿಸ್ಟ್ರೇಟ್ ನ್ಯಾಯಾಲಯಕ್ಕೆ ಹಾಜರಾಗುವುದರಿಂದ



ವಿನಾಯಿತಿ ನೀಡಿದೆ.

2018ರ ಸಂದರ್ಭದಲ್ಲಿ ಪ್ರಧಾನಿ ಮೋದಿ ಅವರನ್ನು ಬಿಜೆಪಿಗರು ಮತ್ತು ಮೋದಿ ಭಕ್ತರು ಚೌಕಿದಾರ್ ಎಂದು ಬಣ್ಣಿಸುತ್ತಿದ್ದರು. ಇದೇ ವೇಳೆ, ಆ ವರ್ಷದ ಸೆಪ್ಟೆಂಬರ್‌ನಲ್ಲಿ ರಾಜಸ್ಥಾನದಲ್ಲಿ ನಡೆದ ಸಾರ್ವಜನಿಕ ಸಭೆಯಲ್ಲಿ ಮೋದಿ ವಿರುದ್ಧ ವಾಗ್ದಾಳಿ ನಡೆಸಿದ್ದ ರಾಹುಲ್ ಗಾಂಧಿ, ಚೌಕಿದಾರ್ ಚೋರ್ ಹೈ ಎಂದು ಟೀಕಿಸಿದ್ದರು. ಅವರ ಈ ಟೀಕೆಯು ಪ್ರಧಾನಿ ಮೋದಿ ಅವರಿಗೆ ಮಾನಹಾನಿ ಮಾಡಿದೆ ಎಂದು ಆರೋಪಿಸಿ ಬಿಜೆಪಿ ಮುಖಂಡ ಮಹೇಶ್ ಶ್ರೀಮಲ್ ಎಂಬಾತ ಮುಂಬೈನ ಗಿರ್ಗಾಂವ್ ಮ್ಯಾಜಿಸ್ಟ್ರೇಟ್ ನ್ಯಾಯಾಲಯದಲ್ಲಿ ಖಾಸಗಿ ದೂರು ದಾಖಲಿಸಿದ್ದರು. ಈ ದೂರಿನ ಆಧಾರದ ಮೇಲೆ 2019ರ ಆಗಸ್ಟ್‌ನಲ್ಲಿ ಮ್ಯಾಜಿಸ್ಟ್ರೇಟ್ ನ್ಯಾಯಾಲಯವು ರಾಹುಲ್ ಅವರಿಗೆ ಸಮನ್ಸ್ ಜಾರಿ ಮಾಡಿತ್ತು. ಕೋರ್ಟ್‌ಗೆ ಹಾಜರಾಗುವಂತೆ ಸೂಚಿಸಿತ್ತು.

ಈ ಸಮನ್ಸ್ ರದ್ದುಗೊಳಿಸುವಂತೆ ಕೋರಿ ರಾಹುಲ್ ಗಾಂಧಿ ಪರ ವಕೀಲರು ಹೈಕೋರ್ಟ್ ಮೆಟ್ಟಿಲೇರಿದ್ದರು. ಈ ದೂರು ರಾಜಕೀಯ ಪ್ರೇರಿತವಾಗಿದೆ ಮತ್ತು ಪಕ್ಷದ ನಾಯಕರೊಬ್ಬರ ವಿರುದ್ಧದ ಹೇಳಿಕೆಗೆ ಪ್ರತ್ಯೇಕವಾಗಿ ಪ್ರತಿಯೊಬ್ಬ ಕಾರ್ಯಕರ್ತನೂ ದೂರು ನೀಡಲು ಅವಕಾಶವಿಲ್ಲ ಎಂದು ವಾದಿಸಿದ್ದರು.

ಆದರೆ, ಸಂಘಟನೆಯ ಅಥವಾ ಪಕ್ಷದ ನಾಯಕರ ವಿರುದ್ಧದ ಹೇಳಿಕೆಗಳು ಆ ಪಕ್ಷದ ಪದಾಧಿಕಾರಿಗಳಿಗೂ ಅನ್ವಯಿಸುವುದರಿಂದ ದೂರುದಾರರಿಗೆ ಕಾನೂನುಬದ್ಧ ಹಕ್ಕಿದೆ ಎಂದು ಮಹಾರಾಷ್ಟ್ರದ ಅಡ್ವೊಕೇಟ್ ಜನರಲ್ ಮಿಲಿಂದ್ ಸಾಠೆ ಮತ್ತು ದೂರುದಾರರ ಪರ ವಕೀಲರು ವಾದ ಮಂಡಿಸಿದರು. ವಾದ-ಪ್ರತಿವಾದಗಳನ್ನು ಆಲಿಸಿದ ಹೈಕೋರ್ಟ್, ಈ ವಿಚಾರದ ಸತ್ಯಾ.ಸತ್ಯತೆಯನ್ನು ವಿಚಾರಣೆ ಹಂತದಲ್ಲೇ ನಿರ್ಧರಿಸಬೇಕಿದ್ದು, ಈಗ ಪ್ರಕರಣ ವಜಾಗೊಳಿಸಲು ಸಾಧ್ಯವಿಲ್ಲ ಎಂದು ಹೇಳಿದೆ.

# 64 ಕಲೆಗಳಲ್ಲಿ ಒಗಟು ಪ್ರಮುಖ ಕಲೆ: ಮಯೂರ ವರ್ಮ ಸಾಂಸ್ಕೃತಿಕ ಪ್ರತಿಷ್ಠಾನ ಹಮ್ಮಿಕೊಂಡ ವಿಚಾರ ಸಂಕಿರಣದಲ್ಲಿ ಡಾ.ಪ್ರಭು ಅಂಗಡಿ

**ಮುಂಬೈ, ಸೆ.8:** ಅರವತ್ತ ನಾಲ್ಕು ಕಲೆಗಳಲ್ಲಿ "ಒಗಟು" ಒಂದು ಪ್ರಮುಖ ಕಲೆಯಾಗಿ ತನ್ನಸ್ಥಾನವನ್ನು ಗಟ್ಟಿ ಮಾಡಿಕೊಂಡಿದೆ. ಒಬ್ಬರು ಮತ್ತೊಬ್ಬರಿಗೆ ಒಡ್ಡುವ ಸವಾಲು, ಒಂದು ವಸ್ತುವನ್ನು ಇನ್ನೊಂದು ವಸ್ತುವಿನ ಮುಖಾಂತರ ಮೋಡಿಯ ಮಾದರಿಯಲ್ಲಿ ರಚಿಸಿ ಅದರಲ್ಲಿ ಅಡಕವಾಗಿರುವ ಆ ಅವ್ಯಕ್ತ ವಸ್ತುವನ್ನು ವ್ಯಕ್ತ ರೂಪದಲ್ಲಿ ಕಂಡುಹಿಡಿಯುವಂತೆ ಹೇಳುವ ಕಾಲಾತ್ಮಕ ಕಲೆಯೇ "ಒಗಟು" ಆಗಿದೆ. ಒಗಟಿನಲ್ಲಿ ಎರಡು ಸಮ ಸ್ವರೂಪದ ವಸ್ತುಗಳಿರಬೇಕು ಅದರಲ್ಲಿ ಒಂದು "ಉಪಮಾನ" ಇನ್ನೊಂದು "ಉಪಮೇಯ" ಆಗಿರುತ್ತದೆ. " ಉಪಮಾನ " ವಾಚ್ಯವಾಗಿರುತ್ತದೆ ಹಾಗೂ ಉಪಮೇಯ ನಿಗೂಡ ವಾಗಿರುತ್ತದೆ ಅಂದರೆ ಗುಟ್ಟಾಗಿರುತ್ತದೆ. ಆ ಗುಟ್ಟನ್ನು ರಟ್ಟು ಮಾಡುವಂತೆ ಹೇಳುವುದೇ ಒಗಟು ಆಗಿರುತ್ತದೆ.

ಸಂಸ್ಕೃತದಲ್ಲಿ ಒಗಟಿಗೆ 'ಪ್ರಹೇಲಿಕಾ' ಅಥವಾ 'ಬ್ರಹ್ಮಮೆಧ್ಯಾ' ಅಂದರೆ, ರಹಸ್ಯ ಪೂರ್ಣ ಪ್ರಶ್ನೋತ್ತರ ವ್ಯವಹಾರದಲ್ಲಿ ನಿಗೂಢತೆಯನ್ನು ಉಪಯೋಗಿಸಿ ಸಾಮಾನ್ಯರಿಗೆ ಅರ್ಥವಾಗದ ಪದ್ಧತಿಯಲ್ಲಿ ಬಳಸುವ ಚಾಣಾಕ್ಷ ಕಲೆ ಒಗಟು ಎಂದು ಅರ್ಥವಿದೆ. ಈಗಲೂ ರಾಜಕೀಯ ಸ್ತರದಲ್ಲಿ, ಧಾರ್ಮಿಕ ಸ್ವರೂಪದಲ್ಲಿ ಅಲ್ಲದೆ ಕಳ್ಳಸಾಗಾಣಿಕೆ ಸೇರಿದಂತೆ ಅನೇಕ ವ್ಯವಹಾರದಲ್ಲಿ ತಮ್ಮದೇ ಆದಂತ "ಒಗಟಿ"ನ ಭಾಷೆಯಲ್ಲಿ ಬಳಸುವುದನ್ನು ನಾವು ಗಮನಿಸಬಹುದಾಗಿದೆ. ಒಂದು ಕಣ್ಣಿದೆ, ಆದರೆ ಕಾಗೆಯಲ್ಲ, ಅದಕ್ಕೆ ಬಿಲ ಬೇಕು ಆದರೆ ಹಾವಲ್ಲ, ಅದು ಹಿಗ್ಗುತ್ತದೆ ಕುಗ್ಗುತ್ತದೆ ಆದರೆ ಕಡಲಲ್ಲ – ಚಂದ್ರಮಾನು ಅಲ್ಲ ಹಾಗಾದರೆ ಮತ್ತೇನು...? ಈ ಒಗಟು ಸೂಜಿ–ದಾರದ ಕಥೆಯನ್ನು ಹೇಳುತ್ತದೆ

ಮಯೂರ ವರ್ಮ ಸಾಂಸ್ಕೃತಿಕ ಪ್ರತಿಷ್ಠಾನ ಮುಂಬೈ ಹಾಗೂ ಎ.ಎನ್.ಬಿ ಮೆಮೋರಿಯಲ್ ಟ್ರಸ್ಟ್ ಬೆಂಗಳೂರು ಇವರ ಸಂಯುಕ್ತ ಆಶ್ರಯದಲ್ಲಿ ಬೆಂಗಳೂರಿನ ಕನ್ನಡ ಸಾಹಿತ್ಯ ಪರಿಷತ್ ನ ಕುವೆಂಪು ಸಭಾಂಗಣದಲ್ಲಿ ಇತ್ತೀಚೆಗೆ ಹಮ್ಮಿಕೊಂಡ "ಒಗಟುಗಳು ಹಾಗೂ ಜಾನಪದ ವೈವಿದ್ಯ" ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಿ ಒಗಟಿನ ಕುರಿತು ಒಗಟುಗಳು ಕಾಲಕ್ಕೆ ತಕ್ಕಂತೆ ತನ್ನತನವನ್ನು ಬದಲಾಯಿಸಿಕೊಳ್ಳುತ್ತವೆ. ಅವುಗಳನ್ನು ಬಳಸುವ ವ್ಯಕ್ತಿಗಳ ಜಾಣ್ಮೆಯ ಪ್ರತಿ ಬಿಂಬಗಳಾಗಿ ಅವುಗಳು ಮೂಡುತ್ತವೆ ಎಂದು ಹಿರಿಯ ವಿದ್ವಾಂಸರಾದ ಡಾ



। ಪ್ರಭು ಅಂಗಡಿಅವರು ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದರು.

ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಿದ ಡಾ। ಋಷಿದೇವ್ ಭಾರ್ಗವ ಪುರಾಣ ಹಾಗೂ ಸಂಸ್ಕೃತ ಸಾಹಿತ್ಯದಲ್ಲಿ ಒಗಟು ಯಾವ ರೀತಿ ಬಳಕೆಯಾಗಿದೆ ಎಂಬುದನ್ನು ತಿಳಿಸಿದರು. ಇನ್ನೊರ್ವ ಸಂಪನ್ಮೂಲವ್ಯಕ್ತಿಗಳಾದ ಡಾ। ಮೈಥಿಲರಾವ್ ತಮ್ಮ ಅಭಿಪ್ರಾಯ ಮಂಡಿಸುತ್ತಾ, ಉತ್ತರ ಭಾರತ ಹಾಗೂ ಹಿಂದಿ ಭಾಷೆಯಲ್ಲಿರುವ ವಿವಿಧ ಒಗಟಿನ ಬಳಕೆ ಕುರಿತು ಮಾಹಿತಿ ಹಂಚಿಕೊಂಡರು.ಕಾರ್ಯಕ್ರಮದ ಸಭಾಧ್ಯಕ್ಷತೆ ವಹಿಸಿದ್ದ ಮಯೂರ ವರ್ಮ ಸಾಂಸ್ಕೃತಿಕ ಪ್ರತಿಷ್ಠಾನದ ಅಧ್ಯಕ್ಷ ಮಧುಸೂದನ್ ಟಿ.ಆರ್. ಅವರು ಎ.ಎಸ್ ಬಿ ಮೆಮೋರಿಯಲ್ ಟ್ರಸ್ಟಿನ ಅಧ್ಯಕ್ಷ ಹಿರಿಯ ಅವಿಶ್ರಾಂತ ಜಿಜ್ಞಾಸು ಆಗುಂಬೆ ನಟರಾಜ್ ಅವರ 84 ಇಳಿ ವಯಸ್ಸಿನಲ್ಲೂ ತುಂಬಿ ತುಳುಕುತ್ತಿರುವ ಅವರ ಜೀವನೋತ್ಸಾಹ, ಇನ್ನೂ ತಿಳಿದು ಕೊಳ್ಳಬೇಕೆಂಬ ಹಂಬಲಗಳು, ಕುತೂಹಲಗಳು ಯುವ ಜನತೆಗೆ ಮಾದರಿಯಾಗಿದೆ ಎಂದು ಹೇಳಿದರು. ನಾವುಗಳು ತಂತ್ರಜ್ಞಾನದ ಕಪಿಮುಷ್ಠಿಯಲ್ಲಿ ಬಂದಿಯಾಗುತ್ತಿದ್ದೇವೆ ಇಂತಹ ಸಂದರ್ಭದಲ್ಲಿ ನಮ್ಮ ಪೂರ್ವಜರ ಅಪರೂಪದ ಜ್ಞಾನಸಂಪತ್ತಾದ ಜಾನಪದದ ಕುರಿತು ತಿಳಿದುಕೊಳ್ಳಲು ಸೇರಿದ್ದೇವೆ. ಈ ಒಗಟು ಎನ್ನುವ ಜಾನಪದ ಕಲಾ ಪ್ರಕಾರ ಮೈ ಮನಗಳಿಗೆ ಇಂಪನ್ನು ನೀಡುವುದರೊಂದಿಗೆ ಬುದ್ದಿಯನ್ನು ಜಾಗೃತಗೊಳಿಸಿ ರಹಸ್ಯ ಲೋಕಕ್ಕೆ ಕೊಂಡು ಹೋಗುತ್ತದೆ. ನಮ್ಮನ್ನು ಕೂತುಹಲಿಗಳನ್ನಾಗಿ ಮಾಡಿ ನಮ್ಮಲ್ಲಿ ಹೊಸ ಚೈತನ್ಯ ಮೂಡಿಸುವ ಶಕ್ತಿ "ಒಗಟು" ಎನ್ನುವ ಜಾನಪದ ಕಲಾ ಪ್ರಕಾರಕ್ಕೆ ಇದೆ ಎಂದು ತಮ್ಮ ಅಧ್ಯಕ್ಷೀಯ ಭಾಷಣದಲ್ಲಿ ಅವರು ತಿಳಿಸಿದರು. ಕನ್ನಡ ಸಂಪದದ ಒಂಕಾರಪ್ರಿಯ ಬಾಗೇಪಲ್ಲಿ ಅವರು ಒಗಟು ಎನ್ನುವ ಜಾನಪದ ಕಲೆ ಯಾವ ರೀತಿ ಒತ್ತಡವನ್ನು ಕಡಿಮೆ ಮಾಡಿ ನಮ್ಮ ಆರೋಗ್ಯಕ್ಕೆ ಪೂರಕ ವಾತಾವರಣ ನಿರ್ಮಾಣ ಮಾಡುತ್ತದೆ ಎನ್ನುವುದನ್ನು ವಿವರಿಸಿದರು. ಪ್ರತಿಷ್ಠಾನದ ಸ್ಥಾಪಕ ವಿಶ್ವನಾಥ ದೊಡ್ಮನೆ ಪ್ರತಿಷ್ಠಾನವ ಕಾರ್ಯ ಚಟುವಟಿಕೆ ವಿವರಿಸಿ ಕಾರ್ಯಕ್ರಮದ ಮೂಲ ಆಶಯ ತಿಳಿಸಿದರು. ಎ ಎನ್ ಬಿ ಟ್ರಸ್ಟ್ ನ ಆಗುಂಬೆ ನಟರಾಜ ಅವರು ಗಾದೆ ಹಾಗೂ ಒಗಟು ತನ್ನ ಮೇಲೆ ಹೇಗೆ ಪರಿಣಾಮ ಬೀರಿದೆ ಎಂಬುದನ್ನು ವಿವರಿಸಿದರು.

ಕಾರ್ಯಕ್ರಮದ ಪ್ರಾರಂಭದಲ್ಲಿ ಕುಮಾರಿ ನಿಶಿತಾ ಜಿ.ಆರ್ ಅವರಿಂದ ಗೀತಗಾಯನ ಹಾಗೂ ಕುಮಾರಿ ಪ್ರಣತಿ ಅವರಿಂದ ಜಾನಪದ ನೃತ್ಯ ಕಾರ್ಯಕ್ರಮ ನಡೆಯಿತು. ಶ್ರೀ ಕೇಶವ ಕಿಬ್ಬೆ ಅವರು ಎಲ್ಲರನ್ನು ಸ್ವಾಗತಿಸಿದರು. ಶ್ರೀಕಲಾ ಹಂಸ ಕಾರ್ಯಕ್ರಮ ನಿರೂಪಿಸಿ ಮದನಾರ್ಪಣೆ ಮಾಡಿದರು. ಸಿರಿಕಲಾ ಮೇಳದ ಸರೇಶ ಹೆಗಡೆ, ನಿವೃತ್ತ ಐಎಎಸ್ ಅಧಿಕಾರಿ ಹಾಗೂ ಸಾಹಿತಿ ವಿಶ್ವನಾಥ, ಸತೀಶ ಕುಮಾರ ಕೆ ಸಿ ಮುಂತಾದ ಗಣ್ಯರು ಸೇರಿದಂತೆ ಅನೇಕ ಸಾಹಿತ್ಯಾಸಕ್ತರು ಸಮಾರಂಭದಲ್ಲಿ ಉಪಸ್ಥಿತರಿದ್ದರು.

# ಗ್ಯಾಂಗ್ ರೇಪ್: ಓರ್ವನಿಗೆ ಮರಣದಂಡನೆ, ಇಬ್ಬರಿಗೆ ಜೈಲು

**ಚೆನ್ನೈ, ಸೆ. 8:** ತಮಿಳುನಾಡಿನ ತಿರುನೆಲ್ವೇಲಿಯಲ್ಲಿ 16 ವರ್ಷದ ವಿದ್ಯಾರ್ಥಿನಿಯ ಮೇಲೆ ನಡೆದ ಸಾಮೂಹಿಕ ಅತ್ಯಾಚಾರ ಪ್ರಕರಣದಲ್ಲಿ ಪೋಕ್ಸೋ ವಿಶೇಷ ನ್ಯಾಯಾಲಯವು ಕಠಿಣ ತೀರ್ಪು ನೀಡಿದೆ. ಮೂವರು ಆರೋಪಿಗಳಲ್ಲಿ ಪ್ರಮುಖ ಆರೋಪಿಗೆ ಮರಣದಂಡನೆ ಮತ್ತು ಉಳಿದ ಇಬ್ಬರಿಗೆ ಕ್ರಮವಾಗಿ 20 ವರ್ಷ ಮತ್ತು 13 ವರ್ಷಗಳ ಕಠಿಣ ಜೈಲು ಶಿಕ್ಷೆ ವಿಧಿಸಿದೆ.

2022ರಲ್ಲಿ ತಿರುನೆಲ್ವೇಲಿಯ ಒಂದು ಕಾಲೇಜಿಗೆ ಸುಣ್ಣ ಬಣ್ಣದ ಕೆಲಸಕ್ಕೆಂದು ಬಂದಿದ್ದ ತೂತುಕುಡಿ ಜಿಲ್ಲೆಯ ವಿಳಾತ್ತಿಕುಳಂನ ಪೇಂಟರ್ ಮುನೀಸ್ವರನ್, 16 ವರ್ಷದ ವಿದ್ಯಾರ್ಥಿನಿಯೊಂದಿಗೆ ಪರಿಚಯ ಮಾಡಿಕೊಂಡು, ಪ್ರೀತಿ ಪ್ರೇಮದ ಹೆಸರಿನಲ್ಲಿ ಆತ್ಮೀಯತೆ ಬೆಳೆಸಿಕೊಂಡಿದ್ದ. 2 ವಾರಗಳ ಕಾಲ ಫೋನ್ ಸಂಭಾಷಣೆಯ ಮೂಲಕ ಬಾಲಕಿಗೆ ಹತ್ತಿರವಾಗಿದ್ದ ಆರೋಪಿ ಬಾಲಕಿಯನ್ನು ಮದುವೆಯಾಗುವುದಾಗಿ ನಂಬಿಸಿದ್ದ. ಒಂದು ದಿನ ಪುಸಲಾಯಿಸಿ ಅರಣ್ಯ ಪ್ರದೇಶಕ್ಕೆ ಕರೆದೊಯ್ದ ದುರುಳ ಮುನೀಸ್ವರನ್, ಆಕೆಯ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ್ದಾನೆ. ಇದೇ ವೇಳೆ ಅಲ್ಲಿಗೆ ಬಂದ ಕೊಕ್ಕಿರಗುಳಂ ಪ್ರದೇಶದ ಚಿನ್ನಕುಟ್ಟಿ ಮತ್ತು ಮುರುಗೇಸನ್ ಅವರೂ ವಿದ್ಯಾರ್ಥಿನಿಯನ್ನು ಬೆದರಿಸಿ ಸಾಮೂಹಿಕ ಅತ್ಯಾಚಾರ ಎಸಗಿದ್ದಾರೆ.

ಈ ಘಟನೆ ತಮಿಳುನಾಡಿನಲ್ಲಿ ದೊಡ್ಡ ಆಘಾತವನ್ನುಂಟುಮಾಡಿತ್ತು. ವಿದ್ಯಾರ್ಥಿನಿಯ ಪರವಾಗಿ ನೀಡಲಾದ ದೂರಿನ ಆಧಾರದಲ್ಲಿ ಪಾಳಯಂಕೋಟ್ಟೈ ಆಲ್ ವುಮೆನ್ ಪೊಲೀಸ್ ಸ್ಟೇಷನ್ನಲ್ಲಿ ಪ್ರಕರಣ ದಾಖಲಾಗಿ ಮೂವರನ್ನೂ ಬಂಧಿಸಲಾಗಿತ್ತು. ಪ್ರಕರಣವನ್ನು ತಿರುನೆಲ್ವೇಲಿ ಪೋಕ್ಸೋ ವಿಶೇಷ ನ್ಯಾಯಾಲಯದಲ್ಲಿ ವಿಚಾರಣೆ ನಡೆಸಲಾಗಿತ್ತು. ಸಾಕ್ಷ್ಯಗಳು ಮತ್ತು ಪುರಾವೆಗಳ ಆಧಾರದಲ್ಲಿ ಮೂವರನ್ನೂ ತಪ್ಪಿತಸ್ಥರೆಂದು ಘೋಷಿಸಿದ ನ್ಯಾಯಾಧೀಶ ಸುರೇಶ್ ಕುಮಾರ್, ಚಿನ್ನಕುಟ್ಟಿಗೆ ಮರಣದಂಡನೆ, ಮುರುಗೇಸನ್ಗೆ 20 ವರ್ಷ, ಮುನೀಸ್ವರನ್ಗೆ 13 ವರ್ಷಗಳ ಜೈಲು ಶಿಕ್ಷೆ ವಿಧಿಸಿದ್ದಾರೆ.

ಮರಣದಂಡನೆ ವಿಧಿಸಲಾದ ಚಿನ್ನಕುಟ್ಟಿ ವಿರುದ್ಧ ಈಗಾಗಲೇ ಕೊಲೆ, ಕೊಲೆ ಪ್ರಯತ್ನ ಸೇರಿದಂತೆ ಹಲವು ಪ್ರಕರಣಗಳು ವಿವಿಧ ಪೊಲೀಸ್ ಸ್ಟೇಷನ್ಗಳಲ್ಲಿ ಬಾಕಿ ಇವೆ ಎಂದು ತಿಳಿದುಬಂದಿದೆ. ಪ್ರಸ್ತುತ ವರ್ಷದಲ್ಲಿ ಪೋಕ್ಸೋ ಪ್ರಕರಣಗಳಲ್ಲಿ ನಾಲ್ಕು ಜನರಿಗೆ ಮರಣದಂಡನೆ ವಿಧಿಸಲಾಗಿದ್ದು, ತಿರುನೆಲ್ವೇಲಿ ಪೋಕ್ಸೋ ವಿಶೇಷ ನ್ಯಾಯಾಲಯದ ನ್ಯಾಯಾಧೀಶ ಸುರೇಶ್ ಕುಮಾರ್ ಇಲ್ಲಿಯವರೆಗೆ 10 ಜನ ಆರೋಪಿಗಳಿಗೆ ಮರಣದಂಡನೆ ವಿಧಿಸಿದ್ದಾರೆ ಎಂಬುದು ಗಮನಾರ್ಹ.

## ಪೇಜಾವರ ಮಠದಲ್ಲಿ (ಮುಂಬಯಿ) ಕೃಷ್ಣಾಷ್ಟಮಿ ಲೀಲೋತ್ಸವ–ವಿಟ್ಲಪಿಂಡಿ ಸಂಭ್ರಮ–ಕೃಷ್ಣ ಸಂದೇಶ

# ಶ್ರೀಕೃಷ್ಣನ ಅವತಾರದ ಸ್ಮರಣೆಯೇ ಜನ್ಮಾಷ್ಟಮಿಯ ಉದ್ದೇಶ: ಸುಗುಣೇಂದ್ರಶ್ರೀ

**ಮುಂಬಯಿ, ಸೆ.8:** ಭಗವಂತನು ಶ್ರೀಕೃಷ್ಣನಾಗಿ ಅವತರಿಸಿದ್ದು ನಮ್ಮೆಲ್ಲರ ಉದ್ಧಾರಕ್ಕಾಗಿ. ಅವತಾರ ಎಂದರೆ ಭಗವಂತನು ಸ್ವತಃ ಮೇಲಿನಿಂದ ಕೆಳಗೆ ಇಳಿದು ಬಂದು, ಮಾನವ ರೂಪದಲ್ಲಿ ನಮ್ಮ ನಡುವೆ ನೆಲೆಸಿ, ನಮ್ಮನ್ನು ಉದ್ಧರಿಸುವುದು. ಇದು ಭಗವಂತನ ಅಪಾರ ಕರುಣೆಯ ಪ್ರತೀಕ. ಮಾನವ ಸಮಾಜಕ್ಕೆ ಶಾಶ್ವತವಾದ ಸಂದೇಶವನ್ನು ನೀಡುವ ಮೂಲಕ ಭಗವಂತನು ಶ್ರೀಕೃಷ್ಣನ ರೂಪದಲ್ಲಿ ಅವತರಿಸಿ, ನಮ್ಮನ್ನು ಜಾಗೃತ ಗೊಳಿಸಿದ್ದಾನೆ. ಅಂತಹ ಶ್ರೀಕೃಷ್ಣನ ಅವತಾರದ ಸ್ಮರಣೆಯೇ ಶ್ರೀಕೃಷ್ಣ ಜನ್ಮಾಷ್ಟಮಿ ಆಚರಣೆಯ ಮೂಲ ಉದ್ದೇಶವಾಗಿದೆ. ನಮ್ಮ ಉದ್ಧಾರಕ್ಕಾಗಿ ಅವತರಿಸಿದ ಭಗವಂತನನ್ನು ಸ್ಮರಿಸುವುದು, ಆರಾಧಿಸುವುದು ಮತ್ತು ಅವರ ಸಂದೇಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವುದೇ ನಮ್ಮ ನಿಜವಾದ ಕರ್ತವ್ಯವಾಗಬೇಕು. ಶ್ರೀಕೃಷ್ಣಾವತಾರದ ಸ್ಫೂರ್ತಿಯಿಂದ ಭಗವಂತನನ್ನು ಸ್ಮರಿಸುವುದು ಕೇವಲ ಆಚರಣೆಯಲ್ಲ; ಅದು ನಮ್ಮ ಬದುಕಿನ ಅವಿಭಾಜ್ಯ ಭಾಗವಾಗಬೇಕು. ಈ ಹಿನ್ನೆಲೆಯಲ್ಲಿ ನಾವೆಲ್ಲರೂ ಭಕ್ತಿಭಾವದಿಂದ ಶ್ರೀಕೃಷ್ಣ ಜನ್ಮಾಷ್ಟಮಿಯನ್ನು ಆಚರಿಸಬೇಕು ಎಂದು ಜಗದ್ಗುರು ಶ್ರೀ ಮಧ್ವಾಚಾರ್ಯ ಮೂಲ ಮಹಾ ಸಂಸ್ಥಾನಂ (ಉಡುಪಿ ಶ್ರೀ ಪುತ್ತಿಗೆ ಮಠ) ಇದರ ಪೀಠಾಧಿಪತಿ ಶ್ರೀ ಸುಗುಣೇಂದ್ರ ತೀರ್ಥ ಸ್ವಾಮೀಜಿ ನುಡಿದರು.

ಉಡುಪಿ ಶ್ರೀ ಪೇಜಾವರ ಮಠಧೀಶ ಶ್ರೀ ವಿಶ್ವಪ್ರಸನ್ನ ತೀರ್ಥರ ಶುಭಾಶೀರ್ವಾದ, ಮಾರ್ಗದರ್ಶನಗಳೊಂದಿಗೆ ಪೂರ್ಣಪ್ರಜ್ಞ ವಿದ್ಯಾಪೀಠ ಪ್ರತಿಷ್ಠಾನ ಮುಂಬಯಿ ಮತ್ತು ಶ್ರೀ ಪೇಜಾವರ ಮಠ ಮುಂಬಯಿ ಶಾಖೆಯ ವತಿಯಿಂದ ಇಂದಿಲ್ಲಿ ಶನಿವಾರ ಸಂಜೆ ಉಡುಪಿ ಶ್ರೀ ಪೇಜಾವರ ಮಠದ ಸಾಂತಾಕ್ರೂಜ್ ಪೂರ್ವದಲ್ಲಿನ ಮುಂಬಯಿ ಶಾಖೆಯಲ್ಲಿ 9ನೇ ವಾರ್ಷಿಕ ಉತ್ಸವವನ್ನಾಗಿಸಿ ಭಗವಾನ್ ಶ್ರೀಕೃಷ್ಣನ ಜನ್ಮೋತ್ಸವವನ್ನು ಉಡುಪಿ ಸಾಂಪ್ರದಾಯದಂತೆ ಆಚರಿಸಲಾಗಿದ್ದು, ಶ್ರೀ ಸುಗುಣೇಂದ್ರ ತೀರ್ಥ ಸ್ವಾಮೀಜಿಯವರು ದೀಪ ಬೆಳಗಿಸಿ ಚಾಲನೆ ನೀಡಿ ಶುಭ ಕೃಷ್ಣ ಸಂದೇಶವನ್ನಿತ್ತು ಸದ್ಭಕ್ತರನ್ನು ಹರಸಿದರು.

ಪೇಜಾವರ ಮಠದ (ಮಧ್ವ ಭವನದ) ಶ್ರೀ ವಿಶ್ವೇಶ ತೀರ್ಥ ಸಭಾಗೃಹದಲ್ಲಿ ಬಳಿಕ ನಡೆಸಲ್ಪಟ್ಟ ಕೃಷ್ಣ ಸಂದೇಶ ಕಾರ್ಯಕ್ರಮದಲ್ಲಿ



ಶ್ರೀ ಪೂರ್ಣಪ್ರಜ್ಞ ವಿದ್ಯಾಪೀಠ ಪ್ರತಿಷ್ಠಾನದ ಅಧ್ಯಕ್ಷ ಡಾ। ಸುರೇಶ್ ಎಸ್.ರಾವ್ ಕಟೀಲು, ಕಾರ್ಯಾಧ್ಯಕ್ಷ ಅವಿನಾಶ್ ಎಸ್.ಶಾಸ್ತ್ರಿ, ಗೌರವ ಕೋಶಾಧಿಕಾರಿ ಸರ್ವಜ್ಞ ಉಡುಪ, ಭಕ್ತಾದಿಗಳಾದ ಸಿಎ। ಸುಧೀರ್ ಆರ್.ಎಲ್ ಶೆಟ್ಟಿ, ಡಾ। ವಿಜಯಕುಮಾರ್ ಶೆಟ್ಟಿ ತೋನ್ಸೆ, ಪೇಜಾವರ ಮಠದ ಮುಂಬಯಿ ಶಾಖಾ ಮುಖ್ಯ ಆಡಳಿತಾಧಿಕಾರಿ ವಿದ್ವಾನ್ ಡಾ। ರಾಮದಾಸ ಉಪಾಧ್ಯಾಯ ರೆಂಜಾಳ, ವಿದ್ವಾನ್ ಶ್ರೀಹರಿಭಟ್ ಪುತ್ತಿಗೆ, ನಿರಂಜನ್ ಜೆ.ಗೋಗ್ಟೆ ವೇದಿಕೆಯಲ್ಲಿದ್ದು ಶ್ರೀಗಳವರ ಮುಂಬಯಿ ಚಾತುರ್ಮಾಸ್ಯದ ಶುಭಾವಸರದಿ ಭಕ್ತಿಪೂರ್ವಕವಾಗಿ ಗೌರವಿಸಿದರು.

ಶ್ರೀ ಪೇಜಾವರ ಮಠದಲ್ಲಿನ ಶಿಲಾಮಯ ಮಂದಿರದಲ್ಲಿ ಪ್ರತಿಷ್ಠಾಪಿತ ಶ್ರೀಕೃಷ್ಣನ ಸನ್ನಿಧಿಯಲ್ಲಿ ಕಳೆದ ಶುಕ್ರವಾರ ಅಪರರಾತ್ರಿ ಶ್ರೀಕೃಷ್ಣ ದೇವರಿಗೆ ಅರ್ಘ್ಯ ಪ್ರಧಾನ, ಮಹಾಪೂಜೆ, ಮಹಾ ಮಂಗಳರಾತಿ ಹಾಗೂ ಪ್ರಸಾದ ವಿತರಣೆ ನೆರವೇರಿಸಿ ವಾರ್ಷಿಕ ಕೃಷ್ಣಾಷ್ಟಮಿಗೆ ಚಾಲನೆ ನೀಡಲಾಯಿತು. ವಿದ್ವಾನ್ ಡಾ। ರಾಮದಾಸ ಉಪಾಧ್ಯಾಯ ರೆಂಜಾಳ ಧರ್ಮಶಾಸ್ತ್ರಗಳೊಂದಿಗೆ ವಾರ್ಷಿಕ ವಿಧಿವತ್ತಾಗಿ ಚಾಲನೆಯನ್ನೀಡಿದರು. ಬೆಳಗಿನಜಾವ (ನಿಶೀಥ ಸಮಯಕ್ಕೆ) ಮಠದ ಪ್ರಧಾನ ಅರ್ಚಕ ರಾಘವೇಂದ್ರ ಭಟ್ ಉಂಡಾರು ತನ್ನ ಅರ್ಚಕತ್ವದಲ್ಲಿ ಶ್ರೀದೇವರಿಗೆ ರಂಗಪೂಜೆ, ಮಹಾಪೂಜೆ ನೆರವೇರಿಸಿದರು.

ಶನಿವಾರ ಸಂಜೆ ರಾಧಾ–ಕೃಷ್ಣರ ವೇಷ ಧರಿಸಿದ ಪುಟಾಣಿಗಳ, ವಿವಿಧ ವೇಷಾಧಾರಿಗಳ ಮೇಳೈಕೆ, ಬ್ಯಾಂಡು ವಾದ್ಯ, ಚೆಂಡೆಗಳ ನೀನಾದ, ಹುಲಿವೇಷಗಳ ಕೂಡುವಿಕೆಯಲ್ಲಿ ಮೆರವಣಿಗೆ ನೆರವೇರಿತು. ಪುರೋಹಿತ ಸುರೇಶ್ ಭಟ್ ಕುಂಟಾಡಿ ಅವರು ಶ್ರೀಕೃಷ್ಣ ಉತ್ಸವಮೂರ್ತಿಯೊಂದಿಗೆ ಸ್ಥಾನೀಯ ಬೀದಿಗಳಲ್ಲಿ ಪ್ರದಕ್ಷಿಣೆ ನಡೆಸಿದ್ದು, ಮೆರವಣಿಕೆಯುದ್ದಕ್ಕೂ ಭಕ್ತರು ಕೃಷ್ಣನ ಭಕ್ತಿಗೀತೆಗಳನ್ನಾಡಿ ಉತ್ಸವಕ್ಕೆ ಕಳೆನೀಡಿದರು. ಮಕ್ಕಳು ಪ್ರವೇಶದ್ವಾರದ ಎತ್ತರದ ಕಟ್ಟಿದ್ದ ದಹಿ–ಹಂಡಿ ಮಡಕೆಗಳನ್ನು ಒಡೆದು ಶ್ರೀಕೃಷ್ಣ ಲೀಲೋತ್ಸವ ಮೊಸರು ಕುಡಿಕೆ ಉತ್ಸವ (ವಿಟ್ಲಪಿಂಡಿ) ಸಂಭ್ರಮಿಸಿದರು. ಮುದ್ದುಮಕ್ಕಳಿಗೆ ಶ್ರೀಕೃಷ್ಣ ವೇಷ ಸ್ಪರ್ಧೆ ನಡೆಸಲಾಗಿದ್ದು ಉಪಸ್ಥಿತ ಗಣ್ಯರು ಬಹುಮಾನ ವಿತರಿಸಿ ಅಭಿನಂದಿಸಿದರು.

ಶ್ರೀ ಪೂರ್ಣಪ್ರಜ್ಞ ವಿದ್ಯಾಪೀಠ ಪ್ರತಿಷ್ಠಾನದ ಟ್ರಸ್ಟಿಗಳು, ಪದಾಧಿಕಾರಿಗಳು, ಸದಸ್ಯರು, ಮಠದ ಆರ್ಚಕರಾದ ಪವನಕುಮಾರ್ ಅಣ್ಣಿಗೇರಿ, ವಿಷ್ಣುತೀರ್ಥ ಸಾಲಿ, ಗುರುಪ್ರಸಾದ್ ಭಟ್ ಅಂಬಾಗಿಲು, ರಾಧಾಕೃಷ್ಣ ಭಟ್, ರಮೇಶ್ ಭಟ್, ಹಿರಿಯ ಪುರೋಹಿತ ಪ್ರಕಾಶ ಆಚಾರ್ಯ ರಾಮಕುಂಜ, ಪರೇಲ್ ಶ್ರೀನಿವಾಸ ಭಟ್, ವಾಸುದೇವ ರಾವ್, ರಾಮಚಂದ್ರ ಸಾಮಗ, ಸುದರ್ಶನ ಭಟ್, ಸಹ ಪುರೋಹಿತರು ಮತ್ತು ಮಠದ ಸಿಬ್ಬಂದಿಗಳು, ಡಾ। ಸುರೇಂದ್ರ ಕುಮಾರ್ ಹೆಗ್ಡೆ, ಕಮಲಾಕ್ಷ ಸರಾಫ್, ಸಮಾಜ ಸೇವಕ ಶೇಖರ್ ಜೆ.ಸಾಲ್ಯಾನ್ ಸಾಂತಕ್ರೂಜ್, ದೇವೆಂದ್ರ ಬಂಗೇರಾ ಸೇರಿದಂತೆ ಭಕ್ತರನೇಕರು ಉಪಸ್ಥಿತರಿದ್ದು ಸನ್ನಿಧಿಯಲ್ಲಿನ ಶ್ರೀಕೃಷ್ಣ ದೇವರಿಗೆ ಮಹಾರತಿಗೈದು ವಿಟ್ಲಪಿಂಡಿ (ಲೀಲೋತ್ಸವ) ಸಂಭ್ರದ ಕೃಷ್ಣಾಷ್ಟಮಿ ಶೋಭಾಯಾತ್ರೆಗೆ (ಮೆರವಣಿಗೆ) ಚಾಲನೆಯನ್ನಿತ್ತರು.

ವಿಶೇಷ ಸಾಂಸ್ಕೃತಿಕ ಕಾರ್ಯಕ್ರಮವಾಗಿಸಿ ಡಾ। ವಿಜಯಕುಮಾರ್ ಶೆಟ್ಟಿ ತೋನ್ಸೆ ನಿರ್ದೇಶನದಲ್ಲಿ ಕಲಾಜಗತ್ತು ನಾಟಕ ತಂಡವು 'ಶರಶಯ್ಯ' ನಾಟಕ ಪ್ರದರ್ಶಿಸಿತು. ರಾತ್ರಿ ಮಹಾಪೂಜೆ, ಬಳಿಕ ಪ್ರಸಾದ ವಿತರಣೆ ನಡೆಸಿದ್ದು, ವಾರ್ಷಿಕ ಶ್ರೀಕೃಷ್ಣಾಷ್ಟಮಿ ಸಮಾಪ್ತಿಗೊಂಡಿತು. ಡಾ। ರಾಮದಾಸ ಉಪಾಧ್ಯಾಯ ರೆಂಜಾಳ ಸ್ವಾಗತಿಸಿ ಕಾರ್ಯಕ್ರಮ ನಿರ್ವಾಹಿಸಿದರು. ಹರಿ ಭಟ್ ವಂದಿಸಿದರು.